

ಮೈಸೂರು ಮಿತ್ರ

ಮೈಸೂರು–ಮಂಡ್ಯ–ಚಾಮರಾಜನಗರ–ಕೊಡಗು–ಹಾಸನ

ಬೆಳಗಿನ ಪ್ರಾದೇಶಿಕ ದಿನಪತ್ರಿಕೆ

ಜುಲೈ 26 ಬುಧವಾರ 2023

ಸಂಪುಟ: 44 | ಸಂಚಿಕೆ: 101 | ಪುಟಗಳು: 10

ಮೈಸೂರು ಸುದ್ದಿ: ದೂರವಾಣಿ: 2496520/21/26/27/28 ಜಾಹೀರಾತು: 2496522/23
ನಗರ ಕಚೇರಿಗಳು: ಕೆ.ಆರ್. ಸರ್ಕಲ್, ವಿಶ್ವೇಶ್ವರಯ್ಯ ಕಟ್ಟಡ: Ph: 2431774, ಡಿ.ದೇವರಾಜ ಅರಸು ರಸ್ತೆ, Ph: 2428695
ಸುದ್ದಿ/ಜಾಹೀರಾತಿಗಾಗಿ – ಮಂಡ್ಯ: 8762960325, ಚಾಮರಾಜನಗರ: 9242265657, ಕೊಡಗು: 9731469871

ಸುದ್ದಿ, ಫೋಟೋಗೆ: news@mysurumithra.com
ಜಾಹೀರಾತು: ad@mysurumithra.com, website: www.mysurumithra.com

₹ 4



ಸಚಿವರು ನಮ್ಮ ಕೆಲಸಕ್ಕೆ ಮಧ್ಯವರ್ತಿಗಳ ಮೂಲಕ ಹಣಕ್ಕೆ ಬೇಡಿಕೆ ಇಡುತ್ತಿದ್ದಾರೆ

- ಆಡಳಿತ ಪಕ್ಷದ ಶಾಸಕರಿಂದಲೇ ಮುಖ್ಯಮಂತ್ರಿ ಸಿದ್ದರಾಮಯ್ಯನವರಿಗೆ ದೂರು
- ಹಿರಿಯ ಶಾಸಕರಾದ ಬಿ.ಆರ್.ಪಾಟೀಲ್, ಬಸವರಾಜ ರಾಯರೆಡ್ಡಿ ಸಿಎಂಗೆ ಪ್ರತ್ಯೇಕ ಪತ್ರ
- ದುರಹಂಕಾರದ ವರ್ತನೆ, ಅನುದಾನ ಕೇಳಿದರೆ ಮಧ್ಯವರ್ತಿ ಮುಂದೆ ಬಿಟ್ಟು ಹಣ ಕೇಳುತ್ತಾರೆ!

ಬೆಂಗಳೂರು, ಜು.25(ಕೆಎಂಶಿ)–ಸಚಿವರು ಮಧ್ಯವರ್ತಿಗಳ ಮೂಲಕ ಹಣಕ್ಕಾಗಿ ಬೇಡಿಕೆ ಇಡುತ್ತಿದ್ದಾರೆಂದು ಆಡಳಿತ ಪಕ್ಷದ ಶಾಸಕರೇ ಮುಖ್ಯಮಂತ್ರಿ ಸಿದ್ದರಾಮಯ್ಯ ಅವರಿಗೆ ದೂರು ನೀಡಿದ್ದಾರೆ.

ದುರಹಂಕಾರದ ಪರಮಾವಧಿಯಲ್ಲಿರುವ ಸಚಿವರು ತಮ್ಮ ನಡವಳಿಕೆ ಸರಿಪಡಿಸಿಕೊಳ್ಳದಿದ್ದರೆ, ಪರ್ಯಾಯ ವ್ಯವಸ್ಥೆ ಮಾಡಿ ಎಂದು ಮನವಿ ಮಾಡಿದ್ದಾರೆ.

ಮುಖ್ಯಮಂತ್ರಿ ಅವರ ಆಪ್ತ ಬಳಗದಲ್ಲಿ ಗುರುತಿಸಿಕೊಂಡಿರುವ ಹಾಲಿ ಶಾಸಕ ಹಾಗೂ ಮಾಜಿ ಉಪ ಸಭಾಪತಿ ಬಿ.ಆರ್.ಪಾಟೀಲ್ ಮತ್ತು ಮಾಜಿ ಸಚಿವ ಬಸವರಾಜ ರಾಯರೆಡ್ಡಿ ಅವರು ಪ್ರತ್ಯೇಕವಾಗಿ ಸಿದ್ದರಾಮಯ್ಯ ಅವರಿಗೆ


ಬಿ.ಆರ್.ಪಾಟೀಲ್


ಬಸವರಾಜ ರಾಯರೆಡ್ಡಿ

ಪತ್ರ ಬರೆದು ದೂರು ನೀಡಿದ್ದಾರೆ. ವಿವಿಧ ಇಲಾಖೆಗೆ ಸಂಬಂಧಿಸಿದ 20ಕ್ಕೂ ಹೆಚ್ಚು ಸಚಿವರಿಗೆ ನಮ್ಮ ಕ್ಷೇತ್ರಕ್ಕೆ ಅನುದಾನ ನೀಡುವಂತೆ ಮನವಿ ಮಾಡಿದ್ದರೂ ಸ್ಪಂದಿಸುತ್ತಿಲ್ಲ. ಅಲ್ಲದೆ, ಅನುದಾನ ಬಿಡುಗಡೆ ಮಾಡುವುದಕ್ಕೂ ಸಚಿವರು ಮೂರನೇ ವ್ಯಕ್ತಿಯ ಮೂಲಕ ಹಣಕ್ಕಾಗಿ ಬೇಡಿಕೆ ಇಡುತ್ತಿದ್ದಾರೆ.

ಸ್ಥಳೀಯ ಶಾಸಕರು ನಾವಾಗಿದ್ದರೂ ಅನುದಾನಕ್ಕಾಗಿ ಮೂರನೇ ವ್ಯಕ್ತಿಯ ಮೊರೆ ಹೋಗಬೇಕಾಗಿರುವುದು ಅತ್ಯಂತ ಬೇಸರದ ವಿಷಯ ಎಂದು ಬಿ.ಆರ್.ಪಾಟೀಲ್ ಮತ್ತು ಇತರ ಶಾಸಕರು ಸಚಿವರ ವಿರುದ್ಧ ನೇರವಾಗಿ ಆರೋಪ ಮಾಡಿದ್ದಾರೆ. ಜನರ ವಿಶ್ವಾಸ, ಭರವಸೆ ಹಾಗೂ ಅವರ ಪ್ರೀತಿಯಿಂದ ನಾವು ಶಾಸಕರಾಗಿ ಆಯ್ಕೆಯಾಗಿದ್ದೇವೆ. ಆದರೆ, ನಮ್ಮನ್ನು ಆರಿಸಿ ಕಳುಹಿಸಿದ ಜನರ ವಿಶ್ವಾಸಕ್ಕೆ ತಕ್ಕಂತೆ ಅಭಿವೃದ್ಧಿ ಕೆಲಸ ಮಾಡಲು ಸಾಧ್ಯವಾಗುತ್ತಿಲ್ಲ. ಏಕೆಂದರೆ, ವಿವಿಧ ಇಲಾಖೆಯ ನಿರ್ವಹಣೆ ಮಾಡುತ್ತಿರುವ ಸಚಿವರ ಕಾರ್ಯವೈಖರಿ, ಅಸಡ್ಡೆ ಹಾಗೂ ಹಣಕ್ಕಾಗಿ ▶ 8ನೇ ಪುಟಕ್ಕೆ

ನನ್ನ ಹೆಸರಲ್ಲಿ ಫೇಕ್ ಲೆಟರ್ ಹರಿದಾಡುತ್ತಿದೆ

❝ ತಾವು ಮುಖ್ಯಮಂತ್ರಿಗಳಿಗೆ ಬರೆದ ಪತ್ರದಿಂದ ವಿವಾದ ಸೃಷ್ಟಿಯಾಗುತ್ತಿದ್ದಂತೆ ಹಿರಿಯ ಶಾಸಕ ಬಿ.ಆರ್.ಪಾಟೀಲ್ ತಾವು ಮುಖ್ಯಮಂತ್ರಿಗಳಿಗೆ ಕಾಂಗ್ರೆಸ್ ಶಾಸಕಾಂಗ ಪಕ್ಷದ ಸಭೆ ಕರೆಯುವಂತೆ ಬರೆದ ಮನವಿ ಪತ್ರವನ್ನು ತಿರುಚಿ ಕಿಡಿಗೇಡಿಗಳು ಫೇಕ್ ಲೆಟರ್ ಹರಿಬಿಟ್ಟಿದ್ದಾರೆ ಎಂದು ಸ್ಪಷ್ಟಪಡಿಸಿದ್ದಾರೆ. ಈ ಪತ್ರದಲ್ಲಿ ಕಲಬುರ್ಗಿ ಜಿಲ್ಲಾ ಉಸ್ತುವಾರಿ ಸಚಿವರ ಮೇಲೆ ಕೆಲ ಆರೋಪಗಳನ್ನು ಮಾಡುತ್ತಿರುವಂತೆ ಕುತಂತ್ರದಿಂದ ಸುಳ್ಳುಗಳನ್ನು ಹರಿಬಿಡಲಾಗಿದೆ. ಈ ಪತ್ರ ತಮ್ಮದಲ್ಲ. ತಾವು ಕೊಟ್ಟ ಪತ್ರಕ್ಕೂ ಈ ಪತ್ರದಲ್ಲಿ ಇರುವ ವಿಷಯಕ್ಕೂ ಯಾವುದೇ ಸಂಬಂಧವಿಲ್ಲ. ಫೇಕ್ ಲೆಟರ್‌ನಲ್ಲಿ ನನ್ನ ಸಹಿಯನ್ನು ಫೋಟೋಶಾಪ್ ಮೂಲಕ ಅಂಟಿಸಲಾಗಿದೆ. ಅಲ್ಲದೆ, ನನ್ನ ಹಳೆಯ ಮನೆಯ ವಿಳಾಸ ಬರೆಯಲಾಗಿದೆ. ನನ್ನ ಹಾಗೂ ಕಲಬುರ್ಗಿ ಜಿಲ್ಲಾ ಉಸ್ತುವಾರಿ ಸಚಿವ ಪ್ರಿಯಾಂಕ ಖರ್ಗೆ ನಡುವೆ ಮನಸ್ತಾಪ ಹಚ್ಚಲು ಕುತಂತ್ರ ಮಾಡಿದಂತಿದೆ. ಇದರ ವಿರುದ್ಧ ಕಾನೂನು ಕ್ರಮ ಜರುಗಿಸುವಂತೆ ಕಲಬುರ್ಗಿ ಪೊಲೀಸ್ ವರಿಷ್ಠಾಧಿಕಾರಿಗೆ ದೂರು ನೀಡಲಿದ್ದೇನೆ ಎಂದು ಬಿ.ಆರ್.ಪಾಟೀಲ್ ತಿಳಿಸಿದ್ದಾರೆ.

❝ ಬಿ.ಆರ್.ಪಾಟೀಲ್ ಅವರು ನನಗೂ ಒಂದು ಪತ್ರ ಕಳುಹಿಸಿದ್ದರು. ಅದರಲ್ಲಿ ಸಂವಹನ ಕೊರತೆಯಿಂದ ಕೆಲವು ಸಮಸ್ಯೆಗಳು ಉಂಟಾಗಿವೆ. ಅವುಗಳ ಪರಿಹಾರಕ್ಕಾಗಿ ಶಾಸಕಾಂಗ ಪಕ್ಷದ ಸಭೆ ಕರೆಯಬೇಕೆಂದು ಮುಖ್ಯಮಂತ್ರಿಗಳಲ್ಲಿ ಮನವಿ ಮಾಡಲಾಗಿತ್ತು. ಆ ಪತ್ರಕ್ಕೆ ಅದಾಗಲೇ 20ಕ್ಕೂ ಅಧಿಕ ಮಂದಿ ಸಹಿ ಮಾಡಿದ್ದರು. ಇದು ಅಸಮಾಧಾನಕ್ಕೆ ಇಲ್ಲವೇ, ಅತೃಪ್ತಿ ಸಂಬಂಧಿತ ಪತ್ರವಲ್ಲ. ಕೇವಲ ಸಂವಹನ ಕೊರತೆಯಿಂದ ಉಂಟಾಗಿರುವಂತಹ ಸಮಸ್ಯೆಯನ್ನು ಪರಿಹರಿಸಿಕೊಳ್ಳುವುದಕ್ಕೆ ಸಂಬಂಧಿಸಿದ್ದಾಗಿ ಎಂದು ಯಲಬುರಗ ಶಾಸಕ ಬಸವರಾಜ ರಾಯರೆಡ್ಡಿ ಸ್ಪಷ್ಟಪಡಿಸಿದ್ದಾರೆ.


ಬಿಚ್ಚು ನುಡಿ
ವಿಕ್ರಂ ಮುತ್ತಣ್ಣ
ಪ್ರಧಾನಮಂತ್ರಿಗಳ ಮೌನವ ತಾಳೆವು... ಪುಟ–4

ಲೋಕಸಭಾ ಚುನಾವಣೆಯಲ್ಲಿ ಯಾವ ಪಕ್ಷದೊಂದಿಗೂ ಮೈತ್ರಿ ಇಲ್ಲ

- ಜೆಡಿಎಸ್ ವರಿಷ್ಠರೂ ಆದ ಮಾಜಿ ಪ್ರಧಾನಿ ಹೆಚ್.ಡಿ.ದೇವೇಗೌಡರು ಸ್ಪಷ್ಟನೆ
- ಎನ್‌ಡಿಎ ಮೈತ್ರಿಗೆ ಜೆಡಿಎಸ್ ಸೇರುವ ಊಹಾಪೋಹಕ್ಕೆ ತೆರೆ
- ಪಕ್ಷದ ಶಾಸಕರು, ನಾಯಕರೊಂದಿಗೆ ಚರ್ಚಿಸಿ ಶಕ್ತಿ ಇರುವ ಕ್ಷೇತ್ರಗಳಲ್ಲಿ ಸ್ಪರ್ಧೆ



ಬೆಂಗಳೂರು, ಜು.25(ಕೆಎಂಶಿ)– ಮುಂಬರುವ ಲೋಕಸಭೆ ಚುನಾವಣೆಯಲ್ಲಿ ಯಾವುದೇ ಪಕ್ಷದ ಜೊತೆ ಮೈತ್ರಿ ಇಲ್ಲ ಇದು ಬಗ್ಗೆ ಯಾವುದೇ ಸಂಶಯ ಬೇಡ ಎಂದು ಜೆಡಿಎಸ್ ವರಿಷ್ಠ ಮಾಜಿ ಪ್ರಧಾನಿ ಎಚ್.ಡಿ.ದೇವೇಗೌಡರು ಸ್ಪಷ್ಟಪಡಿಸಿದರು.

ಏಕಾಂಗಿ ಹೋರಾಟ ಮಾಡುವುದಾಗಿ ಹೇಳುವ ಮೂಲಕ ಲೋಕಸಭಾ ಚುನಾವಣೆ ಸಂದರ್ಭದಲ್ಲಿ ಜೆಡಿಎಸ್, ಎನ್‌ಡಿಎ ಮೈತ್ರಿಕೂಟ ಸೇರಲಿದೆ ಎಂಬ ಊಹಾಪೋಹಗಳಿಗೆ ತೆರೆ ಎಳೆದಿದ್ದಾರೆ.

ಸುದ್ದಿಗೋಷ್ಠಿಯಲ್ಲಿ ಮಾತನಾಡಿದ ಅವರು, ಲೋಕಸಭೆ ಚುನಾವಣೆ ಸಂದರ್ಭದಲ್ಲಿ ಶಾಸಕರು, ಮಾಜಿ ಶಾಸಕರು, ವಿಧಾನಸಭೆ ಚುನಾವಣೆಯಲ್ಲಿ ಸೋತವರು, ಪಕ್ಷದ ಕಾರ್ಯಕರ್ತರೊಂದಿಗೆ ಚರ್ಚಿಸಿ ನಮಗೆ ಶಕ್ತಿ ಇರುವ ಕ್ಷೇತ್ರಗಳಲ್ಲಿ ಮಾತ್ರ ಸ್ಪರ್ಧೆ ಮಾಡುತ್ತೇವೆ ಎಂದರು.

ಯಾವುದೇ ಕಾರಣಕ್ಕೂ ಜೆಡಿಎಸ್ ಅನ್ನು ಅಳಿಸಿ ಹಾಕಲು ಯಾರಿಂದಲೂ ಸಾಧ್ಯವಿಲ್ಲ. ಡಾ.ಮನಮೋಹನ್ ಸಿಂಗ್ ಪ್ರಧಾನಿಯಾಗಿದ್ದಾಗ ನಮ್ಮ ಪಕ್ಷದ ಮೂವರು ಸಂಸದರ ಬೆಂಬಲವನ್ನು ಯಾವುದೇ ಷರತ್ತಿಲ್ಲದೆ ನೀಡಿದ್ದೇವೆ. ಅದೇ ರೀತಿ ಲೋಕಸಭೆ ಚುನಾವಣೆ ಸಂದರ್ಭದಲ್ಲಿ ಸನ್ನಿವೇಶಕ್ಕೆ ತಕ್ಕಂತೆ ನಿರ್ಧಾರ ಮಾಡುತ್ತೇವೆ.

ಕಾಂಗ್ರೆಸ್ ಯಾವ ಯಾವ ರಾಜ್ಯದಲ್ಲಿ ಯಾರು ಯಾರನ್ನು ತಬ್ಬಿಕೊಳ್ಳಲು ಹೋಗಿದೆ ಎಂಬುದು ಗೊತ್ತಿಲ್ಲವೇ? ವಿಧಾನಸಭೆ ಅಧಿವೇಶನದ ಸಂದರ್ಭದಲ್ಲಿ ಮಾಜಿ ಮುಖ್ಯಮಂತ್ರಿ ಎಚ್.ಡಿ. ಕುಮಾರಸ್ವಾಮಿ ಅವರು ವಿಷಯಾಧಾರಿತ ಹೋರಾಟವನ್ನು ಬಿಜೆಪಿ ಜೊತೆ ಮಾಡಿರಬಹುದು. ಈ ಹಿಂದೆ ಕಾಂಗ್ರೆಸ್ ಪಕ್ಷ ಅಧಿಕೃತ ವಿರೋಧ ಪಕ್ಷವಾಗಿದ್ದಾಗಲೂ ಜೆಡಿಎಸ್ ▶ 8ನೇ ಪುಟಕ್ಕೆ

ಸ್ವಪಕ್ಷದವರಿಂದ ಕಾಂಗ್ರೆಸ್ ಸರ್ಕಾರ ಪತನಗೊಂಡರೆ ನಾವೇನು ಮಾಡಲಾಗದು

- ಮಾಜಿ ಸಚಿವ, ಶಾಸಕ ಜಿ.ಟಿ.ದೇವೇಗೌಡ ಪ್ರತಿಕ್ರಿಯೆ
- ಸ್ವ ಪಕ್ಷದವರಲ್ಲೇ ಅಪಸ್ವರ ಕೇಳಿಬರುತ್ತಿದೆ; ಅದಕ್ಕೆ ಬಿ.ಕೆ.ಹರಿಪ್ರಸಾದ್‌ರ ಹೇಳಿಕೆಯೇ ಸಾಕ್ಷಿ



ಬೆಂಗಳೂರು, ಜು.25(ಕೆಎಂಶಿ)– ಕಾಂಗ್ರೆಸ್ ಪಕ್ಷ ಅಧಿಕಾರಕ್ಕೆ ಬಂದು ಎರಡು ತಿಂಗಳು ಕಳೆಯುವುದರಲ್ಲೇ ಸ್ವಪಕ್ಷದವರೇ ಅಪಸ್ವರ ಎತ್ತಿದ್ದಾರೆ. ಸರ್ಕಾರಕ್ಕೆ ಸ್ವಪಕ್ಷದವರೇ ಭಾರವಾಗಿ ಪತನಗೊಂಡರೆ ನಾವೇನು ಮಾಡಲಾಗುವುದಿಲ್ಲ ಎಂದು ಮಾಜಿ ಸಚಿವ ಹಾಗೂ ಶಾಸಕ ಜಿ.ಟಿ.ದೇವೇಗೌಡ ತಿಳಿಸಿದರು.

ಸುದ್ದಿಗೋಷ್ಠಿಯಲ್ಲಿ ಮಾತನಾಡಿದ ಅವರು, 135 ಶಾಸಕರನ್ನು ಹೊಂದಿರುವ ಕಾಂಗ್ರೆಸ್ ಸರ್ಕಾರ ಅದಾಗೆ ಪತನವಾಗಲಿದೆ. ಮುಖ್ಯಮಂತ್ರಿ ಮಾಡುವುದು ಗೊತ್ತು, ಕೆಳಗಿಳಿಸುವುದು ಗೊತ್ತು ಎಂದು ವಿಧಾನಪರಿಷತ್ ಸದಸ್ಯ ಬಿ.ಕೆ.ಹರಿಪ್ರಸಾದ್ ಅವರು ನೀಡಿದ್ದ ಹೇಳಿಕೆಯನ್ನು ಅವರು ಉಲ್ಲೇಖಿಸಿದರು. 19 ಶಾಸಕರನ್ನು ಹೊಂದಿರುವ ನಾವು ಕಾಂಗ್ರೆಸ್ ಸರ್ಕಾರವನ್ನು ಪತನಗೊಳಿಸುವ ಯಾವುದೇ ಉದ್ದೇಶವಿಲ್ಲ. ಪಕ್ಷ ಸಂಘಟನೆ ಮಾಡಿ ಅಧಿಕಾರಕ್ಕೆ ಬರಬೇಕೆಂಬುದು ನಮ್ಮ ಉದ್ದೇಶ. ಮಾಜಿ ಪ್ರಧಾನಿ ಎಚ್.ಡಿ.ದೇವೇಗೌಡರು ಮುಸ್ಲಿಮರಿಗೆ ನೀಡಿದ್ದ ಶೇ.4ರಷ್ಟು ಮೀಸಲಾತಿಯನ್ನು ಹಿಂದಿನ ಸರ್ಕಾರ ರದ್ದುಪಡಿಸಿತ್ತು. ಈ ಮೀಸಲಾತಿಯನ್ನು ಮೊದಲು ಜಾರಿ ಮಾಡುವುದಾಗಿ ವಿಧಾನಸಭೆ ಚುನಾವಣೆ ಪೂರ್ವದಲ್ಲಿ ಹೇಳಿದ್ದ ಕಾಂಗ್ರೆಸ್ ಅಧಿಕಾರಕ್ಕೆ ಬಂದ ಮೇಲೆ ಅದರ ಬಗ್ಗೆ ಸೊಲ್ಲೇ ಎತ್ತುತ್ತಿಲ್ಲ ಎಂದು ಟೀಕಿಸಿದರು.

ಗೆದ್ದಲು ಹುಳ ಹುತ್ತವನ್ನು ಕಟ್ಟುತ್ತದೆ. ಅದರಲ್ಲಿ ಹಾವು ಬಂದು ಸೇರಿಕೊಳ್ಳುತ್ತದೆ ಎಂದು ಆಡಳಿತ ಪಕ್ಷದವರೇ ಮಾತನಾಡಿಕೊಳ್ಳುತ್ತಿದ್ದಾರೆ ಎಂದರು.

ಮಾಜಿ ಮುಖ್ಯಮಂತ್ರಿ ಎಚ್.ಡಿ. ಕುಮಾರಸ್ವಾಮಿ ನಾಯಕತ್ವದಲ್ಲಿ ಪಕ್ಷ ಸಂಘಟನೆ ಮಾಡುತ್ತೇವೆ. ಚುನಾವಣೆಯಲ್ಲಿ ಸೋತಿದ್ದೇವೆ ಎಂದು ಸುಮ್ಮನೆ ಕೂರುವುದಿಲ್ಲ. ಕಾಂಗ್ರೆಸ್ ಸರ್ಕಾರ ರೈತರಿಗೆ ಯಾವ ಗ್ಯಾರಂಟಿಯನ್ನು ಕೊಟ್ಟಿಲ್ಲ. ಕೃಷಿ, ನೀರಾವರಿ, ಸಹಕಾರ ಇಲಾಖೆಗಳ ಅನುದಾನ ಕಡಿಮೆ ಮಾಡಿದ್ದಾರೆ. ಆದರೆ ಬಜೆಟ್ ಗಾತ್ರ ಅನುಗುಣವಾಗಿ ಸಾಲದ ಪ್ರಮಾಣ ಹೆಚ್ಚಾಗುತ್ತಿದೆ ಎಂದು ಆರೋಪಿಸಿದರು. ಉತ್ತರ ಕರ್ನಾಟಕ ಭಾಗದಲ್ಲಿ ದೇವೇಗೌಡರು ನೀಡಿರುವ ಕೊಡುಗೆಯನ್ನು ಜನರು ಈಗಲೂ ಶ್ಲಾಘಿಸುತ್ತಾರೆ ಎಂದ ಅವರು, ಜನತಾ ಪಕ್ಷದಿಂದ ಜೆಡಿಎಸ್‌ನವರೆಗೆ ಹಂತ ಹಂತವಾಗಿ ನಡೆದ ಏಳುಬೀಳು, ಪಕ್ಷ ವಿಭಜನೆ, ಅಧಿಕಾರಕ್ಕೆ ಬಂದದ್ದು ಎಲ್ಲವೂ ಸೇರಿದಂತೆ ಪಕ್ಷ ನಡೆದು ಬಂದ ಹಾದಿಯನ್ನು ಸಂಕ್ಷಿಪ್ತವಾಗಿ ವಿವರಿಸಿದರು.

ನೂರಡಿ ದಾಟಿದ ಕೆಆರ್‌ಎಸ್ ನೀರಿನ ಮಟ್ಟ

ಇನ್ನೇನು ಭರ್ತಿ ಹಂತದಲ್ಲಿ ಕಬಿನಿ, ಹೇಮಾವತಿ



ನೂರಡಿ ದಾಟಿರುವ ಕೆಆರ್‌ಎಸ್ ಅಣೆಕಟ್ಟೆ ವಿಹಂಗಮ ನೋಟ /ಚಿತ್ರ: ಲಕ್ಷ್ಮಿನಾರಾಯಣ ಯಾದವ

ಮೈಸೂರು/ಮಂಡ್ಯ, ಜು.25–ಕಾವೇರಿ ಜಲಾನಯನ ಪ್ರದೇಶದಲ್ಲಿ ಮಳೆ ಆರ್ಭಟ ಮುಂದುವರೆದಿರುವುದರಿಂದ ಕೆಆರ್‌ಎಸ್ ಅಣೆಕಟ್ಟೆಯ ನೀರಿನ ಪ್ರಮಾಣ 100 ಅಡಿ ದಾಟಿದ್ದು, ಇತ್ತ ಕಬಿನಿ ಜಲಾಶಯವೂ ಬಹುತೇಕ ಭರ್ತಿಯಾಗಿದೆ.

ಕೊಡಗಿನಲ್ಲಿ ಭಾರೀ ಮಳೆಯಾಗುತ್ತಿರುವುದರಿಂದ ಕೆಆರ್‌ಎಸ್ ಜಲಾಶಯಕ್ಕೆ ಒಳ ಹರಿವು ಹೆಚ್ಚಾಗಿದ್ದು, ನೀರಿನ ಪ್ರಮಾಣ ಗಣನೀಯವಾಗಿ ಏರಿಕೆಯಾಗುತ್ತಿದೆ. ಹಾರಂಗಿ ಜಲಾಶಯದಿಂದಲೂ ಹೆಚ್ಚು ಪ್ರಮಾಣದ ನೀರನ್ನು ನದಿಗೆ ಹರಿಸುತ್ತಿರುವುದರಿಂದ ಕೆಆರ್‌ಎಸ್ ನೀರಿನ ಮಟ್ಟ ಮೂರ್‍ನಾಲ್ಕು ದಿನಗಳಲ್ಲಿ ಮತ್ತಷ್ಟು ಹೆಚ್ಚುವ ನಿರೀಕ್ಷೆಯಿದೆ.

ಕೆಆರ್‌ಎಸ್ ಅಣೆಕಟ್ಟೆಯ ಗರಿಷ್ಠ ಮಟ್ಟ 124.80 ಅಡಿಗಳಾಗಿದ್ದು, ಸೋಮವಾರ ಸಂಜೆ 97.50 ಅಡಿ ನೀರು ಸಂಗ್ರಹವಾಗಿತ್ತು. ಒಳ ಹರಿವಿನ ಪ್ರಮಾಣ ಹೆಚ್ಚಾಗಿದ್ದರಿಂದ ಮಂಗಳವಾರ ಸಂಜೆ ವೇಳೆಗೆ ಜಲಾಶಯದಲ್ಲಿನ ನೀರಿನ ಮಟ್ಟ 102.35 ಅಡಿಗೆ ಏರಿಕೆಯಾಗಿದೆ. ನೀರಿನ ಮಟ್ಟ ನೂರಡಿ ದಾಟಿರುವುದರಿಂದ ರೈತರು ಮಾತ್ರವಲ್ಲದೆ ಕುಡಿಯುವ ನೀರು ಬಳಸುತ್ತಿರುವ ನಗರವಾಸಿಗಳಲ್ಲಿ ಸಂತಸ ಮನೆ ಮಾಡಿದೆ. ಸದ್ಯ ಬರದ ಛಾಯೆ ಮರೆಯಾಯಿತು ಎಂದು ನಿಟ್ಟುಸಿರು ಬಿಟ್ಟಿದ್ದಾರೆ. ಪ್ರಸ್ತುತ 49280 ಕ್ಯುಸೆಕ್ ನೀರು ಜಲಾಶಯಕ್ಕೆ ಹರಿದು ಬರುತ್ತಿದ್ದು, ಜಲಾಶಯ ಭರ್ತಿಯಾಗದ ಕಾರಣ ಕಡಿಮೆ ಪ್ರಮಾಣದ ನೀರನ್ನು ಹೊರಬಿಡಲಾಗುತ್ತಿದೆ. ಜಲಾಶಯ ಅಚ್ಚುಕಟ್ಟು ಪ್ರದೇಶ ವ್ಯಾಪ್ತಿಯ ನಾಲೆಗಳು ಹಾಗೂ ಕಾವೇರಿ ನದಿಗೆ ಸೇರಿ ಒಟ್ಟು 5067 ಕ್ಯುಸೆಕ್ ನೀರನ್ನು ಹರಿಯ ಬಿಡಲಾಗುತ್ತಿದೆ. ಆದರೆ ಬೆಳೆಗಳಿಗೆ ನೀರು ಹರಿಸುವ ಸಂಬಂಧ ಕಾವೇರಿ ನೀರಾವರಿ ನಿಗಮ ಈವರೆಗೆ ಯಾವುದೇ ನಿರ್ಧಾರ ಪ್ರಕಟಿಸಿಲ್ಲ. ಜನ ಹಾಗೂ ಜಾನುವಾರುಗಳಿಗೆ ಕುಡಿಯುವ ನೀರು ಒದಗಿಸುವ ಉದ್ದೇಶಕ್ಕಾಗಿ ಮಾತ್ರ ಜು.21ರಿಂದ ನಾಲೆಗೆ ನೀರು(10 ದಿನ) ಹರಿಸಲಾಗುತ್ತಿದೆ.

ಕಳೆದ ವರ್ಷ ಈ ವೇಳೆಗಾಗಲೇ ಜಲಾಶಯ ಸಂಪೂರ್ಣ ಭರ್ತಿಯಾಗಿತ್ತು. ಆಗ 13898 ಕ್ಯುಸೆಕ್ ಒಳಹರಿವು ಹಾಗೂ 12030 ಕ್ಯುಸೆಕ್ ಹೊರ ಹರಿವಿತ್ತು. ಪ್ರಸ್ತುತ 100 ಅಡಿ ದಾಟಿದ್ದು, ▶ 8ನೇ ಪುಟಕ್ಕೆ

ಗೃಹಲಕ್ಷ್ಮಿ ಯೋಜನೆಗೆ ಸರ್ವರ್ ಸಮಸ್ಯೆ




ಮೈಸೂರು, ಜು.25(ಜಿಎ)–ಗೃಹಲಕ್ಷ್ಮಿ ಯೋಜನೆಯನ್ನು ಪರಿಣಾಮಕಾರಿಯಾಗಿ ಅನುಷ್ಠಾನ ಮಾಡಲು ನಗರಪಾಲಿಕೆಯ 9 ವಲಯ ಕಚೇರಿಯಲ್ಲಿಯೂ ನೋಂದಣಿಗೆ ಅವಕಾಶ ಕಲ್ಪಿಸಿದ್ದು, ಆದರೆ ಎಲ್ಲೆಡೆ ಸರ್ವರ್ ಮತ್ತು ಇಂಟರ್‌ನೆಟ್ ಸಮಸ್ಯೆ ಎದುರಾಗಿದೆ.

ಗೃಹಲಕ್ಷ್ಮಿ ಯೋಜನೆಗೆ ನೋಂದಾಯಿಸಿಕೊಳ್ಳಲು ಮಹಿಳೆಯರು ನಗರಪಾಲಿಕೆಯ ವಲಯ ಕಚೇರಿಗಳಿಗೆ ಹೆಚ್ಚಿನ ಸಂಖ್ಯೆಯಲ್ಲಿ ಭೇಟಿ ನೀಡುತ್ತಿದ್ದು, ಅಲ್ಲಿಯೂ ಸರ್ವರ್ ಮತ್ತು ಇಂಟರ್‌ನೆಟ್ ಸಮಸ್ಯೆ ಎದುರಾಗುತ್ತಿದ್ದು, ಅಧಿಕಾರಿಗಳು ಟೋಕನ್ ನೀಡಿ ಕಳುಹಿಸುವ ಸ್ಥಿತಿ ನಿರ್ಮಾಣವಾಗಿದೆ. ಜಿಲ್ಲೆಯ 256 ಬಾಪೂಜಿ ಸೇವಾ ಕೇಂದ್ರಗಳು, 222 ಗ್ರಾಮ ಒನ್ ಕೇಂದ್ರಗಳು ಹಾಗೂ 30 ಕರ್ನಾಟಕ ಒನ್ ಕೇಂದ್ರಗಳು ಹಾಗೂ ಮಹಾನಗರಪಾಲಿಕೆ ವ್ಯಾಪ್ತಿಯ 9 ವಲಯ ಕಚೇರಿಗಳು ಸೇರಿದಂತೆ ಜಿಲ್ಲೆಯ ಎಲ್ಲಾ ಕೇಂದ್ರಗಳಲ್ಲಿಯೂ ಗೃಹಲಕ್ಷ್ಮಿ ಯೋಜನೆಗೆ ನೋಂದಣಿ ಮಾಡಲು ಅವಕಾಶವಿದ್ದು, ಕೆಲ ವಲಯ ಕಚೇರಿಯಲ್ಲಿ ಸರ್ವರ್ ಸಮಸ್ಯೆಯನ್ನು ಅಧಿಕಾರಿಗಳು ಸರಿಪಡಿಸಿಕೊಂಡು ನೋಂದಣಿ ಕಾರ್ಯಕ್ಕೆ ಮುಂದಾಗಿದ್ದಾರೆ. ವಲಯ ಕಚೇರಿ 1ರಲ್ಲಿ ಜು.24ರಂದು 71 ಮತ್ತು ಜು.25ರಂದು 78 ನೋಂದಣಿಯಾಗಿದ್ದು, ವಲಯ ಕಚೇರಿ 2ರಲ್ಲಿ ಜು.22ರಂದು 65 ನೋಂದಣಿಯಾಗಿದ್ದರೆ, ಸರ್ವರ್ ಸಮಸ್ಯೆಯಿಂದ ಜು.25ರಂದು ಕೇವಲ 5 ನೋಂದಣಿಯಾಗಿದೆ. ವಲಯ ಕಚೇರಿ 4ರಲ್ಲಿ ನೋಂದಣಿ ಮಧ್ಯೆಯೇ ಸರ್ವರ್ ಸಮಸ್ಯೆಯನ್ನು ಸರಿಪಡಿಸಿಕೊಂಡು ಈವರೆಗೂ 365 ನೋಂದಣಿ ಮಾಡಿದ್ದಾರೆ. ವಲಯ ಕಚೇರಿ 6ರಲ್ಲಿ ಜು.25ರಂದು 48 ನೋಂದಣಿಯಾಗಿದೆ.

ಲಾಗಿನ್ ನೀಡಿಲ್ಲ

“ವಲಯ ಕಚೇರಿಗಳಲ್ಲಿ ಸರ್ವರ್ ಸಮಸ್ಯೆ ನಡುವೆಯೂ ನೋಂದಣಿ ಕಾರ್ಯ ನಡೆಯುತ್ತಿದೆ. ಆದರೆ, ವಲಯ ಕಚೇರಿ 8 ಮತ್ತು 9ಕ್ಕೆ ಇನ್ನೂ ಗೃಹಲಕ್ಷ್ಮಿ ಯೋಜನೆ ನೋಂದಣಿ ಮಾಡಲು ಅಧಿಕಾರಿಗಳಿಗೆ ಲಾಗಿನ್ ನೀಡಿಲ್ಲದ ಕಾರಣ ಅಲ್ಲಿ ಯಾವುದೇ ನೋಂದಣಿ ಕಾರ್ಯ ನಡೆಯುತ್ತಿಲ್ಲ

–ನಾಗೇಶ್, ವಲಯ ಕಚೇರಿ 8ರ ಆಯುಕ್ತ

ಮೈಸೂರು–ಬೆಂಗಳೂರು ಎಕ್ಸ್‌ಪ್ರೆಸ್ ವೇನಲ್ಲಿ ಆ.1ರಿಂದ ಬೈಕ್, ಆಟೋ ಸಂಚಾರ ನಿಷೇಧ



ಮೈಸೂರು, ಜು. 25(ಆರ್‌ಕೆ)– ಅಪಘಾತಗಳನ್ನು ತಪ್ಪಿಸುವ ಸಲುವಾಗಿ ಮೈಸೂರು–ಬೆಂಗಳೂರು ಎಕ್ಸ್‌ಪ್ರೆಸ್‌ವೇನಲ್ಲಿ ದ್ವಿಚಕ್ರ ವಾಹನ, ಆಟೋರಿಕ್ಷಾ, ಟ್ರ್ಯಾಕ್ಟರ್, ಎತ್ತಿನಗಾಡಿಗಳ ಸಂಚಾರವನ್ನು ಆ.1ರಿಂದ ನಿಷೇಧಿಸಲಾಗಿದೆ.

ಈ ಸಂಬಂಧ ರಾಷ್ಟ್ರೀಯ ಹೆದ್ದಾರಿಗಳ ಪ್ರಾಧಿಕಾರ (NHAI)ವು ಜುಲೈ 12ರಂದು ಅಧಿಸೂಚನೆ ಹೊರಡಿಸಿದ್ದು, ಆ.1ರಿಂದ ಜಾರಿಗೆ ಬರುವಂತೆ ಸ್ಕೂಟರ್, ಬೈಕ್, ಸೈಕಲ್ ಸೇರಿದಂತೆ ಎಲ್ಲಾ ಬಗೆಯ ದ್ವಿಚಕ್ರ ವಾಹನಗಳು, ಆಟೋರಿಕ್ಷಾ ಸೇರಿದಂತೆ ಎಲ್ಲಾ ಬಗೆಯ ತ್ರಿಚಕ್ರ ವಾಹನಗಳು, ಮೋಟಾರ್‌ರಹಿತ ವಾಹನಗಳು, ಟ್ರೇಲರ್ ಸಹಿತ ಮತ್ತು ಟ್ರೇಲರ್ ರಹಿತ ಟ್ರ್ಯಾಕ್ಟರ್‌ಗಳ ಸಂಚಾರವನ್ನು ನಿರ್ಬಂಧಿಸಲಾಗಿದೆ ಎಂದು ಪ್ರಾಧಿಕಾರದ ಅಧ್ಯಕ್ಷ ಹಾಗೂ ಹೆದ್ದಾರಿ ಆಡಳಿತಾಧಿಕಾರಿ ಸಂತೋಷ್ ಕುಮಾರ್ ಯಾದವ್ ತಿಳಿಸಿದ್ದಾರೆ.

ದ್ವಿಚಕ್ರ ಮತ್ತು ತ್ರಿಚಕ್ರ ವಾಹನಗಳು ಸಂಚರಿಸುತ್ತಿರುವುದರಿಂದ ಎಕ್ಸ್‌ಪ್ರೆಸ್‌ವೇ ಮೇನ್ ಕಾರಿಡಾರ್‌ನಲ್ಲಿ ಅಪಘಾತಗಳು ಸಂಭವಿಸಿ ಸಾವು–ನೋವುಗಳಾಗುತ್ತಿದ್ದು, ಇದನ್ನು ತಪ್ಪಿಸಿ ಸುರಕ್ಷತೆ ಒದಗಿಸುವ ಸಲುವಾಗಿ ಆ.1ರಿಂದ ಜಾರಿಗೆ ಬರುವಂತೆ ಸಂಚಾರ ನಿರ್ಬಂಧ ಆದೇಶ ಹೊರಡಿಸಲಾಗಿದೆ ಎಂದು ತಿಳಿಸಿದ್ದಾರೆ.

ಮೈಸೂರು–ಬೆಂಗಳೂರು ಹೆದ್ದಾರಿ (NH 275)ಯು ಬೆಂಗಳೂರಿನ ಕೆಂಗೇರಿಯಲ್ಲಿರುವ ಪಂಚಮುಖಿ ಗಣಪತಿ ದೇವಾಲಯ ಬಳಿಯಿಂದ ರಾಮನಗರ, ಮಂಡ್ಯ ಜಿಲ್ಲೆಯಲ್ಲಿ ಹಾದು ಮೈಸೂರು ನಗರದ ಮಣಿಪಾಲ್ ಆಸ್ಪತ್ರೆ ರಿಂಗ್ ರೋಡ್ ಜಂಕ್ಷನ್‌ನಲ್ಲಿ (135 ಕಿ.ಮೀ.) ಅಂತ್ಯಗೊಳ್ಳಲಿದ್ದು, ನಿಧಾನಗತಿಯಲ್ಲಿ ಚಲಿಸುವ ಬೈಕ್, ಆಟೋ, ಸೈಕಲ್, ಟ್ರ್ಯಾಕ್ಟರ್, ಎತ್ತಿನಗಾಡಿಗಳ ಸಂಚಾರ ನಿಷೇಧಿಸಲಾಗಿದ್ದು, ಆದೇಶ ಉಲ್ಲಂಘಿಸಿದರೆ ದಂಡದ ಜೊತೆಗೆ ಕಾನೂನು ರೀತಿಯ ಕ್ರಮ ಕೈಗೊಳ್ಳಲಾಗುವುದು ಎಂದು ಭಾರತ ರಾಷ್ಟ್ರೀಯ ಹೆದ್ದಾರಿಗಳ ಪ್ರಾಧಿಕಾರದ ಅಧಿಸೂಚನೆಯಲ್ಲಿ ತಿಳಿಸಲಾಗಿದೆ.

ಅಪಘಾತಗಳನ್ನು ತಪ್ಪಿಸಲು ಈ ರಸ್ತೆಯಲ್ಲಿ ವೇಗ ನಿಯಂತ್ರಣಕ್ಕೆ ಕ್ರಮ ವಹಿಸಲಾಗಿದ್ದು, ಸಿಸಿ ಕ್ಯಾಮರಾಗಳನ್ನು ಅಳವಡಿಸಿ ಅತೀ ವೇಗವಾಗಿ ಚಲಿಸುವ ವಾಹನಗಳ ಆರ್‌ಸಿ ಓನರ್‌ಗಳಿಗೆ ನೋಟಿಸ್ ಜಾರಿಯಾಗಿ ದಂಡ ವಸೂಲಿ ಮಾಡುವ ವ್ಯವಸ್ಥೆ ಜಾರಿಗೊಳಿಸಲಾಗಿದೆಯಲ್ಲದೆ, ಪೊಲೀಸರೂ ಗಸ್ತು ಕಾರ್ಯಾಚರಣೆ ನಡೆಸುತ್ತಿದ್ದಾರೆ.

ಗಂಟೆಗೆ 120 ಕಿ.ಮೀ. ವೇಗದಲ್ಲಿ ಚಲಿಸುವ ವಾಹನಗಳಿಗಾಗಿ ಎಕ್ಸ್‌ಪ್ರೆಸ್‌ವೇ ನಿರ್ಮಿಸಿರುವುದರಿಂದ ಕಡಿಮೆ ವೇಗದಲ್ಲಿ ಚಲಿಸುವ ವಾಹನಗಳಿಗೆ ಪ್ರವೇಶವಿರುವುದಿಲ್ಲ. ಉದ್ಘಾಟನೆಯಾದ ಮಾರ್ಚ್ ತಿಂಗಳಿಂದೀಚೆಗೆ ಎಕ್ಸ್‌ಪ್ರೆಸ್‌ವೇಯಲ್ಲಿ ಬೇರೆ ಬೇರೆ ಕಾರಣಗಳಿಂದಾಗಿ ನೂರಾರು ಅಪಘಾತಗಳು ಸಂಭವಿಸಿ, 100ಕ್ಕೂ ಅಧಿಕ ಮಂದಿ ಸಾವನ್ನಪ್ಪಿದ್ದಾರೆ. ಹಲವರು ಗಾಯಗೊಂಡು ಅಂಗವಿಕಲರಾಗಿರುವುದನ್ನು ಇಲ್ಲಿ ಸ್ಮರಿಸಬಹುದಾಗಿದೆ.

ಸರ್ಕಾರ ಉರುಳಿಸಲು ಸಿಂಗಾಪುರದಲ್ಲಿ ಷಡ್ಯಂತ್ರ ವಿಚಾರ ನನಗೆ ಗೊತ್ತಿಲ್ಲ; ಡಿಕೆಶಿ ಅವರನ್ನೇ ಕೇಳಿ

ಸಿಎಂ ಸಿದ್ದರಾಮಯ್ಯ ಸ್ಪಷ್ಟನೆ



ಬೆಂಗಳೂರು, ಜು. 25(ಕೆಎಂಶಿ)– ಸಿಂಗಾಪುರದಲ್ಲಿ ಸರ್ಕಾರವನ್ನು ಉರುಳಿಸಲು ಷಡ್ಯಂತ್ರ ನಡೆದಿರುವ ಬಗ್ಗೆ ನನಗೆ ಗೊತ್ತಿಲ್ಲ. ಹೇಳಿಕೆ ನೀಡಿರುವ ಡಿ.ಕೆ.ಶಿವಕುಮಾರ್ ಅವರನ್ನೇ ಕೇಳಿ ಎಂದು ಮುಖ್ಯಮಂತ್ರಿ ಸಿದ್ದರಾಮಯ್ಯ ತಿಳಿಸಿದರು.

ಸುದ್ದಿಗಾರರೊಂದಿಗೆ ಮಾತನಾಡಿದ ಅವರು, ಕಾಂಗ್ರೆಸ್ ಅಧಿಕಾರಕ್ಕೆ ಬಂದರೆ ಬರ ಬರುತ್ತದೆ ಎಂದು ಬಿಜೆಪಿಯವರು ಟ್ರೋಲ್ ಮಾಡಿರುವ ಬಗ್ಗೆ ಉತ್ತರಿಸಿ, ಈಗ ಮಳೆಯಾಗುತ್ತಿಲ್ಲವೇ ಎಂದು ಪ್ರಶ್ನಿಸಿದರು.

ಈ ಮೂಢನಂಬಿಕೆಗಳಲ್ಲಿ ಹಾಗೂ ಮೌಢ್ಯಗಳಲ್ಲಿ ನನಗೆ ನಂಬಿಕೆ ಇಲ್ಲ. ಬಿಜೆಪಿ ಅಧಿಕಾರದ ಅವಧಿಯಲ್ಲಿ ಪ್ರವಾಹ ಬಂದು ಒಂದು ಲಕ್ಷ ಮನೆಗಳು ಬಿದ್ದು ಹೋಗಿದ್ದವು. ಪ್ರವಾಹ ಉಂಟಾಗುವುದು ಹಾಗೂ ಮಳೆ ಕೊರತೆಯಾಗುವುದು ಸ್ವಾಭಾವಿಕ. ಈಗ ಹವಾಮಾನ ಬದಲಾವಣೆ ಇದೆ. ಮುಂಗಾರು ಜೂನ್ ತಿಂಗಳಲ್ಲಿ ಪ್ರಾರಂಭವಾಗುವುದು ಜುಲೈನಲ್ಲಿ ಆಗುತ್ತಿದೆ. ಜಗತ್ತಿನ ಎಲ್ಲೆಡೆ ಹವಾಮಾನ ಬದಲಾವಣೆಯಾಗುತ್ತಿದೆ ಎಂದು ಹೇಳಿದರು.

ಲೋಕಸಭೆ ಚುನಾವಣೆಯಲ್ಲಿ ಜೆಡಿಎಸ್ ಹಾಗೂ ಬಿಜೆಪಿ ಒಂದಾಗುತ್ತಿರುವ ಬಗ್ಗೆ ನನಗೆ ತಿಳಿದಿಲ್ಲ. ಅವರು ಒಂದಾದರೆ ನಮಗೇನೂ ಭಯವಿಲ್ಲ. ನಾವು 15–20 ಸ್ಥಾನಗಳನ್ನು ಗೆದ್ದೇ ಗೆಲ್ಲುತ್ತೇವೆ. ಅವರು ಒಂದಾದರೂ, ಒಂದಾಗದೇ ಇದ್ದರು ಗೆಲ್ಲುತ್ತೇವೆ ಎಂದು ಸಿದ್ದರಾಮಯ್ಯ ಹೇಳಿದರು. ಗೃಹಲಕ್ಷ್ಮಿ ಯೋಜನೆಗೆ ಹಣ ಪಡೆದಿರುವ ಬಗ್ಗೆ ದೂರು ಹಾಗೂ ಸಾಕ್ಷಿ ಇದ್ದರೆ ಹಣ ಪಡೆದವರ ಮೇಲೆ ಕ್ರಿಮಿನಲ್ ಮೊಕದ್ದಮೆ ದಾಖಲಿಸಲಾಗುವುದು ಎಂದು ಇದೇ ಸಂದರ್ಭದಲ್ಲಿ ಮುಖ್ಯಮಂತ್ರಿ ಸಿದ್ದರಾಮಯ್ಯ ತಿಳಿಸಿದರು.

ರಾಜ್ಯದ ಬಹುತೇಕ ಕಡೆ ಉತ್ತಮವಾಗಿ ಮಳೆಯಾಗುತ್ತಿದೆ. ಜೂನ್ ತಿಂಗಳಲ್ಲಿ ಸ್ವಲ್ಪ ಕೊರತೆಯಾಗಿತ್ತು. ಜುಲೈ ತಿಂಗಳಲ್ಲಿ ವಾಡಿಕೆಗಿಂತ ಮಳೆ ಹೆಚ್ಚಾಗಿದೆ ಎಂದು ಹೇಳಿದರು.

ಸರ್ಕಾರ ಬಂದು ಎರಡು ತಿಂಗಳಾಗಿದೆ; ಉರುಳಿಸುವ ಪ್ರಶ್ನೆಯೇ ಉದ್ಭವಿಸಲ್ಲ

ಆಹಾರ ಸಚಿವ ಕೆ.ಎಚ್.ಮುನಿಯಪ್ಪ ಸ್ಪಷ್ಟನೆ



ಬೆಂಗಳೂರು,ಜು.25(ಕೆಎಂಶಿ)–ಸಿದ್ದರಾಮಯ್ಯ ನೇತೃತ್ವದ ಸರ್ಕಾರ ಅಧಿಕಾರಕ್ಕೆ ಬಂದು ಕೇವಲ ಎರಡು ತಿಂಗಳಷ್ಟೇ ಕಳೆದಿದೆ. ಈ ಸರ್ಕಾರವನ್ನು ಯಾರು ಉರುಳಿಸುತ್ತಾರೆ ಎಂದು ಆಹಾರ ಮತ್ತು ನಾಗರಿಕ ಪೂರೈಕೆ ಸಚಿವ ಕೆ.ಎಚ್. ಮುನಿಯಪ್ಪ ಪ್ರಶ್ನಿಸಿದ್ದಾರೆ.

ಕಾಂಗ್ರೆಸ್ ಸರ್ಕಾರ ಉರುಳಿಸಲು ಸಿಂಗಾಪುರದಲ್ಲಿ ಸಂಚು ನಡೆದಿದೆ ಎಂದು ಉಪ ಮುಖ್ಯಮಂತ್ರಿ ಡಿ.ಕೆ.ಶಿವಕುಮಾರ್ ಮಾಡಿರುವ ಆರೋಪಕ್ಕೆ ಸಂಬಂಧಿಸಿದಂತೆ ಪ್ರತಿಕ್ರಿಯಿಸಿರುವ ಅವರು, ಸರ್ಕಾರ ಉರುಳಿಸುವ ಪ್ರಶ್ನೆಯೇ ಇಲ್ಲ. ಅಂತಹ ಸಂದರ್ಭವೂ ಬಂದಿಲ್ಲ. ಅವರ ಹೇಳಿಕೆ ನನಗೆ ಅರ್ಥವಾಗುತ್ತಿಲ್ಲ ಎಂದಿದ್ದಾರೆ. ಕಾಂಗ್ರೆಸ್‌ನಲ್ಲಿ ಎಲ್ಲರೂ ಒಗ್ಗಟ್ಟಾಗಿದ್ದೇವೆ. ಶಿವಕುಮಾರ್ ಯಾವ ಅರ್ಥದಲ್ಲಿ ಹೇಳಿದ್ದಾರೋ ಗೊತ್ತಿಲ್ಲ. ಈಗ ಆ ಭಾವನೆ ಮೂಡುವಂತಹ ಕಾಲವೇ ಅಲ್ಲವೆಂದು ತಿಳಿಸಿದ್ದಾರೆ. ಪಕ್ಷದ ಹಿರಿಯ ನಾಯಕ ಬಿ.ಕೆ.ಹರಿಪ್ರಸಾದ್ ಅವರಿಗೆ ನೋವಾಗಿದೆ. ನಾವೆಲ್ಲರೂ ಅವರ ಜತೆಯಲ್ಲಿದ್ದೇವೆ. ಕೆಲವೊಂದು ರಾಜಕೀಯ ಕಾರಣಗಳಿಗೆ ಈಗೆಲ್ಲಾ ಆಗಿದೆ. ಅವರ ಸೇವೆ ದೊಡ್ಡದಿದೆ. ನೋವಿನಲ್ಲಿ ಮಾತನಾಡಿದ್ದು, ಮುಂದೆ ಸರಿ ಹೋಗುತ್ತದೆ. ಪಕ್ಷಕ್ಕೆ ನಿಷ್ಠೆ ಮತ್ತು ಶಿಸ್ತು ಎಂದರೆ ಹರಿಪ್ರಸಾದ್ ಮಾತ್ರ ಎಂದರು.



ಮೈಸೂರಿನ ರೋಟರಿ ವೆಸ್ಟ್ ಸಭಾಂಗಣದಲ್ಲಿ ಶೃಂಗೇರಿ ಶಿಷ್ಯ ಮಲೆನಾಡು ಹೆಬ್ಬಾರ ಬ್ರಾಹ್ಮಣ ಮಹಾಸಭಾ ಆಯೋಜಿಸಿದ್ದ ಯಶೋಮಾರ್ಗ–2023 ಕಾರ್ಯಕ್ರಮದಲ್ಲಿ ರಂಗಕರ್ಮಿ, ನಟ, ನಿರ್ದೇಶಕ ಎಸ್.ಎನ್.ಸೇತುರಾಂ ಅವರನ್ನು ಸನ್ಮಾನಿಸಲಾಯಿತು. ಅದಕ್ಕೂ ಮುನ್ನ ಗಾಡಿಕೆರೆ ಸತ್ಯನಾರಾಯಣ ಮತ್ತು ತಂಡದವರಿಂದ ಶಂಕರಾಚಾರ್ಯ ವಿರಚಿತ ಭಜಗೋವಿಂದಂ ಗಾಯನ ಮತ್ತು ಅರ್ಥ ವಿಶ್ಲೇಷಣಾ ಕಾರ್ಯಕ್ರಮ ನಡೆಯಿತು.

ಪಿಎಚ್.ಡಿ ಪದವಿ



ಮೈಸೂರು,ಜು.25–ಡಾ.ತಾರಾನಾಥ ಮಾರ್ಗದರ್ಶನದಲ್ಲಿ ಶ್ರೀಮತಿ ಪ್ರಿಯಾ ಎ.ಜಗದೀಶ್ ಕಾನೂನು ಅಧ್ಯಯನ ವಿಷಯದಲ್ಲಿ ಸಂಶೋಧನೆ ನಡೆಸಿ ಸಾದರಪಡಿಸಿದ ಮಹಾಪ್ರಬಂಧವನ್ನು ಕರ್ನಾಟಕ ರಾಜ್ಯ ಕಾನೂನು ವಿಶ್ವವಿದ್ಯಾನಿಲಯ, ಹುಬ್ಬಳ್ಳಿ, ಪಿಎಚ್.ಡಿ ಪದವಿಗೆ ಅಂಗೀಕರಿಸಿದೆ.

ನಾಳೆ ವಿದ್ಯುತ್ ವ್ಯತ್ಯಯ

ಮೈಸೂರು, ಜು.25–ವಿ.ವಿ ಮೊಹಲ್ಲಾ ವಿಭಾಗ ವ್ಯಾಪ್ತಿಯ 66/11 ಕೆವಿ ಬೋಗಾದಿ ವಿದ್ಯುತ್ ವಿತರಣಾ ಕೇಂದ್ರದಲ್ಲಿ 2ನೇ ತ್ರೈಮಾಸಿಕ ನಿರ್ವಹಣಾ ಕೆಲಸವನ್ನು ಹಮ್ಮಿಕೊಂಡಿದ್ದು, ಜು.27ರಂದು ಬೆಳಗ್ಗೆ 10ರಿಂದ ಸಂಜೆ 6ರವರೆಗೆ ವಿದ್ಯುತ್ ಸರಬರಾಜಿನಲ್ಲಿ ವ್ಯತ್ಯಯವಾಗಲಿದೆ.

ಅಂದು ಜನತಾನಗರ ಬೋಗಾದಿ 2ನೇ ಹಂತ ನಾರ್ತ್ ಅಂಡ್ ಸೌತ್, ಗಂಗೋತ್ರಿ ಕ್ಯಾಂಪಸ್, ಗಂಗೋತ್ರಿ ಕ್ವಾಟ್ರಸ್, ಆರ್.ಎಮ್.ಪಿ ಲೇಔಟ್, ವಿಜಯನಗರ 3ನೇ ಹಂತ, ಹಿನಕಲ್, ವಿಜಯನಗರ 4ನೇ ಹಂತ, ವಿಜಯಶ್ರೀಪುರ, ಸುಧಾ ಲೇಔಟ್, ರೈಲ್ವೆ ಲೇಔಟ್, ಎಸ್.ಬಿ.ಎಂ ಲೇಔಟ್, ವಾಗ್ದೇವಿ ನಗರ, ಸಿ.ಎಫ್.ಟಿ.ಆರ್.ಐ ಲೇಔಟ್, ಯುನಿವರ್ಸಿಟಿ ಹಾಗೂ ಸುತ್ತಮುತ್ತಲಿನ ಪ್ರದೇಶಗಳಲ್ಲಿ ವಿದ್ಯುತ್ ವ್ಯತ್ಯಯವಾಗಲಿದೆ ಎಂದು ಚೆಸ್ಕಾಂ ಪ್ರಕಟಣೆ ತಿಳಿಸಿದೆ.

ವಿವಿಧ ಸೌಲಭ್ಯಗಳಿಗೆ ಅರ್ಜಿ ಆಹ್ವಾನ

ಮೈಸೂರು, ಜು.25–ಬೋಗಾದಿ ಪಟ್ಟಣ ಪಂಚಾಯಿತಿ 2023–24ನೇ ಸಾಲಿನ ಎಸ್‌ಎಫ್‌ಸಿ ಮುಕ್ತನಿಧಿ ಹಾಗೂ ಪಟ್ಟಣ ಪಂಚಾಯಿತಿ ಅನುದಾನದಲ್ಲಿ ಶೇ.24.10, ಶೇ.7.25 ವಿವಿಧ ಯೋಜನೆಗಳಿಗೆ ವಿವಿಧ ವೈಯಕ್ತಿಕ ಸೌಲಭ್ಯವನ್ನು ಕಲ್ಪಿಸಲು ಅರ್ಜಿ ಅಹ್ವಾನಿಸಲಾಗಿದೆ. ಅರ್ಜಿ ಸಲ್ಲಿಸಲು ಆ.5 ಕೊನೆಯ ದಿನ. ಸಂಬಂಧಿತ ದಾಖಲೆಗಳೊಂದಿಗೆ ಪಟ್ಟಣ ಪಂಚಾಯಿತಿ ಕಾರ್ಯಾಲಯಕ್ಕೆ ಸಲ್ಲಿಸುವಂತೆ ತಿಳಿಸಲಾಗಿದೆ. ಹೆಚ್ಚಿನ ಮಾಹಿತಿಗಾಗಿ ಕಚೇರಿ ಸಮಯದಲ್ಲಿ ಯೋಜನಾ ಶಾಖೆಯನ್ನು ಸಂಪರ್ಕಿಸುವಂತೆ ಬೋಗಾದಿ ಪಟ್ಟಣ ಪಂಚಾಯಿತಿ ಮುಖ್ಯಾಧಿಕಾರಿಗಳು ಪ್ರಕಟಣೆಯಲ್ಲಿ ತಿಳಿಸಿದ್ದಾರೆ.

ಜು.28, ಸಾಮಾನ್ಯ ಕೌನ್ಸಿಲ್ ಸಭೆ

ಮೈಸೂರು, ಜು.25– ಜುಲೈ 28ರಂದು ಮಧ್ಯಾಹ್ನ 3 ಗಂಟೆಗೆ ಮೈಸೂರು ಮಹಾನಗರಪಾಲಿಕೆಯ ನಾಲ್ವಡಿ ಕೃಷ್ಣರಾಜ ಒಡೆಯರ್ ಸಭಾಂಗಣದಲ್ಲಿ 2023ನೇ ಜುಲೈ ಮಾಹೆಯ ಸಾಮಾನ್ಯ ಕೌನ್ಸಿಲ್ ಸಭೆಯನ್ನು ಏರ್ಪಡಿಸಲಾಗಿದೆ ಎಂದು ಮಹಾನಗರಪಾಲಿಕೆ ಕೌನ್ಸಿಲ್ ಕಾರ್ಯದರ್ಶಿ ಪ್ರಕಟಣೆಯಲ್ಲಿ ತಿಳಿಸಿದ್ದಾರೆ.



ಮೈಸೂರಿನ ವಿಜಯನಗರ 1ನೇ ಹಂತದಲ್ಲಿರುವ ಕೊಡವ ಸಮಾಜದ ಫೀಲ್ಡ್ ಮಾರ್ಷಲ್ ಕೆ.ಎಂ.ಕಾರ್ಯಪ್ಪ ಸಮುದಾಯ ಭವನದಲ್ಲಿ ಜು.16ರಂದು ಕುವೆಂಪುನಗರ ಕೊಡವ ರೆಸಿಡೆಂಟ್ಸ್ ಅಸೋಸಿಯೇಷನ್‌ನ 22ನೇ ವಾರ್ಷಿಕ ಕೂಟ ನಡೆಯಿತು. ಇದೇ ಸಂದರ್ಭದಲ್ಲಿ ಅಸೋಸಿಯೇಷನ್ ಡೈರೆಕ್ಟರಿ ಬಿಡುಗಡೆ ಮಾಡಲಾಯಿತು. ಚಿತ್ರದಲ್ಲಿ (ಎಡದಿಂದ): ಶ್ರೀ ಕಾವೇರಿ ಕೊಡಗು ಮಹಿಳಾ ಸಂಘದ ಅಧ್ಯಕ್ಷೆ ಪೊಂಜಂಡ ಲವ್ಲಿ ಅಪ್ಪಯ್ಯ, ಅಸೋಸಿಯೇಷನ್ ಮಾಜಿ ಕಾರ್ಯದರ್ಶಿ ಬೈರೆಟೀರಾ ಗಣಪತಿ, ಕೊಡವ ಸಮಾಜದ ಗೌರವ ಕಾರ್ಯದರ್ಶಿ ಮುಕ್ಕಟೀರಾ ಬಿ.ಜೀವನ್, ಅಸೋಸಿಯೇಷನ್ ಕಾರ್ಯದರ್ಶಿ ಮಾಚಂಡ ರಾಜ ಮುತ್ತಪ್ಪ, ಅಸೋಸಿಯೇಷನ್ ಅಧ್ಯಕ್ಷ ವಾಟೆರೀರ ಬಿ.ಮೇದಪ್ಪ(ವಿಟ್ಟಲ್), ಸಮಾಜದ ಅಧ್ಯಕ್ಷ ಮೇಚಂಡ ಶಶಿ ಪೊನ್ನಪ್ಪ, ಅಸೋಸಿಯೇಷನ್ ಉಪಾಧ್ಯಕ್ಷ ಮಾದಪ್ಪಂಡ ಲಾಲಾ ಅಪ್ಪಚ್ಚು, ಮಾಜಿ ಅಧ್ಯಕ್ಷ ಬಲ್ಯಮಂಡ ನಾಣಯ್ಯ, ಮಾಜಿ ಅಧ್ಯಕ್ಷ ಮೂವೇರ ಕುಟ್ಟಪ್ಪ, ಅಸೋಸಿಯೇಷನ್ ಮಾಜಿ ಅಧ್ಯಕ್ಷ ಇತಿಚಂಡ ಕಾಳಪ್ಪ ಅವರನ್ನು ಕಾಣಬಹುದು.



ವೈದ್ಯರ ದಿನಾಚರಣೆ ಅಂಗವಾಗಿ ಕಾವೇರಿ ಹಾರ್ಟ್ ಅಂಡ್ ಮಲ್ಟಿ ಸ್ಪೆಷಾಲಿಟಿ ಆಸ್ಪತ್ರೆಯ ವತಿಯಿಂದ ಜು.22ರಂದು ಮೈಸೂರಿನ ಸದರನ್ ಸ್ಟಾರ್ ಹೋಟೆಲ್‌ನಲ್ಲಿ ಹೆಸರಾಂತ ಮೂವರು ವೈದ್ಯರಾದ ಸೀನಿಯರ್ ಗೈನಕಾಲಜಿಸ್ಟ್ ಡಾ.ಎಂ.ಎಸ್.ಪ್ರಸಾದ್, ಮಹಾನ್ ಅಧ್ಯಕ್ಷ ಡಾ.ಕೆ.ಜಾವೀದ್ ನಹೀಂ ಹಾಗೂ ಮಕ್ಕಳ ತಜ್ಞ ಡಾ.ಎಸ್.ಎನ್. ಮೋತಿ ಅವರನ್ನು ಅಭಿನಂದಿಸಲಾಯಿತು. ಈ ವೇಳೆ ಕಾವೇರಿ ಹಾರ್ಟ್ ಅಂಡ್ ಮಲ್ಟಿಸ್ಪೆಷಾಲಿಟಿ ಆಸ್ಪತ್ರೆಯ ಚೇರ್ಮನ್ ಡಾ.ಜಿ.ಆರ್. ಚಂದ್ರಶೇಖರ್, ಮ್ಯಾನೇಜಿಂಗ್ ಡೈರೆಕ್ಟರ್ ಡಾ.ಸರಳಾ ಚಂದ್ರಶೇಖರ್, ಮೆಡಿಕಲ್ ಸೂಪರಿಂಟೆಂಡೆಂಟ್ ಡಾ.ಬಿ.ಎನ್. ರಾಜೀವ, ಮೈಸೂರು ಜಿಲ್ಲಾ ಆರೋಗ್ಯಾಧಿಕಾರಿ ಡಾ.ಕುಮಾರಸ್ವಾಮಿ ಉಪಸ್ಥಿತರಿದ್ದರು.

ನಿಧನ

ಆರ್.ಜಗದೀಶ್



ಮೈಸೂರು, ಜು.25– ಮೈಸೂರಿನ ಕುವೆಂಪುನಗರದ ನಿವಾಸಿ ಆರ್.ಜಗದೀಶ್(64) ಅವರು ಸೋಮವಾರ ರಾತ್ರಿ ನಿಧನರಾದರು. ಅವರು ಮೈಸೂರು ಮಹಾನಗರಪಾಲಿಕೆಯಲ್ಲಿ ಪತ್ನಿ, ಮೇಯರ್ ಆಪ್ತ ಸಹಾಯಕಿಯಾಗಿ ಸೇವೆ ಸಲ್ಲಿಸಿ ನಿವೃತ್ತರಾಗಿರುವ ನಿರ್ಮಲಾ, ಪುತ್ರಿ ಶೃತಿ, ಪುತ್ರ ಶ್ರೇಯಸ್ ಹಾಗೂ ಅಪಾರ ಬಂಧು–ಬಳಗವನ್ನು ಅಗಲಿದ್ದಾರೆ. ಇಂದು ಸಂಜೆ ಕೆ.ಜಿ.ಕೊಪ್ಪಲು ರುದ್ರಭೂಮಿಯಲ್ಲಿ ಅಂತ್ಯಕ್ರಿಯೆ ನೆರವೇರಿಸಲಾಯಿತು ಎಂದು ಕುಟುಂಬದ ಮೂಲಗಳು ತಿಳಿಸಿವೆ.

ಶ್ರೀಮತಿ ನಿಂಗಮ್ಮ



ಮೈಸೂರು ವಿಜಯನಗರ ಮೊದಲ ಹಂತದ ನಿವಾಸಿ ಗೊಟ್ಟಿಗೆ ಗೌಡರ ಮಗ ದೇವಣ್ಣನವರ ಪತ್ನಿ ಶ್ರೀಮತಿ ನಿಂಗಮ್ಮ(75) ಅವರು ಇಂದು ಸಂಜೆ ನಿಧನರಾದರು. ಮೃತರು ಪುತ್ರರಾದ ರವಿ, ಜಯರಾಮು, ಅರ್ಕೇಶ್ ಸೇರಿದಂತೆ ಅಪಾರ ಬಂಧು ವರ್ಗ ಅಗಲಿದ್ದಾರೆ. ಇವರ ಅಂತ್ಯಕ್ರಿಯೆ ನಾಳೆ (ಬುಧವಾರ) ಮಧ್ಯಾಹ್ನ 12 ಗಂಟೆಗೆ ಗೋಕುಲಂ ರುದ್ರಭೂಮಿಯಲ್ಲಿ ನೆರವೇರಲಿದೆ ಎಂದು ಕುಟುಂಬದ ಮೂಲಗಳು ತಿಳಿಸಿವೆ.

ಎಸ್.ಗಣಪತಿ



ಮೈಸೂರು ಕನ್ನೇಗೌಡನಕೊಪ್ಪಲು (ಕೆ.ಜಿ.ಕೊಪ್ಪಲು) ಚಾಮುಂಡೇಶ್ವರಿ ದೇವಸ್ಥಾನದ ಪ್ರಧಾನ ಅರ್ಚಕರು ಹಾಗೂ ಎಸ್‌ಬಿಐನ ನಿವೃತ್ತ ಉದ್ಯೋಗಿ ಎಸ್.ಗಣಪತಿ (64) ಅವರು ಇಂದು ನಿಧನರಾದರು. ಇವರು ಪತ್ನಿ, ಪುತ್ರ, ಪುತ್ರಿ ಸೇರಿದಂತೆ ಅಪಾರ ಬಂಧು ಮಿತ್ರರನ್ನು ಅಗಲಿದ್ದಾರೆ. ಇವರ ಅಂತ್ಯಕ್ರಿಯೆ ಇಂದು ಸಂಜೆ ಚಾಮುಂಡಿಬೆಟ್ಟದ ತಪ್ಪಲಲ್ಲಿ ನೆರವೇರಿತು ಎಂದು ಕುಟುಂಬದ ಮೂಲಗಳು ತಿಳಿಸಿವೆ. ಇವರ ನಿಧನಕ್ಕೆ ಚಾಮುಂಡೇಶ್ವರಿ ದೇವಸ್ಥಾನದ ಆಡಳಿತ ಮಂಡಳಿ ಸದಸ್ಯರು ಸಂತಾಪ ಸೂಚಿಸಿದ್ದಾರೆ.

ಮೈಸೂರು ಹಾಗೂ ಸುತ್ತಮುತ್ತ ಇಂದು...



ಇಂದಿನ ಪಂಚಾಂಗ

26.7.2023 ಬುಧವಾರ, ಮಳೆ ನಕ್ಷತ್ರ: ಆಶ್ಲೇಷ 21.07.2023ರಿಂದ 03.08.2023 ಶ್ರೀ ಶೋಭಕೃತ್ ನಾಮ ಸಂವತ್ಸರ, ದಕ್ಷಿಣಾಯಣ, ವರ್ಷ ಋತು, ಅಧಿಕ ಶ್ರಾವಣ ಮಾಸ, ಶುಕ್ಲ ಪಕ್ಷ, ತಿಥಿ: ಅಷ್ಟಮಿ, ನಕ್ಷತ್ರ: ಸ್ವಾತಿ, ರಾಹುಕಾಲ: ಮಧ್ಯಾಹ್ನ 12ರಿಂದ 1.30ರವರೆಗೆ

■ **ಶ್ರೀ ಯದುಗಿರಿ ಯತಿರಾಜ ಮಠ, ಮೈಸೂರು ಶಾಖೆ:** ಸ್ವಾತಿ ನಕ್ಷತ್ರದ ಪ್ರಯುಕ್ತ ವಿಶೇಷ ಪೂಜೆ, ಬೆಳಗ್ಗೆ 7.30ಕ್ಕೆ ಸಂಕಲ್ಪ, 9ಕ್ಕೆ ಅಭಿಷೇಕ, 10ಕ್ಕೆ ಅಲಂಕಾರ, 11ಕ್ಕೆ ಮಹಾಮಂಗಳಾರತಿ, ಮಧ್ಯಾಹ್ನ 12ಕ್ಕೆ ಶಾತ್ತುಮೊರೈ, 12.30ಕ್ಕೆ ಪ್ರಸಾದ ವಿನಿಯೋಗ, ಸ್ಥಳ: ಶ್ರೀ ಲಕ್ಷ್ಮೀನರಸಿಂಹಸ್ವಾಮಿ ದೇವಸ್ಥಾನ, ಕಾಳಿದಾಸ ರಸ್ತೆ.

■ **ಪ್ರಜ್ಞಾ ಫೌಂಡೇಷನ್, ಸಮಾಜ ಕಾರ್ಯ ಅಧ್ಯಯನ ವಿಭಾಗ :** ಪತಂಗ ಜಿಲ್ಲಾ ಮಟ್ಟದ ಸಾಂಸ್ಕೃತಿಕ ಸ್ಪರ್ಧೆಗಳು, ಸ್ಥಳ: ಸೆನೆಟ್ ಭವನ, ಮಾನಸಗಂಗೋತ್ರಿ, ಬೆಳಗ್ಗೆ 9ಕ್ಕೆ.

■ **ಅಖಿಲ ಕರ್ನಾಟಕ ಮಾಜಿ ಸೈನಿಕರ ಸಂಘ, ಮೈಸೂರು ಜಿಲ್ಲಾ ಘಟಕ, ರೋಟರಿ ಕ್ಲಬ್ ಆಫ್ ಹೆರಿಟೇಜ್, ಮೈಸೂರು:** ಕಾರ್ಗಿಲ್ ವಿಜಯ್ ದಿವಸ್ ಅಂಗವಾಗಿ ಬೈಕ್ ರ್‍ಯಾಲಿ, ಅಧ್ಯಕ್ಷತೆ: ಸಂಘದ ರಾಜ್ಯ ಉಪಾಧ್ಯಕ್ಷ ಕೆ.ಪಿ.ದಿವಾಕರ, ರೋಟರಿ ಕ್ಲಬ್ ಆಫ್ ಹೆರಿಟೇಜ್ ಅಧ್ಯಕ್ಷ ಸಿ.ಜಗದೀಶ್, ಉಪಸ್ಥಿತರು: ಜಿಲ್ಲಾ ಗವರ್ನರ್ ಹೆಚ್.ಆರ್.ಕೇಶವ್, ಮುಖ್ಯ ಅತಿಥಿಗಳು: ವಿಧಾನಪರಿಷತ್ ಸದಸ್ಯ ಸಿ.ಎನ್. ಮಂಜೇಗೌಡ, ಶಾಸಕರಾದ ಹರೀಶ್‌ಗೌಡ, ಶ್ರೀವತ್ಸ, ಮಾಜಿ ಶಾಸಕ ಎಂ.ಕೆ.ಸೋಮಶೇಖರ್, ಮುಡಾ ಮಾಜಿ ಅಧ್ಯಕ್ಷ ಹೆಚ್.ವಿ.ರಾಜೀವ್, ಬೈಕ್ ರ್‍ಯಾಲಿಗೆ ಚಾಲನೆ: ಎನ್‌ಸಿಸಿ ಗ್ರೂಪ್ ಹೆಡ್ ಕ್ವಾರ್ಟರ್ಸ್ ಕಮಾಂಡೆಂಟ್ ಕರ್ನಲ್ ಆರ್.ಆರ್.ಮೆನನ್, ಸ್ಥಳ: ಫೀಲ್ಡ್ ಮಾರ್ಷಲ್ ಕಾರ್ಯಪ್ಪ ಪ್ರತಿಮೆ, ಮೆಟ್ರೋಪೋಲ್ ಸರ್ಕಲ್, ಬೆಳಗ್ಗೆ 9ಕ್ಕೆ.

■ **ಸಹರಾ ಆರ್ಟ್ ಅಂಡ್ ಕ್ರಾಫ್ಟ್:** ಶಾಪಿಂಗ್ ಫೆಸ್ಟಿವಲ್, ಹ್ಯಾಂಡಿಕ್ರಾಫ್ಟ್ ಅಂಡ್ ಹ್ಯಾಂಡ್‌ಲೂಮ್ ಪ್ರದರ್ಶನ, ಮಾರಾಟ, ಸ್ಥಳ: ಸ್ಕೌಟ್ಸ್ ಅಂಡ್ ಗೈಡ್ಸ್ ಮೈದಾನ, ಬೆಳಗ್ಗೆ 10.30ರಿಂದ ರಾತ್ರಿ 9.30ರವರೆಗೆ.

■ **ಶರಣ ಸಾಹಿತ್ಯ ಪರಿಷತ್ತು, ಮೈಸೂರು ನಗರ ಘಟಕ, ಮಹಾಜನ ವಿದ್ಯಾಸಂಸ್ಥೆ :** ಶರಣ ಸಾಹಿತ್ಯ ಪರಿಷತ್ ಯುವ ಘಟಕದ ಉದ್ಘಾಟನಾ ಸಮಾರಂಭ, ಸಾನ್ನಿಧ್ಯ: ಸುತ್ತೂರು ಶ್ರೀ ಶಿವರಾತ್ರಿ ದೇಶಿಕೇಂದ್ರ ಸ್ವಾಮೀಜಿ, ಉದ್ಘಾಟನೆ: ಯುವ ಪ್ರತಿಭೆ ಎಂ.ಪೂಜಾ, ಪ್ರಧಾನ ಭಾಷಣಕಾರರು: ಆಧ್ಯಾತ್ಮ ಚಿಂತಕ ಶಂಕರ ದೇವನೂರು ಅವರಿಂದ ವಚನ ಸಾಹಿತ್ಯ–ಜೀವನ ಮೌಲ್ಯಗಳು ಕುರಿತು ಉಪನ್ಯಾಸ, ಅಧ್ಯಕ್ಷತೆ: ಶರಣ ಸಾಹಿತ್ಯ ಪರಿಷತ್, ಮೈಸೂರು ನಗರ ಘಟಕ ಅಧ್ಯಕ್ಷ ಮ.ಗು.ಸದಾನಂದಯ್ಯ, ಮುಖ್ಯ ಅತಿಥಿಗಳು: ಮಹಾಜನ ವಿದ್ಯಾಸಂಸ್ಥೆ ಗೌರವ ಕಾರ್ಯದರ್ಶಿ ಡಾ. ವಿಜಯಲಕ್ಷ್ಮಿ ಮುರಳೀಧರ್, ದತ್ತಿ ದಾನಿಗಳು : ಜಿ.ಆರ್. ರಾಜಶೇಖರಪ್ಪ, ಜಿ.ಆರ್. ರವಿರಾಜ್, ಸ್ಥಳ: ವಿವೇಕಾನಂದ ಸಭಾಂಗಣ, ಮಹಾಜನ ವಿದ್ಯಾಸಂಸ್ಥೆ, ಬೆಳಗ್ಗೆ 10.30ಕ್ಕೆ.

■ **ಯುವ ಭಾರತ್ ಸಂಘಟನೆ:** ಕಾರ್ಗಿಲ್ ವಿಜಯ ದಿವಸ್ ಅಂಗವಾಗಿ ಜೈಹಿಂದ್ ದೇಶಭಕ್ತಿ ಕಾರ್ಯಕ್ರಮ, ಮುಖ್ಯ ಅತಿಥಿಗಳು: ಶಾಸಕ ಟಿ.ಎಸ್.ಶ್ರೀವತ್ಸ, ಮೇಯರ್ ಶಿವಕುಮಾರ್, ಮಾಜಿ ಶಾಸಕ ಎಲ್.ನಾಗೇಂದ್ರ, ಪಾಲಿಕೆ ಸದಸ್ಯೆ ಪ್ರಮೀಳಾ ಭರತ್, ಸಮಾಜ ಸೇವಕ ಡಾ.ಕೆ.ರಘುರಾಂ ವಾಜಪೇಯಿ, ಮೈಸೂರು ನಗರ ಮತ್ತು ಜಿಲ್ಲಾ ಬ್ರಾಹ್ಮಣ ಸಂಘದ ಅಧ್ಯಕ್ಷ ಡಿ.ಟಿ.ಪ್ರಕಾಶ್, ಕಸಾಪ ಜಿಲ್ಲಾಧ್ಯಕ್ಷ ಮಡ್ಡೀಕೆರೆ ಗೋಪಾಲ್, ಹೋಟೆಲ್ ಮಾಲೀಕರ ಸಂಘದ ಅಧ್ಯಕ್ಷ ನಾರಾಯಣಗೌಡ, ಮೈಸೂರು ನಗರ ಬಿಜೆಪಿ ಹಿಂದುಳಿದ ವರ್ಗದ ಮೋರ್ಚಾ ಅಧ್ಯಕ್ಷ ಜೋಗಿ ಮಂಜು, ಬಿಜೆಪಿ ಮಹಿಳಾ ಮೋರ್ಚಾ ಅಧ್ಯಕ್ಷೆ ಹೇಮಾ ನಂದೀಶ್, ಜೀವಧಾರ ರಕ್ತನಿಧಿ ಕೇಂದ್ರದ ನಿರ್ದೇಶಕ ಗಿರೀಶ್, ಸಾಮಾಜಿಕ ಹೋರಾಟಗಾರ ವಿಕ್ರಂ ಅಯ್ಯಂಗಾರ್, ಅಜಯ್ ಶಾಸ್ತ್ರಿ, ಸ್ಥಳ: ಫೀಲ್ಡ್ ಮಾರ್ಷಲ್ ಕಾರಿಯಪ್ಪ ವೃತ್ತ, ಬೆಳಗ್ಗೆ 10.30ಕ್ಕೆ.

■ **ಜೆಎಸ್‌ಎಸ್ ಪದವಿಪೂರ್ವ ಕಾಲೇಜು:** ಸಾಂಸ್ಕೃತಿಕ ವೇದಿಕೆ ಉದ್ಘಾಟನಾ ಸಮಾರಂಭ, ಉದ್ಘಾಟನೆ: ಪ್ರಾಂಶುಪಾಲ ಕೆ.ಎನ್.ಶಿವಕುಮಾರ್, ಮುಖ್ಯ ಅತಿಥಿಗಳು: ನೃತ್ಯ ಕಲಾವಿದ ಪ್ರೊ.ಕೆ.ರಾಮಮೂರ್ತಿರಾವ್, ಅಧ್ಯಕ್ಷತೆ: ಪ್ರಾಂಶುಪಾಲ ಬಿ.ಸಿ.ಶಾಂತಮಲ್ಲಪ್ಪ, ಸ್ಥಳ: ಕಾಲೇಜು ಆವರಣ, ಎಸ್‌ಜೆಸಿಇ, ಬೆಳಗ್ಗೆ 10.30ಕ್ಕೆ.

■ **ಮೈಸೂರು ವಿಶ್ವವಿದ್ಯಾನಿಲಯ, ಡಾ. ಬಿ.ಆರ್. ಅಂಬೇಡ್ಕರ್ ಸಂಶೋಧನೆ ಹಾಗೂ ವಿಸ್ತರಣಾ ಕೇಂದ್ರ, ಶ್ರೀ ನಟರಾಜ ಪ್ರತಿಷ್ಠಾನ, ಶ್ರೀ ನಟರಾಜ ಮಹಿಳಾ ಪದವಿ ಪೂರ್ವ ಕಾಲೇಜು :** ಕಾಲೇಜುಗಳತ್ತ ಅಂಬೇಡ್ಕರ್ ಚಿಂತನೆ–ವಿಸ್ತರಣಾ ಕಾರ್ಯಕ್ರಮ, ಸಾನ್ನಿಧ್ಯ : ಶ್ರೀ ನಟರಾಜ ಪ್ರತಿಷ್ಠಾನ ಅಧ್ಯಕ್ಷ ಶ್ರೀ ಚಿದಾನಂದ ಸ್ವಾಮೀಜಿ, ಉದ್ಘಾಟನೆ : ಸಂಗೀತ ವಿವಿ ಕುಲಪತಿ ಪ್ರೊ. ನಾಗೇಶ್ ವಿ. ಬೆಟ್ಟಕೋಟೆ, ಸಂದರ್ಶಕ ಪ್ರಾಧ್ಯಾಪಕರಾದ ಪ್ರೊ. ಆರ್. ಇಂದಿರಾ ಅವರಿಂದ ಅಂಬೇಡ್ಕರ್ ಪರಿಕಲ್ಪನೆಯ ಮಹಿಳಾ ಸಬಲೀಕರಣ ಕುರಿತು ಉಪನ್ಯಾಸ, ಅಧ್ಯಕ್ಷತೆ : ಶ್ರೀ ನಟರಾಜ ಪ್ರತಿಷ್ಠಾನ ವಿಶೇಷಾಧಿಕಾರಿ ಪ್ರೊ. ಎಸ್. ಶಿವರಾಜಪ್ಪ, ಉಪಸ್ಥಿತರು : ಪ್ರಾಧ್ಯಾಪಕ ಪ್ರೊ. ಜೆ. ಸೋಮಶೇಖರ್, ಸ್ಥಳ: ಶ್ರೀ ನಟರಾಜ ಸಭಾ ಭವನ, ಬೆಳಗ್ಗೆ 11ಕ್ಕೆ.

■ **ಲಯನ್ಸ್ ಬ್ಲಡ್ ಸೆಂಟರ್ ಜೀವಧಾರ :** ಮಕ್ಕಳಿಗೆ ಉಚಿತ ರಕ್ತ ಗುಂಪು ಪರೀಕ್ಷೆ, ಮಕ್ಕಳಿಗೆ ಆರೋಗ್ಯ ಮತ್ತು ಸ್ವಚ್ಛತೆ ಜಾಗೃತಿ, ಸಮವಸ್ತ್ರ ವಿತರಣಾ ಕಾರ್ಯಕ್ರಮ, ಮುಖ್ಯ ಅತಿಥಿಗಳು : ಮಾಜಿ ಮೇಯರ್ ಸಂದೇಶ್‌ಸ್ವಾಮಿ, ನಗರ ಪಾಲಿಕೆ ಆರೋಗ್ಯಾಧಿಕಾರಿ ಡಾ. ನಾಗರಾಜ್, ಡಾ. ಸಂದೀಪ್, ಕಾಂಗ್ರೆಸ್ ಮುಖಂಡ ಎನ್.ಎಂ. ನವೀನ್‌ಕುಮಾರ್, ಪಾಲಿಕೆ ಸದಸ್ಯ ಮಾ.ವಿ. ರಾಮಪ್ರಸಾದ್, ಜೀವಧಾರ ರಕ್ತನಿಧಿ ಕೇಂದ್ರದ ನಿರ್ದೇಶಕ ಗಿರೀಶ್, ಭೈರತಿ ಲಿಂಗರಾಜು, ಅಪೂರ್ವ ಸುರೇಶ್, ಸ್ಥಳ: ಬಾಲಬೋಧಿನಿ ಶಾಲೆ, ಚಾಮುಂಡಿಪುರಂ, ಮಧ್ಯಾಹ್ನ 12.30ಕ್ಕೆ.

■ **ಆದಿಜಾಂಬವ ಮಹಾಸಭಾ :** ಉದ್ಘಾಟನಾ ಸಮಾರಂಭ, ಉದ್ಘಾಟನೆ : ವಿಧಾನಪರಿಷತ್ ಸದಸ್ಯ ಡಾ. ಡಿ. ತಿಮ್ಮಯ್ಯ, ಮುಖ್ಯ ಅತಿಥಿಗಳು : ಶಾಸಕ ತನ್ವೀರ್ ಸೇಠ್, ಅಧ್ಯಕ್ಷತೆ : ಮಹಾಸಭಾ ಅಧ್ಯಕ್ಷ ಗಂಗಯ್ಯ (ರೈಲ್ವೆ), ವಿಶೇಷ ಆಹ್ವಾನಿತರು : ಎನ್. ಮುನಿರಾಜು, ಶ್ರೀನಿವಾಸ್, ಟಿ. ರಾಮು, ಲಕ್ಷ್ಮಣ, ನಾರಾಯಣ್, ಬಿ.ಪಿ. ಮುತ್ತುರಾಜ್, ಸ್ಥಳ: ಗೋವರ್ಧನ್ ಹೋಟೆಲ್ ಸಭಾಂಗಣ, ಮಧ್ಯಾಹ್ನ 3.30ಕ್ಕೆ.

■ **ಶ್ರೀ ವ್ಯಾಸರಾಜಪುರ ಮಠ, ಸೋಸಲೆ (ಮುನಿತ್ರಮ ಪೀಠ), ವ್ಯಾಸತೀರ್ಥ ವಿದ್ಯಾಪೀಠ:** ಅಧಿಕ ಮಾಸದ ಪ್ರಯುಕ್ತ ಪ್ರತಿನಿತ್ಯ ಸಂಪೂರ್ಣ ರಾಮಾಯಣ ಪ್ರವಚನ ಯಜ್ಞ ವಿ. ಶ್ರೀನಿಧಿ ಆಚಾರ್ಯ ಪ್ಯಾಟಿ ಅವರಿಂದ ಬಾಲಕಾಂಡ ಕುರಿತು ಪ್ರವಚನ, ಸ್ಥಳ: ವಿದ್ಯಾಪೀಠ, ಕೃಷ್ಣಮೂರ್ತಿಪುರಂ, ಸಂಜೆ 6ರಿಂದ 7ರವರೆಗೆ.

ಮೈಸೂರು ಆಕಾಶವಾಣಿ



ಬೆಳಗ್ಗೆ: 6.10 ಚಿಂತನ, 6.15 ಗೀತಾರಾಧನ, 6.35 ಜಿ.ಎಸ್.ಎಸ್. ಯೋಗದ ಮಾತು, ಪ್ರಸ್ತುತಿ–ಡಿ.ಶ್ರೀಹರಿ, 6.40 ಪದಸಂಸ್ಕೃತಿ, ಪ್ರಸ್ತುತಿ–ಡಾ.ಬಿ.ವಿ.ವಸಂತಕುಮಾರ್, 7.15 ಅಂತಾರಾಷ್ಟ್ರೀಯ ಪ್ಯಾರಾ ಬ್ಯಾಡ್‌ಮಿಂಟನ್ ಕ್ರೀಡಾಪಟುಗಳಾದ ಪಲ್ಲವಿ ಕೆ.ಎಂ. ಮತ್ತು ಚಾಪರ ಪೂರ್ಣರಾವ್ ಅವರೊಂದಿಗೆ ಮಾತುಕತೆಯಲ್ಲಿ ಭಾಗವಹಿಸುವವರು ಬೇದ್ರೆ ಮಂಜುನಾಥ್, 9.05 ವಸುದೈವ ಕುಟುಂಬಕಂ–ಭಾರತ ಜಿ20 ಶೃಂಗಸಭೆಯ ಅಧ್ಯಕ್ಷತೆ ವಹಿಸಿದ ಸಂದರ್ಭದಲ್ಲಿ ವಿಶೇಷ ಸರಣಿ ಕಾರ್ಯಕ್ರಮ, 9.10 ವೃತ್ತಿ ಮಾರ್ಗದರ್ಶನ–ಕೃಷಿ ವಿಜ್ಞಾನ ಶಿಕ್ಷಣದ ಪ್ರಾಮುಖ್ಯತೆ ಕುರಿತು ಮಂಡ್ಯ ವಿ.ಸಿ. ಫಾರಂನ ಡಾ.ಎಸ್.ಎಸ್.ಪ್ರಕಾಶ್ ಅವರೊಂದಿಗೆ ಮಾತುಕತೆ. ಪ್ರಸ್ತುತಿ–ಎನ್.ಕೇಶವಮೂರ್ತಿ, 9.30 ಚಿತ್ರಗೀತೆ, 10.00 ಹಿಂದೂಸ್ಥಾನಿ ಸಂಗೀತ–ಸಮೀರ್ ರಾವ್–ಬಾನ್ಸುರಿ ವಾದನ, 11.00 ನಿಮ್ಮೊಂದಿಗೆ ಮೈಸೂರು ಆಕಾಶವಾಣಿ **ಮಧ್ಯಾಹ್ನ:** 12.30 ದೇವರನಾಮ–ರಘು ಆರ್., 1.00 ಪ್ರಗತಿ ಪಥ–ಕೇಂದ್ರ ಸರ್ಕಾರದ ಅಭಿವೃದ್ಧಿ ಯೋಜನೆಗಳನ್ನು ಕುರಿತ ಕಾರ್ಯಕ್ರಮ, 1.20 ಭಾವಗೀತೆಗಳು, 1.30 ಸಂದೇಶ ಆಧಾರಿತ ಶ್ರೋತೃಗಳ ಮೆಚ್ಚಿನ ಚಿತ್ರಗೀತೆಗಳ ಕಾರ್ಯಕ್ರಮ, 3.00 ಲಯ ಸಂಭ್ರಮ–ಕರ್ನಾಟಕ ಮತ್ತು ಮೈಸೂರು ಸಂಸ್ಥಾನದಲ್ಲಿ ಮೃದಂಗ ವಾದನದ ಪರಂಪರೆ, ಪ್ರಸ್ತುತಿ–ಹೆಚ್.ಎಲ್.ಶಿವಶಂಕರಸ್ವಾಮಿ, 4.00 ಮಹಿಳಾರಂಗ–ಸ್ತ್ರೀ ಚೇತನ. ಭಾಗವಹಿಸುವವರು–ಸಂಗೀತ ಸಂಯೋಜಕಿ ಹಾಗೂ ಗಾಯಕಿ ಸುನೀತಾ ಚಂದಕುಮಾರ್, ಪ್ರಸ್ತುತಿ– ಅಬ್ದುಲ್ ರಶೀದ್, 4.45 ಹಿಂದಿ ಪಾಠ–ಡಾ.ಸ್ಮಿತಾ ಚಿಪ್ಳೂಣ್‌ಕರ್, 5.05 ಸಂದೇಶ ಆಧಾರಿತ ಶ್ರೋತೃಗಳ ಮೆಚ್ಚಿನ ಚಿತ್ರಗೀತೆಗಳ ಕಾರ್ಯಕ್ರಮ, 6.50 ಕೃಷಿರಂಗ–ಕಿಸಾನ್ ವಾಣಿ–ಸಾವಯವ ಸಂಪದ–ಸಾವಯವ ಕೃಷಿ ಬದುಕಿನ ಸಮಗ್ರ ಚಿತ್ರಣ ಕುರಿತ ಬಾನುಲಿ ಸರಣಿ. ಸಾವಯವ ಕೃಷಿಯಲ್ಲಿ ಮಣ್ಣಿನ ಆರೋಗ್ಯ ಮತ್ತು ಪೋಷಕಾಂಶಗಳ ನಿರ್ವಹಣೆ ಕುರಿತು ಡಾ.ಎಸ್.ಎಸ್.ಪ್ರಕಾಶ್ ಅವರೊಂದಿಗೆ ಸಂದರ್ಶನ, ಪರಿಕಲ್ಪನೆ ಹಾಗೂ ನಿರ್ಮಾಣ–ಎನ್.ಕೇಶವಮೂರ್ತಿ, 9.30 ಹಿಂದೂಸ್ಥಾನಿ ಸಂಗೀತ–ಉಸ್ತಾದ್ ಸಬ್ರಿ ಖಾನ್–ಸಾರಂಗಿ, 10.00 ಸಂಸತ್ತಿನ ಪ್ರಶ್ನೋತ್ತರ ಕಲಾಪದ ವರದಿ

ಹಾಲು ಖರೀದಿ ದರ 1.50 ರೂ. ಕಡಿತ; ನಷ್ಟ ಸರಿದೂಗಿಸಲು ಅನಿವಾರ್ಯ ಕ್ರಮ



ಮೈಸೂರು, ಜು.25(ಬಿಎಲ್‌ಯು)– ನಂದಿನಿ ಹಾಲಿನ ದರ ಹೆಚ್ಚಳ ಮಾಡಿ ಗ್ರಾಹಕರಿಗೆ ಶಾಕ್ ಕೊಟ್ಟಿರುವ ಹಾಲು ಉತ್ಪಾದಕರ ಒಕ್ಕೂಟಗಳು ಈಗ ರೈತರಿಗೆ ನೀಡುತ್ತಿದ್ದ ಹಾಲಿನ ಖರೀದಿ ದರವನ್ನು ಒಂದೂವರೆ ರೂಪಾಯಿ ಕಡಿಮೆ ಮಾಡಿ ಅವರಿಗೂ ಶಾಕ್ ನೀಡಿದೆ.

ಹಾಲು ಶೇಖರಣೆ ಹೆಚ್ಚಾಗಿರುವ ಕಾರಣ ಆರ್ಥಿಕ ನಷ್ಟವನ್ನು ಸರಿದೂಗಿಸಲು ಮೈಸೂರು ಜಿಲ್ಲಾ ಸಹಕಾರಿ ಹಾಲು ಉತ್ಪಾದಕರ ಸಂಘಗಳ ಒಕ್ಕೂಟ ರೈತರಿಗೆ ನೀಡುತ್ತಿದ್ದ ಹಾಲು ಖರೀದಿ ದರದಲ್ಲಿ 1.50 ರೂ.ಗಳನ್ನು ಕಡಿಮೆ ಮಾಡಿದೆ.

ಈ ಮೊದಲು ರೈತರಿಗೆ ಹಾಲು ಖರೀದಿ ದರವನ್ನು 33 ರೂ. ನೀಡಲಾಗುತ್ತಿತ್ತು. ಆದರೆ ಈಗ ಒಂದೂವರೆ ರೂ. ಕಡಿಮೆ ಮಾಡಿ, 31.50 ರೂ. ನೀಡಲಾಗುವುದು. ಗ್ರಾಹಕರಿಗೆ ಹೆಚ್ಚು ಮಾಡಿರುವ 3 ರೂ.ಗಳನ್ನು ರೈತರಿಗೆ ನೀಡಲಾಗುವುದು. ಜೊತೆಗೆ ಸರ್ಕಾರದಿಂದ 5 ರೂ. ಪ್ರೋತ್ಸಾಹ ಧನವೂ ದೊರೆಯುತ್ತದೆ. ಒಟ್ಟಾರೆ ಈಗ ರೈತರಿಗೆ ಒಂದು ಲೀಟರ್ ಹಾಲಿಗೆ 39.50 ರೂ. ದೊರೆಯಲಿದೆ. ಪ್ರತಿದಿನ ಮೈಸೂರು ಹಾಲು ಒಕ್ಕೂಟಕ್ಕೆ 8.50 ಲಕ್ಷದಿಂದ 9 ಲಕ್ಷ ಲೀಟರ್ ಹಾಲು ಬರುತ್ತಿದೆ. ಇದರಲ್ಲಿ 3.5 ಲಕ್ಷ ಲೀಟರ್ ಹಾಲು ಮತ್ತು ಮೊಸರಿಗೆ ಬಳಕೆಯಾದರೆ, ಉಳಿದ 5 ಲಕ್ಷ ಲೀಟರ್ ಹಾಲನ್ನು ತುಪ್ಪ, ಸ್ವೀಟ್ಸ್ ಹಾಗೂ ಪೌಡರ್ ಬಳಕೆಗೆ ಬಳಸಿಕೊಳ್ಳಲಾಗುವುದು. 1 ಕೆ.ಜಿ. ಹಾಲಿನ ಪೌಡರ್ ತಯಾರಿಕೆಗೆ 350 ರೂ. ವೆಚ್ಚವಾಗುತ್ತದೆ. ಆದರೆ ಸರ್ಕಾರ 300 ರೂ. ನೀಡುತ್ತದೆ. ಇದರಿಂದ 50 ರೂ. ಒಕ್ಕೂಟಕ್ಕೆ ನಷ್ಟವಾಗುತ್ತದೆ ಎಂದು ಮೈಸೂರು ಹಾಲು ಒಕ್ಕೂಟದ ಅಧ್ಯಕ್ಷ ಪ್ರಸನ್ನ ತಿಳಿಸಿದ್ದಾರೆ.

> “ನಾನು ಅಧ್ಯಕ್ಷನಾದಾಗ ಎರಡೂವರೆ ವರ್ಷದ ಹಿಂದೆ 6 ಲಕ್ಷ ಲೀಟರ್ ಹಾಲು ಬರುತ್ತಿತ್ತು. ಆದರೆ ಈಗ ಎಂಟೂವರೆ ಲಕ್ಷದಿಂದ 9 ಲಕ್ಷ ಲೀಟರ್ ಹಾಲು ಬರುತ್ತಿದೆ. ಹಾಲು ಉತ್ಪಾದನೆ ಹೆಚ್ಚಾಗಿರುವ ಕಾರಣ ನಷ್ಟ ಸರಿದೂಗಿಸಲು ಅನಿವಾರ್ಯವಾಗಿ ರೈತರಿಂದ ಖರೀದಿಸುವ ಹಾಲಿನ ದರವನ್ನು ಸದ್ಯಕ್ಕೆ ಕಡಿಮೆ ಮಾಡಲಾಗಿದೆ. ಪೌಡರ್, ತುಪ್ಪ ಹಾಗೂ ಸ್ವೀಟ್ಸ್ ಅನ್ನು ರಫ್ತು ಮಾಡಲು ಸರ್ಕಾರದ ಮಟ್ಟದಲ್ಲಿ ಮಾತುಕತೆ ನಡೆಯುತ್ತಿದೆ. ರಫ್ತು ಹೆಚ್ಚಾದರೆ ಹಾಲು ಒಕ್ಕೂಟಕ್ಕೆ ನಷ್ಟವಾಗುವುದಿಲ್ಲ.
>
> –ಪ್ರಸನ್ನ, ಮೈಸೂರು ಹಾಲು ಒಕ್ಕೂಟದ ಅಧ್ಯಕ್ಷ

ಕುಡಿಯುವ ನೀರಿನ ಪೈಪ್‌ಲೈನ್ ಕಾಮಗಾರಿ ಅಧ್ವಾನ

ಯಾದವಗಿರಿಯಿಂದ ಗೋಕುಲಂವರೆಗೆ ವಾಹನ ಸಂಚಾರಕ್ಕೆ ಅಡ್ಡಿ; ವಾಣಿಜ್ಯ ವಹಿವಾಟಿಗೂ ಪೆಟ್ಟು

● ವರ್ಕ್ಸ್ ಕಮಿಟಿಯಿಂದ ಸ್ಥಳ ಪರಿಶೀಲನೆ ● ಕಾಮಗಾರಿ ಹಿಂದೆಯೇ ರಸ್ತೆ ಸುಸ್ಥಿತಿಗೆ ತರಲು ಸೂಚನೆ



ಮೈಸೂರು, ಜು.25(ಎಸ್‌ಬಿಡಿ)– ಮೈಸೂರಿನ ಗೋಕುಲಂನಲ್ಲಿ ಕುಡಿಯುವ ನೀರಿನ ಪೈಪ್‌ಲೈನ್ ಕಾಮಗಾರಿ ವಿಳಂಬದಿಂದ ಸಾರ್ವಜನಿಕರಿಗೆ ತೊಂದರೆಯಾಗಿರುವ ಹಿನ್ನೆಲೆಯಲ್ಲಿ ನಗರ ಪಾಲಿಕೆಯ ನಗರ ಯೋಜನೆ ಮತ್ತು ಸುಧಾರಣೆ(ವರ್ಕ್ಸ್) ಕಮಿಟಿ ಮಂಗಳವಾರ ಪರಿಶೀಲನೆ ನಡೆಸಿತು.

ವರ್ಕ್ಸ್ ಕಮಿಟಿ ಅಧ್ಯಕ್ಷೆ ಹೆಚ್.ಎಂ.ಶಾಂತಕುಮಾರಿ, ಸದಸ್ಯರಾದ ಕೆ.ವಿ.ಶ್ರೀಧರ್, ಎಸ್.ಸಾತ್ವಿಕ್, ವಿ.ಲೋಕೇಶ್ ಪಿಯಾ, ಪಲ್ಲವಿ ಬೇಗಂ ಹಾಗೂ ನಗರಪಾಲಿಕೆ ಅಧಿಕಾರಿಗಳು ಗೋಕುಲಂ ಮೊದಲ ಹಂತದ ಮೊದಲನೇ ಮುಖ್ಯರಸ್ತೆಯಲ್ಲಿ ಪ್ರಗತಿಯಲ್ಲಿರುವ ಪೈಪ್‌ಲೈನ್ ಕಾಮಗಾರಿ ಹಾಗೂ ಗುಂಡಿಮಯ ಕಾಂಟೂರ್ ರಸ್ತೆಗೆ ಭೇಟಿ ನೀಡಿ, ಪರಿಶೀಲನೆ ನಡೆಸಿದರು. ಅಲ್ಲಿನ ಅಧ್ವಾನ ಕಂಡು ಸಿಟ್ಟಿಗೆದ್ದ ಕಮಿಟಿ ಅಧ್ಯಕ್ಷರು ಹಾಗೂ ಸದಸ್ಯರು, ನಿರ್ಲಕ್ಷ್ಯ ವಹಿಸಿರುವ ಪಾಲಿಕೆ ಅಧಿಕಾರಿಗಳನ್ನು ತರಾಟೆಗೆ ತೆಗೆದುಕೊಂಡರಲ್ಲದೆ, ತ್ವರಿತಗತಿಯಲ್ಲಿ ಕಾಮಗಾರಿ ಪೂರ್ಣಗೊಳಿಸಿ, ಸುಗಮ ಸಂಚಾರಕ್ಕೆ ಅನುವು ಮಾಡಿಕೊಡಬೇಕೆಂದು ತಾಕೀತು ಮಾಡಿದರು.

ಉಂಡುವಾಡಿಯಿಂದ ಮೈಸೂರು ನಗರಕ್ಕೆ ಕುಡಿಯುವ ನೀರು ಸರಬರಾಜಿಗೆ ಪೈಪ್‌ಲೈನ್ ಅಳವಡಿಸಲಾಗುತ್ತಿದ್ದು, ತಿಂಗಳುಗಳಿಂದ ಕಾಮಗಾರಿ ಆಮೆಗತಿಯಲ್ಲಿ ಸಾಗುತ್ತಿದೆ. ಸದ್ಯ ಗೋಕುಲಂ ಮುಖ್ಯರಸ್ತೆ ಜಂಕ್ಷನ್‌ನಿಂದ ಗಣಪತಿ ದೇವಾಲಯದವರೆಗೆ ಕಾಮಗಾರಿ ಪ್ರಗತಿಯಲ್ಲಿದೆ. ಮಣ್ಣನ್ನು ತೆರವು ಮಾಡದಿರುವುದರಿಂದ ವಾಹನ ಸಂಚಾರಕ್ಕೂ ಅವಕಾಶವಿಲ್ಲ. ಇದೀಗ ಮಳೆಯಾಗುತ್ತಿರುವುದರಿಂದ ಇಡೀ ರಸ್ತೆ ಕೆಸರು ಗದ್ದೆಯಂತಾಗಿ, ಪಾದಚಾರಿಗಳಿಗೂ ಸಂಕಷ್ಟ ಎದುರಾಗಿದೆ. ಕಾಮಗಾರಿ ವಿಳಂಬದ ಬಗ್ಗೆ ಸಾರ್ವಜನಿಕರು ದೂರಿದ್ದರಿಂದ ವರ್ಕ್ಸ್ ಕಮಿಟಿ, ಸ್ಥಳ ಪರಿಶೀಲನೆ ನಡೆಸಿತು.

ಡಾಂಬರೀಕರಣಕ್ಕೆ ಸೂಚನೆ: ದುರ್ಗಮ ಹಾದಿಯಾಗಿರುವ ಕಾಂಟೂರ್ ರಸ್ತೆಗೆ ಭೇಟಿ ನೀಡಿದ ವರ್ಕ್ಸ್ ಕಮಿಟಿ, ಕೂಡಲೇ ದುರಸ್ತಿ ಕಾಮಗಾರಿ ಕೈಗೊಳ್ಳುವಂತೆ ಸೂಚಿಸಿತು. ಪೈಪ್‌ಲೈನ್ ಕಾಮಗಾರಿ ನಡೆದು ಆರೇಳು ತಿಂಗಳುಗಳೇ ಕಳೆದಿವೆ. ರಸ್ತೆ ಬಗ್ಗೆ ತಲೆ ಕೆಡಿಸಿಕೊಳ್ಳದೆ ಬೇಕಾಬಿಟ್ಟಿ ಮಣ್ಣು ಮುಚ್ಚಿ ಪೈಪ್‌ಲೈನ್ ಕಾಮಗಾರಿಯನ್ನಷ್ಟೇ ಮುಂದುವರೆಸಿದ್ದಾರೆ. ಪರಿಣಾಮ ಕಾಂಟೂರ್ ರಸ್ತೆ ಗುಂಡಿಮಯವಾಗಿದ್ದು, ವಾಹನ ಸಂಚಾರಕ್ಕೆ ಹರಸಾಹಸಪಡುವಂತಾಗಿದೆ. ಇಲ್ಲಿನ ದುಸ್ಥಿತಿಯನ್ನು ಗಮನಿಸಿದ ವರ್ಕ್ಸ್ ಕಮಿಟಿಯವರು, ಕಾಮಗಾರಿ ಪೂರ್ಣಗೊಂಡ ಬೆನ್ನಲ್ಲೇ ರಸ್ತೆಯನ್ನು ಸಮತಟ್ಟುಗೊಳಿಸಿ, ಗುಣಮಟ್ಟದ ಡಾಂಬರೀಕರಣ ಮಾಡಬೇಕು. ಇದೂ ಕೂಡ ಕಾಮಗಾರಿ ಭಾಗವೇ ಆಗಿರುತ್ತದೆ. ಆದರೆ ಹಲವು ತಿಂಗಳಿಂದ ರಸ್ತೆಯನ್ನು ಸರಿಪಡಿಸದೆ ಸಾರ್ವಜನಿಕರಿಗೆ ತೊಂದರೆ ಕೊಡುತ್ತಿರುವುದು ಸರಿಯಲ್ಲ. ಕೂಡಲೇ ಸೂಕ್ತ ಕ್ರಮ ಕೈಗೊಂಡು, ಸುಗಮ ಸಂಚಾರಕ್ಕೆ ಅನುವು ಮಾಡಿಕೊಡಬೇಕು ಎಂದು ಸೂಚನೆ ನೀಡಿದರು.

ವ್ಯಾಪಾರಕ್ಕೂ ಹೊಡೆತ: ಕಾಮಗಾರಿ ವಿಳಂಬದಿಂದಾಗಿ ವ್ಯಾಪಾರಿಗಳೂ ನಷ್ಟವಾಗುತ್ತಿದೆ. ಈ ರಸ್ತೆಯಲ್ಲಿ ಮೆಡಿಕಲ್ ಶಾಪ್‌ಗಳು, ಹೋಟೆಲ್, ತಿಂಡಿ–ತಿನಿಸು, ದಿನಸಿ ಅಂಗಡಿ ಸೇರಿದಂತೆ ಅನೇಕ ಮಳಿಗೆಗಳಿವೆ. ಆದರೆ ಪೈಪ್‌ಲೈನ್ ಕಾಮಗಾರಿಗಾಗಿ ಸಂಚಾರ ಬಂದ್ ಮಾಡಿದ್ದರಿಂದ ವ್ಯಾಪಾರಕ್ಕೆ ಹೊಡೆತ ಬಿದ್ದಿದೆ. ಕೆಲ ದಿನಗಳಲ್ಲಿ ಕಾಮಗಾರಿ ಮುಗಿಯಬಹುದೆಂಬ ನಿರೀಕ್ಷೆ ಸುಳ್ಳಾಗಿದ್ದು, ಆಮೆಗತಿಯಲ್ಲಿ ಕೆಲಸ ಮಾಡುತ್ತಿದ್ದಾರೆ. ಮಳೆಯಿಂದ ರಸ್ತೆಯೆಲ್ಲಾ ಕೆಸರಾಗಿರುವುದರಿಂದ ಪಾದಚಾರಿಗಳೂ ಓಡಾಡಲು ಆಗುತ್ತಿಲ್ಲ. ಹೀಗಾಗಿ ವ್ಯಾಪಾರವಿಲ್ಲದೆ ಕಂಗಾಲಾಗಿದ್ದೇವೆ ಎಂದು ವ್ಯಾಪಾರಿಗಳು ಅಲವತ್ತುಕೊಂಡಿದ್ದಾರೆ.

ಇದು ಗಂಭೀರ ಸಮಸ್ಯೆ

ಈ ಬಗ್ಗೆ ಕಮಿಟಿ ಸದಸ್ಯ ಕೆ.ವಿ.ಶ್ರೀಧರ್ ಪ್ರತಿಕ್ರಿಯಿಸಿ, ಅಸಮರ್ಪಕ ಹಾಗೂ ಮಂದಗತಿ ಕಾಮಗಾರಿ ಗಂಭೀರ ಸಮಸ್ಯೆಯಾಗಿದೆ. ಭಾಗಾರ್ಧ ರಸ್ತೆಯಲ್ಲಿ ವಾಹನ ಸಂಚಾರಕ್ಕೆ ಅವಕಾಶ ಮಾಡಿಕೊಟ್ಟು ಕಾಮಗಾರಿ ನಡೆಸಬೇಕು. ಮಣ್ಣನ್ನು ಬೇರೆ ಕಡೆಗೆ ಸಾಗಿಸಿ, ಪೈಪ್ ಅಳವಡಿಸಿದ ನಂತರ ಮಣ್ಣು ತಂದು ಮುಚ್ಚಬೇಕು. ಬಳಿಕ ಸಮತಟ್ಟು ಮಾಡಿ, ಕಾಲಮಿತಿಯೊಳಗೆ ಡಾಂಬರೀಕರಣ ಮಾಡಬೇಕು. ಆದರೆ ಸಾಗಾಟದ ಖರ್ಚು ಉಳಿಸಲು ಟ್ರಂಚ್ ತೆಗೆದ ಮಣ್ಣನ್ನು ರಸ್ತೆಗೆ ಸುರಿದಿದ್ದಾರೆ. ಹಾಗಾಗಿ ಇಡೀ ರಸ್ತೆ ಸಂಚಾರ ಬಂದ್ ಆಗಿದೆ. ಕಾಂಟೂರ್ ರಸ್ತೆಯಲ್ಲಿ ಕಾಮಗಾರಿ ಮುಗಿದು, ಆರೇಳು ತಿಂಗಳಾಗಿದ್ದರೂ ಸಮತಟ್ಟು ಮಾಡಿ, ಡಾಂಬರೀಕರಣ ಮಾಡಿಲ್ಲ. ಕಾಮಗಾರಿ ಬಳಿಕ ರಸ್ತೆ ಸರಿಪಡಿಸಲೆಂದೇ ನಾಲ್ಕೂವರೆ ಕೋಟಿ ರೂ. ಹಣ ಮೀಸಲಿಡಲಾಗಿದೆಯಾದರೂ ಅನಗತ್ಯವಾಗಿ ವಿಳಂಬ ಮಾಡಲಾಗುತ್ತಿದೆ. ಹಾಗಾಗಿ ಪರಿಶೀಲನೆ ನಡೆಸಿ, ಸೂಕ್ತ ಕ್ರಮ ಕೈಗೊಳ್ಳಲು ಕಟ್ಟುನಿಟ್ಟಾಗಿ ಸೂಚನೆ ನೀಡಲಾಗಿದೆ ಎಂದರು.

ರಾಜ್ಯ ಕಾಂಗ್ರೆಸ್ ಸರ್ಕಾರಕ್ಕೆ ಬಾಲಗ್ರಹ ಪೀಡೆ ಶುರುವಾಗಿದೆ

- ಮಾಜಿ ಸಿಎಂ ಬಸವರಾಜ ಬೊಮ್ಮಾಯಿ ವ್ಯಂಗ್ಯ
- ಮೊದಲ ದಿನದಿಂದಲೂ ಎಲ್ಲವೂ ಸರಿಯಿಲ್ಲ
- ಗ್ಯಾರಂಟಿಗಳಿಗೆ ಹಣ ನೀಡಿ ಅಭಿವೃದ್ಧಿಗೆ ಹಣವಿಲ್ಲ



ಬೆಂಗಳೂರು, ಜು.25(ಕೆಎಂಶಿ)– ಕಾಂಗ್ರೆಸ್‌ನಲ್ಲಿ ಎಲ್ಲವೂ ಸರಿ ಇಲ್ಲ ಎನ್ನುವುದು ಆರಂಭದಿಂದಲೂ ಗೋಚರಿಸುತ್ತಿದ್ದು, ಬಿ.ಕೆ. ಹರಿಪ್ರಸಾದ್ ಹೇಳಿಕೆಯಿಂದ ಸರ್ಕಾರಕ್ಕೆ ಆಗಿರುವ ಡ್ಯಾಮೇಜ್ ಕಂಟ್ರೋಲ್ ಮಾಡಲು ಉಪಮುಖ್ಯಮಂತ್ರಿ ಡಿ.ಕೆ.ಶಿವಕುಮಾರ್ ಸಿಂಗಾಪುರ ಕಾರ್ಯತಂತ್ರದ ಕಥೆ ಹೇಳಿದ್ದಾರೆ. ಈ ಸರ್ಕಾರಕ್ಕೆ ಬಾಲಗ್ರಹ ಪೀಡೆ ಶುರುವಾಗಿದೆ ಎಂದು ಮಾಜಿ ಮುಖ್ಯಮಂತ್ರಿ ಬಸವರಾಜ ಬೊಮ್ಮಾಯಿ ಹೇಳಿದ್ದಾರೆ.

ಸುದ್ದಿಗಾರರೊಂದಿಗೆ ಮಾತನಾಡಿದ ಅವರು, ಕಾಂಗ್ರೆಸ್ ಸರ್ಕಾರ ಮೊದಲ ದಿನದಿಂದ ಎಲ್ಲವೂ ಸರಿ ಇಲ್ಲ ಎನ್ನುವುದು ಸ್ಪಷ್ಟವಾಗುತ್ತಿದೆ. ಸ್ಪಷ್ಟ ಬಹುಮತ ಇದ್ದರೂ ಮುಖ್ಯಮಂತ್ರಿ ಆಯ್ಕೆ ಮಾಡಿರುವ ವಿಧಾನ, ಸೀಕ್ರೆಟ್ ಬ್ಯಾಲೆಟ್ ಬಳಕೆ ಮಾಡಿರುವುದು, ಬಹುಮತ ಇದ್ದರೂ ಇಷ್ಟು ಸರ್ಕಸ್ ಮಾಡಿದ್ದು ಎಲ್ಲವೂ ಸರಿ ಇಲ್ಲ ಅಂತ ಅರ್ಥವಾಗುತ್ತದೆ ಎಂದರು.

ಸಿದ್ದರಾಮಯ್ಯ ಗ್ಯಾರಂಟಿಗಳಿಗೆ ಹಣ ನೀಡುವ ಸಲುವಾಗಿ ಅಭಿವೃದ್ಧಿಗೆ ಅನುದಾನ ಇಲ್ಲ ಅಂತ ಹೇಳಿದ್ದಾರೆ. ವರ್ಗಾವಣೆಯಲ್ಲಿ ಭ್ರಷ್ಟಾಚಾರ ನಡೆಯುತ್ತಿರುವುದು ಸ್ಪಷ್ಟವಾಗಿದೆ. ಶಾಸಕರು ಬಹಿರಂಗವಾಗಿಯೇ ಹೇಳಿದ್ದಾರೆ. ಸಚಿವರುಗಳ ವಿರುದ್ಧ ಅಸಮಾಧಾನ ಹೊರ ಹಾಕಿದ್ದಾರೆ. ಆದರೆ, ಸಿದ್ದರಾಮಯ್ಯ ಅರ್ಧ ಸತ್ಯ ಹೇಳಿದ್ದಾರೆ ಎಂದರು.

ಉಪಮುಖ್ಯಮಂತ್ರಿ ಡಿ.ಕೆ.ಶಿವಕುಮಾರ್, ಅವರ ಪಕ್ಷದ ನಾಯಕ ಬಿ.ಕೆ.ಹರಿಪ್ರಸಾದ್ ನೀಡಿರುವ ಹೇಳಿಕೆಯಿಂದ ಆಗಿರುವ ಡ್ಯಾಮೇಜ್ ಕಂಟ್ರೋಲ್ ಮಾಡಲು ಸಿಂಗಾಪುರ ತಂತ್ರದ ಬಗ್ಗೆ ಹೇಳಿದ್ದಾರೆ.

ಸ್ವತಃ ಡಿ.ಕೆ.ಶಿವಕುಮಾರ್ ಅವರು ಮುಂದೆ ತಾವು ಮಾಡುವ ಕಾರ್ಯತಂತ್ರದ ಬಗ್ಗೆ ಈಗ ಮಾತನಾಡುತ್ತಿದ್ದಾರೆ. ಇದು ಅವರಲ್ಲಿಯೇ ಸಮಾಧಾನ ಇಲ್ಲ ಎನ್ನುವುದನ್ನು ತೋರಿಸಿದ್ದಾರೆ. ಬಿಜೆಪಿಯ ಹೈಕಮಾಂಡ್ ಈ ಸರ್ಕಾರ ಅಸ್ಥಿರಗೊಳಿಸುವ ಬಗ್ಗೆ ಆಲೋಚಿಸಿಲ್ಲ ಎಂದರು.

ಡಿ.ಕೆ.ಶಿವಕುಮಾರ್ ಹಾಗೂ ಸಿದ್ದರಾಮಯ್ಯ ನಡುವೆ ಭಿನ್ನಾಭಿಪ್ರಾಯ ಇದೆ ಎನ್ನುವುದು ಸತ್ಯ. ಡಿ.ಕೆ. ಶಿವಕುಮಾರ್ ಸರ್ಕಾರದ ಅಸ್ಥಿರತೆಯ ಬಗ್ಗೆ 2 ಬಾರಿ ಬಹಿರಂಗವಾಗಿ ಹೇಳಿಕೆ ನೀಡಿದರೂ ಮುಖ್ಯಮಂತ್ರಿಗೆ ಮಾಹಿತಿ ಇಲ್ಲ ಎಂದರೆ ಇಬ್ಬರ ನಡುವೆ ಹೊಂದಾಣಿಕೆ ಇಲ್ಲ ಅಂತ ಅರ್ಥ ಎಂದು ಅಭಿಪ್ರಾಯಪಟ್ಟರು.

ರಾಜ್ಯದಲ್ಲಿ ಕಾನೂನು ಸುವ್ಯವಸ್ಥೆ ಸಂಪೂರ್ಣ ಹಾಳಾಗಿದೆ. ಜೈನ ಮುನಿ ಹತ್ಯೆಯಿಂದ ಹಿಡಿದು ನಿತ್ಯ ಕೊಲೆ ನಡೆಯುತ್ತಿವೆ. ಹೆಣ್ಣು ಮಕ್ಕಳ ಮೇಲೆ ಅತ್ಯಾಚಾರ ನಡೆಯುತ್ತಿದೆ. ನ್ಯಾಯಾಧೀಶರಿಗೆ ಅಂತಾರಾಷ್ಟ್ರೀಯ ಮಟ್ಟದ ಕೊಲೆ ಬೆದರಿಕೆ ಬರುತ್ತಿದೆ. ನ್ಯಾಯಾಧೀಶರಿಗೆ ರಕ್ಷಣೆ ಇಲ್ಲದಿದ್ದರೆ ಬೇರೆಯವರಿಗೆ ಹೇಗೆ ರಕ್ಷಣೆ ನೀಡುತ್ತಾರೆ ಎಂದು ಪ್ರಶ್ನಿಸಿದರು.

ಈ ಸರ್ಕಾರಕ್ಕೆ ಬಾಲಗ್ರಹ ಪೀಡೆ ಶುರುವಾಗಿದೆ. ಆಂತರಿಕ ಕಲಹ ಹೆಚ್ಚಾಗಿದೆ. ಈ ಸರ್ಕಾರ ಗ್ಯಾರಂಟಿಗಳ ಜಾರಿಗೆ ಎಸ್ಸಿಪಿ ಟಿಎಸ್ಪಿ ಹಣ ಬಳಕೆ ಮಾಡುತ್ತಿದೆ. ಸುಮಾರು 13 ಸಾವಿರ ಕೋಟಿ ರೂ. ಎಸ್ಸಿಪಿ ಟಿಎಸ್‌ಪಿ ಯೋಜನೆ ಹಣವನ್ನು ಗ್ಯಾರಂಟಿ ಯೋಜನೆಗಳಿಗೆ ವರ್ಗಾಯಿಸಿದ್ದಾರೆ. ಇದು ಸಾಮಾಜಿಕ ನ್ಯಾಯದ ವಿರುದ್ಧವಾಗಿದ್ದು, ಎಲ್ಲ ಸಮುದಾಯಗಳಿಗೂ ಅನ್ಯಾಯ ಮಾಡಿದಂತಾಗುತ್ತದೆ ಎಂದರು.

ಗ್ಯಾರಂಟಿಗಳು ಮಧ್ಯಮ ವರ್ಗಕ್ಕೆ ಅನುಕೂಲ



> “2023ನೇ ಸಾಲಿನ ಬಜೆಟ್‌ನಲ್ಲಿ ವಾಣಿಜ್ಯ ಬಳಕೆ ವಾಹನ ತೆರಿಗೆ ಹೆಚ್ಚಳ, ರೋಡ್ ಟ್ಯಾಕ್ಸ್ ಹೆಚ್ಚಳ, ನೋಂದಣಿ ಮತ್ತು ಮುದ್ರಾಂಕ ಶುಲ್ಕ ಹೆಚ್ಚಳ ಮತ್ತು ಅಬಕಾರಿ ತೆರಿಗೆ ಹೆಚ್ಚಳ ಮಾಡಿ ಐದು ಗ್ಯಾರಂಟಿಗಳ ಜಾರಿಗೆ ಅನುದಾನ ಒದಗಿಸಲು ರಾಜ್ಯ ಸರ್ಕಾರ ಮುಂದಾಗಿದೆ.
>
> –ರಂಗಸ್ವಾಮಿ ಮೂಕನಹಳ್ಳಿ

ಮೈಸೂರು, ಜು.25(ಎಸ್‌ಪಿಎನ್)– ಬೃಹತ್ ಜನಸಂಖ್ಯೆ ಹೊಂದಿರುವ ಭಾರತದ ಪ್ರತಿಯೊಬ್ಬ ಪ್ರಜೆಗೂ 'ಯೂನಿವರ್ಸಲ್ ಬೇಸಿಕ್ ಇನ್‌ಕಂ' (ಯುಬಿಐ) ಯೋಜನೆ ಅಗತ್ಯವಾಗಿದೆ. ಇದನ್ನು ಜಾರಿಗೆ ತಂದಿರುವ ರಾಜ್ಯ ಸರ್ಕಾರದ ನಿರ್ಧಾರ ಸ್ವಾಗತಾರ್ಹ ಎಂದು ಆರ್ಥಿಕ ಸಲಹೆಗಾರ ರಂಗಸ್ವಾಮಿ ಮೂಕನಹಳ್ಳಿ ತಿಳಿಸಿದರು.


ಮೈಸೂರು ಲಕ್ಷ್ಮೀಪುರಂನಲ್ಲಿ ಗೋಪಾಲಸ್ವಾಮಿ ಪದವಿ ಪೂರ್ವ ಕಾಲೇಜು ಆವರಣದಲ್ಲಿ 'ಸ್ವದೇಶಿ ಜಾಗರಣ ಮಂಚ್ ಕರ್ನಾಟಕ' ವತಿಯಿಂದ ಆಯೋಜಿಸಿದ್ದ ಆಯವ್ಯಯ 2023 ಮೇಲಿನ 'ಸ್ವಾವಲಂಬಿ ಭಾರತ ಅಭಿಯಾನ' ವಿಚಾರ ಸಂಕಿರಣದಲ್ಲಿ ಮಾತನಾಡಿದರು.

ಸಿದ್ದರಾಮಯ್ಯ ಮಂಡಿಸಿದ 2023ರ ಬಜೆಟ್ ಗಾತ್ರ 3,27 ಲಕ್ಷ ಕೋಟಿ. ಇದರಲ್ಲಿ 5 ಗ್ಯಾರಂಟಿಗಳಾದ ಗೃಹಲಕ್ಷ್ಮಿ, ಗೃಹಜ್ಯೋತಿ, ಅನ್ನಭಾಗ್ಯ, ಯುವನಿಧಿ, ಶಕ್ತಿ ಯೋಜನೆಗಳು ಸೇರಿವೆ. ಈ ಯೋಜನೆಗಳು ಅರ್ಹರಿಗೆ ತಲುಪಬೇಕು. ವಿದೇಶಗಳಲ್ಲಿ ಆರ್ಥಿಕವಾಗಿ ಪ್ರತಿಯೊಬ್ಬರಿಗೂ ಕನಿಷ್ಠ ಆದಾಯ ಇರಬೇಕು ಎಂಬ ಆರ್ಥಿಕ ನೀತಿ ಜಾರಿಗೆ ತಂದಿದೆ ಎಂದು ತಿಳಿಸಿದರು.

ಗ್ಯಾರಂಟಿಗಳನ್ನು ಜಾರಿಗೊಳಿಸಿದರೆ, ರಾಜ್ಯದ ಬೊಕ್ಕಸ ದಿವಾಳಿಯಾಗುತ್ತದೆ ಎಂಬ ಕೂಗು ಕೇಳಿ ಬರುತ್ತಿದ್ದರೂ ಮಧ್ಯಮ ವರ್ಗದ ಕುಟುಂಬಗಳ ಆರ್ಥಿಕ ಏರುಪೇರು ಆದಾಗ ಬಿಕ್ಕಟ್ಟು ಸರಿದೂಗಿಸಲು ಇವು ಅನುಕೂಲವಾಗುತ್ತದೆ ಎಂದರು.

ಸ್ವಿಗ್ಗಿ, ಝೋಮ್ಯಾಟೋದಲ್ಲಿ ಕೆಲಸ ಮಾಡುವ ಡೆಲಿವರಿ ಬಾಯ್ಸ್‌ಗಳಿಗೆ 4 ಲಕ್ಷ ರೂ.ವರೆಗೆ ಅಪಘಾತ ವಿಮೆ ಜಾರಿಗೆ ತಂದಿರುವುದು ಉತ್ತಮ ಯೋಜನೆ ಎಂದರು. ಆಹಾರ, ಶಿಕ್ಷಣ, ಆರೋಗ್ಯ, ಕಂದಾಯ, ಸಾರಿಗೆ ಸೇರಿದಂತೆ ಎಲ್ಲಾ ಇಲಾಖೆಗಳಿಗೂ ಅನುದಾನ ಮೀಸಲಿಡಲಾಗಿದೆ. ಶೌಚಾಲಯ ಸಂಕೀರ್ಣ ಸ್ಥಾಪನೆ ಮಾಡುವುದಾಗಿ ಘೋಷಣೆ ಮಾಡಿದ್ದಾರೆ ಎಂದರು.

ಹಿರಿಯ ವೈದ್ಯ ಡಾ.ಕೃಷ್ಣಮೂರ್ತಿ, ಪ್ರಾಂತ ವಿಚಾರ ಪ್ರಮುಖ್ ಸತ್ಯನಾರಾಯಣ್ ಉಪಸ್ಥಿತರಿದ್ದರು. ರಂಗಾಯಣ ಮಾಜಿ ನಿರ್ದೇಶಕ ಅಡ್ಡಂಡ ಸಿ.ಕಾರ್ಯಪ್ಪ ಸೇರಿದಂತೆ ಇತರೆ ಗಣ್ಯರು ಬಜೆಟ್ ಅನುಷ್ಠಾನ ವಿಧಾನ ಕುರಿತು ಸಂವಾದ ನಡೆಸಿದರು.



ಮೈಸೂರಿಗೆ ಆಗಮಿಸಿದ್ದ ಪ್ರವಾಸೋದ್ಯಮ ಸಚಿವ ಎಚ್.ಕೆ.ಪಾಟೀಲ್ ಅವರನ್ನು ಅಹಿಂದ ಸಂಘಟನೆ ಹಾಗೂ ಕೃಷ್ಣರಾಜ ಯುವ ಬಳಗದ ವತಿಯಿಂದ ಮೈಸೂರು ಅರಮನೆಯಲ್ಲಿ ಮೈಸೂರು ಪಾಕು, ವೀಳ್ಯದೆಲೆ ಹಾಗೂ ಮೈಸೂರು ಪೇಟವನ್ನು ತೊಡಿಸಿ, ಸನ್ಮಾನಿಸಲಾಯಿತು. ಈ ವೇಳೆ ಮೈಸೂರು ಜಿಲ್ಲಾಧ್ಯಕ್ಷ ವಿಜಯ್‌ಕುಮಾರ್, ಕೆಪಿಸಿಸಿ ಸದಸ್ಯ ನಜರ್‌ಬಾದ್ ನಟರಾಜ್, ಕೆಆರ್ ಬ್ಯಾಂಕ್ ಉಪಾಧ್ಯಕ್ಷ ಬಸವರಾಜ ಬಸಪ್ಪ, ಕಾಂಗ್ರೆಸ್ ಮುಖಂಡರಾದ ವಸಂತ್ ಕುಮಾರ್, ವರುಣ ಮಹದೇವ್, ಲೋಕೇಶ್, ಕಂಸಾಳೆ ರವಿ, ಸಣ್ಣಸ್ವಾಮಿ ಇನ್ನಿತರರು ಉಪಸ್ಥಿತರಿದ್ದರು.

ಜು.28ಕ್ಕೆ 'ಸ್ಮೃತಿ' ಸಾಂಸ್ಕೃತಿಕ ಸಂಕಥನ ಪುಸ್ತಕ ಬಿಡುಗಡೆ

ಮೈಸೂರು, ಜು.25– ಮೈಸೂರಿನ ಸಂವಹನ ಪ್ರಕಾಶನ ಪ್ರಕಟಿಸಿರುವ ಸಾಹಿತಿ ವಿಕ್ರಂ ಚದುರಂಗ ಅವರ 'ಸ್ಮೃತಿ' ಸಾಂಸ್ಕೃತಿಕ ಸಂಕಥನ ಪುಸ್ತಕ ಬಿಡುಗಡೆ ಸಮಾರಂಭ, ಕುವೆಂಪುನಗರ ವೀಣೆ ಶೇಷಣ್ಣ ಭವನದ ಗಾನಭಾರತಿ ಸಭಾಂಗಣದಲ್ಲಿ ಜುಲೈ 28ರಂದು ಬೆಳಗ್ಗೆ 11ಕ್ಕೆ ನಡೆಯಲಿದೆ ಎಂದು ಪ್ರಕಟಣೆ ತಿಳಿಸಿದೆ.

ಸುತ್ತೂರು ಶ್ರೀ ಶಿವರಾತ್ರಿ ದೇಶೀಕೇಂದ್ರ ಸ್ವಾಮೀಜಿ ಸಾನ್ನಿಧ್ಯದಲ್ಲಿ, ಹಿರಿಯ ವಿದ್ವಾಂಸ ಪ್ರೊ.ಹಂಪನಾ ಪುಸ್ತಕ ಬಿಡುಗಡೆ ಮಾಡಲಿದ್ದಾರೆ. ವಿದ್ವಾಂಸರಾದ ಪ್ರೊ.ಕಮಲಾ ಹಂಪನಾ ಮುಖ್ಯ ಅತಿಥಿಯಾಗಿ ಪಾಲ್ಗೊಳ್ಳಲಿದ್ದಾರೆ. ಮಾಜಿ ಮುಖ್ಯಮಂತ್ರಿ ದಿವಂಗತ ಡಿ.ದೇವರಾಜ ಅರಸು ಅವರ ಮೊಮ್ಮಗ ಸೂರಜ್ ಹೆಗ್ಡೆ ಪುಸ್ತಕದ ಪ್ರತಿ ಸ್ವೀಕರಿಸಲಿದ್ದಾರೆ.

ಸಂಸ್ಕೃತ ವಿಶ್ವವಿದ್ಯಾನಿಲಯದ ವಿಶ್ರಾಂತ ಕುಲಪತಿ ಡಾ.ಪದ್ಮಾಶೇಖರ್ ಪುಸ್ತಕ ಪರಿಚಯಿಸಲಿದ್ದಾರೆ.

ಲೇಖಕ ವಿಕ್ರಂ ಚದುರಂಗ ಅಭಿಪ್ರಾಯ ಹಂಚಿಕೊಳ್ಳಲಿದ್ದಾರೆ. ಸಂವಹನ ಪ್ರಕಾಶನದ ಡಿ.ಎನ್.ಲೋಕಪ್ಪ ಮತ್ತಿತರ ಗಣ್ಯರು ಪಾಲ್ಗೊಳ್ಳಲಿದ್ದಾರೆ.

ಮಾವು ಬೆಳೆ ವಿಮೆಗೆ ಅರ್ಜಿ ಆಹ್ವಾನ



ಮೈಸೂರು, ಜು.25– 2023–24ನೇ ಸಾಲಿನ ಮುಂಗಾರು ಹಂಗಾಮಿನಲ್ಲಿ ಮರುವಿನ್ಯಾಸಗೊಳಿಸಲಾದ ಹವಾಮಾನ ಆಧಾರಿತ ಬೆಳೆ ವಿಮೆ ಯೋಜನೆ ಅನುಷ್ಠಾನಗೊಳಿಸಲು ಮೈಸೂರು ಜಿಲ್ಲೆಗೆ ಅನ್ವಯವಾಗುವಂತೆ ಮೈಸೂರು, ಹೆಚ್.ಡಿ.ಕೋಟೆ, ಹುಣಸೂರು, ಕೆ ಆರ್ ನಗರ, ನಂಜನಗೂಡು, ಪಿರಿಯಾಪಟ್ಟಣ, ಟಿ ನರಸೀಪುರ ತಾಲೂಕುಗಳಲ್ಲಿನ ಒಟ್ಟು 136 ಗ್ರಾಮ ಪಂಚಾಯಿತಿಗಳಲ್ಲಿ ಮಾವು ಬೆಳೆಗೆ 80 ಸಾವಿರದಂತೆ ಬೆಳೆ ವಿಮಾ ಯೋಜನೆಗೆ ಅರ್ಜಿ ಆಹ್ವಾನಿಸಲಾಗಿದೆ.

ರೈತರು ಹೆಕ್ಟೇರ್‌ಗೆ ಶೇ.5ರಂತೆ 4 ಸಾವಿರ ವಿಮಾ ಕಂತನ್ನು ಪಾವತಿಸಬೇಕಾಗಿದ್ದು, ಪಾವತಿಗೆ ಜು.31 ಕೊನೆಯ ದಿನ. ವಿಮೆ ಪಾವತಿಸಲು ಹತ್ತಿರದ ಬ್ಯಾಂಕ್ ಶಾಖೆಗಳನ್ನು ಸಂಪರ್ಕಿಸಿ ಅರ್ಜಿಯೊಂದಿಗೆ ಪಹಣಿ ಬ್ಯಾಂಕ್ ಪಾಸ್‌ಬುಕ್, ನಕಲು ಸ್ವಯಂಘೋಷಿತ ಬೆಳೆ ವಿವರಗಳನ್ನು ಸಲ್ಲಿಸಬೇಕು. ರೈತರು ಬೆಳೆವಾರು ವಿಮೆಗಳನ್ನು ಆನ್‌ಲೈನ್ www.samrakshane.nic.in ವೆಬ್‌ಸೈಟ್‌ನಲ್ಲಿ ನೊಂದಾಯಿಸಿಕೊಳ್ಳಬಹುದು.

ಹೆಚ್ಚಿನ ಮಾಹಿತಿಗಾಗಿ ಮೈಸೂರು ಹಿರಿಯ ಸಹಾಯಕ ತೋಟಗಾರಿಕಾ ನಿರ್ದೇಶಕರು (ಜಿ.ಪಂ) ದೂ.ಸಂ: 0821–2430450, ಎಚ್.ಡಿ.ಕೋಟೆ–08228–255261, ಹುಣಸೂರು–08222–252447, ಕೆ.ಆರ್.ನಗರ–08223–262791, ನಂಜನಗೂಡು–08221–226201, ಪಿರಿಯಾಪಟ್ಟಣ–008223–273535 ಮತ್ತು ಟಿ.ನರಸೀಪುರ–08227–260086 ಸಂಪರ್ಕಿಸಬಹುದು ಎಂದು ಜಿಲ್ಲಾ ಪಂಚಾಯತ್ ತೋಟಗಾರಿಕೆ ಉಪ ನಿರ್ದೇಶಕರು ಪ್ರಕಟಣೆಯಲ್ಲಿ ತಿಳಿಸಿದ್ದಾರೆ.

ಸಹಕಾರ ಸಂಘಗಳ ತಿದ್ದುಪಡಿ ಮಸೂದೆ ಅಂಗೀಕಾರ

ನವದೆಹಲಿ: ಸಹಕಾರ ಸಂಘಗಳ ನಿರ್ವಹಣೆಯಲ್ಲಿ ಪಾರದರ್ಶಕತೆ ತರುವ ಮೂಲಕ ಅವುಗಳನ್ನು ಬಲಪಡಿಸುವ ಉದ್ದೇಶ ಹೊಂದಿರುವ ಬಹುರಾಜ್ಯ ಸಹಕಾರ ಸಂಘಗಳ (ತಿದ್ದುಪಡಿ) ಮಸೂದೆಯು ಲೋಕಸಭೆಯಲ್ಲಿ ಮಂಗಳವಾರ ಅಂಗೀಕಾರವಾಯಿತು.

ಸಹಕಾರ ಸಂಘಗಳಿಗೆ ಕ್ರಮಬದ್ಧವಾಗಿ ಚುನಾವಣೆ ನಡೆಸುವ ಪ್ರಸ್ತಾಪವನ್ನೂ ಈ ಕಾಯ್ದೆ ಹೊಂದಿದೆ. ಸದನದಲ್ಲಿ ಮಸೂದೆ ಮಂಡಿಸಿದ ಕೇಂದ್ರ ಸಹಕಾರ ಸಚಿವ ಅಮಿತ್ ಶಾ, ಈ ಮಸೂದೆಯಲ್ಲಿರುವ ಅಂಶಗಳು ಸಹಕಾರ ವಲಯದಲ್ಲಿ ಹೊಸ ಯುಗಕ್ಕೆ ನಾಂದಿ ಹಾಡಲಿವೆ. ಈ ಅವಕಾಶಗಳನ್ನು ಹಿಂದಿನ ಸರ್ಕಾರಗಳು ನಿರ್ಲಕ್ಷಿಸಿದ್ದವು ಎಂದರು. ಮಸೂದೆ ಅಂಗೀಕಾರಕ್ಕೂ ಮೊದಲು ನಡೆದ ಚರ್ಚೆಯಲ್ಲಿ ಕೇವಲ ಮೂವರು ಸದಸ್ಯರು ಪಾಲ್ಗೊಂಡರು. ಗದ್ದಲದ ನಡುವೆಯೇ ಮಸೂದೆಯನ್ನು ಧ್ವನಿ ಮತದ ಮೂಲಕ ಅಂಗೀಕರಿಸಲಾಯಿತು. ಬಳಿಕ ಸಭಾಧ್ಯಕ್ಷ ಓಂ ಬಿರ್ಲಾ ಸದನವನ್ನು ಬುಧವಾರಕ್ಕೆ ಮುಂದೂಡಿದರು.



ವಿಶ್ವ ಪರಿಸರ ದಿನಾಚರಣೆ ಅಂಗವಾಗಿ ಹೆಚ್.ವಿ.ರಾಜೀವ್ ಸ್ನೇಹ ಬಳಗದಿಂದ ಕುವೆಂಪುನಗರದ ಸುಮಸೋಪಾನ ಉದ್ಯಾನವನದಲ್ಲಿ ಸಾರ್ವಜನಿಕರಿಗೆ ಔಷಧಿ ಗಿಡಗಳನ್ನು ವಿತರಿಸಲಾಯಿತು. ಈ ವೇಳೆ ಕುವೆಂಪುನಗರ ಇನ್ಸ್‌ಪೆಕ್ಟರ್ ಅರುಣ್, ಉದ್ಯಮಿ ಶ್ರೀಕಾಂತರಾಜ್ ಅರಸ್, ಕೋಟಿ ವೃಕ್ಷ ಶ್ರೀಕಾಂತ್, ವಾಸುದೇವ ಭಟ್, ಭಾರತಿ, ಈರಣ್ಣ, ಬಳಗದ ಸದಸ್ಯರಾದ ನಾಗೇಶ್, ಆಟೋ ಕುಮಾರ್, ಕುಮಾರಸ್ವಾಮಿ, ಅನಂತ್‌ನಾಗ್, ಪುರುಷೋತ್ತಮ್ ಭಟ್, ಶಂಕರ್ ಮತ್ತಿತರರು ಉಪಸ್ಥಿತರಿದ್ದರು.

ಅಪರಿಚಿತ ವ್ಯಕ್ತಿ ಶವ ಪತ್ತೆ

ಮೈಸೂರು,ಜು.25–ಜು.22ರಂದು ಸರಗೂರು ತಾಲೂಕಿನ ಕೆ.ಬೆಳತ್ತೂರಿನ ಜಪದಕಟ್ಟೆ ಬಳಿ ಕಬಿನಿ ನದಿ ದಡದಲ್ಲಿ ಸುಮಾರು 40 ವರ್ಷದ ಅಪರಿಚಿತ ಗಂಡಸಿನ ಶವ ಪತ್ತೆಯಾಗಿದ್ದು, ಸರಗೂರು ಪೊಲೀಸ್ ಠಾಣೆಯಲ್ಲಿ ಪ್ರಕರಣ ದಾಖಲಾಗಿದೆ. ಮೃತನ ಚಹರೆ: ಸುಮಾರು 5.5 ಅಡಿ ಎತ್ತರ, ಸಾಧಾರಣ ಶರೀರ ಹೊಂದಿದ್ದು, ಕಪ್ಪು ಬಣ್ಣದ ಪ್ಯಾಂಟ್ ಮತ್ತು ಕಾಫಿ ಬಣ್ಣದ ತುಂಬು ತೋಳಿನ ಟೀ ಶರ್ಟ್ ಧರಿಸಿರುತ್ತಾರೆ. ಮೃತನ ವಾರಸುದಾರರ ಬಗ್ಗೆ ಮಾಹಿತಿ ದೊರೆತಲ್ಲಿ ಸರಗೂರು ಪೊಲೀಸ್ ಠಾಣೆ ದೂ.ಸಂ.02882265542, 9480805064 ಅನ್ನು ಸಂಪರ್ಕಿಸಬಹುದು.

ಕಾಲೇಜು ಕ್ಯಾಂಪಸ್‌ಗಳಲ್ಲಿಯೂ ಹೆಲ್ಮೆಟ್ ಕಡ್ಡಾಯ

● ಮೈಸೂರು ಡಿಸಿ ಡಾ.ರಾಜೇಂದ್ರ ಕಟ್ಟುನಿಟ್ಟಿನ ಆದೇಶ ● ಶೈಕ್ಷಣಿಕ ಸಂಸ್ಥೆಗಳ ಆಡಳಿತ ಈ ಸಂಬಂಧ ಮುತುವರ್ಜಿ ವಹಿಸಲು ಸಲಹೆ



ಮೈಸೂರು, ಜು.25–ಮೈಸೂರಿನಲ್ಲಿರುವ ಪ್ರತಿಯೊಂದು ಸರ್ಕಾರಿ ಹಾಗೂ ಖಾಸಗಿ ಕಾಲೇಜ್ ಕ್ಯಾಂಪಸ್‌ಗಳಲ್ಲಿಯೂ ದ್ವಿಚಕ್ರ ವಾಹನ ಬಳಸುವ ಪ್ರತಿಯೊಬ್ಬರು ಕಡ್ಡಾಯವಾಗಿ ಹೆಲ್ಮೆಟ್ ಧರಿಸಬೇಕು. ಹೆಲ್ಮೆಟ್ ಧರಿಸದೇ ಇದ್ದಲ್ಲಿ ಕಾಲೇಜಿನ ಆವರಣದೊಳಗೆ ಪ್ರವೇಶವನ್ನು ನಿರ್ಬಂಧಿಸಬೇಕು. ಕಾಲೇಜು ಆಡಳಿತ ವರ್ಗವು ಕಾನೂನುಬದ್ಧವಾಗಿ ಕ್ರಮ ಕೈಗೊಂಡು ಕಡ್ಡಾಯ ಹೆಲ್ಮೆಟ್ ನೀತಿಯನ್ನು ಅನುಸರಿಸುವಂತೆ ನಿಯಮಾವಳಿಗಳನ್ನು ರೂಪಿಸಿಕೊಳ್ಳಬೇಕು ಎಂದು ಜಿಲ್ಲಾಧಿಕಾರಿ ಡಾ. ಕೆ.ವಿ.ರಾಜೇಂದ್ರ ಸೂಚಿಸಿದರು.

ನಗರದ ಸೈನಿಕ ಕಲ್ಯಾಣ ಮತ್ತು ಪುನರ್ವಸತಿ ಇಲಾಖೆಯ ಕಚೇರಿಯಲ್ಲಿ ಹಮ್ಮಿಕೊಂಡಿದ್ದ ರಸ್ತೆ ಸುರಕ್ಷತಾ ಸಮಿತಿ ಸಭೆಯ ಅಧ್ಯಕ್ಷತೆಯನ್ನು ವಹಿಸಿ ಮಾತನಾಡಿದ ಅವರು, ಕಾಲೇಜುಗಳಲ್ಲಿ ಸಂಚಾರಿ ನಿಯಮಗಳನ್ನು ಅನುಸರಿಸದೆ ವಾಹನಗಳನ್ನು ಅಡ್ಡಾದಿಡ್ಡಿಯಾಗಿ ಚಲಾಯಿಸುತ್ತಿರುವುದು ಹೆಚ್ಚುತ್ತಿದೆ. ಕಾಲೇಜು ಕ್ಯಾಂಪಸ್‌ನಲ್ಲಿ ವಾಹನ ಚಲಿಸುವ ಪ್ರತಿಯೊಬ್ಬ ಸವಾರರು ಕೂಡ ಹೆಲ್ಮೆಟ್‌ಗಳನ್ನು ಕಡ್ಡಾಯವಾಗಿ ಧರಿಸುವಂತೆ ಕಾಲೇಜು ಆಡಳಿತ ಮಂಡಳಿ ಸೂಚನೆ ನೀಡಬೇಕು ಎಂದರು.

ಪ್ರತಿಯೊಬ್ಬ ವಾಹನ ಸವಾರರು ಕೂಡ ಎರಡು ಹೆಲ್ಮೆಟ್‌ಗಳನ್ನು ತಮ್ಮ ಜೊತೆ ಇರಿಸಿಕೊಳ್ಳುವಂತೆ ಸೂಚನೆಯನ್ನು ನೀಡಬೇಕು. ಇತ್ತೀಚಿಗೆ ಟಿ.ನರಸೀಪುರದಲ್ಲಿ ನಡೆದ ಅಪಘಾತದ ವಿಚಾರವಾಗಿ ಸಂಬಂಧಪಟ್ಟವರ ಮೇಲೆ ಕೇಸ್ ದಾಖಲಿಸಿ ಸರಿಯಾದ ಕ್ರಮ ಕೈಗೊಳ್ಳಬೇಕು. ರಸ್ತೆ ಅಪಘಾತಗಳ ಬಗ್ಗೆ ಸಂಪೂರ್ಣವಾದ ಮಾಹಿತಿಯನ್ನು ನೀಡಬೇಕೆಂದು ಹೆಚ್ಚುವರಿ ಪೊಲೀಸ್ ವರಿಷ್ಠಾಧಿಕಾರಿ ನಂದಿನಿ ಅವರಿಗೆ ತಿಳಿಸಿದರು.

ಟೂರ್ ಟ್ಯಾಕ್ಸಿ ಚಾಲಕರು, ಲಾರಿ ಚಾಲಕರು ಮತ್ತು ಲಾರಿ ಮಾಲೀಕರ ಸಂಘದ ಅಧ್ಯಕ್ಷರನ್ನು ಕರೆಸಿ ಸಭೆ ನಡೆಸಿ ರಾತ್ರಿ ವೇಳೆಯಲ್ಲಿ ಸಂಚರಿಸುವ ವಾಹನಗಳು ನಿಯಮಗಳನ್ನು ಪಾಲಿಸುವಂತೆ ಸೂಚಿಸಬೇಕು. ರಾತ್ರಿ ವೇಳೆಯಲ್ಲಿ ಚಲಿಸುವ ವಾಹನಗಳಲ್ಲಿ ತಲಾ ಇಬ್ಬರು ಡ್ರೈವರ್‌ಗಳನ್ನು ಒಳಗೊಂಡಂತೆ ಕಾರ್ಯನಿರ್ವಹಿಸಲು ಸೂಚನೆ ನೀಡಿದರು.

ಮಹಾನಗರ ಪಾಲಿಕೆಗೆ ಸಂಬಂಧಿಸಿದಂತೆ ಮಳೆಯಿಂದಾಗಿ ರಸ್ತೆಗಳಲ್ಲಿ ಹೆಚ್ಚಿನ ಅಪಘಾತಗಳು ಉಂಟಾಗುವುದರಿಂದ ರಸ್ತೆಗಳಲ್ಲಿನ ರಸ್ತೆ ಉಬ್ಬುಗಳ ನಿರ್ವಹಣೆಗಾಗಿ ಅಗತ್ಯ ಕ್ರಮ ಕೈಗೊಳ್ಳುವಂತೆ ಹಾಗೂ ರಸ್ತೆಗಳಲ್ಲಿ ಸುರಕ್ಷತಾ ನಿಯಮಾವಳಿಗಳನ್ನು ಅಳವಡಿಸಬೇಕು. ಕೆಲವು ಕಾಮಗಾರಿಗಳಿಗೆ ಸಂಬಂಧಿಸಿದಂತೆ ಮಹಾನಗರಪಾಲಿಕೆ ವತಿಯಿಂದ ಆದಷ್ಟು ಬೇಗ ಟೆಂಡರ್‌ಗಳನ್ನು ಕರೆದು ರಸ್ತೆ ಕಾಮಗಾರಿಗಳನ್ನು ಪೂರ್ಣಗೊಳಿಸಬೇಕೆಂದು ನಗರಪಾಲಿಕೆ ಅಧಿಕಾರಿಗಳಿಗೆ ತಿಳಿಸಿದರು.

ರಾಷ್ಟ್ರೀಯ ಹೆದ್ದಾರಿ ಪ್ರಾಧಿಕಾರಕ್ಕೆ ಸಂಬಂಧಿಸಿದಂತೆ ಕಾಮಗಾರಿಗಳು ನಡೆಯುತ್ತಿರುವ ರಸ್ತೆಗಳಲ್ಲಿ ಮಲ್ಟಿಪಲ್ ಸೈನ್ ಬೋರ್ಡ್‌ಗಳನ್ನು ಅಳವಡಿಸುವಂತೆ ಮತ್ತು ಕಾಮಗಾರಿ ಸಂದರ್ಭ ಆಗುವ ಅಪಾಯಕಾರಿ ಘಟನೆಗಳ ಕುರಿತು ಮುಂಜಾಗ್ರತಾ ಕ್ರಮ ಕೈಗೊಳ್ಳಬೇಕೆಂದರು. ಸಭೆಯಲ್ಲಿ ವಿವಿಧ ಇಲಾಖೆ ಅಧಿಕಾರಿಗಳು ಪಾಲ್ಗೊಂಡಿದ್ದರು.

ಆ.1ರಿಂದ 4ರವರೆಗೆ ಮೈಸೂರಲ್ಲಿ ಸೇನಾ ನೇಮಕಾತಿ ರ್‍ಯಾಲಿ

ಅಭ್ಯರ್ಥಿಗಳಿಗೆ ಅಗತ್ಯ ಸೌಕರ್ಯ ಕಲ್ಪಿಸುವಂತೆ ಡಿಸಿ ಸೂಚನೆ

ಮೈಸೂರು,ಜು.25(ಆರ್‌ಕೆ)– ಮೈಸೂರಿನ ಚಾಮುಂಡಿ ವಿಹಾರ ಕ್ರೀಡಾಂಗಣದಲ್ಲಿ ಆಗಸ್ಟ್ 1ರಿಂದ 4ರವರೆಗೆ ಸೇನಾ ನೇಮಕಾತಿ ರ್‍ಯಾಲಿ ನಡೆಯಲಿದೆ.

ಮೈಸೂರಿನ ಸೈನಿಕ ಕಲ್ಯಾಣ ಮತ್ತು ಪುನರ್ವಸತಿ ಇಲಾಖೆ ಕಚೇರಿಯಲ್ಲಿ ಮಾತನಾಡಿದ ಜಿಲ್ಲಾಧಿಕಾರಿ, ಸೈನಿಕ ಪರೀಕ್ಷೆಯಲ್ಲಿ ಉತ್ತೀರ್ಣರಾದ 1,723 ಅಭ್ಯರ್ಥಿಗಳಿಗಾಗಿ ನೇಮಕಾತಿ ರ್‍ಯಾಲಿ ಆಯೋಜಿಸಿದ್ದು, ಅವರು ವಾಸ್ತವ್ಯ ಹೂಡಲು ನಂಜರಾಜ ಬಹದ್ದೂರ್ ಛತ್ರದಲ್ಲಿ ಅಗತ್ಯ ಸೌಕರ್ಯ ಕಲ್ಪಿಸುವಂತೆ ಅಧೀನಾಧಿಕಾರಿಗಳಿಗೆ ಸೂಚನೆ ನೀಡಿದರು.

ಚಾಮುಂಡಿವಿಹಾರ ಕ್ರೀಡಾಂಗಣದಲ್ಲಿ ಬಿಎಸ್‌ಎನ್‌ಎಲ್ ಇಂಟರ್‌ನೆಟ್ ಸಂಪರ್ಕ, ಅಭ್ಯರ್ಥಿಗಳಿಗೆ ಊಟ–ತಿಂಡಿ, ಕುಡಿಯುವ ನೀರಿನ ವ್ಯವಸ್ಥೆ, ಪ್ರಥಮ ಚಿಕಿತ್ಸೆ ಸೌಲಭ್ಯ ಕಲ್ಪಿಸಬೇಕು, ಶೌಚಾಲಯ, ವಾಸ್ತವ್ಯ ಹೂಡುವ ಸ್ಥಳದಿಂದ ಚಾಮುಂಡಿವಿಹಾರಕ್ಕೆ ಅಭ್ಯರ್ಥಿಗಳನ್ನು ಕರೆದೊಯ್ಯಲು ವಾಹನ ಸೌಲಭ್ಯ, ಸ್ವಚ್ಛತೆ ನಿರ್ವಹಣೆ ಮಾಡುವಂತೆ ಮೈಸೂರು ಮಹಾ ನಗರಪಾಲಿಕೆ ಅಧಿಕಾರಿಗಳಿಗೆ ಜಿಲ್ಲಾಧಿಕಾರಿಗಳು ಸೂಚಿಸಿದರು.

ರ್‍ಯಾಲಿ ನಡೆಯುವ ಕ್ರೀಡಾಂಗಣದ ಬಳಿ ವೈದ್ಯಕೀಯ ಸೇವೆ, ಆಂಬುಲೆನ್ಸ್, ಅಗ್ನಿಶಾಮಕ ಸೇವೆ, ಪೊಲೀಸ್ ಬಂದೋಬಸ್ತ್ ಒದಗಿಸಿ ನೇಮಕಾತಿ ಪ್ರಕ್ರಿಯೆಗೆ ಅಗತ್ಯ ಸೌಲಭ್ಯ ಒದಗಿಸುವಂತೆಯೂ ತಿಳಿಸಿದರು. ಕರ್ನಲ್ ಗೌರವ ತೊಪ್ಪಾ, ಮೈಸೂರು ಮಹಾನಗರಪಾಲಿಕೆ ಡೆಪ್ಯುಟಿ ಕಮಿಷ್ನರ್ ಯೋಗಾನಂದ, ಸೈನಿಕ ಕಲ್ಯಾಣ ಮತ್ತು ಪುನರ್ವಸತಿ ಇಲಾಖೆ ಉಪ ನಿರ್ದೇಶಕ ಮೇಜರ್ ಜೆ.ಆರ್.ಬಾಲಸುಬ್ರಹ್ಮಣ್ಯಂ, ಚಾಮುಂಡೇಶ್ವರಿ ದೇವಸ್ಥಾನದ ಕಾರ್ಯನಿರ್ವಾಹಕ ಅಧಿಕಾರಿ ಗೋವಿಂದರಾಜು ಸೇರಿದಂತೆ ಇತರರು ಸಭೆಯಲ್ಲಿ ಉಪಸ್ಥಿತರಿದ್ದರು.

ನಕ್ಕರೆ ಅದೇ ಸ್ವರ್ಗ

ಗುಂಡ : ಒಂದು ವೇಳೆ ನಾ ತೆಂಗಿನ ಮರ ಹತ್ತಿ ನೋಡಿದ್ರ ಇಂಜಿನಿಯರಿಂಗ್ ಕಾಲೇಜು ಹುಡುಗಿಯರು ಕಾಣ್ಸುತ್ತಾರೋ?

ತಿಮ್ಮ : ಹೌದು! ಮರ ಹತ್ತಿದ ಮೇಲೆ ಎರಡೂ ಕೈ ಕಾಲು ಬಿಡು... ಸೀದಾ ಮೆಡಿಕಲ್ ಕಾಲೇಜು ಹುಡುಗಿಯರು ಕಾಣ್ಸುತ್ತಾರೆ!

ಮೈಸೂರು ಮಿತ್ರ

ಬುಧವಾರ, 26 ಜುಲೈ 2023

ಸತ್ಯೇನೋತ್ತಭಿತಾ ಭೂಮಿಃ!! ನಹಿ ಸತ್ಯಾತ್ಪರೋ ಧರ್ಮಃ!
(ಭೂಮಿಯು ಸತ್ಯದ ಮೇಲೆ ನಿಂತಿದೆ, ಸತ್ಯಕ್ಕಿಂತ ಮಿಗಿಲಾದ ಧರ್ಮವಿಲ್ಲ)

ಸಂಪಾದಕ: ಎಂ.ಗೋವಿಂದೇಗೌಡ M.A.

ಅಮೃತವಾಹಿನಿ..........

ಗ್ರಾಹಕರಿಗೆ ಏನು ಬೇಕೆಂದು ಕೇಳಿ ಅದನ್ನು ಉತ್ಪಾದಿಸಲು ಹೊರಟರೆ ಸಮಯ ತಗಲುತ್ತದೆ. ಆ ಹೊತ್ತಿಗೆ ಗ್ರಾಹಕನ ಇಚ್ಛೆ ಬದಲಾಗಿರುತ್ತದೆ. – ಸ್ಟೀವ್‌ಜಾಬ್ಸ್

ವೇದ ಸುಳ್ಳಾದರೂ ಗಾದೆ ಸುಳ್ಳಾಗದು { ದಾನವಿಲ್ಲದ ಮನೆ ದೊಡ್ಡದಾದರೇನು?

ನಿಮ್ಮ ಪತ್ರಗಳು

ಎಂದೆಂದಿಗೂ ಮರೆಯಲಾಗದ ಕಾರ್ಗಿಲ್ ನೆನಪು

ಮಾನ್ಯರೆ,

ಜುಲೈ 26 ಅನ್ನು ಕಾರ್ಗಿಲ್ ವಿಜಯದ ದಿವಸ ಎಂದು ಪ್ರತಿ ವರ್ಷ ಆಚರಿಸಿಕೊಂಡು ಬರಲಾಗುತ್ತಿದೆ. ಪಾಕಿಸ್ಥಾನವು ಒಂದಲ್ಲ ಒಂದು ಗಡಿ ತಂಟೆಯಲ್ಲಿ ಕ್ಯಾತೆಯನ್ನು ತೆಗೆದು ನಿರಂತರವಾಗಿ ತೊಂದರೆ ಕೊಡುತ್ತಿತ್ತು. ಅದಕ್ಕೆ ತಕ್ಕ ಪಾಠವನ್ನೇ ಕಲಿಸಿದ "ಹೆಗ್ಗುರುತೆ ಕಾರ್ಗಿಲ್ ಯುದ್ಧ". 1999ರಲ್ಲಿ ಪಾಕಿಸ್ತಾನದ ಸೇನೆ ಕುತಂತ್ರದಿಂದ ಲೇಹ್ ಹೆದ್ದಾರಿವರೆಗೆ ಆಕ್ರಮಿಸಿಕೊಂಡಿದ್ದ ಕಾರ್ಗಿಲ್, ಟೈಗರ್ ಹಿಲ್ಸ್, ಬಟಾಲಿಕ್ ಸೇರಿದಂತೆ ಇನ್ನಿತರ ಪ್ರದೇಶಗಳನ್ನು ಭಾರತೀಯ ಯೋಧರು ಶೌರ್ಯ, ಪರಾಕ್ರಮ, ತ್ಯಾಗ ಬಲಿದಾನದಿಂದ ಮರಳಿ ಪಡೆಯಲು ಪಟ್ಟಂತಹ ಕಷ್ಟ ಅಷ್ಟಿಷ್ಟಲ್ಲ. ಕೊರೆಯುವ ಚಳಿ, ಹಿಮದಿಂದ ದೇಹ ಮರಗಟ್ಟುತ್ತಿದ್ದರೂ ಇವೆಲ್ಲವನ್ನು ಲೆಕ್ಕಿಸದೆ ಮದ್ದು ಗುಂಡುಗಳು, ಯುದ್ಧದ ಸಲಕರಣೆಗಳನ್ನು ಹೊತ್ತು ಗೆದ್ದೇ ಗೆಲ್ಲುತ್ತೇವೆ ಎಂದು ಧೈರ್ಯ, ಸಾಹಸದಿಂದ ಮುನ್ನುಗ್ಗಿ ಬೆಟ್ಟಗುಡ್ಡಗಳ ಪ್ರದೇಶಗಳಲ್ಲಿ ಅವಿತು ಕುಳಿತಿದ್ದ ನರಿ ಬುದ್ಧಿಯ ಪಾಕ್ ಸೇನೆಯನ್ನು ಬಗ್ಗುಬಡಿದು ಹಿಮ್ಮೆಟ್ಟಿಸುವಲ್ಲಿ ಭಾರತೀಯ ಸೇನೆ ಯಶಸ್ವಿಯಾಯಿತು.

ಅಂದು ಪ್ರಧಾನಿಯಾಗಿದ್ದ ವಾಜಪೇಯಿ ಅವರು ಕಾರ್ಗಿಲ್ ಪ್ರದೇಶಕ್ಕೆ ಸ್ವತಃ ತಾವೇ ಭೇಟಿ ನೀಡಿ ಸೈನಿಕರನ್ನು ಕುರಿತು 'ನಿಮ್ಮೆಲ್ಲರ ಬಗ್ಗೆ ನಮಗೆ ಹೆಮ್ಮೆ ಇದೆ, ಭಾರತ ದೇಶದ ಜನತೆ ನಿಮ್ಮೊಂದಿಗೆ ಇದೆ', ಎನ್ನುವ ಸ್ಫೂರ್ತಿದಾಯಕ ಮಾತುಗಳನ್ನಾಡಿ ಅವರಲ್ಲಿ ಧೈರ್ಯ ತುಂಬಿ ಉತ್ಸಾಹವನ್ನು ಇಮ್ಮಡಿಗೊಳಿಸಿದರು. ಈ ಕಾರ್ಗಿಲ್ ಯುದ್ಧದಲ್ಲಿ ಸೇನೆಯ ಅಧಿಕಾರಿಗಳು ಸೇರಿದಂತೆ 527 ಮಂದಿ ಭಾರತೀಯ ಯೋಧರು ಹುತಾತ್ಮರಾದರು. ಈ ಕಾರ್ಯಾಚರಣೆಗೆ 'ಆಪರೇಷನ್ ವಿಜಯ್' ಎಂದು ಹೆಸರಿಡಲಾಗಿತ್ತು. ಹುತಾತ್ಮರಾಗಿರುವ ಯೋಧರು ಇಂದು ನಮಗೆ ಪ್ರೇರಣೆಯಾಗಿದ್ದಾರೆ. ಯೋಧರ ತ್ಯಾಗ ಮತ್ತು ಶೌರ್ಯವನ್ನು ದೇಶವು ಸ್ಮರಿಸುತ್ತದೆ. ಸಮರ್ಪಣಾ ಭಾವದಿಂದ ಮತ್ತು ಪರಾಕ್ರಮದಿಂದ ನಮ್ಮ ದೇಶವನ್ನು ರಕ್ಷಿಸುವ ಸಂದರ್ಭದಲ್ಲಿ ಹುತಾತ್ಮರಾದ ಯೋಧರನ್ನು ಭಾರತೀಯರು ಎಂದೆಂದಿಗೂ ಮರೆಯುವುದಿಲ್ಲ. ನಮ್ಮ ತ್ರಿವರ್ಣ ಧ್ವಜದ ಗೌರವ, ಅಸ್ಮಿತೆ, ಅಖಂಡತೆ ಮತ್ತು ಘನತೆಯನ್ನು ಎತ್ತಿ ಹಿಡಿಯಲು ತಮ್ಮ ಜೀವವನ್ನೇ ಪಣಕ್ಕಿಟ್ಟು ತ್ಯಾಗ ಮಾಡಿದ ಪ್ರತಿಯೊಬ್ಬ ಯೋಧರಿಗೆ ದೇಶದ ಭದ್ರತೆಗಾಗಿ ಯೋಧರ ಮತ್ತು ಅವರ ಕುಟುಂಬದ ತ್ಯಾಗವನ್ನು ನಾವು ಸದಾ ಸ್ಮರಿಸಿಕೊಳ್ಳಬೇಕು. ಭಾರತದ ಇತಿಹಾಸ ಪುಟದಲ್ಲಿ ಎಂದೂ ಮರೆಯಲಾಗದ ಘಟನೆ ಕಾರ್ಗಿಲ್ ಯುದ್ಧ, ಭಾರತೀಯ ಯೋಧರು ವಿಜಯ ಪತಾಕೆಯನ್ನು ಆರಿಸಿದ ಜುಲೈ 26 ರನ್ನು ಪ್ರತಿ ವರ್ಷ ತ್ಯಾಗ, ಬಲಿದಾನ ಮಾಡಿದ ಯೋಧರನ್ನು ಸ್ಮರಿಸಿಕೊಂಡು 24 ವರ್ಷಗಳಿಂದ ಬರುತ್ತಿರುವುದು ಹೆಮ್ಮೆಯ ಸಂಗತಿಯಾಗಿದೆ.

–ಪರಶಿವಮೂರ್ತಿ ಎನ್.ಪಿ, ನಂಜೀಪುರ, ಸರಗೂರು ತಾ.

ಮೆಚ್ಚುಗೆಗೆ ಪಾತ್ರವಾದ ಸ್ತ್ರೀಯರೇ ಅಭಿನಯಿಸಿದ 'ಕುರುಕ್ಷೇತ್ರ' ನಾಟಕ



ಮಾನ್ಯರೆ,

ಮೈಸೂರಿನ ಕಲಾಮಂದಿರದಲ್ಲಿ ಜು.23ರಂದು ಶ್ರೀ ಜಲವಾಸುದೇವ ಸಭಾ ಟ್ರಸ್ಟ್‌ನವರು (ಒಂದೇ ಕುಟುಂಬಕ್ಕೆ ಸೇರಿದವರು) ಜನಪ್ರಿಯ ಪೌರಾಣಿಕ ನಾಟಕ ಕುರುಕ್ಷೇತ್ರವನ್ನು ಅಭಿನಯಿಸಿದ್ದು, ರಂಗಾಸಕ್ತರ ಮೆಚ್ಚುಗೆಗೆ ಪಾತ್ರವಾಯಿತು.

ವಿಶೇಷತೆ ಎಂದರೆ, ಈ ಪೌರಾಣಿಕ ನಾಟಕದ ಎಲ್ಲಾ ಪಾತ್ರಧಾರಿಗಳು ಸಹ ಸ್ತ್ರೀಯರೇ ಅಭಿನಯಿಸಿದ್ದು, ಪುರುಷರು ಸಹ ಇವರ ಅಭಿನಯವನ್ನು ಸರಿಗಟ್ಟಲೂ ಸಾಧ್ಯವಿಲ್ಲವೇನೋ ಎನ್ನುವಂತಿತ್ತು. ಇವರ ಅಭಿನಯದ ಜೊತೆಗೆ, ಇವರು ಹಾಡುತ್ತಿದ್ದ ರಂಗಗೀತೆಗಳು ಮತ್ತು ಸ್ಪಷ್ಟ ಮಾತಿನ ಉಚ್ಚಾರಣೆಗೆ ಇಡೀ ಕಲಾಮಂದಿರದಲ್ಲಿ ನೆರೆದಿದ್ದ ರಂಗಾಸಕ್ತರು ಶಿಳ್ಳೆ, ಚಪ್ಪಾಳೆಗಳಿಂದ ತಮ್ಮ ಮೆಚ್ಚುಗೆ ವ್ಯಕ್ತಪಡಿಸಿದರು.

ನಗರದಲ್ಲಿ ಜಿಟಿ–ಜಿಟಿ ಮಳೆ ಇದ್ದರೂ, ರಂಗಾಸಕ್ತರು ಈ ಪೌರಾಣಿಕ ನಾಟಕ ನೋಡಲು ಕಲಾಮಂದಿರದ ಬಾಲ್ಕನಿಯೂ ಸೇರಿದಂತೆ ಇಡೀ ಕಲಾಮಂದಿರವೇ ತುಂಬಿದ್ದು ವಿಶೇಷವಾಗಿತ್ತು. ಈ ನಾಟಕದ ಪ್ರಮುಖ ಪಾತ್ರಧಾರಿಗಳಾದ ಕೃಷ್ಣ ಮತ್ತು ಧುರ್ಯೋಧನನ ಪಾತ್ರಧಾರಿಗಳ ಮನೋಜ್ಞ ಅಭಿನಯಕ್ಕೆ ಎಲ್ಲರೂ ಮೆಚ್ಚುಗೆ ವ್ಯಕ್ತಪಡಿಸಿದರು. ಈ ನಾಟಕದ ಎಲ್ಲಾ ಪಾತ್ರಗಳ ಅಭಿನಯಕ್ಕೆ ಶ್ರಮ ವಹಿಸಿರುವ ಡ್ರಾಮಾ ಮಾಸ್ಟರ್ ಮತ್ತು ಪ್ರಾಕ್ಟೀಸ್ ಮಾಸ್ಟರ್‌ಗಳನ್ನು ಅಭಿನಂದಿಸಲೇಬೇಕು. ಜನಪದ ಕಲೆ ಮತ್ತು ಪೌರಾಣಿಕ ನಾಟಕಗಳು ನಶಿಸುತ್ತಿರುವ ಈ ಕಾಲಘಟ್ಟದಲ್ಲಿ ನಗರ ಪ್ರದೇಶಗಳಲ್ಲಿ ಇಂತಹದೊಂದು ಪ್ರಯೋಗಕ್ಕೆ ಕುಲಗಣಂ ಜಲವಾಸುದೇವ ಸಭಾ ಟ್ರಸ್ಟ್‌ನವರಿಗೆ ಅಭಿನಂದನೆಗಳು.

–ಬೂಕನಕೆರೆ ವಿಜೇಂದ್ರ, ಕುವೆಂಪುನಗರ, ಮೈಸೂರು

'ಅರ್ಥಭಾಗ್ಯ'

ಮಾನ್ಯರೆ,

'ಅನ್ನಭಾಗ್ಯ' ಎಂದರೆ ಅಕ್ಷರಶಃ ಅನ್ನವನ್ನೇ ವಿತರಿಸಬೇಕು; ಇಲ್ಲವೋ ಅಕ್ಕಿಯನ್ನು. ಅದರ ಬದಲು ಹಣವನ್ನು ಕೊಡುವುದರಲ್ಲಿ ಏನು ಅರ್ಥವಿದೆ? ಅದು ಬರಿಯ 'ಭಾಗ್ಯ'ವಷ್ಟೆ (ಆದ್ದರಿಂದ ಇದು ವ್ಯರ್ಥ 'ಗ್ಯಾರಂಟಿ'!) ಬೇಕಾದರೆ 'ಅರ್ಥ ಭಾಗ್ಯ' ಎನ್ನಬಹುದು.

ಮರವೆ!

'ಭೈರಪ್ಪನವರ ಕಾದಂಬರಿಗಳ ಅನುವಾದವನ್ನು ಕುರಿತು ಡಾ. ಎಚ್.ವಿ. ನಾಗರಾಜರಾಯರ ಅಂಕಣ ಬರಹ (ಜೂ. 23).

"ನಾನಿನ್ನು ಏನನ್ನೂ ಬರೆಯಲಾರೆ; ಮರವೆ ಕಾಡುತ್ತಿದೆ" ಎಂದು ಇತ್ತೀಚೆಗೆ ಭೈರಪ್ಪನವರು ಒಂದು ಕಡೆ ಹೇಳಿದ್ದು ನೆನಪಾಗುತ್ತದೆ!

ಮರವೆ ಮಾನವ ಸಹಜ ("ಮರೆತರೆ ಮಾನವ"), ಭೈರಪ್ಪನವರ ವಿಷಯದಲ್ಲಂತೂ ವಯೋಸಹಜ. ಅವರು ಮರವೆಯನ್ನು ಗೆದ್ದು ಬರೆಯಲಿ; ಎಂದಿನಂತೇ ತಮ್ಮ ಅದ್ಭುತ ಶಕ್ತಿಯನ್ನು ಮೆರೆಯಲಿ!

ಪಾಪ!

ಇಂದಿನ ಗೋಹತ್ಯೆ ವಿರೋಧ ನಿಷೇಧಗಳನ್ನು ಗಮನಿಸಿದಾಗ, ನಮ್ಮ ಹಿಂದಿನ ದಾನ ಶಾಸನಗಳಲ್ಲಿ ಬರುವ ಕಡೆಯ ಮಾತು ನೆನಪಾಗುತ್ತದೆ : "ಈ ದಾನವನ್ನು ಅಪಹರಿಸಿದವನಿಗೆ ಕಾಶಿಯಲ್ಲಿ ಸಾವಿರ ಹಸುಗಳನ್ನು ಕೊಂದವನಿಗೆ ಬರುವ ಪಾಪ ಬರುತ್ತದೆ!"

–ಸಿಪಿಕೆ, ಹಿರಿಯ ಸಾಹಿತಿ, ಮೈಸೂರು.



ಬಿಚ್ಚು ನುಡಿ

ವಿಕ್ರಂ ಮುತ್ತಣ್ಣ

ಪ್ರಧಾನಮಂತ್ರಿಗಳ ಮೌನವ ತಾಳೆವು...



ಈಶಾನ್ಯ ರಾಜ್ಯ ಮಣಿಪುರದ ಹಿಂಸಾಚಾರದಲ್ಲಿ ಗುಂಪೊಂದು ಇಬ್ಬರು ಮಹಿಳೆಯರನ್ನು ಬೆತ್ತಲುಗೊಳಿಸಿ ಮೆರವಣಿಗೆ ಮಾಡಿದ ವಿಡಿಯೋ ಸಾಮಾಜಿಕ ಜಾಲತಾಣಗಳಲ್ಲಿ ವೈರಲ್ ಆಗುತ್ತಿದ್ದಂತೆಯೇ ಈ ಘಟನೆಯ ಬಗ್ಗೆ ಇಡೀ ದೇಶ ದಿಗ್ಭ್ರಮೆಗೊಂಡಿದೆ. ಆದರೆ, ಅದಕ್ಕಿಂತಲೂ ನಮಗೆ ಆಘಾತಗೊಳಿಸುವಂತಹ ಸಂಗತಿ ಎಂದರೆ ಪೊಲೀಸರ ನಿಷ್ಕ್ರಿಯತೆ ಹಾಗೂ ಇಲ್ಲಿಯವರೆಗಿನ ಪ್ರಧಾನಮಂತ್ರಿಯವರ ದಿವ್ಯ ಮೌನ.

ಮಣಿಪುರದಲ್ಲಿ ನಾಗ ಮತ್ತು ಕುಕಿ ಜನಾಂಗಗಳಿಗೆ ಸೇರಿದ ಮಣಿಪುರದ ಅಖಿಲ ಆದಿವಾಸಿ ವಿದ್ಯಾರ್ಥಿಗಳ ಸಂಘವು ಕಳೆದ ಮೇ ತಿಂಗಳ ಮೂರರಂದು ಉದ್ದೇಶಿತ ಮೈತೇಯಿ (ಮೈತೀ) ಜನಾಂಗವನ್ನು ಪರಿಶಿಷ್ಟ ಪಂಗಡದ ಪಟ್ಟಿಗೆ ಸೇರಿಸುವುದರ ವಿರುದ್ಧ ಏರ್ಪಡಿಸಿದ್ದ ರ್ಯಾಲಿಯ ನಂತರ ಈ ಹಿಂಸಾಚಾರ ಭುಗಿಲೆದ್ದಿತು.

ಮೇ 4 ರಂದು ಇಬ್ಬರು ಮಹಿಳೆಯರನ್ನು ವಿವಸ್ತ್ರಗೊಳಿಸಿ, ಮೆರವಣಿಗೆ ಮಾಡಿದ ಆರೋಪಕ್ಕೆ ಸಂಬಂಧಿಸಿದಂತೆ ಮಣಿಪುರದ ಪೊಲೀಸರು ಈಗಾಗಲೇ ಏಳು ಮಂದಿ ಆರೋಪಿಗಳನ್ನು ಬಂಧಿಸಿದ್ದಾರೆ. ಈ ಬಂಧನವು ಘಟನೆ ನಡೆದ 77 ದಿನಗಳ ನಂತರ ನಡೆದಿದೆ! ನ್ಯಾಯದಾನದಲ್ಲಿನ ವಿಳಂಬವು ಪಾತಕಿಗಳನ್ನು ಉತ್ತೇಜಿಸುತ್ತದೆ. ಬಹಳ ಹಿಂದಿನಿಂದಲೂ ದೇಶದ ಉದ್ದಗಲಕ್ಕೂ ಇದು ನಡೆದುಕೊಂಡು ಬರುತ್ತಿರುವ ಕಟುಸತ್ಯವಾಗಿದೆ.

ಪಶ್ಚಿಮ ಉತ್ತರ ಪ್ರದೇಶದ ಹತ್ರಾಸ್ ಜಿಲ್ಲೆಯಲ್ಲಿ ಪಾತಕಿಗಳು ನ್ಯಾಯಕ್ಕೆ ಅಂಜದ, ಹೆದರದ ಪ್ರವೃತ್ತಿಯನ್ನು ನೋಡುತ್ತಾ ಬಂದಿದ್ದೇವೆ. ಒಬ್ಬ ತಾಯಿಗೆ ತನ್ನ 19 ವರ್ಷದ ಮಗಳು, ಬಯಲೊಂದರಲ್ಲಿ ವಿವಸ್ತ್ರಳಾಗಿ, ಬಾಯಿಂದ ನಾಲಿಗೆ ಹೊರಚಾಚಿದ ಹಾಗೂ ಗುಪ್ತಾಂಗದಲ್ಲಿ ರಕ್ತಸ್ರಾವವಾಗುತ್ತಿರುವ ಸ್ಥಿತಿಯಲ್ಲಿ ಕಣ್ಣಿಗೆ ಬಿದ್ದಳು.

ಸ್ಥಳಕ್ಕೆ ಆಗಮಿಸಿದ ಪೊಲೀಸರು, ಆಕೆಯನ್ನು ಆಸ್ಪತ್ರೆಗೆ ಸಾಗಿಸಿ ಪ್ರಥಮ ಮಾಹಿತಿ ವರದಿ (ಎಫ್‌ಐಆರ್) ಯನ್ನು ದಾಖಲಿಸುವ ಬದಲು ಮೊದಲು ತಾಯಿ ಮತ್ತು ಮಗಳನ್ನು ಸ್ಥಳೀಯ ಪೊಲೀಸ್ ಠಾಣೆಗೆ ಕರೆದೊಯ್ದರು. ಕೆಲ ಹೊತ್ತಿನ ನಂತರ ಆಸ್ಪತ್ರೆಗೆ ಕರೆದುಕೊಂಡು ಹೋದರು. ಅದಿರಲಿ, ಎರಡು ವಾರದ ನಂತರ, ಆಕೆಯನ್ನು ದೆಹಲಿಯ ಸಫ್ದರ್‌ಜಂಗ್ ಆಸ್ಪತ್ರೆಗೆ ಸೇರಿಸಲಾಯಿತು. ಕೊನೆಗೆ ಅಲ್ಲಿ ಯುವತಿ ಮರಣ ಹೊಂದಿದಳು.

ಆ ನಂತರ ಪೊಲೀಸರು ಮಧ್ಯರಾತ್ರಿಯಲ್ಲಿ ಆಕೆಯ ದೇಹವನ್ನು ಕಗ್ಗತ್ತಲೆಯಲ್ಲಿ ಸಾಗಿಸಿ, ಕುಟುಂಬ ಸದಸ್ಯರ ಗೈರು ಹಾಜರಿಯಲ್ಲಿ ಸುಟ್ಟು ಹಾಕಿದರು. ಎಷ್ಟು ಅಮಾನವೀಯ! ಎಷ್ಟು ಕ್ರೂರ! ಈ ಪಾಶವೀಕೃತ್ಯ ಎಸಗಿದವರ ವಿರುದ್ಧ ತಕ್ಷಣದ ಯಾವ ಕ್ರಮವನ್ನು ಕೂಡ ಪೊಲೀಸರು ತೆಗೆದುಕೊಳ್ಳಲಿಲ್ಲ ಹಾಗೂ ಪ್ರಧಾನಮಂತ್ರಿಗಳೂ ಮೌನವಾಗಿದ್ದರು. ಜನಸೇವೆ ಮಾಡುವ ಉದ್ದೇಶ ಹೊಂದಿದ ಒಂದು ಸರ್ಕಾರಿ ಸಂಸ್ಥೆಯು (ಪೊಲೀಸ್ ಇಲಾಖೆ) ಅಷ್ಟೊಂದು ಸಹಾನುಭೂತಿಶೂನ್ಯ ಹಾಗೂ ಕರುಣಾಹೀನವಾಗಲು ಹೇಗೆ ಸಾಧ್ಯ?

ಆ ನಂತರ, ಅಲಹಾಬಾದ್ ಹೈಕೋರ್ಟ್ ಇದೇ ಹತ್ರಾಸ್ ಪ್ರಕರಣಕ್ಕೆ ಸಂಬಂಧಿಸಿದಂತೆ, "ಈ ಪ್ರಕರಣವು ನಮ್ಮ ಆತ್ಮಸಾಕ್ಷಿಯನ್ನು ದಿಗ್ಭ್ರಾಂತಗೊಳಿಸಿದೆ" ಎಂದು ಕಳವಳ ವ್ಯಕ್ತಪಡಿಸಿತು. ಮಣಿಪುರದಲ್ಲಿ ನಡೆದ ಘಟನೆಯಿಂದ ಈಗ ಮತ್ತೆ ನಾವು ದಿಗ್ಭ್ರಾಂತರಾಗಿದ್ದೇವೆ. ಪೊಲೀಸರು, ಕಾರ್ಯೋನ್ಮುಖರಾಗುವ ತನಕ ಅದು ನಿಲ್ಲಲಾರದು. ಪೊಲೀಸರ ಕ್ರಮ ಖಂಡಿತ ಅವಶ್ಯವಾಗಿದೆ. ದುರದೃಷ್ಟವಶಾತ್, ಇದರಲ್ಲಿ ರಾಜಕೀಯ ನುಸುಳುತ್ತದೆ. ಇಲ್ಲೇ ಪ್ರಧಾನಮಂತ್ರಿಗಳು ಮಾತನಾಡಬೇಕಾಗಿರುವುದು.

"ನಾನು ನಿಜವಾಗಿಯೂ ಅಸಮಾಧಾನಗೊಂಡಿದ್ದೇನೆ. ನಮ್ಮ ಪ್ರಧಾನಮಂತ್ರಿಗಳು ಇದುವರೆಗೆ ಏಕೆ ಮೌನವಾಗಿದ್ದರು. ಅವರೇಕೆ ಒಂದೇ ಒಂದು ಮಾತನ್ನೂ ಆಡಲಿಲ್ಲ.? ನನ್ನ ಜನರು ಬೆಂಕಿಯಲ್ಲಿ ಬೆಂದು ಸಾಯುತ್ತಿದ್ದಾರೆ"– ಹೀಗೆಂದು ಕರ್ನಲ್ ಶಾಂತಿಕುಮಾರ್ ಸಪಮ್ (ನಿ) ಹೇಳಿದ್ದಾರೆ. ಅವರು ಅಸ್ಸಾಂ ರೆಜಿಮೆಂಟ್‌ನಲ್ಲಿ ಕಾರ್ಯ ನಿರ್ವಹಿಸಿದ್ದರು. ನಮ್ಮ ಪ್ರಧಾನಮಂತ್ರಿಗಳು ಮಾತನಾಡಲು ಮಹಿಳೆಯರನ್ನು ಬೆತ್ತಲುಗೊಳಿಸಿ ಮೆರವಣಿಗೆ ಮಾಡುವಂತಹ ಪರಿಸ್ಥಿತಿ ಬರಬೇಕಿತ್ತಾ?

ಮೋದಿಯವರು ತಾವು ಪ್ರಧಾನಮಂತ್ರಿಯಾಗಿ ಆಯ್ಕೆಗೊಂಡಾಗ (2014) ಮಾಜಿ ಪ್ರಧಾನಮಂತ್ರಿ ಡಾ. ಮನಮೋಹನ್ ಸಿಂಗ್ ಅವರನ್ನು "ಮೌನ ಮೋಹನ್ ಸಿಂಗ್" ಎಂದು ಅಣಕಿಸುತ್ತಿದ್ದರು. ಆದರೆ, ಕುತೂಹಲಕಾರಿ ಸಂಗತಿ ಎಂದರೆ, 'ಡಾ.ಮೌನ ಮೋಹನ್ ಸಿಂಗ್' ಅವರು ಪ್ರಧಾನಿ ಮೋದಿಗಿಂತ ಅಧಿಕ ಪತ್ರಿಕಾಗೋಷ್ಠಿಗಳನ್ನು ನಡೆಸಿದ್ದಾರೆ.

ಮೋದಿಯವರು ಪ್ರಧಾನಮಂತ್ರಿಯಾಗಿ ಅಧಿಕಾರ ವಹಿಸಿಕೊಂಡ ನಂತರ, ತಮ್ಮ ನೆಚ್ಚಿನ **"ಮನ್ ಕೀ ಬಾತ್"** ಕಾರ್ಯಕ್ರಮದ ಮೂಲಕ ಜನರೊಂದಿಗೆ ತಮ್ಮ ಭಾವನೆಗಳನ್ನು ಹಂಚಿಕೊಳ್ಳುತ್ತಿದ್ದಾರೆ. ಈಗ ಅವರು ನಮ್ಮ **"ಮನ್ ಕೀ ಬಾತ್"** ಕೂಡ ಆಲಿಸಬೇಕಾಗಿದೆ.

ತಮ್ಮ ಪ್ರಥಮ ಸ್ವಾತಂತ್ರ್ಯೋತ್ಸವ ಭಾಷಣದಲ್ಲಿ (2014), ಮೋದಿಯವರು ಹೀಗೆ ಹೇಳಿದ್ದರು– "ಪೋಷಕರು ತಮ್ಮ ಪುತ್ರಿಯರಿಗೆ ನೂರಾರು ಪ್ರಶ್ನೆಗಳನ್ನು ಕೇಳುತ್ತಾರೆ. ಆದರೆ ಯಾರಾದರೂ ತಮ್ಮ ಪುತ್ರ ಏನು ಮಾಡುತ್ತಿದ್ದಾನೆ ಹಾಗೂ ಎಲ್ಲಿಗೆ ಹೋಗುತ್ತಿದ್ದಾನೆ ಎಂದು ಕೇಳುವ ಧೈರ್ಯವನ್ನು ತೋರಿದ್ದಾರಾ?." ಈಗ ನಾವು ತಮ್ಮ ಮತದಾರರೊಂದಿಗೆ ಭಾವನೆಗಳನ್ನು ಹೆಚ್ಚಾಗಿ ಹಂಚಿಕೊಳ್ಳುತ್ತಿದ್ದ ಪ್ರಧಾನಮಂತ್ರಿಯವರನ್ನು ಮಣಿಪುರದ ವಿದ್ಯಮಾನಗಳ ವಿಚಾರದಲ್ಲಿ ಅಷ್ಟೊಂದು ದೀರ್ಘ ಮೌನವನ್ನು ಏಕೆ ವಹಿಸಿದ್ದರು ಎಂದು ಕೇಳಬೇಕಾಗಿದೆ. ಗಲಭೆಕೋರರಿಗೆ ಒಂದು ತೀಕ್ಷ್ಣವಾದ ಎಚ್ಚರಿಕೆಯನ್ನು ನೀಡಿ ಹಾಗೂ ಪೊಲೀಸರಿಗೆ ಸ್ಫೂರ್ತಿ ತುಂಬುವ ಕೆಲಸವನ್ನು ಅವರೇಕೆ ಮಾಡಲಿಲ್ಲ?

ನಮ್ಮ ಪ್ರಧಾನಮಂತ್ರಿಗಳು, ವಿಷಯಗಳಿದ್ದಾಗ ಮಾತನಾಡುವುದಿಲ್ಲ. ಒಂದು ವೇಳೆ ಅವರು ಮಾತನಾಡಿದರೂ ಅದು ವಿಷಯಾಧಾರಿತವಾಗಿರದೇ, ತತ್ವಶಾಸ್ತ್ರದ ರೀತಿಯಲ್ಲಿ ಅಸ್ಪಷ್ಟವಾಗಿರುತ್ತದೆ. ಕೋವಿಡ್–19 ಸೋಂಕಿನ ಸಂದರ್ಭದಲ್ಲಿ ಕೂಡ ಹಾಗೆ ಆಯಿತು. ಸೋಂಕನ್ನು ನಿಯಂತ್ರಿಸುವಲ್ಲಿ ನಮ್ಮ ತಯಾರಿ ಹಾಗೂ ಪರಿಸ್ಥಿತಿಯನ್ನು ನಾವು ಯಾವ ರೀತಿಯಲ್ಲಿ ಎದುರಿಸಬಹುದು ಎನ್ನುವುದಕ್ಕಿಂತ ಹೆಚ್ಚಾಗಿ, ಅವರು ಪ್ರೇರಕನ (Motivator) ಪಾತ್ರ ವಹಿಸಿದರು.

ಜನರಲ್ಲಿ ಸ್ಫೂರ್ತಿ ತುಂಬಿ, ಹುರಿದುಂಬಿಸುವುದು ನಿಜವಾಗಲು ಒಳ್ಳೆಯದೇ. ಆದರೆ ಒಂದು ವೇಳೆ ಡಾ.ಮನಮೋಹನ್ ಸಿಂಗ್ ಅವರು ನಮಗೆದುರಾಗಿರುವ ಸಂಕಷ್ಟಗಳಿಗೆ ವಿಷಾದ ವ್ಯಕ್ತಪಡಿಸಿ, ದೀಪ ಬೆಳಗಿ, ಚಪ್ಪಾಳೆ ತಟ್ಟಿ, ತಟ್ಟೆ ಬಾರಿಸಿ ಎಂದು ನಮ್ಮನ್ನು ಕೋರಿಕೊಂಡಿದ್ದರೆ, ಬಿಜೆಪಿಯವರು ಅದನ್ನು ಒಪ್ಪಿಕೊಳ್ಳುತ್ತಿದ್ದರೇ?

ಮನಮೋಹನ್ ಸಿಂಗ್ ಅವರನ್ನು ಮೌನ ಮೋಹನ್ ಸಿಂಗ್, 'ವಿದೂಷಕ' ಅಥವಾ ಮೇಡಮ್ (ಸೋನಿಯಾ ಗಾಂಧಿ) ಕೈಗೊಂಬೆ ಎಂದು ಕರೆಯುವ ಮೂಲಕ ಅವರ ತೇಜೋವಧೆ ಮಾಡುತ್ತಿರಲಿಲ್ಲವೇ?

ದೇಶವನ್ನು ಬಹಳ ಕಾಲದಿಂದ ಕಾಡುತ್ತಿರುವ ಹಲವಾರು ಸಮಸ್ಯೆಗಳ ಬಗ್ಗೆ ವಿಶೇಷವಾಗಿ, ಗೋಸಾಗಣೆದಾರರ ಹತ್ಯೆಯ ವಿಷಯ, ಕೋವಿಡ್ ಸೋಂಕಿನಿಂದ ಉಂಟಾದ ಸಾವು–ನೋವುಗಳು, ನೋಟುಗಳ ಅಪಮೌಲ್ಯೀಕರಣ ಮುಂತಾದವುಗಳ ಬಗ್ಗೆ ಪ್ರಧಾನಮಂತ್ರಿಯವರು ಮೌನಕ್ಕೆ ಶರಣಾಗಿದ್ದರು. **ಅವರು ನಿಜವಾಗಿ ಭಾರತದ ಹಿರಿಮೆಯನ್ನು ಜಾಗತಿಕವಾಗಿ ಹೆಚ್ಚಿಸಿದ್ದಾರೆ. ಆದರೆ ದೇಶ ಆಂತರಿಕವಾಗಿ ಎದುರಿಸುತ್ತಿರುವ ಸಮಸ್ಯೆಗಳ ಬಗ್ಗೆ ನಾವು ಅವರಿಂದ ಕೇಳಬೇಕಾಗಿದೆ. ಅದನ್ನು ಸಂಬಂಧಪಟ್ಟ ಸಚಿವರ ಮೇಲೆ ಹೊರೆಸುವುದಲ್ಲ. ಅದಕ್ಕಿಂತಲೂ ಕೆಟ್ಟದ್ದು ಎಂದರೆ ಭ್ರಷ್ಟಾಚಾರದ ಬಗ್ಗೆ ಅವರ ದಿವ್ಯ ಮೌನ.**

ಭ್ರಷ್ಟಾಚಾರಕ್ಕೆ ಸಂಬಂಧಪಟ್ಟ ಹಾಗೆ, ಮೋದಿಯವರು **"ನ ಖಾವುಂಗಾ ನ ಖಾನೆ ದೂಂಗಾ"** ಎಂದು ಹೇಳಿದ್ದರು. ಇದರ ಅರ್ಥ" ನಾನು ತಿನ್ನುವುದಿಲ್ಲ, ಬೇರೆಯವರು ತಿನ್ನಲೂ ಬಿಡುವುದಿಲ್ಲ" (ನಾನು ಭ್ರಷ್ಟಾಚಾರಿಯಾಗುವುದಿಲ್ಲ, ಬೇರೆಯವರು ಭ್ರಷ್ಟಾಚಾರಿಗಳಾಗಲು ಬಿಡುವುದಿಲ್ಲ).

ತಮ್ಮ ಪಕ್ಷದ ಮೇಲೆ ನಿಯಂತ್ರಣ ಹೊಂದಿರುವ ಹಾಗೆ ಕಾಣುವ ಪ್ರಧಾನಮಂತ್ರಿಗಳು "ನಾನು ಭ್ರಷ್ಟಾಚಾರಿಯಾಗುವುದಿಲ್ಲ, ಇತರರು ಭ್ರಷ್ಟಾಚಾರಿಗಳಾಗಲು ಬಿಡುವುದಿಲ್ಲ" ಎಂದು ಹೇಳುವಾಗ, ಓರ್ವ ನಾಗರಿಕನಾಗಿ ನಮಗೆ ತುಂಬಾ ಭರವಸೆ ಮೂಡುತ್ತದೆ. ಆದರೆ ಕರ್ನಾಟಕದಲ್ಲಿ ಬಿಜೆಪಿ ಸರ್ಕಾರವು ಭಾರೀ ಭ್ರಷ್ಟಾಚಾರದಿಂದ ಕೂಡಿತ್ತು. ಆದರೂ, ಪ್ರಧಾನಮಂತ್ರಿಗಳು ಕರ್ನಾಟಕಕ್ಕೆ ಸಾಕಷ್ಟು ಸಲ ಬಂದು ಚುನಾವಣಾ ಪ್ರಚಾರ ಮಾಡಿದರು. ಆದರೆ, ಭ್ರಷ್ಟಾಚಾರದ ಬಗ್ಗೆ ಅವರು ಒಂದೇ ಒಂದು ಮಾತನ್ನು ಕೂಡ ಆಡಲಿಲ್ಲ.

ಇದೇ ನಮ್ಮ ಪ್ರಧಾನಮಂತ್ರಿಗಳು ಡಾ. ಮನಮೋಹನ್ ಸಿಂಗ್ ಭ್ರಷ್ಟರಲ್ಲ, ಆದರೆ ಅವರ ಸುತ್ತಮುತ್ತ ಭ್ರಷ್ಟಾಚಾರಿಗಳಿರಬಹುದು ಎಂದು ಹೇಳುತ್ತಾ ಪ್ರಾಸಂಗಿಕವಾಗಿ ಒಂದು ಉದಾಹರಣೆ ಸಹ ನೀಡಿದರು– "ಡಾ.ಸಿಂಗ್ ಒಬ್ಬರು ಮಾತ್ರವೇ ರೇನ್‌ಕೋಟ್ ಹಾಕಿಕೊಂಡು ಸ್ನಾನದ ಮನೆಯಲ್ಲಿ ಸ್ನಾನ ಮಾಡುವ ಕಲೆ ಬಲ್ಲವರು ಎಂದು ಅವರ ಸರ್ಕಾರವನ್ನು ಗೇಲಿ ಮಾಡುತ್ತಿದ್ದರು" ಈಗ ನಮ್ಮ ಪ್ರಧಾನಿ ಮೋದಿಯವರು ಅದೇ ರೇನ್ ಕೋಟನ್ನು ಪಡೆದುಕೊಂಡಿದ್ದಾರೆ ಎನ್ನಬಹುದಲ್ಲವೇ!

ಸಂಪರ್ಕ ಮತ್ತು ಭ್ರಷ್ಟಾಚಾರಕ್ಕೆ ಸಂಬಂಧಿಸಿದ ಹಾಗೆ ಏನು ಬದಲಾವಣೆಯಾಗಿದೆ? ಡಾ.ಮನಮೋಹನ್ ಸಿಂಗ್ ಅವರು ಮೌನಿಯಾಗಿದ್ದರು. ಹಾಗೆಯೇ ನಮ್ಮ ಪ್ರಧಾನಿ ನರೇಂದ್ರಮೋದಿ ಕೂಡ ಈ ಎರಡೂ ವಿಷಯದಲ್ಲಿ ಮೌನಿ. ಡಾ.ಮನಮೋಹನ್ ಸಿಂಗ್ ಇಲ್ಲವೇ ನರೇಂದ್ರಮೋದಿಯವರು ನಾಗರಿಕರೊಡನೆ ಸಂಪರ್ಕ ಹೊಂದಲಿಲ್ಲ. ನಿಮಗೆ ಗೊತ್ತಿರಲಿ. 'ಮನ್ ಕೀ ಬಾತ್' ಹಾಗೂ ಪ್ರಚಾರ ಭಾಷಣಗಳು ಸಂಪರ್ಕ ಮಾರ್ಗಗಳಲ್ಲ. ಅದು ಒಂದು ರೀತಿಯಲ್ಲಿ "ಏಕಮುಖ ಸಂಚಾರ" ಇದ್ದ ಹಾಗೆ ಹಾಗೂ ವಿರೋಧ ಪಕ್ಷಗಳತ್ತ ಬೆರಳು ತೋರಿಸುವುದಷ್ಟೇ.

ಮಣಿಪುರದಲ್ಲಿನ ಸಮಸ್ಯೆಯು ದೀರ್ಘಕಾಲಿಕವಾದದ್ದು. ಆದರೆ ಅದು ಇಷ್ಟೊಂದು ಬೃಹತ್ ಮಟ್ಟಕ್ಕೆ ಬರಬೇಕಾಗಿರಲಿಲ್ಲ. ಅಟಲ್ ಬಿಹಾರಿ ವಾಜಪೇಯಿಯವರು ಪ್ರಧಾನಿಯಾಗಿದ್ದ ಸಂದರ್ಭದಲ್ಲಿ ಸಹ, ಈಶಾನ್ಯ ಭಾಗದಲ್ಲಿ ಇಂತಹುದೇ ಉದ್ವಿಗ್ನ ಪರಿಸ್ಥಿತಿ ಉಂಟಾಗಿತ್ತು. ಆಗ, ವಾಜಪೇಯಿಯವರು ಸರ್ವಪಕ್ಷಗಳ ಒಂದು ನಿಯೋಗ ರಚಿಸಿ, ಸಮಸ್ಯೆಯನ್ನು ಬಗೆಹರಿಸಲು ಮಣಿಪುರದಲ್ಲಿ ಎರಡು ಸಭೆಗಳನ್ನು ಮಾಡಿದ್ದರು. ಆದರೆ ಈ ಬಾರಿ ಎಲ್ಲಾ ಪಕ್ಷಗಳು ಈ ಸಮಸ್ಯೆಯ ಪರಿಹಾರದ ಬಗ್ಗೆ ಪ್ರಧಾನಮಂತ್ರಿಯವರ ಜೊತೆ ಮಾತನಾಡಲು ಅವರ ಕಚೇರಿಗೆ ಹೋಗಿದ್ದವು. ಆದರೆ, ಕಚೇರಿಯಲ್ಲಿ ಪ್ರಧಾನಿಯವರೇ ಇರಲಿಲ್ಲ. ಅನಿವಾರ್ಯವೆಂಬಂತೆ ಒಂದು ಮನವಿ ಪತ್ರವನ್ನು ಅಲ್ಲಿ ಇಟ್ಟು ಹೊರಬಂದವು.

ಮೋದಿಯವರಂತಹ ವ್ಯಕ್ತಿತ್ವವುಳ್ಳ ನಾಯಕ ಮೌನಕ್ಕೆ ಶರಣಾದರೆ, ಪೊಲೀಸರೂ ಸುಮ್ಮನಿದ್ದು ಬಿಡುತ್ತಾರೆ ಹಾಗೂ ಗಲಭೆಕೋರರಿಗೆ ಧೈರ್ಯ ಬಂದು, ಹಿಂಸಾಚಾರಕ್ಕೆ ಇಳಿಯುತ್ತಾರೆ. ನಮಗೆ ಮನಮೋಹನ್ ತದ್ರೂಪದ ಮೋದಿ ಬೇಕಾಗಿಲ್ಲ. ನಮಗೆ ನುಡಿದಂತೆ ನಡೆಯುವ 2014ರ ಮೋದಿ ಬೇಕಿದೆ.

ಮೌನ, ಅದು ಇಲ್ಲದಿರುವವರೆಗೆ ಮಾತ್ರ ಚಿನ್ನ, ಆದರೆ ಈಗ ಮೌನವಾಗಿರುವಂತಹ ಸಮಯ ಅಲ್ಲ. ರಷ್ಯಾ ಮತ್ತು ಉಕ್ರೇನ್ ನಡುವೆ ಶಾಂತಿಧೂತನಾಗುವ ಪ್ರಯತ್ನದ ಬದಲು, ನಮ್ಮ ಪ್ರಧಾನಮಂತ್ರಿಗಳು ಈಶಾನ್ಯ ಭಾರತದಲ್ಲಿ ಶಾಂತಿ ಸ್ಥಾಪನೆಗೆ ಪ್ರಯತ್ನಿಸುವ ಜರೂರಿದೆ.

email: vikram@starofmysore.com

ಭತ್ತದ ಬೆಳೆಗಾಗಿ ನಾಲೆಗಳಿಗೆ ನೀರು ಹರಿಸಿ

2 ದಿನಗಳಲ್ಲಿ ತೀರ್ಮಾನ ಕೈಗೊಳ್ಳಲು ರೈತಸಂಘ ಒತ್ತಾಯ

ಮೈಸೂರು,ಜು.25(ಪಿಎಂ)– ಕಬಿನಿ–ಕೆಆರ್‌ಎಸ್ ಸೇರಿದಂತೆ ರಾಜ್ಯದ ಎಲ್ಲಾ ಜಲಾಶಯಗಳ ನೀರಾವರಿ ಸಲಹಾ ಸಮಿತಿಗಳು ಭತ್ತದ ಬೆಳೆಗಾಗಿ ನಾಲೆಗಳಿಗೆ ನೀರು ಹರಿಸಲು ಎರಡು ದಿನಗಳಲ್ಲಿ ತೀರ್ಮಾನ ಕೈಗೊಳ್ಳಬೇಕು ಎಂದು ರಾಜ್ಯ ರೈತ ಸಂಘದ ಅಧ್ಯಕ್ಷ ಬಡಗಲಪುರ ನಾಗೇಂದ್ರ ಒತ್ತಾಯಿಸಿದರು.

ಮೈಸೂರಿನ ಜಲದರ್ಶಿನಿ ಅತಿಥಿಗೃಹದಲ್ಲಿ ಮಂಗಳವಾರ ಪತ್ರಿಕಾಗೋಷ್ಠಿಯಲ್ಲಿ ಮಾತನಾಡಿದ ಅವರು, ಬರದ ಛಾಯೆ ರಾಜ್ಯದ 100 ತಾಲೂಕುಗಳಲ್ಲಿ ಈಗಲೂ ಇದೆ. ಇದೀಗ ಮಳೆ ತಡವಾಗಿ ಬರುತ್ತಿದೆ. ಮಂಡ್ಯ ಜಿಲ್ಲೆಯಲ್ಲಿ ಕಬ್ಬು ಒಣಗುತ್ತಿತ್ತು. ಚಳವಳಿ ನಂತರ ನೀರು ಬಿಡಲಾಯಿತು. ಇದೀಗ ಕೆಆರ್‌ಎಸ್ ಜಲಾಶಯ 100 ಅಡಿಯಷ್ಟು ತುಂಬಿದೆ ಎಂದರು.

ಆಗಸ್ಟ್ ಒಳಗೆ ಭತ್ತ ನಾಟಿ ಮಾಡಬೇಕು. ಆಗಸ್ಟ್ ಕಳೆದು ಒಂದು ವಾರ ತಡವಾದರೂ ಬೆಳೆ ಕೈಗೆ ಸಿಗುವುದಿಲ್ಲ. ಆದ್ದರಿಂದ ರಾಜ್ಯದ ಎಲ್ಲಾ ನೀರಾವರಿ ಸಲಹಾ ಸಮಿತಿಗಳು ಭತ್ತ ಸೇರಿದಂತೆ ಇತರ ಬೆಳೆಗಳಿಗಾಗಿ ನಾಲೆಗಳಿಗೆ ನೀರು ಹರಿಸಲು ಕ್ರಮ ವಹಿಸಬೇಕು. ಕೆರೆಕಟ್ಟೆಗಳಿಗೂ ನೀರು ಹರಿಸಬೇಕು ಎಂದು ಆಗ್ರಹಿಸಿದರು.

ಜು.27ರಂದು ಪ್ರತಿಭಟನೆ: ಕಬ್ಬಿಗೆ ಸಂಬಂಧಿಸಿದಂತೆ ಬನ್ನಾರಿ ಅಮ್ಮನ್ ಕಾರ್ಖಾನೆ ರೈತರಿಗೆ ಮಾಡಬೇಕಿರುವ ಪಾವತಿಯಲ್ಲಿ ಬಾಕಿ ಉಳಿಸಿಕೊಂಡಿದೆ. ಪಾವತಿಸಬೇಕಿರುವ ಹೆಚ್ಚುವರಿ ಬಿಲ್ ಅನ್ನು ಸಾಕಷ್ಟು ಕಾರ್ಖಾನೆಗಳು ಬಾಕಿ ಉಳಿಸಿಕೊಂಡಿವೆ. ಈ ಸಂಬಂಧ ಬಡ್ಡಿ ಸೇರ್ಪಡೆಯೊಂದಿಗೆ ಬಾಕಿ ಪಾವತಿ ಮಾಡಬೇಕು. ಕಾರ್ಖಾನೆಗಳು ಕಬ್ಬು ನುರಿಯುವ ಕೆಲಸ



ಆರಂಭಿಸುವ ಮುನ್ನ ಹಳೆ ಬಾಕಿ ಪಾವತಿಸಬೇಕು ಎಂದು ಒತ್ತಾಯಿಸಿದರು.

ಜೊತೆಗೆ ಕಳೆದ ರಾಜ್ಯ ಬಿಜೆಪಿ ಸರ್ಕಾರ ಆದೇಶದಂತೆ ಬಾಕಿ ಉಳಿದಿರುವ 150 ರೂ. ಪಾವತಿಸಬೇಕು. ಈ ಎಲ್ಲಾ ಬೇಡಿಕೆಗಳ ಹಿನ್ನೆಲೆಯಲ್ಲಿ ಜು.27ರಂದು ನಂಜನಗೂಡು ತಾಲೂಕಿನ ಬನ್ನಾರಿ ಅಮ್ಮನ್ ಸಕ್ಕರೆ ಕಾರ್ಖಾನೆ ಎದುರು ಪ್ರತಿಭಟನೆ ನಡೆಸಲಾಗುವುದು ಎಂದರು.

ಕೊಬ್ಬರಿ ದರ ಸಂಬಂಧ ತಿಪಟೂರಿನಲ್ಲಿ ಸಭೆ ನಡೆಸಲಾಗಿದೆ. ಕೊಬ್ಬರಿ ವಾಣಿಜ್ಯ ಬೆಳೆ ಮಾತ್ರವಲ್ಲ. ಆಹಾರ ಬೆಳೆಯೂ ಹೌದು. ಕಳೆದ ಬಾರಿ ಮಾರುಕಟ್ಟೆಯಲ್ಲಿ ಕ್ವಿಂಟಾಲ್ ಕೊಬ್ಬರಿಗೆ 19 ಸಾವಿರ ರೂ. ಇತ್ತು. ಈ ಬಾರಿ 6 ಸಾವಿರ ರೂ. ಒಳಗೆ ಇದೆ. ಕೇಂದ್ರ ಸರ್ಕಾರ ಕ್ವಿಂಟಾಲ್ ಕೊಬ್ಬರಿಗೆ 11,750 ರೂ. ಎಂಎಸ್‌ಪಿ ದರ ನಿಗದಿ ಮಾಡಿದೆ. ಆದರೆ ಬೆಳೆ ತೆಗೆಯಲು 16 ಸಾವಿರ ರೂ. ವೆಚ್ಚವಾಗಲಿದೆ. ಕೇಂದ್ರ ಸರ್ಕಾರ ಎಂಎಸ್‌ಪಿ ದರವನ್ನು ಕ್ವಿಂಟಾಲ್‌ಗೆ 20 ಸಾವಿರ ರೂ. ನಿಗದಿ ಮಾಡಬೇಕು. ಇದರೊಂದಿಗೆ ರಾಜ್ಯ ಸರ್ಕಾರ 5 ಸಾವಿರ ರೂ. ಪ್ರೋತ್ಸಾಹಧನ ನೀಡಬೇಕು ಎಂದು ಒತ್ತಾಯಿಸಿದರು.

ಸಂಸದರ ಕಚೇರಿ ಎದುರು ಪ್ರತಿಭಟನೆ: ಅಲ್ಲದೆ, ಈ ಸಂಬಂಧ ಆ.12ರಂದು ತೆಂಗನ್ನು ಪ್ರಧಾನವಾಗಿ ಬೆಳೆಯುವ ಜಿಲ್ಲೆಗಳಲ್ಲಿ ಸಂಸದರ ಕಚೇರಿ ಮುಂದೆ ಪ್ರತಿಭಟನೆ ನಡೆಸಲಿದ್ದೇವೆ. ಮೈಸೂರು ಮತ್ತು ಚಾಮರಾಜನಗರ ಜಿಲ್ಲೆಗಳು ಸೇರಿದಂತೆ ರಾಜ್ಯದ 15 ಜಿಲ್ಲೆಗಳಲ್ಲಿ ತೆಂಗು ಪ್ರಧಾನ ಬೆಳೆಯಾಗಿದೆ. ಅ.2ರಂದು ತಿಪಟೂರಿನಿಂದ ಬೆಂಗಳೂರಿಗೆ ಪಾದಯಾತ್ರೆ ನಡೆಸಲು ಉದ್ದೇಶಿಸಲಾಗಿದೆ. ಇದರಲ್ಲಿ 50 ಸಾವಿರ ತೆಂಗು ಬೆಳೆಗಾರರು ಭಾಗವಹಿಸುವಂತೆ ಸಂಘಟಿಸಲು ತೀರ್ಮಾನಿಸಲಾಗಿದೆ ಎಂದು ವಿವರಿಸಿದರು.

ರೈತ ಸಂಘದ ಮಂಡ್ಯ ಜಿಲ್ಲಾಧ್ಯಕ್ಷ ಕೆಂಪುಗೌಡ ಮಾತನಾಡಿ, ಕೇಂದ್ರ ಸರ್ಕಾರ ಶೇ.10.25ರಷ್ಟು ಸಕ್ಕರೆ ಇಳುವರಿ ಆಧಾರದಲ್ಲಿ ಎಫ್‌ಆರ್‌ಪಿ ದರ ನಿಗದಿ ಮಾಡಿರುವುದು ಸರಿಯಲ್ಲ. ಇದನ್ನು ಶೇ.8.5ರಷ್ಟಕ್ಕೆ ನಿಗದಿ ಮಾಡಬೇಕು. ರಾಜ್ಯ ಸರ್ಕಾರವೂ ಕಬ್ಬಿಗೆ ಎಸ್‌ಎಪಿ ದರ ನೀಡಬೇಕು. ಕೊಬ್ಬರಿಗೆ ರಾಜ್ಯ ಸರ್ಕಾರ 1,250 ರೂ. ಪ್ರೋತ್ಸಾಹ ಧನ ನಿಗದಿ ಮಾಡಿದ್ದು, ಇದನ್ನು ಹೆಚ್ಚಳ ಮಾಡಬೇಕು ಎಂದು ಒತ್ತಾಯಿಸಿದರು.

ರೈತ ಸಂಘದ ಮುಖಂಡರಾದ ಹೊಸಕೋಟೆ ಬಸವರಾಜು, ಮಂಜುನಾಥ್, ರಘು, ಶಂಕರೇಗೌಡ, ವೆಂಕಟೇಶ್‌ಮೂರ್ತಿ, ಮರಂಕಯ್ಯ ಮತ್ತಿತರರು ಸುದ್ದಿಗೋಷ್ಠಿಯಲ್ಲಿ ಉಪಸ್ಥಿತರಿದ್ದರು.

ರೈತರ ಹಾಲಿಗೆ ದರ ಕಡಿತಕ್ಕೆ ಅಸಮಾಧಾನ

ಮೈಸೂರು: ರೈತರಿಂದ ಹಾಲು ಖರೀದಿಗೆ ಖಾಸಗಿ ಡೈರಿಗಳೇ ಹೆಚ್ಚಿನ ಬೆಲೆ ನೀಡುತ್ತಿವೆ. ಆದರೆ ಸಹಕಾರಿ ಸಂಸ್ಥೆಗಳಾದ ಮೈಮುಲ್, ಮನ್ಮುಲ್‌ಗಳು ಕಡಿತ ಮಾಡಿರುವುದು ಸರಿಯಲ್ಲ ಎಂದು ರೈತ ಸಂಘದ ರಾಜ್ಯಾಧ್ಯಕ್ಷ ಬಡಗಲಪುರ ನಾಗೇಂದ್ರ ಅಸಮಾಧಾನ ವ್ಯಕ್ತಪಡಿಸಿದರು.

ಮೈಮುಲ್ ಲೀಟರ್‌ಗೆ 1.50 ರೂ. ಹಾಗೂ ಮನ್ಮುಲ್ ಲೀಟರ್‌ಗೆ 1.75 ರೂ. ಕಡಿತ ಮಾಡಿವೆ. ಇಡೀ ಕರ್ನಾಟಕದಲ್ಲಿ ಸಹಕಾರಿ ವ್ಯವಸ್ಥೆಯ ಯಾವುದೇ ಡೈರಿಯು ರೈತರಿಂದ ಖರೀದಿಸುವ ಹಾಲಿಗೆ ದರ ಕಡಿತ ಮಾಡುವುದನ್ನು ಒಪ್ಪಲು ಸಾಧ್ಯವಿಲ್ಲ ಎಂದರು.

ರೈತ ಸಂಘದ ಮಂಡ್ಯ ಜಿಲ್ಲಾಧ್ಯಕ್ಷ ಕೆಂಪುಗೌಡ ಮಾತನಾಡಿ, ಕಬ್ಬಿನ ಬಾಕಿ ಪಾವತಿಗೆ ಒತ್ತಾಯಿಸಿ ಹಾಗೂ ಮನ್ಮುಲ್ ಹಾಲು ಉತ್ಪಾದಕರಿಂದ ಖರೀದಿ ಮಾಡುವ ಹಾಲಿಗೆ ದರ ಕಡಿತ ಮಾಡಿರುವುದನ್ನು ಖಂಡಿಸಿ ಜು.31ರಂದು ಮಂಡ್ಯ ಡಿಸಿ ಕಚೇರಿ ಎದುರು ಪ್ರತಿಭಟನೆ ಹಮ್ಮಿಕೊಳ್ಳಲಾಗಿದೆ. ಈ ಪ್ರತಿಭಟನೆಗೆ ಮೈಸೂರು, ಚಾಮರಾಜನಗರ ಜಿಲ್ಲೆಗಳ ರೈತರೂ ಭಾಗವಹಿಸಲಿದ್ದಾರೆ ಎಂದು ಹೇಳಿದರು.

Printed by T.S. Gopinath, Published by M. Govinde Gowda on behalf of Academy Newspapers Private Limited, 15-C Industrial 'A' Layout, Bannimantap, Mysore-570 015 and Printed at Academy Newspapers Private Limited, 15-C Industrial 'A' Layout, Bannimantap, Mysore-570 015 and Published at 15-C Industrial 'A' Layout, Bannimantap, Mysore-570 015, Editor: M. Govinde Gowda Ph: 2496520 / 2496521 / 2496526 / 2496527 / 2496528. Fax: 0821-2496525. CITY OFFICES: Visveswaraya Building, III Floor, K.R. CIRCLE, MYSORE-570 001, Ph: 2431774 and No. 114, D. DEVARAJ URS ROAD (Opposite Big Bus), MYSORE-570 001. Ph: 2428695. RNI Reg. No. 36581 / 1980 E-mail address: news@mysurumithra.com For advertisements: ad@mysurumithra.com

ಹಾವೇರಿ ಜಿಲ್ಲಾಸ್ಪತ್ರೆ ಅವ್ಯವಸ್ಥೆ ಕಂಡು ಸಿಎಂ ಸಿದ್ದರಾಮಯ್ಯ ಕೆಂಡಾಮಂಡಲ
ಸ್ಥಳದಲ್ಲಿಯೇ ಮುಖ್ಯ ಎಂಜಿನಿಯರ್ ಅಮಾನತು!



ಹಾವೇರಿ: ಮುಖ್ಯಮಂತ್ರಿ ಸಿದ್ದರಾಮಯ್ಯ ಅವರು ಹಾವೇರಿ ಜಿಲ್ಲಾಸ್ಪತ್ರೆಗೆ ದಿಢೀರ್ ಭೇಟಿ ನೀಡಿ, ಅಲ್ಲಿನ ಅವ್ಯವಸ್ಥೆ ಕಂಡು ಕೆಂಡಾಮಂಡಲರಾದರು. ಜಿಲ್ಲಾಸ್ಪತ್ರೆಯ ಮಕ್ಕಳ ವಾರ್ಡ್, ತಾಯಂದಿರ ವಾರ್ಡ್ ಸೇರಿದಂತೆ ಬಹುತೇಕ ವಾರ್ಡ್‌ಗಳು ಮಳೆಯಿಂದ ಸೋರುತ್ತಿದ್ದು, ರೋಗಿಗಳಿಗೆ ತೀವ್ರ ಸಮಸ್ಯೆಯಾಗಿರುವ ಹಿನ್ನೆಲೆಯಲ್ಲಿ ಇಂದು ಭೇಟಿ ನೀಡಿ ಪರಿಶೀಲಿಸಿದ ಮುಖ್ಯಮಂತ್ರಿಗಳು, ಮಹಿಳೆಯರು ಮತ್ತು ಮಕ್ಕಳನ್ನು ಮಾತನಾಡಿಸಿ ಅಲ್ಲಿನ ಸಮಸ್ಯೆಗಳನ್ನು ಆಲಿಸಿದರು. ಬಳಿಕ ಜಿಲ್ಲಾಸ್ಪತ್ರೆಯ ಸರ್ಜನ್, ವೈದ್ಯಾಧಿಕಾರಿಗಳು, ಹೆಲ್ತ್ ಎಂಜಿನಿಯರ್ ಸೇರಿದಂತೆ ಎಲ್ಲರಿಗೂ ತರಾಟೆಗೆ ತೆಗೆದುಕೊಂಡರು. ಸ್ಥಳದಿಂದಲೇ ಆರೋಗ್ಯ ಇಲಾಖೆ ಹೆಚ್ಚುವರಿ ಮುಖ್ಯ ಕಾರ್ಯದರ್ಶಿ ಟಿ.ಕೆ. ಅನಿಲ್‌ಕುಮಾರ್ ಅವರಿಗೆ ಕರೆ ಮಾಡಿ, ಮುಖ್ಯ ಎಂಜಿನಿಯರ್ ಮಂಜುನಾಥ್ ಅವರನ್ನು ತಕ್ಷಣ ಅಮಾನತುಗೊಳಿಸುವಂತೆ ಸೂಚಿಸಿದರು.

ಮಕ್ಕಳ ವಾರ್ಡ್, ತುರ್ತು ಚಿಕಿತ್ಸಾ ವಾರ್ಡ್, ತಾಯಂದಿರ ವಾರ್ಡ್ ಸೇರಿದಂತೆ ವಿವಿಧ ವಾರ್ಡ್‌ಗಳಿಗೆ ಭೇಟಿ ನೀಡಿ, ಮಳೆಯಿಂದ ಸೋರುತ್ತಿರುವ ಗೋಡೆ, ಚಾವಣಿ ಕಂಡು ಅಸಮಾಧಾನ ವ್ಯಕ್ತಪಡಿಸಿದ ಅವರು, ರೋಗಿಗಳನ್ನು ಬೇರೆ ಕಡೆ ಸ್ಥಳಾಂತರ ಮಾಡದೆ, ಅವರ ವಾರ್ಡಿನ ಮೇಲ್ಭಾಗ ಹೇಗೆ ಕಟ್ಟಡ ಕಾಮಗಾರಿ ನಡೆಸಿದ್ದಿರಿ ಎಂದು ಸ್ಥಳದಲ್ಲೇ ಇದ್ದ ಜಿಲ್ಲಾ ಶಸ್ತ್ರಚಿಕಿತ್ಸಕ, ಎಂಜಿನಿಯರ್ ಅನ್ನು ತರಾಟೆಗೆ ತೆಗೆದುಕೊಂಡ ಮುಖ್ಯಮಂತ್ರಿ ಸಿದ್ದರಾಮಯ್ಯ ಅವರು, ಇನ್ನು ನಾಲ್ಕು ದಿನಗಳಲ್ಲಿ ಮಳೆ ಸೋರಿಕೆ ತಡೆಗಟ್ಟಬೇಕು ಎಂದು ಅಧಿಕಾರಿಗಳಿಗೆ ಸೂಚನೆ ನೀಡಿದರು.

ಗೃಹಲಕ್ಷ್ಮಿ ಅರ್ಜಿ ಸಲ್ಲಿಕೆಗೆ ಹಣ ಕೇಳಿದರೆ ಕ್ರಿಮಿನಲ್ ಮೊಕದ್ದಮೆ
ಮುಖ್ಯಮಂತ್ರಿ ಸಿದ್ದರಾಮಯ್ಯ ಎಚ್ಚರಿಕೆ



ಹಾವೇರಿ: ರಾಜ್ಯ ಸರ್ಕಾರದ ಮಹತ್ವಾಕಾಂಕ್ಷೆಯ ಗೃಹಲಕ್ಷ್ಮಿ ಯೋಜನೆಯ ಅರ್ಜಿ ಸಲ್ಲಿಕೆಗೆ ಯಾರೊಬ್ಬರೂ ಹಣ ನೀಡುವ ಅಗತ್ಯವಿಲ್ಲ, ಈ ಪ್ರಕ್ರಿಯೆ ಸಂಪೂರ್ಣ ಉಚಿತವಾಗಿರಲಿದೆ ಎಂದು ಮುಖ್ಯಮಂತ್ರಿ ಸಿದ್ದರಾಮಯ್ಯ ಹೇಳಿದ್ದಾರೆ.

ಸುದ್ದಿಗಾರರೊಂದಿಗೆ ಮಾತನಾಡಿದ ಅವರು,ಅರ್ಜಿ ಸಲ್ಲಿಕೆಗಾಗಿ ಯಾರಾದರೂ ಹಣ ನೀಡುವಂತೆ ಒತ್ತಾಯಿಸಿದಲ್ಲಿ ಅಥವಾ ಹಣ ಪಡೆದ ಬಗ್ಗೆ ದೂರುಗಳು ಬಂದಲ್ಲಿ ಅಂತಹವರ ವಿರುದ್ಧ ಕ್ರಿಮಿನಲ್ ಮೊಕದ್ದಮೆಯನ್ನು ದಾಖಲು ಮಾಡಲಾಗುವುದು ಎಂದು ಎಚ್ಚರಿಕೆ ನೀಡಿದರು.

ಮಧ್ಯವರ್ತಿಗಳ ಹಾವಳಿಯಿಲ್ಲದೆ ಸರ್ಕಾರದ ಸೌಲಭ್ಯಗಳನ್ನು ನೇರವಾಗಿ ಜನರಿಗೆ ತಲುಪಿಸಬೇಕು, ಸರ್ಕಾರದ ಯೋಜನೆಗಳ ಗರಿಷ್ಠ ಲಾಭ ಫಲಾನುಭವಿಗಳಿಗೆ ಸಿಗಬೇಕು ಎಂಬುದು ನಮ್ಮ ಆಶಯವಾಗಿದೆ ಎಂದರು.

ನಂತರ ಜಿಲ್ಲಾ ಪ್ರಗತಿ ಪರಿಶೀಲನಾ ಸಭೆಯಲ್ಲಿ ಮಾತನಾಡಿದ ಮುಖ್ಯಮಂತ್ರಿಗಳು, ಸದ್ಯಕ್ಕೆ ಬಾಪೂಜಿ ಸೇವಾ ಕೇಂದ್ರ, ಗ್ರಾಮ ಒನ್ ಮತ್ತು ಕರ್ನಾಟಕ ಒನ್ ಸಾರ್ವಜನಿಕ ಸೇವಾ ಕೇಂದ್ರಗಳಲ್ಲಿ ನೋಂದಣಿ ಮಾಡಲಾಗುತ್ತಿದೆ ಯೋಜನೆಯ ನೋಂದಣಿಗಾಗಿ ಪ್ರಜಾಪ್ರತಿನಿಧಿಗಳನ್ನು ಸರ್ಕಾರ ಶೀಘ್ರ ನೇಮಕ ಮಾಡಿಕೊಳ್ಳಲಿದೆ. ಬಳಿಕ ಪ್ರಜಾಪ್ರತಿನಿಧಿಗಳೇ ಮನೆ, ಮನೆಗಳಿಗೆ ಭೇಟಿ ನೀಡಿ ನೋಂದಣಿ ಮಾಡಿಕೊಳ್ಳಲಿದ್ದಾರೆ ಎಂದರು.

ಅಗಸ್ಟ್ 1 ರಿಂದ ರಾಜ್ಯ ಬಜೆಟ್ ಅನುಷ್ಠಾನಕ್ಕೆ ಬರಲಿದ್ದು, 5 ಲಕ್ಷ ರೂಪಾಯಿಗಳವರೆಗೆ ಶೂನ್ಯ ಬಡ್ಡಿ ದರದಲ್ಲಿ ಹಾಗೂ 15 ಲಕ್ಷ ರೂಪಾಯಿಗಳವರೆಗೆ ಶೇ. 3 ರ ಬಡ್ಡಿ ದರದಲ್ಲಿ ರೈತರಿಗೆ ಸಾಲ ನೀಡಬೇಕು ಎಂದು ಸಿಎಂ ಸಿದ್ದರಾಮಯ್ಯ ಅಧಿಕಾರಿಗಳಿಗೆ ಸೂಚಿಸಿದರು. ಗೃಹಜ್ಯೋತಿ ಯೋಜನೆ ಮುಂದಿನ ತಿಂಗಳು 5 ರಂದು ಜಾರಿಗೆ ಬರಲಿದ್ದು, ಅಷ್ಟರಲ್ಲಿ ಎಲ್ಲ ಗ್ರಾಹಕರಿಂದ ಅರ್ಜಿ ಪಡೆದು ವಿದ್ಯುತ್ ಮೀಟರ್‌ಗೆ ಆಧಾರ್ ಲಿಂಕ್ ಮಾಡಿಸಬೇಕು ಎಂದರು.

ಸ್ವಾತಂತ್ರ್ಯ ನಂತರ SC, ST ಹೊರತುಪಡಿಸಿ ಜಾತಿ ಆಧಾರಿತ ಜನಗಣತಿ ನಡೆದಿಲ್ಲ: ಕೇಂದ್ರ



ನವದೆಹಲಿ: ಸ್ವಾತಂತ್ರ್ಯ ನಂತರ ಪರಿಶಿಷ್ಟ ಜಾತಿ (ಎಸ್‌ಸಿ) ಮತ್ತು ಪರಿಶಿಷ್ಟ ಪಂಗಡ(ಎಸ್‌ಟಿ) ಹೊರತುಪಡಿಸಿ ಇತರೆ ಯಾವುದೇ ಜಾತಿವಾರು ಜನಗಣತಿಯನ್ನು ನಡೆಸಿಲ್ಲ ಎಂದು ಕೇಂದ್ರ ಸರ್ಕಾರ ಮಂಗಳವಾರ ಲೋಕಸಭೆಗೆ ತಿಳಿಸಿದೆ. ಮುಂಬರುವ ಜನಗಣತಿಯಲ್ಲಿ ಜಾತಿ ವಿವರಗಳನ್ನು ಸಂಗ್ರಹಿಸಲು ಕೆಲವು ರಾಜಕೀಯ ಪಕ್ಷಗಳು ಮತ್ತು ಕೆಲವು ಸಂಘಟನೆಗಳು ವಿನಂತಿಸಿವೆ ಎಂದು ಕೇಂದ್ರ ಗೃಹ ಖಾತೆ ರಾಜ್ಯ ಸಚಿವ ನಿತ್ಯಾನಂದ ರೈ ಹೇಳಿದ್ದಾರೆ. ಜನಗಣತಿಯಲ್ಲಿ, ಸಂವಿಧಾನ(ಪರಿಶಿಷ್ಟ ಜಾತಿಗಳು)ದ ಆದೇಶ, 1950 ಮತ್ತು ಸಂವಿಧಾನ (ಪರಿಶಿಷ್ಟ ಪಂಗಡಗಳು) ಆದೇಶ, 1950ರ ಪ್ರಕಾರ ಪರಿಶಿಷ್ಟ ಜಾತಿಗಳು(ಎಸ್‌ಸಿಗಳು) ಮತ್ತು ಪರಿಶಿಷ್ಟ ಪಂಗಡಗಳು (ಎಸ್‌ಟಿಗಳು) ಎಂದು ನಿರ್ದಿಷ್ಟವಾಗಿ ಅಧಿಸೂಚಿಸಲಾದ ಜಾತಿಗಳು ಮತ್ತು ಬುಡಕಟ್ಟುಗಳನ್ನು ಕಾಲಕಾಲಕ್ಕೆ ತಿದ್ದುಪಡಿ ಮಾಡಲಾಗಿದೆ ಎಂದು ಸಚಿವರು ತಿಳಿಸಿದ್ದಾರೆ.

ಸ್ವಾತಂತ್ರ್ಯದ ನಂತರ ಕೇಂದ್ರ ಸರ್ಕಾರವು ಜನಗಣತಿಯಲ್ಲಿ ಎಸ್‌ಸಿ ಮತ್ತು ಎಸ್‌ಟಿಗಳನ್ನು ಹೊರತುಪಡಿಸಿ ಜಾತಿವಾರು ಜನಗಣತಿ ನಡೆಸಿಲ್ಲ ಎಂದು ನಿತ್ಯಾನಂದ ರೈ ಅವರು ಲಿಖಿತ ಪ್ರಶ್ನೆಗೆ ಉತ್ತರಿಸಿದ್ದಾರೆ.

ವಿವಿಧ ಸೌಲಭ್ಯಗಳಿಗೆ ಅರ್ಜಿ ಆಹ್ವಾನ

ಮೈಸೂರು,ಜು.25– ಶ್ರೀರಾಂಪುರ ಪಟ್ಟಣ ಪಂಚಾಯಿತಿ 2023–24 ನೇ ಸಾಲಿನ ಶೇ.24.10 ರಡಿ ಪರಿಶಿಷ್ಟ ಜಾತಿ, ಪರಿಶಿಷ್ಟ ಪಂಗಡ ಮತ್ತು ಪೌರಕಾರ್ಮಿಕರಿಗೆ ಶೇ.7.25 ರಡಿ ಇತರೆ ಬಡಜನರಿಗೆ ಮತ್ತು ಶೇ.5 ರ ಯೋಜನೆಯಡಿ ವಿಶೇಷಚೇತನ ಬಡಜನರ ಕಲ್ಯಾಣಕ್ಕಾಗಿ ವಿವಿಧ ವೈಯಕ್ತಿಕ ಸೌಲಭ್ಯವನ್ನು ಕಲ್ಪಿಸಲು ಅರ್ಜಿಯನ್ನು ಆಹ್ವಾನಿಸಲಾಗಿದೆ. ವಿವಿಧ ಯೋಜನೆಯಡಿಯಲ್ಲಿ ಆಯ್ಕೆಯಾದ ಪರಿಶಿಷ್ಟ ಜಾತಿಯ ಫಲಾನುಭವಿಗಳಿಗೆ 48.000, ಪರಿಶಿಷ್ಟ ವರ್ಗದ ಫಲಾನುಭವಿಗಳಿಗೆ 18.000, ಪೌರಕಾರ್ಮಿಕರ ಕುಟುಂಬಗಳಿಗೆ ವೈದ್ಯಕೀಯ ವೆಚ್ಚ ಮರುಪಾವತಿ, ಕ್ರೀಡಾ ಪ್ರೋತ್ಸಾಹ ಧನಕ್ಕೆ 1.11.000, ಹಿಂದುಳಿದ ವರ್ಗಗಳ ಫಲಾನುಭವಿಗಳಿಗೆ 24,000, ವಿಕಲಚೇತನರ ಕುಟುಂಬದವರಿಗೆ ಶೌಚಾಲಯ ನಿರ್ಮಾಣಕ್ಕೆ–20,000 ರೂ.ಗಳನ್ನು ವಿವಿಧ ಯೋಜನೆಗಳ ಮೂಲಕ ನೀಡಲಾಗುತ್ತಿದ್ದು, ಅರ್ಜಿಯನ್ನು ಆಹ್ವಾನಿಸಲಾಗಿದೆ. ಅರ್ಜಿ ಸಲ್ಲಿಸಲು ಆಗಸ್ಟ್ 10 ಕೊನೆಯ ದಿನಾಂಕವಾಗಿದ್ದು, ಸಂಬಂಧಿತ ದಾಖಲೆಗಳೊಂದಿಗೆ ಪಟ್ಟಣ ಪಂಚಾಯಿತಿ ಕಾರ್ಯಾಲಯಕ್ಕೆ ಸಲ್ಲಿಸುವಂತೆ ತಿಳಿಸಲಾಗಿದೆ.

ಮೈಸೂರಿನ ಡಾ.ಗಂಗೂಬಾಯಿ ಹಾನಗಲ್ ಸಂಗೀತ ವಿಶ್ವವಿದ್ಯಾನಿಲಯ ಆರಂಭದಿಂದಲೂ ಅಪಸ್ವರ



ಖ್ಯಾತ ಹಿಂದೂಸ್ಥಾನಿ ಗಾಯಕಿ ಡಾ.ಗಂಗೂಬಾಯಿ ಹಾನಗಲ್

- ಭಾರತದ 2 ನೇ ಸಂಗೀತ ವಿಶ್ವವಿದ್ಯಾನಿಲಯಕ್ಕೆ ದುಸ್ಥಿತಿ
- ವರ್ಷಕ್ಕೆ ಒಂದೂವರೆ ಕೋಟಿಯಷ್ಟೆ ಅನುದಾನ
- ಪೂರ್ಣ ಪ್ರಮಾಣದ ಅಧ್ಯಾಪಕರಿಲ್ಲ, ಪ್ರಾಧ್ಯಾಪಕರಿಲ್ಲ
- ಅತಿಥಿ ಅಧ್ಯಾಪಕರಿಗೆ ಒಂದೂವರೆ ವರ್ಷದಿಂದ ವೇತನವಿಲ್ಲ
- ವಿಶ್ವವಿದ್ಯಾನಿಲಯದಲ್ಲಿ ಸಂಶೋಧನೆ, ಆವಿಷ್ಕಾರಗಳಿಲ್ಲ!

■ ಬಾಪುಲಿಂಗರಾಜ್ ಅರಸ್

ಮೈಸೂರು, ಜು.25– ಕರ್ನಾಟಕದ ಸಂಗೀತ, ನೃತ್ಯ, ಜಾನಪದ ಕಲೆಯನ್ನು ಇಂದಿನ ಯುವ ಪೀಳಿಗೆಗೆ ಕಲಿಸಲು ಮೈಸೂರಿನಲ್ಲಿ ಸ್ಥಾಪಿಸಿರುವ ಕರ್ನಾಟಕ ರಾಜ್ಯ ಡಾ.ಗಂಗೂಬಾಯಿ ಹಾನಗಲ್ ಸಂಗೀತ ಮತ್ತು ಪ್ರದರ್ಶಕ ಕಲೆಗಳ ವಿಶ್ವವಿದ್ಯಾನಿಲಯ ಈಗ ತಾಳ ತಪ್ಪಿದೆ. ಆಟಕ್ಕುಂಟು ಲೆಕ್ಕಕ್ಕಿಲ್ಲ ಎಂಬಂತೆ ಇರುವ ವಿಶ್ವವಿದ್ಯಾನಿಲಯ ಸೊರಗಿದೆ. ಸಂಗೀತ ಮತ್ತು ಪ್ರದರ್ಶಕ ಕಲೆಗಳ ಅಧ್ಯಯನ ಮತ್ತು ಸಂಶೋಧನೆಗಾಗಿ ಕರ್ನಾಟಕ ಸರ್ಕಾರ 2008, ಫೆಬ್ರವರಿ 14 ರಂದು ಸಂಗೀತ ವಿಶ್ವವಿದ್ಯಾನಿಲಯವನ್ನು ಸ್ಥಾಪಿಸಿತು. ಖ್ಯಾತ ಹಿಂದೂಸ್ಥಾನಿ ಗಾಯಕಿ ಡಾ.ಗಂಗೂಬಾಯಿ ಹಾನಗಲ್ ಅವರ ಹೆಸರನ್ನು ಈ ವಿಶ್ವವಿದ್ಯಾನಿಲಯಕ್ಕೆ ಇಡಲಾಯಿತು.

ಉತ್ತರ ಭಾರತದ ಛತ್ತೀಸ್‌ಘಡ್‌ನಲ್ಲಿ ಇಂದಿರಾಗಾಂಧಿ ಕಲಾ ವಿಶ್ವವಿದ್ಯಾನಿಲಯವಿದೆ. ಅದೇ ಮಾದರಿಯಲ್ಲಿ ಕರ್ನಾಟಕದ ಸಂಗೀತ, ನೃತ್ಯ ಹಾಗೂ ಜಾನಪದ ಕಲೆಯನ್ನು ಶೈಕ್ಷಣಿಕವಾಗಿ ವಿದ್ಯಾರ್ಥಿಗಳಿಗೆ ಕಲಿಸುವ ಉದ್ದೇಶದಿಂದ ಈ ವಿಶ್ವವಿದ್ಯಾನಿಲಯವನ್ನು ಸ್ಥಾಪನೆ ಮಾಡಲಾಯಿತು. ಈ ಮೂಲಕ ದೇಶದಲ್ಲಿರುವ ಎರಡು ಸಂಗೀತ ವಿಶ್ವವಿದ್ಯಾನಿಲಯಗಳಲ್ಲಿ ಇದು ಎರಡನೆಯದಾಗಿದೆ. ಅದೂ ದಕ್ಷಿಣ ಭಾರತದ ಏಕಮಾತ್ರ ಸಂಗೀತ ವಿಶ್ವವಿದ್ಯಾನಿಲಯ ಇದಾಗಿದೆ. ಮೈಸೂರಿನ ಲಕ್ಷ್ಮಿಪುರಂನ ಜೆಎಲ್‌ಬಿ ರಸ್ತೆಯ ಪಾರಂಪರಿಕ ಕಟ್ಟಡದಲ್ಲಿ ಈ ವಿಶ್ವವಿದ್ಯಾನಿಲಯ ಕಾರ್ಯನಿರ್ವಹಿಸುತ್ತಿದೆ. ಸೂಕ್ತ ನಿರ್ವಹಣೆ ಇಲ್ಲದೆ ಪಾರಂಪರಿಕ ಕಟ್ಟಡ ಹೇಗೆ ಸೊರಗಿದೆಯೋ ಹಾಗೆ ಸರ್ಕಾರದ ಪೋಷಣೆ ಇಲ್ಲದೆ ಈ ವಿಶ್ವವಿದ್ಯಾನಿಲಯ ಕೂಡ ಸೊರಗಿದೆ.

ಕರ್ನಾಟಕ ಸಂಗೀತ ಮತ್ತು ಜಾನಪದ ಪರಂಪರೆಯನ್ನು ಉತ್ತೇಜಿಸುವ ಪರಿಕಲ್ಪನೆಯಲ್ಲಿ ಅಂದಿನ ಸರ್ಕಾರ ಸಂಗೀತ ವಿಶ್ವವಿದ್ಯಾನಿಲಯವನ್ನು ಸ್ಥಾಪನೆ ಮಾಡಿತು. ಯಾವುದೇ ಸವಲತ್ತು ನೀಡದೆ ನಾಮಕಾವಸ್ಥೆಗೆ ಸ್ಥಾಪನೆ ಮಾಡಿರುವ ಈ ವಿಶ್ವವಿದ್ಯಾನಿಲಯ ಇದ್ದೂ ಇಲ್ಲದಂತಾಗಿದೆ. ಬೇರೆ ವಿಶ್ವವಿದ್ಯಾನಿಲಯಗಳಿಗೆ ಸರ್ಕಾರ ನೂರಾರು ಕೋಟಿ ರೂಪಾಯಿ ಅನುದಾನ ನೀಡಿದರೆ ಈ ವಿಶ್ವವಿದ್ಯಾನಿಲಯಕ್ಕೆ ವರ್ಷಕ್ಕೆ ಕೇವಲ ಒಂದೂವರೆ ಕೋಟಿ ರೂಪಾಯಿಗಳನ್ನು ಮಾತ್ರ ನೀಡುತ್ತಿದೆ.

ಸಂಗೀತ ವಿಶ್ವವಿದ್ಯಾನಿಲಯ ಸ್ಥಾಪನೆಯಾಗಿ 15 ವರ್ಷಗಳಾದರೂ ಈತನಕ ಒಂದೇ ಒಂದು ಸಂಶೋಧನೆ ಈ ವಿಶ್ವವಿದ್ಯಾನಿಲಯದ ಪದಕೋಶದೊಳಗೆ ಸುಳಿದಿಲ್ಲ. ಈ ವಿಶ್ವವಿದ್ಯಾನಿಲಯದಲ್ಲಿ ಸಂಶೋಧನಾ ಪ್ರಾಧ್ಯಾಪಕರಿರಲಿ, ಪೂರ್ಣ ಪ್ರಮಾಣದ ಅಧ್ಯಾಪಕರೂ ಇಲ್ಲ, ಪ್ರಾಧ್ಯಾಪಕರೂ ಇಲ್ಲ. 22 ಅತಿಥಿ ಅಧ್ಯಾಪಕರು ಇಲ್ಲಿ ಕಾರ್ಯ ನಿರ್ವಹಿಸುತ್ತಿದ್ದು, ಒಂದೂವರೆ ವರ್ಷದಿಂದ ಅವರಿಗೆ ಸಂಬಳವೇ ಆಗಿಲ್ಲ. ಇನ್ನು ಇಲ್ಲಿನ ಸಿಬ್ಬಂದಿಯ ಪರಿಸ್ಥಿತಿ ಇದಕ್ಕಿಂತ ಭಿನ್ನವಾಗಿಲ್ಲ. ಕುಲಪತಿ, ಕುಲಸಚಿವರು, ಸಹಾಯಕ ಕುಲಸಚಿವರನ್ನು ಹೊರತುಪಡಿಸಿ ಯಾರೂ ಇಲ್ಲಿ ಸರ್ಕಾರಿ ನೌಕರರಲ್ಲ.





ಮೊದಲು ವಿಶ್ವವಿದ್ಯಾನಿಲಯ ಗಟ್ಟಿಯಾಗಿ ನಿಲ್ಲಬೇಕು. ಆಗ ಮಾತ್ರ ಗುಣಮಟ್ಟದ ಶಿಕ್ಷಣ ನೀಡಲು ಸಾಧ್ಯ. ಆದರೆ ವಿಶ್ವವಿದ್ಯಾನಿಲಯಕ್ಕೆ ಗಟ್ಟಿತನ ಇಲ್ಲದಿರುವ ಕಾರಣ ಇಲ್ಲಿ ಗುಣಮಟ್ಟದ ಶಿಕ್ಷಣ ದೊರೆಯುತ್ತಿಲ್ಲ. ಇದರಿಂದ ಸಂಗೀತ ವಿಶ್ವವಿದ್ಯಾನಿಲಯಕ್ಕೆ ವಿದ್ಯಾರ್ಥಿಗಳು ಬಹಳ ಕಡಿಮೆ. ಒಂದು ವರ್ಷಕ್ಕೆ ಗರಿಷ್ಠ 130 ವಿದ್ಯಾರ್ಥಿಗಳು ಪದವಿ ಪಡೆಯುತ್ತಾರೆ. ಇಲ್ಲಿ ಪದವಿ ಪಡೆದ ಬಹಳಷ್ಟು ವಿದ್ಯಾರ್ಥಿಗಳು ಪ್ರತಿಷ್ಠಿತ ಶಾಲಾ–ಕಾಲೇಜುಗಳಲ್ಲಿ ಸಂಗೀತ ಶಿಕ್ಷಕರಾಗಿ ಕೆಲಸ ನಿರ್ವಹಿಸುತ್ತಿದ್ದಾರೆ. ರಾಷ್ಟ್ರೀಯ ಶಿಕ್ಷಣ ನೀತಿಯಲ್ಲಿ ಶಾಲಾ–ಕಾಲೇಜುಗಳಲ್ಲಿ ಸಂಗೀತ ಶಿಕ್ಷಣವನ್ನು ಕಡ್ಡಾಯಗೊಳಿಸಲಾಗಿದೆ. ಈ ಮೂಲಕ ಸಂಗೀತ ಶಿಕ್ಷಕರಿಗೆ ಉದ್ಯೋಗವಕಾಶವಿದೆ. ಆದರೆ ಸಂಗೀತ ವಿಶ್ವವಿದ್ಯಾನಿಲಯದಲ್ಲಿ ಸೂಕ್ತ ವ್ಯವಸ್ಥೆ ಇಲ್ಲದ ಕಾರಣ ಸಂಗೀತಾಸಕ್ತ ವಿದ್ಯಾರ್ಥಿಗಳು ಇಲ್ಲಿ ದಾಖಲಾಗಲು ಹಿಂದೇಟು ಹಾಕುತ್ತಿದ್ದಾರೆ.

ವಿಶ್ವವಿದ್ಯಾನಿಲಯದ ಅವ್ಯವಸ್ಥೆಗೆ ಕಟ್ಟಡ ಕನ್ನಡಿ ಹಿಡಿದಂತಿದೆ. ಕಟ್ಟಡದಲ್ಲಿ 15 ತರಗತಿಗಳನ್ನು ನಡೆಸಬೇಕಿದೆ. ಪಾರಂಪರಿಕ ಕಟ್ಟಡವಾದ ಕಾರಣ ವಯಸ್ಸಿನ ಸಹಜ ಕಾರಣದಿಂದ ಸತ್ವ ಕಳೆದುಕೊಂಡಿದೆ. ಸರ್ಕಾರದ ಅನುದಾನದ ಕೊರತೆಯಿಂದ ನಿರ್ವಹಣೆ ಇಲ್ಲದೆ ಕಟ್ಟಡ ಕೂಡ ಸೊರಗಿದೆ. ವಿದ್ಯಾರ್ಥಿಗಳ ಸಂಖ್ಯೆ ಬಹಳ ಕಡಿಮೆ ಇರುವ ಕಾರಣ ಆಂತರಿಕ ಸಂಪನ್ಮೂಲ ಕೂಡ ಇಲ್ಲದಂತಾಗಿದೆ. ಒಂದು ವರ್ಷಕ್ಕೆ ಕೇವಲ ಒಂದೂವರೆ ಕೋಟಿ ರೂಪಾಯಿ ಸಂಗೀತ ವಿಶ್ವವಿದ್ಯಾನಿಲಯಕ್ಕೆ ಸರ್ಕಾರ ನೀಡಲಿದೆ. ಈ ಹಣದಲ್ಲೇ ವಿಶ್ವವಿದ್ಯಾನಿಲಯದ ವಿದ್ಯುತ್ ಶುಲ್ಕ, ನೀರಿನ ಶುಲ್ಕ, ಪೆಟ್ರೋಲ್, ಡೀಸೆಲ್, ರಕ್ಷಣಾ ಸಿಬ್ಬಂದಿ ಶುಲ್ಕ, ಘಟಿಕೋತ್ಸವ, ಸಮಾವೇಶ ಸೇರಿದಂತೆ ಎಲ್ಲಾ ವೆಚ್ಚಗಳನ್ನು ಭರಿಸಬೇಕಿದೆ. ಸರ್ಕಾರ ನೀಡುವ ಈ ಅನುದಾನ ಆನೆ ಹೊಟ್ಟೆಗೆ ಅರೆಕಾಸಿನ ಮಜ್ಜಿಗೆಯಂತಾಗಿದೆ. ವಿಶ್ವವಿದ್ಯಾನಿಲಯ ಸ್ಥಾಪನೆ ಆದ ದಿನದಿಂದ ಇಲ್ಲಿ ತನಕ ಅಧಿಕಾರಕ್ಕೆ ಬಂದ ಎಲ್ಲಾ ಸರ್ಕಾರಕ್ಕೆ ಹಾಗೂ ರಾಜ್ಯಪಾಲರಿಗೆ ಮನವಿ ಮಾಡಿದರೂ ಈ ವಿಶ್ವವಿದ್ಯಾನಿಲಯಕ್ಕೆ ಸೂಕ್ತ ಅನುದಾನ ದೊರೆತಿಲ್ಲ. ಎಲ್ಲಾ ಕುಲಪತಿಗಳು ಪತ್ರ ಬರೆದು ಬರೆದು ಪೆನ್ ಇಂಕ್ ಖಾಲಿಯಾಗಿದೆಯೇ ಹೊರತು ಬೇಡಿಕೆ ಮಾತ್ರ ಈಡೇರಿಲ್ಲ.

ಸರ್ಕಾರಕ್ಕೆ ಪತ್ರ ಬರೆಯುತ್ತಲೇ ಇದ್ದೇವೆ...

ಅನುದಾನದ ಕೊರತೆಯಿಂದ ಬಹಳಷ್ಟು ಸಮಸ್ಯೆಗಳಿವೆ. ಎರಡು ತಿಂಗಳಿಗೆ ಒಂದರಂತೆ ಸರ್ಕಾರಕ್ಕೆ ಪತ್ರ ಬರೆಯುತ್ತಿದ್ದೇನೆ. ಅಲ್ಲದೆ ರಾಜ್ಯಪಾಲರು ಹಾಗೂ ಉನ್ನತ ಶಿಕ್ಷಣ ಸಚಿವರನ್ನು ಭೇಟಿ ಮಾಡಿ ವಸ್ತುಸ್ಥಿತಿ ಮನವರಿಕೆ ಮಾಡಿಕೊಟ್ಟು ಬರುತ್ತಿದ್ದೇನೆ. ಆದರೆ ಈ ತನಕ ನಮ್ಮ ಬೇಡಿಕೆ ಈಡೇರಿಲ್ಲ ಎಂದು ಕರ್ನಾಟಕ ರಾಜ್ಯ ಡಾ.ಗಂಗೂಬಾಯಿ ಹಾನಗಲ್ ಸಂಗೀತ ಮತ್ತು ಪ್ರದರ್ಶಕ ಕಲೆಗಳ ವಿಶ್ವ ವಿದ್ಯಾನಿಲಯ ಕುಲಪತಿ ಪ್ರೊ. ನಾಗೇಶ್ ವಿ.ಬೆಟ್ಟಕೋಟೆ ಅಸಹಾಯಕತೆ ವ್ಯಕ್ತಪಡಿಸಿದರು.

ಅತಿಥಿ ಅಧ್ಯಾಪಕರಿಗೆ ಒಂದೂವರೆ ವರ್ಷದಿಂದ ವೇತನ ನೀಡಿಲ್ಲ. ಅವರು ಕೂಡ ವೇತನವಿಲ್ಲದೆ ಕಂಗಾಲಾಗಿದ್ದಾರೆ. ಇಂತಹ ಹತ್ತು ಹಲವು ಸಮಸ್ಯೆಗಳಿವೆ. ಹೀಗಿರುವಾಗ ವ್ಯವಸ್ಥಿತವಾಗಿ ವಿಶ್ವವಿದ್ಯಾನಿಲಯವನ್ನು ಹೇಗೆ ನಡೆಸಲು ಸಾಧ್ಯ ಎಂದು ಪ್ರೊ.ನಾಗೇಶ್ ವಿ.ಬೆಟ್ಟಕೋಟೆ ಪ್ರಶ್ನಿಸಿದರು. ವಿಶ್ವವಿದ್ಯಾನಿಲಯದ ಅಭಿವೃದ್ಧಿಗೆ ಸರ್ಕಾರ ಪೂರಕವಾಗಿ ಸ್ಪಂದಿಸದಿದ್ದರೆ ಗುಣಮಟ್ಟದ ಶಿಕ್ಷಣ ನೀಡಲು ಸಾಧ್ಯವಿಲ್ಲ. ವಿಶ್ವವಿದ್ಯಾನಿಲಯದಲ್ಲಿ ಆಂತರಿಕ ಸಂಪನ್ಮೂಲವೂ ಇಲ್ಲದ ಕಾರಣ ಸರ್ಕಾರದ ಅನುದಾನದಿಂದಲೇ ಎಲ್ಲಾ ಕೆಲಸ ಕಾರ್ಯ ಮಾಡಬೇಕಿದೆ. ಇದನ್ನು ಮನಗಂಡು ಸರ್ಕಾರ ಅವಶ್ಯಕ ಅನುದಾನ ನೀಡಿದರೆ ಮತ್ತಷ್ಟು ವಿದ್ಯಾರ್ಥಿಗಳನ್ನು ದಾಖಲಿಸಿಕೊಳ್ಳಬಹುದು ಎಂದು ವಿಶ್ವವಿದ್ಯಾನಿಲಯದ ಕುಲಸಚಿವ ಪ್ರೊ.ಟಿ.ಎಸ್.ದೇವರಾಜ್ ತಿಳಿಸಿದರು.

ಮೈಸೂರ್ ಪಾಕ್‌ಗೆ ಜಾಗತಿಕ ಮನ್ನಣೆ: ಚಾಮುಂಡಿಬೆಟ್ಟದಲ್ಲಿ
ಭಕ್ತಾದಿಗಳಿಗೆ ಮೈಸೂರು ಪಾಕ್ ವಿತರಣೆ



ಮೈಸೂರು, ಜು. 25–ಮೈಸೂರು ಅರಸರ ಕಾಲದಲ್ಲಿ ತಯಾರಾಗಿದ್ದ ಮೈಸೂರು ಪಾಕ್ ಜಾಗತಿಕ ಮನ್ನಣೆ ಗಳಿಸಿರುವ ಹಿನ್ನೆಲೆಯಲ್ಲಿ ಅಪೂರ್ವ ಸ್ನೇಹ ಬಳಗದ ವತಿಯಿಂದ ಚಾಮುಂಡಿಬೆಟ್ಟದಲ್ಲಿ ಭಕ್ತಾದಿಗಳಿಗೂ ಮೈಸೂರು ಪಾಕ್ ವಿತರಿಸಿ ಮೈಸೂರು ಪಾಕ್ ಮಹತ್ವ ಹಾಗೂ ಅದರ ಇತಿಹಾಸ ತಿಳಿಸಲಾಯಿತು.

ಈ ವೇಳೆ ಅಪೂರ್ವ ಸ್ನೇಹ ಬಳಗದ ಅಧ್ಯಕ್ಷ ಅಪೂರ್ವ ಸುರೇಶ್ ಮಾತನಾಡಿ, ಮೈಸೂರು ಪಾಕ್‌ಗೆ ಈ ಸ್ಥಾನ ಬಂದಿರುವುದು ಮೈಸೂರಿಗೆ ಹೆಮ್ಮೆಯ ವಿಷಯ. ಇದರಿಂದ ಶಕ್ತಿ ಹಾಗೂ ಆರೋಗ್ಯವಾಗಿರುವುದಕ್ಕೆ ಸಹಾಯ ಮಾಡುತ್ತದೆ ಮೈಸೂರಿಗೆ ಬಂದವರೆಲ್ಲರೂ ಮೈಸೂರು ಪಾಕ್ ಸವಿದು ಊರಿಗೆ ತೆಗೆದುಕೊಂಡು ಹೋಗುತ್ತಾರೆ. ಚಿಕ್ಕ ಮಕ್ಕಳಿಂದ ಹಿರಿಯ ನಾಗರಿಕರವರೆಗೂ ಮೈಸೂರು ಪಾಕ್ ತಿನ್ನಲು ಅಚ್ಚು ಮೆಚ್ಚು. ನಾಲ್ವಡಿ ಕೃಷ್ಣರಾಜ ಒಡೆಯರ ಕೊಡುಗೆ ಇರುವ ಮೈಸೂರು ಪಾಕ್ ಇಂದು ವಿಶ್ವದಾದ್ಯಂತ ತನ್ನ ಹಿರಿಮೆ ಸಾರುತ್ತಿದೆ. ಹಾಗೆಯೇ ಪ್ರವಾಸೋದ್ಯಮ ಇಲಾಖೆ ಮೈಸೂರು ಪಾಕ್ ತಯಾರಿಸುವ ಅಡುಗೆ ಉದ್ಯಮವನ್ನು ಸ್ಥಾಪಿಸಬೇಕು ಎಂದು ಒತ್ತಾಯಿಸಿದರು. ಮಾಜಿ ನಗರಪಾಲಿಕೆ ಸದಸ್ಯ ಎಂ.ಡಿ.ಪಾರ್ಥಸಾರಥಿ, ಚಾಮುಂಡಿ ಬೆಟ್ಟದ ಪ್ರಧಾನ ಅರ್ಚಕರಾದ ಡಾ. ಶಶಿಶೇಖರ ದೀಕ್ಷಿತ್, ಜಗದೀಶ್, ಸಾಮಾಜಿಕ ಚಿಂತಕರಾದ ದೂರ ರಾಜಣ್ಣ, ಆನಂದ್ ದಯಾನಂದ, ಆದರ್ಶ್, ಅಮರ್ ಬಾಬು ಇನ್ನಿತರರು ಹಾಜರಿದ್ದರು.

ಮೋದಿ ಸರ್ಕಾರದ ವಿರುದ್ಧ ಅವಿಶ್ವಾಸ ನಿರ್ಣಯ ಮಂಡಿಸಲು INDIA ಚಿಂತನೆ

ನವದೆಹಲಿ: ಮಣಿಪುರ ಹಿಂಸಾಚಾರದ ಕುರಿತು ಸಂಸತ್ತಿನಲ್ಲಿ ಪ್ರಧಾನಿ ನರೇಂದ್ರ ಮೋದಿ ಅವರ ಹೇಳಿಕೆಗೆ ಆಗ್ರಹಿಸುತ್ತಿರುವ ಪ್ರತಿಪಕ್ಷಗಳ ಮೈತ್ರಿಕೂಟ INDIA, ಈಗ ಲೋಕಸಭೆಯಲ್ಲಿ ಸರ್ಕಾರದ ವಿರುದ್ಧ ಅವಿಶ್ವಾಸ ನಿರ್ಣಯ ಮಂಡಿಸುವ ಸಾಧ್ಯತೆಯಿದೆ ಎಂದು ಮೂಲಗಳು ಮಂಗಳವಾರ ತಿಳಿಸಿವೆ.

ಇಂದು ಬೆಳಗ್ಗೆ ನಡೆದ ಭಾರತೀಯ ರಾಷ್ಟ್ರೀಯ ಅಭಿವೃದ್ಧಿ ಒಳಗೊಂಡ ಮೈತ್ರಿಕೂಟ (ಇಂಡಿಯಾ)ದ ಸಭೆಯಲ್ಲಿ ಅವಿಶ್ವಾಸ ನಿರ್ಣಯ ಮಂಡಿಸುವ ಬಗ್ಗೆ ಚರ್ಚಿಸಲಾಗಿದೆ.

ಮಣಿಪುರ ವಿಷಯದ ಬಗ್ಗೆ ಸಂಸತ್ತಿನಲ್ಲಿ ಚರ್ಚೆ ಪ್ರಾರಂಭಿಸುವಂತೆ ಸರ್ಕಾರವನ್ನು ಒತ್ತಾಯಿಸಲು ಇದು ಪರಿಣಾಮಕಾರಿ ಮಾರ್ಗವಾಗಿದೆ ಎಂದು ವಿವಿಧ ಪಕ್ಷಗಳು ಹೇಳಿದ ನಂತರ ಅವಿಶ್ವಾಸ ನಿರ್ಣಯ ಮಂಡಿಸುವ ನಿರ್ಧಾರಕ್ಕೆ ಬರಲಾಗಿದೆ ಎಂದು ಮೂಲಗಳು ತಿಳಿಸಿವೆ.

ಮಣಿಪುರ ವಿಚಾರಕ್ಕೆ ಸಂಬಂಧಿಸಿದಂತೆ ಮೋದಿ ಸರ್ಕಾರವನ್ನು ಇಕ್ಕಟ್ಟಿಗೆ ಸಿಲುಕಿಸುವ ವಿಪಕ್ಷಗಳ ತಂತ್ರ ರಾಜ್ಯಸಭೆಯಲ್ಲೂ ಮುಂದುವರಿಯಲಿದೆ ಎಂದು ಮೂಲಗಳು ತಿಳಿಸಿವೆ. ಈ ಬಗ್ಗೆ ಪ್ರತಿಕ್ರಿಯಿಸಿದ ಸಂಸದೀಯ ವ್ಯವಹಾರಗಳ ಸಚಿವ ಪ್ರಹ್ಲಾದ್ ಜೋಶಿ ಅವರು, ಪ್ರತಿಪಕ್ಷಗಳ ನಡೆಯ ಬಗ್ಗೆ ನನಗೆ ಮಾಹಿತಿ ಇಲ್ಲ. ಆದರೆ ಅವರು ಕಳೆದ ಬಾರಿಯೂ ಅವಿಶ್ವಾಸ ನಿರ್ಣಯ ತಂದು ವಿಫಲವಾಗಿದ್ದಾರೆ. ಬಿಜೆಪಿ 300ಕ್ಕೂ ಹೆಚ್ಚು ಸ್ಥಾನಗಳ ಪ್ರಬಲ ಬಹುಮತದೊಂದಿಗೆ ಮತ್ತೆ ಅಧಿಕಾರಕ್ಕೆ ಬಂದಿತು. ಈಗ ಮತ್ತೆ ಅದೇ ಆಗಲಿದೆ ಎಂದಿದ್ದಾರೆ. ಲೋಕಸಭೆಯಲ್ಲಿ ಮೋದಿ ಸರ್ಕಾರದ ವಿರುದ್ಧ ಮೊದಲ ಅವಿಶ್ವಾಸ ನಿರ್ಣಯವನ್ನು ಜುಲೈ 20, 2018 ರಂದು ಮಂಡಿಸಲಾಯಿತು. ರಾಷ್ಟ್ರೀಯ ಪ್ರಜಾಸತ್ತಾತ್ಮಕ ಒಕ್ಕೂಟ (NDA) ಅವಿಶ್ವಾಸ ನಿರ್ಣಯದ ಪರವಾಗಿ 325 ಸಂಸದರು ಮತ್ತು ವಿರುದ್ಧವಾಗಿ ಕೇವಲ 126 ಸಂಸದರು ಮತ ಚಲಾಯಿಸಿದ್ದರು.

ಡಿಪ್ಲೊಮಾ ಇನ್ ಕಂಪ್ಯೂಟರ್ ಅಪ್ಲಿಕೇಷನ್ ತರಬೇತಿಗಾಗಿ ಅರ್ಜಿ ಆಹ್ವಾನ

ಮೈಸೂರು, ಜು. 25– ರಾಷ್ಟ್ರೀಯ ಕಂಪ್ಯೂಟರ್ ಸಾಕ್ಷರತಾ ಸಮಿತಿ ಹಾಗೂ ಎಸ್‌ಎಸ್ ಐಟಿ ಸಲ್ಯೂಷನ್ಸ್‌ನ ಸಂಯುಕ್ತಾಶ್ರಯದಲ್ಲಿ 'ಡಿಪ್ಲೊಮೊ ಇನ್ ಕಂಪ್ಯೂಟರ್ ಅಪ್ಲಿಕೇಷನ್' ತರಬೇತಿಗಾಗಿ ಅರ್ಜಿಗಳನ್ನು ಆಹ್ವಾನಿಸಲಾಗಿದೆ. ಪಿಯುಸಿ ನಂತರದ ವಿದ್ಯಾರ್ಥಿಗಳಿಗಾಗಿ ನುರಿತ ತರಬೇತುದಾರರಿಂದ ಸಿ, ಸಿ++, ಜಾವ, ಪೈಥಾನ್, ವೆಬ್‌ಡೆವಲಪ್‌ಮೆಂಟ್ ಮುಂತಾದ ವಿಷಯಗಳ ಕುರಿತು ಪ್ರಾಯೋಗಿಕ ತರಗತಿಗಳು ನಡೆಯಲಿವೆ. ಆಗಸ್ಟ್ 7ರಿಂದ ನಡೆಯಲಿರುವ ತರಗತಿಗಳಿಗಾಗಿ ಜುಲೈ 30ರೊಳಗೆ ನೋಂದಾಯಿಸಿಕೊಳ್ಳಬಹುದಾಗಿದೆ. ಅರ್ಜಿಗಳಿಗಾಗಿ ಹಾಗೂ ಮಾಹಿತಿಗಾಗಿ ಸಂಪರ್ಕಿಸಿ 8310306882, 9964790442.

ಮಣಿಪುರ ಮಹಿಳೆಯರ ಬೆತ್ತಲೆ ಮೆರವಣಿಗೆ ಪ್ರಕರಣ: 7ನೇ ಆರೋಪಿ ಬಂಧನ

ಇಂಫಾಲ: ಮಣಿಪುರದಲ್ಲಿ ಬುಡಕಟ್ಟು ಸಮುದಾಯದ ಮಹಿಳೆಯರನ್ನು ಬೆತ್ತಲುಗೊಳಿಸಿ, ರಸ್ತೆಯಲ್ಲಿ ಮೆರವಣಿಗೆ ನಡೆಸಿ, ಲೈಂಗಿಕ ದೌರ್ಜನ್ಯ ನಡೆಸಿದ ಪ್ರಕರಣಕ್ಕೆ ಸಂಬಂಧಿಸಿದಂತೆ ಮತ್ತೊರ್ವ ಆರೋಪಿಯನ್ನು ಬಂಧಿಸಲಾಗಿದೆ.

ಪ್ರಕರಣ ಸಂಬಂಧ ಈವರೆಗೂ ಪೊಲೀಸರು ಅಪ್ರಾಪ್ತ ಬಾಲಕ ಸೇರಿದಂತೆ 6 ಮಂದಿಯನ್ನು ಬಂಧನಕ್ಕೊಳಪಡಿಸಿದ್ದರು. ಇದೀಗ ತೌಬಲ್ ಜಿಲ್ಲೆಯಲ್ಲಿ ಮತ್ತೊರ್ವ ಆರೋಪಿಯನ್ನು ಬಂಧನಕ್ಕೊಳಪಡಿಸಿದ್ದಾರೆ. ಇದರೊಂದಿಗೆ ಪ್ರಕರಣ ಸಂಬಂಧ ಈ ವರೆಗೂ 7 ಆರೋಪಿಗಳು ಬಂಧನಕ್ಕೊಳಗಾಗಿದ್ದಾರೆ.

ಮೇ 4ರಂದು ಕಾಂಗ್‌ಪೋಕ್ಪಿ ಜಿಲ್ಲೆಯಲ್ಲಿ ನಡೆದಿದ್ದ ಹಿಂಸಾಚಾರದ ವೇಳೆ ಮಹಿಳೆಯರನ್ನು ಬೆತ್ತಲುಗೊಳಿಸಿ ಮೆರವಣಿಗೆ ಮಾಡಿದ್ದ ವಿಡಿಯೊ ಜುಲೈ 19ರಂದು ಸಾಮಾಜಿಕ ಮಾಧ್ಯಮಗಳಲ್ಲಿ ಹರಿದಾಡಿತ್ತು. ಇದರಿಂದ ಈಶಾನ್ಯ ರಾಜ್ಯದಲ್ಲಿ ಪರಿಸ್ಥಿತಿ ಮತ್ತೆ ಉದ್ವಿಗ್ನಗೊಂಡಿತ್ತು. ಯುವತಿಯ ಮೇಲೆ ಸಾಮೂಹಿಕ ಅತ್ಯಾಚಾರ ನಡೆಸಿದ ಕೃತ್ಯಕ್ಕೆ ದೇಶದಾದ್ಯಂತ ವ್ಯಾಪಕ ಆಕ್ರೋಶ ವ್ಯಕ್ತವಾಗಿತ್ತು. ಕೃತ್ಯವನ್ನು ಖಂಡಿಸಿ ಮಣಿಪುರದ ಹಲವೆಡೆ ಪ್ರತಿಭಟನೆಗಳು ನಡೆದಿವೆ. ಕುಕಿ–ಜೋ ಬುಡಕಟ್ಟು ಮಹಿಳೆಯರನ್ನು ಬೆತ್ತಲುಗೊಳಿಸಿ ಲೈಂಗಿಕ ದೌರ್ಜನ್ಯ ನಡೆಸಿದ ಪ್ರಕರಣದ ಇಬ್ಬರು ಆರೋಪಿಗಳ ಮನೆಗೆ, ಅವರದ್ದೇ ಗ್ರಾಮದ ಮಹಿಳೆಯರು ಬೆಂಕಿ ಹಚ್ಚಿದ್ದರು.

ನಾವು INDIA: ಮಣಿಪುರದಲ್ಲಿ ಭಾರತದ ಕಲ್ಪನೆ ಮರುನಿರ್ಮಾಣ ಮಾಡುತ್ತೇವೆ
ಪ್ರಧಾನಿ ಮೋದಿಗೆ ರಾಹುಲ್ ತಿರುಗೇಟು



ನವದೆಹಲಿ: ನಮ್ಮನ್ನು ನೀವು ಹೇಗೆ ಬೇಕಾದರೂ ಕರೆಯಿರಿ. ಆದರೆ ನಾವು INDIA ಮತ್ತು ಮಣಿಪುರದಲ್ಲಿ ಭಾರತದ ಕಲ್ಪನೆಯನ್ನು ಮರುನಿರ್ಮಾಣ ಮಾಡುತ್ತೇವೆ ಎಂದು ಪ್ರಧಾನಿ ನರೇಂದ್ರ ಮೋದಿ ಅವರಿಗೆ ಕಾಂಗ್ರೆಸ್ ನಾಯಕ ರಾಹುಲ್ ಗಾಂಧಿ ಅವರು ಮಂಗಳವಾರ ತಿರುಗೇಟು ನೀಡಿದ್ದಾರೆ.

ಪ್ರತಿಪಕ್ಷಗಳ ಮೈತ್ರಿಕೂಟ INDIA ದೇಶ ಕಂಡ ಅತ್ಯಂತ ದಿಕ್ಕು ತೋಚದ ಮೈತ್ರಿಕೂಟ ಎಂದು ಟೀಕಿಸಿದ್ದ ಪ್ರಧಾನಿ ಮೋದಿ, ಈಸ್ಟ್ ಇಂಡಿಯಾ ಕಂಪನಿ ಮತ್ತು ಇಂಡಿಯನ್ ಮುಜಾಹಿದ್ದೀನ್ ಹೆಸರುಗಳನ್ನು ಉಲ್ಲೇಖಿಸಿ, ಕೇವಲ ದೇಶದ ಹೆಸರು ಬಳಸುವುದರಿಂದ ಜನರ ದಾರಿ ತಪ್ಪಿಸಲು ಸಾಧ್ಯವಿಲ್ಲ ಎಂದು ಹೇಳಿದ್ದರು.

ಪ್ರಧಾನಿ ಮೋದಿಗೆ ತಿರುಗೇಟು ನೀಡಿ ಟ್ವೀಟ್ ಮಾಡಿದ ರಾಹುಲ್ ಗಾಂಧಿ 'ಮೋದಿ, ನಿಮಗೆ ಬೇಕಾದ ಹಾಗೆ ನಮ್ಮನ್ನು ಕರೆಯಿರಿ. ಆದರೆ ನಾವು INDIA. ನಾವು ಮಣಿಪುರದಲ್ಲಿ ಶಾಂತಿ ಸ್ಥಾಪಿಸಲು ಸಹಾಯ ಮಾಡುತ್ತೇವೆ ಮತ್ತು ಪ್ರತಿ ಮಹಿಳೆ ಹಾಗೂ ಮಗುವಿನ ಕಣ್ಣೀರು ಒರೆಸುತ್ತೇವೆ. ನಾವು ಅವರಿಗೆ ಪ್ರೀತಿ ಮತ್ತು ಶಾಂತಿಯನ್ನು ಮರಳಿ ತರುತ್ತೇವೆ ಎಂದು ಹೇಳಿದ್ದಾರೆ. ನಾವು ಮಣಿಪುರದಲ್ಲಿ ಭಾರತದ ಕಲ್ಪನೆಯನ್ನು ಮರುನಿರ್ಮಾಣ ಮಾಡುತ್ತೇವೆ ಎಂದು ಮಾಜಿ ಕಾಂಗ್ರೆಸ್ ಅಧ್ಯಕ್ಷ ಹೇಳಿದ್ದಾರೆ.

ಉಚಿತವಾಗಿ ಬಂಡೀಪುರ ಸಫಾರಿ ಮಾಡಿ; ಅರಣ್ಯ ಇಲಾಖೆಯ ಹೊಸ ಯೋಜನೆ

ಚಾಮರಾಜನಗರ: ದೇಶದ ಪ್ರಮುಖ ಹುಲಿ ಸಂರಕ್ಷಿತಾರಣ್ಯ ಬಂಡೀಪುರ ಸುವರ್ಣ ಮಹೋತ್ಸವದ ಸಂಭ್ರಮದಲ್ಲಿದೆ. ಈ ಹಿನ್ನೆಲೆಯಲ್ಲಿ ಪ್ರಧಾನಿ ನರೇಂದ್ರ ಮೋದಿ, ಕೇಂದ್ರ ಅರಣ್ಯ ಸಚಿವ ಭೂಪೇಂದ್ರ ಯಾದವ್ ಕೂಡ ಭೇಟಿ ಕೊಟ್ಟಿದ್ದಲ್ಲದೇ ಸುವರ್ಣ ಸಂಭ್ರಮಕ್ಕೆ ಸಾಕ್ಷಿಯಾಗಿದ್ದರು. ಆ ನಿಮಿತ್ತ ಹುಲಿ ಯೋಜನೆಗೆ 50 ವರ್ಷ ತುಂಬಿದ ಅಂಗವಾಗಿ ಬಂಡೀಪುರದಲ್ಲಿ ಜಾರಿ ಮಾಡಲಾಗಿರುವ "ಬಂಡೀಪುರ ಯುವ ಮಿತ್ರ" ಯೋಜನೆ ಯಶಸ್ವಿನತ್ತ ಸಾಗಿದೆ. ಕಾಡಂಚಿನ ಗ್ರಾಮಗಳ ನೂರಾರು ವಿದ್ಯಾರ್ಥಿಗಳು ಬಂಡೀಪುರದಲ್ಲಿ ಪ್ರಾಣಿ ವೀಕ್ಷಣೆ ಮಾಡಿ ಕಾಡಿನ ಸೌಂದರ್ಯ ಸವಿಯುವ ಜೊತೆಗೆ ಪರಿಸರ ಸಂರಕ್ಷಣೆ ಮಹತ್ವ ಅರಿಯುತ್ತಿದ್ದಾರೆ. ಇದು ಗಡಿ ಜಿಲ್ಲೆ ಚಾಮರಾಜನಗರದಲ್ಲಿರುವ ಬಂಡೀಪುರ ಹುಲಿ ಸಂರಕ್ಷಿತ ಪ್ರದೇಶ. 1972ರಲ್ಲಿ ಹುಲಿ ಯೋಜನೆ ಘೋಷಣೆಯಾದ ಬಂಡೀಪುರ ಸುವರ್ಣ ಮಹೋತ್ಸವದ ಸಂಭ್ರಮದಲ್ಲಿದೆ. ಬಂಡೀಪುರ ಹುಲಿ ಯೋಜನೆಗೆ 50 ವರ್ಷಗಳಾದ ಪ್ರಯುಕ್ತ ಅರಣ್ಯ ಇಲಾಖೆ ಕಾಡಿನ ಸಂರಕ್ಷಣೆಯ ಮಹತ್ವ ಕುರಿತು ವಿದ್ಯಾರ್ಥಿಗಳಲ್ಲಿ ಅರಿವು ಮೂಡಿಸಲು ಬಂಡೀಪುರ ಯುವಮಿತ್ರ ಯೋಜನೆ ಜಾರಿಗೆ ತಂದಿದೆ.

ಮಕ್ಕಳಿಗೆ ತಿಳಿ ಹೇಳುವ ಕೆಲಸ: ಅರಣ್ಯಾಧಿಕಾರಿಗಳು ಸರ್ಕಾರಿ ಶಾಲಾ ಮಕ್ಕಳಿಗೆ ಅರಣ್ಯವನ್ನು ಪರಿಚಯಿಸಲು ಸಫಾರಿ ವ್ಯವಸ್ಥೆ ಮಾಡಿದ್ದಾರೆ. ಮೊದಲ ಹಂತದಲ್ಲಿ ಬಂಡೀಪುರ ಸುತ್ತಮುತ್ತ ಇರುವ ಶಾಲೆಗಳ ಮಕ್ಕಳಿಗೆ ಉಚಿತವಾಗಿ ಸಫಾರಿ ವ್ಯವಸ್ಥೆ ಕಲ್ಪಿಸಿ, ನಂತರ ಕಾಡಿನ ಬಗ್ಗೆ ಅರಿವು, ಬಂಡೀಪುರದ ಮಹತ್ವ ಮಾನವ ಮತ್ತು ಕಾಡುಪ್ರಾಣಿಗಳ ಸಂಘರ್ಷಗಳ ಬಗ್ಗೆ ಮಾಹಿತಿ ಹಾಗೂ ಅರಣ್ಯ ಸಂಬಂಧಿತ ವಿಚಾರಗಳನ್ನು ಮಕ್ಕಳಿಗೆ ತಿಳಿಹೇಳುವ ಕೆಲಸ ಮಾಡಲಾಗುತ್ತಿದೆ.



ಮೈಸೂರು-ಬೆಂಗಳೂರು ಎಕ್ಸ್‌ಪ್ರೆಸ್ ವೇನಲ್ಲಿ

ವಾಹನಗಳ ವೇಗ ಪರಿಶೀಲಿಸಿದ ಎಡಿಜಿಪಿ

ವೇಗಮಿತಿ ಮೀರಿದರೆ ದಂಡ ವಿಧಿಸಲು ಅಧಿಕಾರಿಗಳಿಗೆ ಅಲೋಕ್‌ಕುಮಾರ್ ಸೂಚನೆ

ಮಂಡ್ಯ, ಜು.25(ಆರ್‌ಕೆ)– ಮೈಸೂರು–ಬೆಂಗಳೂರು ಎಕ್ಸ್‌ಪ್ರೆಸ್ ವೇಯಲ್ಲಿ ಅತೀ ವೇಗವಾಗಿ ಸಂಚರಿಸುವ ವಾಹನಗಳ ಆರ್‌ಸಿ ಮಾಲೀಕರ ವಿರುದ್ಧ ಪ್ರಕರಣ ದಾಖಲಿಸಿ ದಂಡ ವಿಧಿಸುವಂತೆ ಹೆಚ್ಚುವರಿ ಪೊಲೀಸ್ ಮಹಾನಿರ್ದೇಶಕ ಅಲೋಕ್‌ಕುಮಾರ್ ಅಧೀನಾಧಿಕಾರಿಗಳಿಗೆ ಇಂದಿಲ್ಲಿ ಸೂಚಿಸಿದ್ದಾರೆ.

ಅಪಘಾತಗಳನ್ನು ತಪ್ಪಿಸುವ ಸಲುವಾಗಿ ವಾಹನಗಳ ಸಂಚಾರ ವೇಗಮಿತಿಗೊಳಿಸುವ ಉದ್ದೇಶದಿಂದ ಇಂದು ಎರಡನೇ ಬಾರಿ ಮೈಸೂರು–ಬೆಂಗಳೂರು ಎಕ್ಸ್‌ಪ್ರೆಸ್ ವೇ ಪರಿಶೀಲನೆ ನಡೆಸಿದ ಅವರು, ಟೋಲ್ ಪ್ಲಾಜಾ, ಸಂಚಾರ ಸುರಕ್ಷತಾ ಸೂಚನಾ ಫಲಕಗಳು, ಆಂಬುಲೆನ್ಸ್, ಪೊಲೀಸ್ ಗಸ್ತು ವಾಹನಗಳ ಕಾರ್ಯಾಚರಣೆ ವೈಖರಿಯನ್ನು ವೀಕ್ಷಿಸಿದರು.

ಕುಂಬಳಗೋಡಿನಿಂದ ಶ್ರೀರಂಗಪಟ್ಟಣ ತಾಲೂಕು, ಗಣಂಗೂರು ಬಳಿಯ ಟೋಲ್ ಪ್ಲಾಜಾವರೆಗೆ ವಾಹನದಲ್ಲಿ ಸಂಚರಿಸಿದ ಅವರು, ಸಾರ್ವಜನಿಕ ವಾಹನಗಳ ವೇಗ, ಲೇನ್ ಡಿಸಿಪ್ಲಿನ್, ಸಂಚಾರ ನಿಯಮ ಪಾಲನೆ, ದ್ವಿಚಕ್ರ ವಾಹನ, ಟ್ರ್ಯಾಕ್ಟರ್‌ಗಳ ಸಂಚಾರವನ್ನು ವೀಕ್ಷಿಸಿದರಲ್ಲದೆ, ಮಾರ್ಗಮಧ್ಯೆ ಅಳವಡಿಸಿರುವ ಮಾರ್ಗಸೂಚಿ ಫಲಕ, ತುರ್ತು ಸೇವೆಗಾಗಿ ನೀಡಿರುವ ಸಹಾಯ ಕೇಂದ್ರ, ಕಂಟ್ರೋಲ್ ರೂಂ ನಂಬರ್, ಆಂಬುಲೆನ್ಸ್, ಕಾಲ್ ಸೆಂಟರ್ ನಂಬರ್ ಫಲಕಗಳು ವಾಹನ ಚಾಲಕರಿಗೆ ಸ್ಪಷ್ಟವಾಗಿ ಕಾಣುತ್ತವೆಯೇ ಎಂಬುದನ್ನು ಖುದ್ದು ವೀಕ್ಷಿಸಿದರು.



ಕಳೆದ 20 ದಿನಗಳ ಹಿಂದೆ ಮಂಡ್ಯ, ರಾಮನಗರ ಜಿಲ್ಲಾ ವ್ಯಾಪ್ತಿಯಲ್ಲಿ ಎಕ್ಸ್‌ಪ್ರೆಸ್ ವೇ ಪರಿಶೀಲಿಸಿದ್ದ ಅಲೋಕ್‌ಕುಮಾರ್, ಅತೀ ವೇಗ, ನಿರ್ಲಕ್ಷ್ಯದಿಂದ ಚಾಲನೆ ಮಾಡುವವರ ವಿರುದ್ಧ ಪ್ರಕರಣ ದಾಖಲಿಸಿ ದಂಡ ವಿಧಿಸುವಂತೆ ಸೂಚನೆ ನೀಡಿದ ನಂತರ ಈ ಹೆದ್ದಾರಿಯಲ್ಲಿ ಅಪಘಾತಗಳ ಸಂಖ್ಯೆ ಕಡಿಮೆಯಾಗಿರುವ ಬಗ್ಗೆ ಅಧೀನ ಪೊಲೀಸ್ ಅಧಿಕಾರಿಗಳ ಕಾರ್ಯವನ್ನು ಶ್ಲಾಘಿಸಿದರು.

ಟೋಲ್ ಪ್ಲಾಜಾ, ಸಂಚಾರ ನಿಯಂತ್ರಣ ಕೇಂದ್ರಗಳಲ್ಲಿ ಸಿಬ್ಬಂದಿಗಳ ಕಾರ್ಯ ನಿರ್ವಹಣೆ, ಹೆದ್ದಾರಿ ಗಸ್ತು ವಾಹನ, ಆಂಬುಲೆನ್ಸ್‌ಗಳ ಕಾರ್ಯ ವೈಖರಿ ಪರಿಶೀಲಿಸಿದ ಅವರು, ಅತೀ ವೇಗದಿಂದ ಚಲಿಸುವ ವಾಹನಗಳನ್ನು ಸಿಸಿ ಕ್ಯಾಮರಾ ಫುಟೇಜಸ್‌ನಿಂದ ಸೃಜಿಸುವ ನೋಟಿಸ್‌ಗಳು ವಾಹನಗಳ ಆರ್‌ಸಿ ಮಾಲೀಕರಿಗೆ ತಲುಪಿಸುವ ವ್ಯವಸ್ಥೆ ಜಾರಿಯಲ್ಲಿರುವುದರಿಂದ ಸಾರ್ವಜನಿಕರಿಗೆ ಈ ಬಗ್ಗೆ ಜಾಗೃತಿ ಮೂಡಿಸುವಂತೆ ಪೊಲೀಸ್ ಅಧಿಕಾರಿಗಳಿಗೆ ಅವರು ನಿರ್ದೇಶನ ನೀಡಿದರು.

ದ್ವಿಚಕ್ರ ವಾಹನ, ಆಟೋ, ಟ್ರ್ಯಾಕ್ಟರ್, ಎತ್ತಿನಗಾಡಿ, ಸೈಕಲ್‌ಗಳಿಗೆ ಎಕ್ಸ್‌ಪ್ರೆಸ್‌ವೇನಲ್ಲಿ ಸಂಚರಿಸಲು ಆಗಸ್ಟ್ 1ರಿಂದ ಪೊಲೀಸರು ಪರಿಶೀಲಿಸಿ ಅಂತಹ ವಾಹನಗಳಿಗೆ ದಂಡ ವಿಧಿಸಬೇಕು, ಅದೇ ರೀತಿ ವೇಗ ಮಿತಿ ಮೀರಿದರೂ ಪ್ರಕರಣ ದಾಖಲಿಸಬೇಕು ಎಂದು ಅವರು ಸೂಚನೆ ನೀಡಿದರು.

ಈ ಸಂದರ್ಭ ಗಣಂಗೂರು ಟೋಲ್ ಪ್ಲಾಜಾ ಬಳಿ ಸುದ್ದಿಗಾರರೊಂದಿಗೆ ಮಾತನಾಡಿದ ಅಲೋಕ್ ಕುಮಾರ್, ಮೈಸೂರು–ಬೆಂಗಳೂರು ಎಕ್ಸ್‌ಪ್ರೆಸ್‌ವೇಯಲ್ಲಿ ಇದ್ದ ಹಲವು ಲೋಪದೋಷಗಳನ್ನು ಹಂತ ಹಂತವಾಗಿ ಸರಿಪಡಿಸಲಾಗುತ್ತಿದೆ. ಪರಿಣಾಮ ಅಪಘಾತಗಳ ಸಂಖ್ಯೆಯೂ ಕಡಿಮೆಯಾಗುತ್ತಿವೆ. ಅತೀವೇಗ, ನಿರ್ಲಕ್ಷ್ಯ ಚಾಲನೆಯಂತಹ ಸಂಚಾರ ನಿಯಮ ಉಲ್ಲಂಘಿಸುವವರ ವಿರುದ್ಧ ನಿರ್ದಾಕ್ಷಿಣ್ಯವಾಗಿ ದಂಡ ವಿಧಿಸುವಂತೆ ಮಂಡ್ಯ ಹಾಗೂ ರಾಮನಗರ ವ್ಯಾಪ್ತಿಯ ಪೊಲೀಸ್ ಅಧಿಕಾರಿಗಳಿಗೆ ಸೂಚನೆ ನೀಡಿದ್ದೇನೆ ಎಂದರು.

ಎಕ್ಸ್‌ಪ್ರೆಸ್‌ವೇ ಉದ್ದಕ್ಕೂ 45 ಕಡೆಗಳಲ್ಲಿ ಸಿಸಿ ಕ್ಯಾಮರಾಗಳನ್ನು ಅಳವಡಿಸಲಾಗಿದೆ. ಫಾಸ್ಟ್‌ಟ್ಯಾಗ್ ಇಲ್ಲದ ವಾಹನಗಳಿಗೆ ದಂಡ ವಿಧಿಸಲಾಗುತ್ತಿದೆ. ವೇಗ ನಿಯಂತ್ರಣ, ಸಂಚಾರ ನಿಯಮ ಉಲ್ಲಂಘಿಸಿದರೆ ಆರ್‌ಸಿ ಮಾಲೀಕರ ಮನೆಗೇ ನೋಟಿಸ್ ತಲುಪುವ ವ್ಯವಸ್ಥೆ ಮಾಡಲಾಗಿದೆ. ಕಳೆದ ಬಾರಿ ಭೇಟಿ ನೀಡಿದ್ದಾಗ ಕಂಡುಬಂದಿದ್ದ ಅಂಡರ್‌ಪಾಸ್, ಎಕ್ಸಿಟ್ ಮತ್ತು ಎಂಟ್ರಿ ಪಾಯಿಂಟ್‌ಗಳ ಸಮಸ್ಯೆಯನ್ನು ಹೆದ್ದಾರಿಗಳ ಪ್ರಾಧಿಕಾರದ ಅಧಿಕಾರಿಗಳು ಸರಿಪಡಿಸಿದ್ದಾರೆ ಎಂದು ಅಲೋಕ್‌ಕುಮಾರ್ ಇದೇ ವೇಳೆ ತಿಳಿಸಿದರು.

ಐಜಿಪಿ ಬಿ.ಆರ್. ರವಿಕಾಂತೇಗೌಡ, ಮಂಡ್ಯ ಎಸ್ಪಿ ಎನ್. ಯತೀಶ್, ಎಎಸ್ಪಿ ತಿಮ್ಮಯ್ಯ, ರಾಮನಗರ ಎಸ್ಪಿ ಕಾರ್ತಿಕ್ ರೆಡ್ಡಿ, ರಾಷ್ಟ್ರೀಯ ಹೆದ್ದಾರಿ ಪ್ರಾಧಿಕಾರದ ವಿವೇಕ ಜೈಸ್ವಾಲ್, ರಾಹುಲ್ ಗುಪ್ತಾ ಹಾಗೂ ಇತರರಿದ್ದರು.

ಮಂಡ್ಯ ತಾಲೂಕು ಕಚೇರಿಗೆ ಡಿಸಿ ಭೇಟಿ, ಪರಿಶೀಲನೆ



ಮಂಡ್ಯ, ಜು.25– ಇಲ್ಲಿನ ತಾಲೂಕು ಕಚೇರಿಯಲ್ಲಿ ದಾಖಲಾತಿ, ಕ್ರಯಪತ್ರ ಮತ್ತು ಖಾತೆಗಾಗಿ ರೈತರು ಹಾಗೂ ಸಾರ್ವಜನಿಕರ ಅಲೆದಾಟ, ಪಿಂಚಣಿ ಸೇವೆ ಕುರಿತಂತೆ ಸಿಬ್ಬಂದಿ ನೀಡುತ್ತಿರುವ ಸೇವೆ ಬಗ್ಗೆ ಜಿಲ್ಲಾಧಿಕಾರಿ ಡಾ.ಕುಮಾರ್ ಮಂಗಳವಾರ ಮಂಡ್ಯ ತಾಲೂಕು ಕಚೇರಿಗೆ ಭೇಟಿ ನೀಡಿ ಪರಿಶೀಲಿಸಿದರು.

ತಾಲೂಕು ಕಚೇರಿಗೆ ಬಂದಿದ್ದ ಸಾರ್ವಜನಿಕರ ಸಮಸ್ಯೆ ಆಲಿಸಿದ ಜಿಲ್ಲಾಧಿಕಾರಿ ಸ್ಥಳದಲ್ಲೇ ಸಮಸ್ಯೆ ಪರಿಹರಿಸಿದರು. ಅಲ್ಲದೇ ಕಚೇರಿಗೆ ಬರುವ ಸಾರ್ವಜನಿಕರನ್ನು ಅಲೆದಾಡಿಸದೆ ನಿಗದಿತ ಸಮಯಕ್ಕೆ ಸಮಸ್ಯೆ ಪರಿಹರಿಸಿ ಎಂದು ಅಧಿಕಾರಿಗಳಿಗೆ ಸೂಚಿಸಿದರು. ತಹಶೀಲ್ದಾರ್ ಸಮ್ಮುಖದಲ್ಲಿ ಕಡತಗಳ ಪರಿಶೀಲನೆ ನಡೆಸಿದ ಅವರು ಕಚೇರಿ ಅಧಿಕಾರಿಗಳು, ನೌಕರರು ಸಾರ್ವಜನಿಕರಿಗೆ ಸ್ಪಂದಿಸಬೇಕೆಂದು ತಾಕೀತು ಮಾಡಿದರು.

ಗ್ರಾಮೀಣ ಪ್ರದೇಶದಲ್ಲಿ ಕೆಲಸ ನಿರ್ವಹಿಸುವ ಗ್ರಾಮ ಲೆಕ್ಕಾಧಿಕಾರಿ ಮತ್ತು ಕಂದಾಯ ಅಧಿಕಾರಿಗಳು ಕೇಂದ್ರ ಸ್ಥಾನದಲ್ಲಿದ್ದು ಕಾರ್ಯ ನಿರ್ವಹಿಸಬೇಕು. ಇಲ್ಲವಾದಲ್ಲಿ ನಿಯಮಾನುಸಾರ ಕ್ರಮ ಕೈಗೊಳ್ಳಲಾಗುವುದು ಎಂದು ಎಚ್ಚರಿಕೆ ನೀಡಿದರು.

ನಕಲಿ ದಾಖಲೆ ಸೃಷ್ಟಿಸಿ ಜಮೀನು ಮಂಜೂರು ಮಾಡುವುದು ಮತ್ತು ದಾಖಲೆ ಮಾಡುವ ಬಗ್ಗೆ ದೂರು ಬಂದಿದ್ದು, ಪರಿಶೀಲಿಸಿ ಕ್ರಮ ಕೈಗೊಳ್ಳುವಂತೆ ಅಧಿಕಾರಿಗಳಿಗೆ ಸೂಚನೆ ನೀಡಿದರು. ಜೊತೆಗೆ ನಿವೇಶನ ರಹಿತರಿಗೆ ಶೀಘ್ರವೇ ನಿವೇಶನ ಹಂಚಿಕೆ ಭರವಸೆ ನೀಡಿದರು. ತಾಲೂಕು ಕಚೇರಿಯಲ್ಲಿ ಹೆಚ್ಚು ಸಮಸ್ಯೆಗಳಿದ್ದು, ಕೂಡಲೇ ಸರಿಪಡಿಸುವಂತೆ ಜಿಲ್ಲಾಧಿಕಾರಿಯವರು ಉಪ ವಿಭಾಗಾಧಿಕಾರಿ ಹಾಗೂ ಹೆಚ್ಚುವರಿ ತಹಸೀಲ್ದಾರ್‌ಗೆ ಸೂಚಿಸಿದರು.

ಈ ವೇಳೆ ಪಿಂಚಣಿಗಾಗಿ ಕಚೇರಿಯಲ್ಲೇ ಕಾಯ್ದು ಕುಳಿತಿದ್ದ ಚಿಕ್ಕಗಂಗವಾಡಿ ಗ್ರಾಮದ ನರಸಿಂಹೇಗೌಡರ ಬಳಿ ತೆರಳಿ ಮಾಹಿತಿ ಪಡೆದಾಗ 3 ತಿಂಗಳಿನಿಂದ ಪಿಂಚಣಿ ಬಾರದಿರುವುದು ಬೆಳಕಿಗೆ ಬಂತು. ಕೂಡಲೇ ದೂರವಾಣಿ ಮೂಲಕ ಸಂಬಂಧಿಸಿದ ಅಧಿಕಾರಿಯನ್ನು ತರಾಟೆಗೆ ತೆಗೆದುಕೊಂಡರು. ಈ ಸಂದರ್ಭ ಉಪವಿಭಾಗಾಧಿಕಾರಿ ಶಿವಮೂರ್ತಿ, ತಹಶೀಲ್ದಾರ್ ನರಸಿಂಹಮೂರ್ತಿ ಉಪಸ್ಥಿತರಿದ್ದರು.

ಚಲುವರಾಯಸ್ವಾಮಿಗೆ ಜೆಡಿಎಸ್ ಸರ್ಟಿಫಿಕೇಟ್ ಅಗತ್ಯವಿಲ್ಲ

ಮಂಡ್ಯ, ಜು.25– ಕೃಷಿ ಸಚಿವ ಎನ್. ಚಲುವರಾಯಸ್ವಾಮಿ ವಿರುದ್ಧ ಜೆಡಿಎಸ್ ಮಾಜಿ ಶಾಸಕರು ಮನಬಂದಂತೆ ಟೀಕೆ ಮಾಡುತ್ತಿದ್ದು, ಅವರ ಪಕ್ಷ ನಿಷ್ಠೆ ಬಗ್ಗೆ ಮಾತನಾಡಿದ್ದಾರೆ. ಆದರೆ ಚಲುವರಾಯಸ್ವಾಮಿ ಅವರಿಗೆ ಜೆಡಿಎಸ್‌ನವರ ಸರ್ಟಿಫಿಕೇಟ್ ಅಗತ್ಯವಿಲ್ಲ ಎಂದು ಮುಡಾ ಮಾಜಿ ಅಧ್ಯಕ್ಷ ಹಾಗೂ ಹಿರಿಯ ಕಾಂಗ್ರೆಸ್ ಮುಖಂಡ ಅಸಾದುಲ್ಲಾಖಾನ್ ಕಿಡಿಕಾರಿದ್ದಾರೆ.



ನಗರದಲ್ಲಿ ಸುದ್ದಿಗೋಷ್ಠಿಯಲ್ಲಿ ಮಾತನಾಡಿದ ಅವರು, ಈ ಹಿಂದೆ ರವೀಂದ್ರ ಶ್ರೀಕಂಠಯ್ಯ ಕಾಂಗ್ರೆಸ್‌ನಲ್ಲಿದ್ದಾಗ 2008ರ ವಿಧಾನಸಭಾ ಚುನಾವಣೆಯಲ್ಲಿ ಶ್ರೀರಂಗಪಟ್ಟಣ 'ಕೈ' ಅಭ್ಯರ್ಥಿಯಾಗಿದ್ದ ಅಂಬರೀಶ್ ಸೋಲಿಗೆ ಕಾರಣರಾಗಿದ್ದರು. ಜೊತೆಗೆ ಪಕ್ಷ ವಿರೋಧಿ ಚಟುವಟಿಕೆ ನಡೆಸಿ, ಪಕ್ಷದಿಂದ ಅವಮಾನತಾಗಿದ್ದವರು ನಿಷ್ಠೆ ಬಗ್ಗೆ ಮಾತನಾಡುತ್ತಾರೆ ಎಂದು ದೂರಿದರು.

2009ರಲ್ಲಿ ಅಂಬರೀಶ್ ಮಂಡ್ಯ ಕಾಂಗ್ರೆಸ್ ಅಭ್ಯರ್ಥಿಯಾಗಿ ಲೋಕಸಭಾ ಚುನಾವಣೆಗೆ ಸ್ಪರ್ಧಿಸಿದಾಗ ಕಾಂಗ್ರೆಸ್ ಶಾಸಕರಾಗಿದ್ದ ಸುರೇಶ್‌ಗೌಡ ಅಂಬರೀಶ್ ಪರ ಚುನಾವಣೆ ಮಾಡದೇ ಅವರ ಸೋಲಿಗೆ ಕಾರಣರಾಗಿದ್ದರು. ಇಂತಹ ಪಕ್ಷ ವಿರೋಧಿ ಹಿನ್ನೆಲೆ ಹೊಂದಿರುವ ಸುರೇಶ್‌ಗೌಡ ಮತ್ತು ರವೀಂದ್ರ ಶ್ರೀಕಂಠಯ್ಯ ಅವರಿಗೆ ಚಲುವರಾಯಸ್ವಾಮಿ ಬಗ್ಗೆ ಮಾತನಾಡುವ ನೈತಿಕತೆ ಇಲ್ಲ ಎಂದು ಆಕ್ರೋಶ ವ್ಯಕ್ತಪಡಿಸಿದರು.

1999 ರಲ್ಲಿ ಶಾಸಕರಾಗಿ ಅನ್ಯ ಪಕ್ಷದಿಂದ ಹಲವು ಅವಕಾಶ ಬಂದರೂ ಮಂಡ್ಯದಲ್ಲಿ ಜೆಡಿಎಸ್ ಅನ್ನು ಕಟ್ಟಿ ಬೆಳೆಸಿದ ಚಲುವರಾಯಸ್ವಾಮಿ ಅವರು, ಹೆಚ್.ಡಿ.ಕುಮಾರಸ್ವಾಮಿ ಸಿಎಂ ಆಗಲು ಕಾರಣಕರ್ತರಾಗಿದ್ದರು. ಆ ಪಕ್ಷದ ನಾಯಕರಿಂದ ಅನ್ಯಾಯವಾದಾಗ ಸಿಡಿದೆದ್ದು ಪಕ್ಷದಿಂದ ಹೊರಬಂದರೇ ಹೊರತು ಯಾವುದೇ ಅಧಿಕಾರದ ಆಸೆಯಿಂದ ಬಂದವರಲ್ಲ. 2018ರಲ್ಲಿ ಭಾರೀ ಹಿನ್ನಡೆಯಲ್ಲಿದ್ದ ಕಾಂಗ್ರೆಸ್ ಅನ್ನು ಪರಿಷತ್ ಚುನಾವಣೆ, ವಿಧಾನಸಭಾ ಚುನಾವಣೆ ಹಾಗೂ ಸ್ಥಳೀಯ ಸಂಸ್ಥೆ ಚುನಾವಣೆಗಳಲ್ಲಿ ಗೆಲುವಿನ ದಡ ಸೇರಿಸಲು ಚಲುವರಾಯಸ್ವಾಮಿ ಕೊಡುಗೆ ಸಾಕಷ್ಟಿದೆ ಎಂದರು.

ಪ್ರತಿಯೊಬ್ಬರೂ ಆರೋಗ್ಯದ ಬಗ್ಗೆ ಕಾಳಜಿ ವಹಿಸಿ

ಉಚಿತ ಕಣ್ಣಿನ ತಪಾಸಣಾ ಶಿಬಿರದಲ್ಲಿ ಸಮಾಜ ಸೇವಕ ಮಲ್ಲಿಕಾರ್ಜುನ್ ಸಲಹೆ



ಕೆ.ಆರ್.ಪೇಟೆ, ಜು.25– ಪ್ರಸ್ತುತ ಗ್ರಾಮೀಣ ಜನರು ಒತ್ತಡದ ಜೀವನ ಹಾಗೂ ಆಹಾರ ಕ್ರಮದಿಂದ ಅನಾರೋಗ್ಯಕ್ಕೆ ಒಳಗಾಗುತ್ತಿದ್ದಾರೆ. ಹೀಗಾಗಿ ಪ್ರತಿಯೊಬ್ಬರೂ ಆರೋಗ್ಯದ ಬಗ್ಗೆ ಕಾಳಜಿ ವಹಿಸಬೇಕು ಎಂದು ಸಮಾಜ ಸೇವಕ ಆರ್‌ಟಿಓ ಮಲ್ಲಿಕಾರ್ಜುನ್ ಸಲಹೆ ನೀಡಿದರು.

ತಾಲೂಕಿನ ಹೆಮ್ಮನಹಳ್ಳಿಯಲ್ಲಿ ಶ್ರೀಕ್ಷೇತ್ರ ಧರ್ಮಸ್ಥಳ ಗ್ರಾಮಾಭಿವೃದ್ಧಿ ಯೋಜನೆ, ಪ್ರಗತಿ ಬಂಧು ಸ್ವಸಹಾಯ ಸಂಘಗಳ ಒಕ್ಕೂಟ ಹಾಗೂ ಕಾವೇರಿ ಕಣ್ಣಿನ ಆಸ್ಪತ್ರೆ ಸಹಯೋಗದೊಂದಿಗೆ ಹಮ್ಮಿಕೊಂಡಿದ್ದ ಉಚಿತ ಕಣ್ಣಿನ ತಪಾಸಣಾ ಶಿಬಿರ ಉದ್ಘಾಟಿಸಿ ಮಾತನಾಡಿದ ಅವರು, ಧರ್ಮಸ್ಥಳದ ಧರ್ಮಾಧಿಕಾರಿ ಡಾ.ಡಿ.ವೀರೇಂದ್ರ ಹೆಗ್ಗಡೆ ನೇತೃತ್ವದ ಧರ್ಮಸ್ಥಳ ಗ್ರಾಮೀಣಾಭಿವೃದ್ಧಿ ಯೋಜನೆ ಅತ್ಯಂತ ಯಶಸ್ವಿಯಾಗಿ ಕಾರ್ಯ ನಿರ್ವಹಿಸುತ್ತಿದೆ. ಪೂಜ್ಯರ ಮಾರ್ಗದರ್ಶನದಲ್ಲಿ ಸ್ವಸಹಾಯ ಸಂಘಗಳ ಮೂಲಕ ಹಲವು ಮಂದಿ ಉತ್ತಮ ಬದುಕು ಕಟ್ಟಿಕೊಂಡು ಆರ್ಥಿಕವಾಗಿ ಸದೃಢರಾಗಿದ್ದಾರೆ. ಶ್ರೀ ಕ್ಷೇತ್ರ ಧರ್ಮಸ್ಥಳ ಗ್ರಾಮಾಭಿವೃದ್ಧಿ ಸಂಸ್ಥೆ ಸದಸ್ಯರಿಗೆ ಆರ್ಥಿಕ ಸಹಕಾರ ನೀಡುವ ಜೊತೆಗೆ ವ್ಯವಹಾರದ ಶಿಸ್ತು, ಸಂಸಾರ ನಿರ್ವಹಣೆ ಹಾಗೂ ಸಂಸ್ಕಾರಯುತ ಜೀವನ ಮೌಲ್ಯಗಳನ್ನು ತಿಳಿಸಿ ಕೊಡುತ್ತಿದೆ ಎಂದ ಅವರು, ಕಣ್ಣು ಮಾನವನ ಅತೀ ಸೂಕ್ಷ್ಮವಾದ ಅಂಗ. ಅದನ್ನು ಜಾಗ್ರತೆಯಿಂದ ನೋಡಿಕೊಳ್ಳಬೇಕು. ಆರೋಗ್ಯವಂತ ಸಮಾಜಕ್ಕಾಗಿ ಆಯೋಜಿಸಿರುವ ಉಚಿತ ಕಣ್ಣಿನ ತಪಾಸಣೆ ಶಿಬಿರ ಪ್ರತಿಯೊಬ್ಬರಿಗೂ ಅನುಕೂಲವಾಗಿವೆ ಎಂದರು.

ಶ್ರೀಧರ್ಮಸ್ಥಳ ಗ್ರಾಮಾಭಿವೃದ್ಧಿ ಯೋಜನೆ ಜಿಲ್ಲಾ ನಿರ್ದೇಶಕ ಕೇಶವ್ ದೇವಾಂಗ ಮಾತನಾಡಿ, ಧರ್ಮಸ್ಥಳ ಗ್ರಾಮೀಣಾಭಿವೃದ್ಧಿ ಯೋಜನೆಯಡಿ ಕಡಿಮೆ ಬಡ್ಡಿ ದರದಲ್ಲಿ ಸುಲಭವಾಗಿ ಸ್ವಸಹಾಯ ಸಂಘದ ಮೂಲಕ ಮಹಿಳೆಯರು ಸಾಲ ಪಡೆಯಬಹುದಾಗಿದೆ ಸಣ್ಣಪುಟ್ಟ ವ್ಯಾಪಾರ ಆರಂಭಿಸಿ ಕುಟುಂಬದ ಆರ್ಥಿಕ ಸ್ಥಿತಿ ಉತ್ತಮಗೊಳಿಸಬೇಕೆಂಬ ಕನಸು ಕಾಣುವ ಬಡ ಮಹಿಳೆಯರಿಗೆ ಧರ್ಮಸ್ಥಳ ಗ್ರಾಮೀಣಾಭಿವೃದ್ಧಿ ಸಂಸ್ಥೆ ಭರವಸೆ ಬೆಳಕಾಗಿದೆ ಎಂದರು.

ಕಣ್ಣಿನ ದೃಷ್ಟಿ ಎಲ್ಲರಿಗೂ ಮಹತ್ವದ್ದು. ಹೀಗಾಗಿ ಸಾರ್ವಜನಿಕರ ಅನುಕೂಲಕ್ಕಾಗಿ ಈ ಉಚಿತ ಕಣ್ಣಿನ ತಪಾಸಣಾ ಶಿಬಿರವನ್ನು ಆಯೋಜಿಸಿದ್ದು, ಇದನ್ನು ಸದುಪಯೋಗಪಡಿಸಿಕೊಳ್ಳಬೇಕು ಎಂದರು.

ಕಾರ್ಯಕ್ರಮದಲ್ಲಿ ಶ್ರೀಕ್ಷೇತ್ರ ಧರ್ಮಸ್ಥಳ ಗ್ರಾಮಾಭಿವೃದ್ಧಿ ಸಂಸ್ಥೆ ತಾಲೂಕು ಯೋಜನಾಧಿಕಾರಿ ಮಮತಾಶೆಟ್ಟಿ, ಕಾವೇರಿ ಕಣ್ಣಿನ ಆಸ್ಪತ್ರೆ ಮುಖ್ಯ ನಿರ್ವಹಣಾಧಿಕಾರಿ ಹಿರಣ್ಣಯ್ಯ, ಮುರುಕನಹಳ್ಳಿ ಗ್ರಾಪಂ ಅಧ್ಯಕ್ಷೆ ಲಲಿತಮ್ಮ, ಉಪಾಧ್ಯಕ್ಷೆ ಪುಷ್ಪ, ಸದಸ್ಯ ಜಗದೀಶ್, ಜ್ಞಾನವಿಕಾಸ ಯೋಜನೆ ಸಮನ್ವಯಾಧಿಕಾರಿ ಕಾವ್ಯ, ಮೇಲ್ವಿಚಾರಕಿ ಮಮತಾ, ಸಂಘದ ಸೇವಾ ಪ್ರತಿನಿಧಿಗಳು ಮತ್ತು ಸದಸ್ಯರು ಸೇರಿದಂತೆ ಇನ್ನಿತರರಿದ್ದರು.

ಅವಧಿ ವಿಸ್ತರಣೆ

ಮಂಡ್ಯ, ಜು.25– ಪ್ರಸಕ್ತ ಸಾಲಿನ ಪರಿಶಿಷ್ಟ ಜಾತಿ ಕಾನೂನು ಪದವೀಧರರಿಗೆ ಆಡಳಿತ ನ್ಯಾಯಾಧೀಕರಣದಲ್ಲಿ ತರಬೇತಿ ನೀಡಲು ಸಮಾಜ ಕಲ್ಯಾಣ ಇಲಾಖೆ ವೆಬ್‌ಸೈಟ್ www.sw.kar.nic.in ಮೂಲಕ ಅರ್ಜಿ ಸಲ್ಲಿಸಲು ನೀಡಲಾಗಿದ್ದ ಅವಧಿಯನ್ನು ಜು.31ರವರೆಗೆ ವಿಸ್ತರಿಸಲಾಗಿದೆ ಎಂದು ಪ್ರಕಟಣೆ ತಿಳಿಸಿದೆ. ಹೆಚ್ಚಿನ ಮಾಹಿತಿಗೆ ಸಮಾಜ ಕಲ್ಯಾಣ ಇಲಾಖೆ ಉಪ ನಿರ್ದೇಶಕರು ಹಾಗೂ ತಾಲೂಕು ಸಮಾಜ ಕಲ್ಯಾಣ ಇಲಾಖೆ ಸಹಾಯಕ ನಿರ್ದೇಶಕರನ್ನು ಸಂಪರ್ಕಿಸಿ.

ಎನ್‌ಡಿಎ 25ನೇ ವಾರ್ಷಿಕೋತ್ಸವ ಆಚರಣೆಗೆ ಪ್ರಧಾನಿ ಮೋದಿ ಕರೆ



ನವದೆಹಲಿ: ಒಟ್ಟಿಗೆ ಕುಳಿತುಕೊಂಡು ವಿಚಾರ ವಿನಿಮಯ ಮಾಡಿಕೊಳ್ಳಿ ಮತ್ತು ಅಟಲ್ ಜೀ, ಅಡ್ವಾಣಿ ಜೀ ಅವರ ಪರಂಪರೆಯನ್ನು ಮುಂದುವರಿಸಿ ಎಂದು ಪ್ರಧಾನಮಂತ್ರಿ ನರೇಂದ್ರ ಮೋದಿ ಕರೆ ನೀಡಿದ್ದಾರೆ. ಇದು, ಎನ್‌ಡಿಎ ಮೈತ್ರಿಕೂಟದ 25 ನೇ ವಾರ್ಷಿಕೋತ್ಸವವನ್ನು ಆಚರಿಸುವ ದೃಷ್ಟಿಯಿಂದ ಸಂಸದೀಯ ಪಕ್ಷದ ಸಭೆಗೆ ಮೋದಿ ಅವರು ನೀಡಿದ ಸಂದೇಶಗಳಾಗಿವೆ ಎಂದು ಕೇಂದ್ರ ಸಂಸದೀಯ ವ್ಯವಹಾರಗಳ ಸಚಿವ ಪ್ರಹ್ಲಾದ್ ಜೋಶಿ ಮಂಗಳವಾರ ಹೇಳಿದ್ದಾರೆ.

ಸಂಸತ್ತಿನಲ್ಲಿ ಪತ್ರಿಕಾಗೋಷ್ಠಿಯನ್ನುದ್ದೇಶಿಸಿ ಮಾತನಾಡಿದ ಅವರು, ಎನ್‌ಡಿಎ 25 ವರ್ಷಗಳನ್ನು ಪೂರೈಸಿದ ಸಂದರ್ಭವನ್ನು ಹೆಚ್ಚು ಆತ್ಮವಿಶ್ವಾಸದಿಂದ ಮತ್ತು ಇಚ್ಛಾಶಕ್ತಿಯೊಂದಿಗೆ ಆಚರಿಸಲು ಮತ್ತು ಮುನ್ನಡೆಸಲು ಪ್ರಧಾನಿ ಮೋದಿ ಕರೆ ನೀಡಿದ್ದಾರೆ ಎಂದು ಹೇಳಿದರು. ಸೋಮವಾರ ನಿಧನರಾದ ಆರ್‌ಎಸ್‌ಎಸ್ ಮುಖಂಡ ಮದನ್ ದಾಸ್ ದೇವಿ, ಈ ವರ್ಷದ ಆರಂಭದಲ್ಲಿ ನಿಧನರಾದ ಗಿರೀಶ್ ಬಾಪಟ್ ಸೇರಿದಂತೆ ಮೂರು ಮಂದಿ ದಿವಂಗತ ಸಂಸದರು ಮತ್ತು ರತನ್ ಲಾಲ್ ಕಟಾರಿಯಾ ಅವರಿಗೆ ಶ್ರದ್ಧಾಂಜಲಿ ಸಲ್ಲಿಸಿದ ನಂತರ ಬಿಜೆಪಿ ಸಂಸದೀಯ ಸಭೆ ಪ್ರಾರಂಭವಾಯಿತು ಎಂದು ಜೋಶಿ ಮಾಹಿತಿ ನೀಡಿದರು. ಇದು ಎನ್‌ಡಿಎ ಮೈತ್ರಿಕೂಟದ 25 ನೇ ವರ್ಷವಾಗಿದೆ. ಬಿಜೆಪಿಯ ಹಿರಿಯ ನಾಯಕರಾದ ಅಟಲ್ ಬಿಹಾರಿ ವಾಜಪೇಯಿ ಮತ್ತು ಎಲ್‌ಕೆ ಅಡ್ವಾಣಿ ಅವರ ಪರಂಪರೆಯಾಗಿದೆ ಈ ಮೈತ್ರಿಕೂಟ ಎಂದು ಮೋದಿ ಹೇಳಿದರು. ರಜತ ಮಹೋತ್ಸವವನ್ನು ನಾವು ಆಚರಿಸಬೇಕು. ಸಭೆಗಳನ್ನು ನಡೆಸುವುದರಿಂದ ಹಿಡಿದು ವಿಚಾರ ವಿನಿಮಯದವರೆಗೆ ಎಲ್ಲ ರೀತಿಯಲ್ಲೂ ತೊಡಗಿಸಿಕೊಳ್ಳಬೇಕು ಎಂಬುದಾಗಿ ಪ್ರಧಾನಿ ಸಲಹೆ ನೀಡಿದ್ದಾರೆ ಎಂದು ಜೋಶಿ ಹೇಳಿದರು. ಕೇಂದ್ರದಲ್ಲಿ ಬಿಜೆಪಿ ನೇತೃತ್ವದ ಎನ್‌ಡಿಎ ಮೂರನೇ ಬಾರಿಗೆ ಅಧಿಕಾರಕ್ಕೆ ಬರಲಿದ್ದು, ದೇಶವು ವಿಶ್ವದ ಅತಿದೊಡ್ಡ ಆರ್ಥಿಕತೆಗಳಲ್ಲಿ ಮೂರನೇ ಸ್ಥಾನ ತಲುಪಲಿದೆ ಎಂದು ಮೋದಿ ವಿಶ್ವಾಸ ವ್ಯಕ್ತಪಡಿಸಿದ್ದಾರೆ ಎಂದು ಸಚಿವರು ತಿಳಿಸಿದರು. ನಾವು 2014 ರಲ್ಲಿ ಅಧಿಕಾರಕ್ಕೆ ಬಂದಾಗ, ವಿಶ್ವದ ಅತಿದೊಡ್ಡ ಆರ್ಥಿಕತೆಗಳ ಪೈಕಿ 10 ನೇ ಸ್ಥಾನದಲ್ಲಿದ್ದೆವು. ಇದೀಗ ಎರಡನೇ ಅವಧಿಯಲ್ಲಿ ಐದನೇ ಸ್ಥಾನವನ್ನು ತಲುಪಿದ್ದೇವೆ. ಮೂರನೇ ಅವಧಿಯಲ್ಲಿ ನಾವು ಮೂರನೇ ಅತಿದೊಡ್ಡ ಆರ್ಥಿಕತೆಯಾಗಲಿದ್ದೇವೆ ಎಂಬುದಾಗಿ ಮೋದಿ ಭರವಸೆ ವ್ಯಕ್ತಪಡಿಸಿದ್ದಾರೆ ಎಂದು ಜೋಶಿ ಹೇಳಿದ್ದಾರೆ.


ಲೋಕಸಭೆ ಚುನಾವಣೆಯಲ್ಲಿ 350 ಸ್ಥಾನ ಜಯಿಸುತ್ತೇವೆ

ಸಂಸತ್ತಿನ ಮುಂಗಾರು ಅಧಿವೇಶನದಲ್ಲಿ ಸರ್ಕಾರದ ವಿರುದ್ಧ ಅವಿಶ್ವಾಸ ನಿರ್ಣಯ ಮಂಡಿಸುವ ವಿರೋಧ ಪಕ್ಷಗಳ ಯೋಜನೆಗೆ ಪ್ರತಿಕ್ರಿಯಿಸಿದ ಜೋಶಿ, ನಮ್ಮ ಮೊದಲ ಅವಧಿಯಲ್ಲಿಯೂ ಅವರು (ವಿರೋಧ) ನಮ್ಮ ವಿರುದ್ಧ ಅವಿಶ್ವಾಸ ನಿರ್ಣಯವನ್ನು ಮಂಡಿಸಿದ್ದರು. ಆದರೆ, 2019 ರಲ್ಲಿ ಲೋಕಸಭೆಯಲ್ಲಿ ಬಿಜೆಪಿಯ ಸಂಖ್ಯಾಬಲ 282 ರಿಂದ 303 ಕ್ಕೆ ಏರಿತು. ಅವರು ಈ ಬಾರಿಯೂ ಅವಿಶ್ವಾಸ ನಿರ್ಣಯವನ್ನು ತರಲಿ ಮತ್ತು ನಾವು 350 ಸ್ಥಾನಗಳನ್ನು ಗೆಲ್ಲುತ್ತೇವೆ ಎಂದು ಜೋಶಿ ವಿಶ್ವಾಸ ವ್ಯಕ್ತಪಡಿಸಿದರು.

ಪ್ರತಿಪಕ್ಷಗಳು ಅದೇ ಸ್ಥಾನದಲ್ಲಿ ಉಳಿಯಲು ಬಯಸಿವೆ: ಮಣಿಪುರ ವಿಷಯದ ಕುರಿತು ಸಂಸತ್ತಿನಲ್ಲಿ ನಡೆಯುತ್ತಿರುವ ಗದ್ದಲದ ಬಗ್ಗೆ ಮಂಗಳವಾರ ಪ್ರತಿಪಕ್ಷಗಳ ಮೇಲೆ ತೀವ್ರವಾಗಿ ವಾಗ್ದಾಳಿ ನಡೆಸಿದ ಪ್ರಧಾನಿ ಮೋದಿ, ಅವರ ನಡವಳಿಕೆಯು ಅವರು ಪ್ರತಿಪಕ್ಷದಲ್ಲೇ ಉಳಿಯಲು ನಿರ್ಧರಿಸುವುದನ್ನು ಸೂಚಿಸುತ್ತದೆ ಎಂದು ಹೇಳಿದ್ದಾರೆ. ಪ್ರತಿಪಕ್ಷಗಳ ನಡವಳಿಕೆಯಿಂದ ಅವರು ವಿರೋಧ ಪಕ್ಷದಲ್ಲೇ ಉಳಿಯಲು ನಿರ್ಧರಿಸಿದ್ದಾರೆಂಬುದು ತೋರುತ್ತದೆ. ನಾವು ಸಾರ್ವಜನಿಕರ ಹಿತದೃಷ್ಟಿಯಿಂದ ಕೆಲಸ ಮಾಡಬೇಕಾಗಿದೆ ಮತ್ತು ಆ ನಿಟ್ಟಿನಲ್ಲಿ ಮುಂದುವರಿಯಬೇಕಿದೆ ಎಂದು ಮೋದಿ ಹೇಳಿದ್ದಾರೆ.

ಮಣಿಪುರ ಹಿಂಸಾಚಾರದ ಬಗ್ಗೆ ಚರ್ಚೆಗೆ ಸರ್ಕಾರ ಹೆದರುವುದಿಲ್ಲ

ನವದೆಹಲಿ: ಮಣಿಪುರ ಹಿಂಸಾಚಾರಕ್ಕೆ ಸಂಬಂಧಿಸಿದಂತೆ ಎಷ್ಟು ದಿನ ಬೇಕಾದರೂ ಚರ್ಚೆಗೆ ಸರ್ಕಾರ ಸಿದ್ಧವಿದೆ ಎಂದು ಕೇಂದ್ರ ಗೃಹ ಸಚಿವ ಅಮಿತ್ ಶಾ ಅವರು ಮಂಗಳವಾರ ಲೋಕಸಭೆಯಲ್ಲಿ ಹೇಳಿದ್ದಾರೆ. ಮಣಿಪುರ ಹಿಂಸಾಚಾರಕ್ಕೆ ಸಂಬಂಧಿಸಿದಂತೆ ಪ್ರಧಾನಿ ನರೇಂದ್ರ ಮೋದಿ ಅವರು ಚರ್ಚೆಗೂ ಮುನ್ನ ಸಂಸತ್ತಿನಲ್ಲಿ ಹೇಳಿಕೆ ನೀಡಬೇಕು ಎಂದು ಆಗ್ರಹಿಸಿ ಪ್ರತಿಪಕ್ಷಗಳು ಪ್ರತಿಭಟನೆ ನಡೆಸುತ್ತಿದ್ದು, ಮುಂಗಾರು ಅಧಿವೇಶನದ ಮೊದಲ ದಿನದಿಂದ ಉಭಯ ಸದನಗಳಲ್ಲಿ ಕಲಾಪಕ್ಕೆ ಅಡ್ಡಿಯುಂಟಾಗಿದೆ. ಇಂದು ಲೋಕಸಭೆಯಲ್ಲಿ ಬಹು–ರಾಜ್ಯ ಸಹಕಾರ ಸಂಘಗಳ(ತಿದ್ದುಪಡಿ) ಮಸೂದೆ ಮೇಲಿನ ಕಿರು ಚರ್ಚೆ ವೇಳೆ ಉತ್ತರಿಸಿದ ಅಮಿತ್ ಶಾ, ಸರ್ಕಾರ ಮುಚ್ಚಿಡುವಂತಹದ್ದು ಏನೂ ಇಲ್ಲ ಮತ್ತು ಮಣಿಪುರ ಸಮಸ್ಯೆಯ ಕುರಿತು ಚರ್ಚಿಸಲು ಸರ್ಕಾರ ಸಿದ್ಧವಾಗಿದೆ. ಈ ಸಂಬಂಧ ಲೋಕಸಭೆ ಮತ್ತು ರಾಜ್ಯಸಭೆಯ ಪ್ರತಿಪಕ್ಷಗಳ ನಾಯಕರಿಗೆ ತಾವು ಪತ್ರ ಬರೆದಿರುವುದಾಗಿ ತಿಳಿಸಿದರು.



ಘೋಷಣೆಗಳನ್ನು ಕೂಗುವ ಜನ ಸಹಕಾರ ನೀಡುವುದರಲ್ಲಿ ಅಥವಾ ಸಹಕಾರಿಗಳಲ್ಲಿ ಆಸಕ್ತಿ ಹೊಂದಿಲ್ಲ. ದಲಿತರು ಅಥವಾ ಮಹಿಳಾ ಕಲ್ಯಾಣದಲ್ಲಿ ಆಸಕ್ತಿ ಹೊಂದಿಲ್ಲ ಎಂದು ಅಮಿತ್ ಶಾ ಅವರು ವಿರೋಧ ಪಕ್ಷಗಳ ಸದಸ್ಯರ ಘೋಷಣೆಗಳ ನಡುವೆ ವಾಗ್ದಾಳಿ ನಡೆಸಿದರು. ಮಣಿಪುರದ ಬಗ್ಗೆ ಎಷ್ಟು ಸಮಯವರೆಗೆ ಬೇಕಾದರೂ ಚರ್ಚೆಗೆ ನಾವು(ಸರ್ಕಾರ) ಸಿದ್ಧರಿದ್ದೇವೆ ಎಂದು ನಾನು ಉಭಯ ಸದನಗಳ ವಿರೋಧ ಪಕ್ಷದ ನಾಯಕರಿಗೆ ಪತ್ರ ಬರೆದಿದ್ದೇನೆ ಮತ್ತು ಇದನ್ನು ನಾನು ಪುನರುಚ್ಚರಿಸಲು ಬಯಸುತ್ತೇನೆ. ಸರ್ಕಾರ ಯಾವುದಕ್ಕೂ ಹೆದರುವುದಿಲ್ಲ. ಮಣಿಪುರ ವಿಷಯದ ಬಗ್ಗೆ ಚರ್ಚೆ ಮಾಡಲು ಬಯಸುವವರು ಚರ್ಚೆ ಮಾಡಬಹುದು. ನಾವು ಮುಚ್ಚಿಡುವಂತಹದ್ದು ಏನೂ ಇಲ್ಲ ಎಂದು ಕೇಂದ್ರ ಗೃಹ ಸಚಿವರು ಹೇಳಿದರು.

ಶಿಕ್ಷಣದೊಂದಿಗೆ ಸೇವಾ ಮನೋಭಾವ ಬೆಳೆಸಿಕೊಳ್ಳಿ: ಜಿಟಿಡಿ



ಮೈಸೂರು, ಜು.25(ಎಸ್‌ಬಿಡಿ)– ಶಿಕ್ಷಣದೊಂದಿಗೆ ಸೇವಾ ಮನೋಭಾವ ಬೆಳೆಸಿಕೊಳ್ಳಬೇಕು ಎಂದು ಚಾಮುಂಡೇಶ್ವರಿ ಕ್ಷೇತ್ರದ ಶಾಸಕ ಜಿ.ಟಿ.ದೇವೇಗೌಡರು ವಿದ್ಯಾರ್ಥಿಗಳಿಗೆ ಸಲಹೆ ನೀಡಿದರು.

ಮೈಸೂರು ಮಹಾರಾಣಿ ಪದವಿ ಕಾಲೇಜು ಕಲಾ ವಿಭಾಗದ ವತಿಯಿಂದ ಜಯಪುರ ಹೋಬಳಿಯ ಮರಟಿಕ್ಯಾತನಹಳ್ಳಿ ಗ್ರಾಮದಲ್ಲಿ ಹಮ್ಮಿಕೊಂಡಿದ್ದ ರಾಷ್ಟ್ರೀಯ ಸೇವಾ ಯೋಜನೆ(ಎನ್‌ಎಸ್‌ಎಸ್) ಶಿಬಿರದ ಸಮಾರೋಪ ಸಮಾರಂಭದಲ್ಲಿ ಅವರು ಮಾತನಾಡಿದರು.

ಎನ್‌ಎಸ್‌ಎಸ್ ಶಿಬಿರವನ್ನು ಗ್ರಾಮದಲ್ಲಿ ಹಮ್ಮಿಕೊಂಡಿದ್ದು ಅರ್ಥಪೂರ್ಣವಾಗಿದೆ. ವಿದ್ಯಾರ್ಥಿಗಳು ಸ್ವಚ್ಛತಾ ಕಾರ್ಯದ ಮೂಲಕ ಗ್ರಾಮಸ್ಥರಲ್ಲೂ ಅರಿವು ಮೂಡಿಸಿದ್ದಾರೆ. ನಗರ ಪ್ರದೇಶದಲ್ಲಿ ಮಾತ್ರವಲ್ಲ ಹಳ್ಳಿಗಳಲ್ಲೂ ಸ್ವಚ್ಛತೆಗೆ ಆದ್ಯತೆ ನೀಡಬೇಕು. ಕೊಳೆಯದ ತ್ಯಾಜ್ಯವನ್ನು ಜಮೀನು ಹಾಗೂ ಎಲ್ಲೆಂದರಲ್ಲಿ ಹಾಕಬಾರದು. ತ್ಯಾಜ್ಯದ ಬಗ್ಗೆ ಜಾಗೃತಿ ಇರಬೇಕು ಎಂದು ಕಿವಿಮಾತು ಹೇಳಿದರು.

ವಿದ್ಯಾರ್ಥಿಗಳು ಶಿಕ್ಷಣದ ಜೊತೆಗೆ ಸೇವಾ ಮನೋಭಾವ ಬೆಳೆಸಿಕೊಳ್ಳಬೇಕು. ಸಮಾಜಕ್ಕಾಗಿ ಏನಾದರೂ ಕೊಡುಗೆ ನೀಡಬೇಕೆಂಬ ಇಚ್ಛೆಯಿರಬೇಕು. ಆಗ ಮಾತ್ರ ಸಾಮಾಜಿಕ ಸಮಸ್ಯೆಗಳಿಗೆ ಸ್ಪಂದಿಸಲು ಸಾಧ್ಯ. ಈ ನಿಟ್ಟಿನಲ್ಲಿ ಎನ್‌ಎಸ್‌ಎಸ್ ಶಿಬಿರ ಸಹಕಾರಿಯಾಗಿದೆ. ಶಿಬಿರದ ಮೂಲಕ ವಿದ್ಯಾರ್ಥಿಗಳು ಉತ್ತಮ ಪ್ರಜೆಗಳಾಗಿ ರೂಪುಗೊಳ್ಳಬಹುದು ಎಂದು ಆಶಯ ವ್ಯಕ್ತಪಡಿಸಿದರು.

ಈ ವೇಳೆ ಉದ್ಯಮಿ ಹಾಗೂ ಸಮಾಜ ಸೇವಕ ಎಸ್.ಶ್ರೀಕಾಂತ್, ಎನ್‌ಎಸ್‌ಎಸ್ ವಿದ್ಯಾರ್ಥಿಗಳ ಕ್ಷೇಮಾಭಿವೃದ್ಧಿಗೆ ದೇಣಿಗೆ ನೀಡಿದರು. ಮಹಾರಾಣಿ ಕಾಲೇಜು ಕಲಾ ವಿಭಾಗ ಪ್ರಾಂಶುಪಾಲ ವಿ.ವಿ ವಸಂತ್ ಕುಮಾರ್, ಶಿಬಿರ ಯೋಜನಾಧಿಕಾರಿ ವಿಶ್ವನಾಥ್, ಮುಖಂಡರಾದ ನಂಜುಂಡಯ್ಯ, ಚಂದ್ರಕುಮಾರ್, ಗೋಪಾಲಪುರ ರವಿ ಸೇರಿದಂತೆ ಗ್ರಾಮಸ್ಥರು ಉಪಸ್ಥಿತರಿದ್ದರು.

ಬಣ್ಣಾರಿ ಅಮ್ಮನ್ ಸಕ್ಕರೆ ಕಾರ್ಖಾನೆಯಲ್ಲಿ ಜು.28ರಿಂದ ಕಬ್ಬು ಅರೆಯುವ ಕಾರ್ಯ ಆರಂಭ

ಮೈಸೂರು, ಜು.25– ಬಣ್ಣಾರಿ ಅಮ್ಮನ್ ಸಕ್ಕರೆ ಕಾರ್ಖಾನೆಯಲ್ಲಿ ಜು.28ರಿಂದ ಕಬ್ಬು ಅರೆಸುವಿಕೆ ಕಾರ್ಯಾರಂಭವಾಗಲಿರುವ ಹಿನ್ನೆಲೆಯಲ್ಲಿ ರೈತರ ಹಿತದೃಷ್ಟಿಯಿಂದ ಅಗತ್ಯ ಕ್ರಮ ವಹಿಸಬೇಕು ಎಂದು ಮೈಸೂರು ಜಿಲ್ಲಾ ಉಸ್ತುವಾರಿ ಸಚಿವರೂ ಆದ ಸಮಾಜ ಕಲ್ಯಾಣ ಸಚಿವ ಡಾ.ಹೆಚ್.ಸಿ.ಮಹದೇವಪ್ಪ, ಕಬ್ಬು ಆಯುಕ್ತರಿಗೆ ಸೂಚನೆ ನೀಡಿದರು.



ಮೈಸೂರು ಜಿಲ್ಲೆಯ ರೈತ ಸಂಘಟನೆಗಳು, ರೈತ ಮುಖಂಡರು ಹಾಗೂ ರೈತರೊಂದಿಗೆ ಜಿಲ್ಲಾಧಿಕಾರಿಗಳು ಸಭೆ ನಡೆಸಿ, ಕಬ್ಬು ಬೆಳೆಗಾರರ ಸಮಸ್ಯೆಯ ಬಗ್ಗೆ ಚರ್ಚಿಸಿದ್ದರ ಹಿನ್ನೆಲೆಯಲ್ಲಿ ಮಂಗಳವಾರ ಬೆಂಗಳೂರಿನಲ್ಲಿ ಸಚಿವ ಡಾ. ಹೆಚ್.ಸಿ.ಮಹದೇವಪ್ಪ ಸಭೆ ನಡೆಸಿ, ಮಾಹಿತಿ ಪಡೆದರು. ಈ ವೇಳೆ ಮಾತನಾಡಿದ ಅವರು, ಬಣ್ಣಾರಿ ಅಮ್ಮನ್ ಕಾರ್ಖಾನೆ ಕಾರ್ಯಾರಂಭಿಸುತ್ತಿದ್ದು, ರೈತರಿಗೆ ಯಾವುದೇ ತೊಂದರೆಯಾಗದಂತೆ ಎಲ್ಲಾ ರೀತಿಯ ಸಿದ್ಧತೆ ಮಾಡಿಕೊಳ್ಳಬೇಕು. ಕಬ್ಬು ಕಟಾವು ದರ, ದ್ವಿ–ಪಕ್ಷೀಯ ಒಪ್ಪಂದ ಜಾರಿ, ಎಕ್ಸ್–ಫೀಲ್ಡ್ ದರ ಪಾವತಿ ಬಗ್ಗೆ ಶೀಘ್ರ ಬೆಂಗಳೂರಿನಲ್ಲಿ ಅಭಿವೃದ್ಧಿ ಆಯುಕ್ತರು ಹಾಗೂ ರೈತ ಮುಖಂಡರೊಂದಿಗೆ ಸಭೆ ನಡೆಸಬೇಕು. ಸರ್ಕಾರದ ಆದೇಶಾನುಸಾರ ಎಫ್‌ಆರ್‌ಪಿ ಜೊತೆಗೆ ಹೆಚ್ಚುವರಿಯಾಗಿ ಕಾರ್ಖಾನೆಯವರು ಪ್ರತಿ ಟನ್‌ಗೆ 150ರೂ. ನೀಡಬೇಕಿರುವ ಸಂಬಂಧ ನ್ಯಾಯಾಲಯದಲ್ಲಿರುವ ಪ್ರಕರಣವನ್ನು ಶೀಘ್ರ ಇತ್ಯರ್ಥಪಡಿಸಿಕೊಳ್ಳುವ ಬಗ್ಗೆಯೂ ಕ್ರಮ ವಹಿಸಬೇಕು ಎಂದು ಕಬ್ಬು ಅಭಿವೃದ್ಧಿ ಆಯುಕ್ತರಿಗೆ ತಿಳಿಸಿದರು. ಸಭೆಯಲ್ಲಿ ಮೈಸೂರು ಜಿಲ್ಲಾಧಿಕಾರಿ ಡಾ. ಕೆ.ವಿ.ರಾಜೇಂದ್ರ, ಆಹಾರ, ನಾಗರಿಕ ಸರಬರಾಜು ಇಲಾಖೆ ಜಂಟಿನಿರ್ದೇಶಕಿ ಕುಮುದಾ ಮತ್ತಿತರ ಅಧಿಕಾರಿಗಳು ಹಾಜರಿದ್ದರು.



ಮೈಸೂರಿನ ಸನ್ಮತಿ ಮಹಿಳಾ ಫೌಂಡೇಶನ್ ವತಿಯಿಂದ ಮೈಸೂರು ವಿಜಯನಗರದ ಜಿಲ್ಲಾ ಕನ್ನಡ ಸಾಹಿತ್ಯ ಭವನದಲ್ಲಿ ನಡೆದ ವೈದ್ಯರ ದಿನಾಚರಣೆ ಕಾರ್ಯಕ್ರಮದಲ್ಲಿ ಡಾ. ಸುಂದರರಾಜು, ಡಾ. ರಮೇಶ್ ಜೇವೂರು ಅವರನ್ನು ಸನ್ಮಾನಿಸಲಾಯಿತು. ಈ ವೇಳೆ ಸನ್ಮತಿ ಮಹಿಳಾ ಫೌಂಡೇಶನ್ ಪದಾಧಿಕಾರಿಗಳು ಹಾಜರಿದ್ದರು.






ಕೊಡಗಲ್ಲಿ ಮಳೆಯಿಂದ ಪ್ರವಾಹ

ಹಲವು ಗ್ರಾಮಗಳಿಗೆ ಜಲ ದಿಗ್ಬಂಧನ, ರಸ್ತೆ ಸಂಪರ್ಕ ಕಡಿತ, ಮುರಿದು ಬಿದ್ದ ಮರಗಳು, ವಿದ್ಯುತ್ ಕಂಬಗಳು

• ಬೇತ್ರಿ ಸೇತುವೆ ಮುಳುಗಡೆ • ಮೂರ್ನಾಡು–ವಿರಾಜಪೇಟೆ ರಸ್ತೆ ಸಂಪರ್ಕ ಬಂದ್ ಸಾಧ್ಯತೆ • ಗ್ರಾಮಗಳಿಗೆ ಬಂದ ಬೋಟ್‌ಗಳು

ಮಡಿಕೇರಿ, ಜು.25– ಕೊಡಗಿನಲ್ಲಿ ಮಳೆ ಮುಂದುವರೆದಿದ್ದು, ನದಿಗಳು ಪ್ರವಾಹ ಮಟ್ಟವನ್ನೂ ಮೀರಿ ಹರಿಯುತ್ತಿದೆ. ಹಲವು ಗ್ರಾಮಗಳಲ್ಲಿ ಮನೆಗಳು ಜಲಾವೃತವಾಗಿವೆ. ಅದರೊಂದಿಗೆ ಕೆಲವು ರಸ್ತೆಗಳು ಕೂಡ ಕಾವೇರಿ ನದಿ ಪ್ರವಾಹದಿಂದ ಸಂಪರ್ಕ ಕಳೆದುಕೊಂಡಿವೆ.

ವ್ಯಾಪಕ ಮಳೆಯಿಂದ ಜನ ಜೀವನ ಅಸ್ತವ್ಯಸ್ತವಾಗಿದ್ದು, ಮತ್ತೆ ಮಳೆ ಸುರಿಯುವ ಸಾಧ್ಯತೆ ಇರುವ ಹಿನ್ನೆಲೆಯಲ್ಲಿ ಬುಧವಾರ ಬೆಳಗ್ಗೆ 8.30ರವರೆಗೆ ಜಿಲ್ಲಾದ್ಯಂತ ಆರೆಂಜ್ ಅಲರ್ಟ್ ಘೋಷಿಸಲಾಗಿದೆ. ಗಾಳಿ ಮಳೆಯಿಂದ ಮರ ಮತ್ತು ವಿದ್ಯುತ್ ಕಂಬಗಳು ಮುರಿದು ಬಿದ್ದಿದ್ದು, ದುರಸ್ತಿ ಕಾರ್ಯ ನಡೆಸಲಾಗುತ್ತಿದೆ. ಅತಿಯಾದ ಮಳೆ ಜಿಲ್ಲೆಯಲ್ಲಿ ಅವಾಂತರ ಸೃಷ್ಟಿಸುತ್ತಿದ್ದು, ವಿವಿಧ ಕಡೆಗಳಲ್ಲಿ ಮನೆಗಳಿಗೂ ಹಾನಿಯಾಗಿರುವ ಬಗ್ಗೆ ವರದಿಯಾಗಿದೆ.

ರಸ್ತೆ ಸಂಚಾರ ಸ್ಥಗಿತ: ನಾಪೋಕ್ಲು, ಕಕ್ಕಬ್ಬೆ, ಕುಂಜಿಲ ಮತ್ತು ಕಾವೇರಿ ನದಿ ಪಾತ್ರದ ಗ್ರಾಮಗಳಲ್ಲಿ ವ್ಯಾಪಕ ಮಳೆಯಾಗುತ್ತಿರುವ ಕಾರಣ ಕಾವೇರಿ ನದಿ ಪ್ರವಾಹ ಮಟ್ಟವನ್ನೂ ಮೀರಿ ಹರಿಯುತ್ತಿದ್ದು, ಜಲ ದಿಗ್ಬಂಧನ ವಿಧಿಸಿದೆ. ನಾಪೋಕ್ಲು–ಕೊಟ್ಟಮುಡಿ–ಮಡಿಕೇರಿ ರಸ್ತೆಯಲ್ಲಿ ಕಾವೇರಿ ನದಿ ಪ್ರವಾಹದಿಂದ ವಾಹನ ಮತ್ತು ಜನ ಸಂಚಾರ ಸ್ಥಗಿತಗೊಂಡಿದೆ. ನಾಪೋಕ್ಲು–ಮೂರ್ನಾಡು ಮುಖ್ಯರಸ್ತೆ, ಚೆರಿಯಪರಂಬು–ಕಲ್ಲುಮೊಟ್ಟೆ ರಸ್ತೆಯಲ್ಲೂ ಪ್ರವಾಹದ ಮಟ್ಟ ಹೆಚ್ಚಳವಾಗಿದ್ದು, ಮನೆಗಳಿಗೆ ನೀರು ನುಗ್ಗಿದೆ. ಕಾವೇರಿ ನದಿಯಲ್ಲಿ ಪ್ರವಾಹದ ಮಟ್ಟ ಮತ್ತಷ್ಟು ಹೆಚ್ಚಳವಾಗುವ ಸಾಧ್ಯತೆ ಇದ್ದು, ಚೆರಿಯಪರಂಬು ಗ್ರಾಮದ ಕಾವೇರಿ ನದಿ ದಂಡೆಯಲ್ಲಿ ವಾಸಿಸುವ ಜನರು ಸುರಕ್ಷಿತ ಸ್ಥಳಕ್ಕೆ ತೆರಳುವಂತೆ ಅಧಿಕಾರಿಗಳು ಸೂಚನೆ ನೀಡಿದ್ದಾರೆ.

ವಾಹನ ಸಂಚಾರ ನಿಷೇಧ: ಕಾವೇರಿ ನದಿ ಉಕ್ಕಿ ಹರಿಯುತ್ತಿರುವ ಪರಿಣಾಮ ಮೂರ್ನಾಡು–ವಿರಾಜಪೇಟೆ ಸಂಪರ್ಕಿಸುವ ಬೇತ್ರಿ ಸೇತುವೆ ನದಿ ನೀರಿನಲ್ಲಿ ಮುಳುಗಲು ಕ್ಷಣಗಣನೆ ಆರಂಭವಾಗಿದೆ. ಕಾವೇರಿ ನದಿ ನೀರು ಸೇತುವೆಗೆ ಒತ್ತಿಕೊಂಡು ಮೈದುಂಬಿ ಹರಿಯುತ್ತಿದ್ದು, ಸೇತುವೆ ತುಂಬಲು ಕೇವಲ 1 ಅಡಿ ಮಾತ್ರವೇ ಬಾಕಿ ಉಳಿದಿದೆ. ಮಳೆ ಮುಂದುವರೆದಲ್ಲಿ ಈ ಸೇತುವೆಯೂ ಮುಳುಗಡೆಯಾಗಲಿದ್ದು, ಮೂರ್ನಾಡು–ವಿರಾಜಪೇಟೆ ರಸ್ತೆ ಸಂಪರ್ಕವೂ ಬಂದ್ ಆಗುವ ಲಕ್ಷಣಗಳು ಕಂಡು ಬರುತ್ತಿದೆ. ಸಹಜವಾಗಿಯೇ ಬೇತ್ರಿ ಸೇತುವೆ ಭರ್ತಿಯಾಗುವುದನ್ನು ನೋಡಲು ಸುತ್ತಮುತ್ತಲ ಊರುಗಳಿಂದ ಜನರು ಅತ್ತಕಡೆ ತೆರಳುವುದು ಸಾಮಾನ್ಯವಾಗಿದೆ. ಈ ಹಿನ್ನೆಲೆಯಲ್ಲಿ ಸೇತುವೆ ಮೇಲೆ ವಾಹನಗಳನ್ನು ನಿಲ್ಲಿಸುವುದನ್ನು ತಡೆಯಲು ಪೊಲೀಸ್ ಸಿಬ್ಬಂದಿಗಳನ್ನು ನಿಯೋಜನೆ ಮಾಡಲಾಗಿದೆ.



ಇಂದೂ ಜಿಲ್ಲೆಯಲ್ಲಿ ಶಾಲಾ–ಕಾಲೇಜುಗಳಿಗೆ ರಜೆ

ಮಡಿಕೇರಿ, ಜು.25– ಕೊಡಗು ಜಿಲ್ಲೆಯಾದ್ಯಂತ ಭಾರೀ ಮಳೆ ಸುರಿಯುತ್ತಿರುವ ಕಾರಣ ಮುನ್ನೆಚ್ಚರಿಕಾ ಕ್ರಮವಾಗಿ ಜಿಲ್ಲೆಯ ಎಲ್ಲಾ ಅಂಗನವಾಡಿ, ಶಾಲಾ ಕಾಲೇಜುಗಳಿಗೆ ಬುಧವಾರ (ಜು.26)ವೂ ರಜೆ ಘೋಷಿಸಿ ಜಿಲ್ಲಾಧಿಕಾರಿ ವೆಂಕಟ್‌ರಾಜ ಆದೇಶ ಹೊರಡಿಸಿದ್ದಾರೆ.

ಕೊನೆಗೂ ಬಂತು ಬೋಟ್: ಚೇರಂಬಾಣೆ ಸಮೀಪದ ಬೇಂಗೂರು ಗ್ರಾಮದಲ್ಲಿ ದೋಣಿ ಕಡುವು ಎಂಬ ಪ್ರದೇಶವಿದ್ದು, ಕಾವೇರಿ ನದಿ ಪ್ರವಾಹದಿಂದ ಈ ಪ್ರದೇಶದ ಸಂಪರ್ಕ ಸೇತುವೆ ಕಳೆದ 5 ದಿನಗಳಿಂದ ಮುಳುಗಿದೆ. ಅಲ್ಲಿನ 39 ಕುಟುಂಬಗಳ ಜನರು ದ್ವೀಪದಂತಾದ ಪ್ರದೇಶದಲ್ಲಿ ದಿನ ಕಳೆಯುತ್ತಿದ್ದು, ಹೊರ ಜಗತ್ತಿನಿಂದ ಸಂಪರ್ಕ ಕಳೆದುಕೊಂಡಿದ್ದರು. ಈ ಹಿನ್ನೆಲೆಯಲ್ಲಿ ಉಪ ವಿಭಾಗಾಧಿಕಾರಿ ಯತೀಶ್ ಉಲ್ಲಾಳ್ ಅವರು ದೋಣಿಕಡುವು ಪ್ರದೇಶಕ್ಕೆ ಫೈಬರ್ ದೋಣಿಯನ್ನು ಒದಗಿಸಿದ್ದಾರೆ. ಅಗ್ನಿಶಾಮಕ ದಳ ಸಿಬ್ಬಂದಿಗಳು ಫೈಬರ್ ದೋಣಿಯನ್ನು ಗ್ರಾಮಸ್ಥರಿಗೆ ಹಸ್ತಾಂತರಿಸಿದ್ದು, ಅಲ್ಲಿನ ನಿವಾಸಿಗಳಿಗೆ ಅನುಕೂಲವಾಗಿದೆ. ಅಲ್ಲಿನ ಪಂಚಾಯಿತಿ ಓರ್ವ ಸಿಬ್ಬಂದಿಯನ್ನು ದೋಣಿಯ ನಾವಿಕನಾಗಿ ನಿಯೋಜಿಸಿದೆ.

ಮಳಿಗೆಗಳಿಗೆ ಹಾನಿ: ನಾಪೋಕ್ಲುವಿನಲ್ಲಿ ತಡೆಗೋಡೆ ಕುಸಿದು ಅಂಗಡಿ ಮಳಿಗೆಗಳಿಗೆ ಅಪಾರ ಹಾನಿಯಾಗಿರುವ ಘಟನೆ ನಡೆದಿದೆ. ಇಲ್ಲಿನ ನಿವಾಸಿ ಅಜ್ಜೇಟಿರ ಬೋಪಣ್ಣ ಎಂಬುವರಿಗೆ ಸೇರಿದ ಅಂಗಡಿ ಮಳಿಗೆಗಳ ಮೇಲೆ ಸೋಮವಾರ ತಡರಾತ್ರಿ ಹಿಂಬದಿಯ ತಡೆಗೋಡೆ ಕುಸಿದು ಬಿದ್ದು, ಮಳಿಗೆಗಳು ಧ್ವಂಸವಾಗಿವೆ. ಪರಿಣಾಮ ಅಂದಾಜು 10 ಲಕ್ಷ ರೂ. ಹಾನಿಯಾಗಿದ್ದು, ಸೂಕ್ತ ಪರಿಹಾರ ನೀಡುವಂತೆ ಅಂಗಡಿ ಮಾಲೀಕರು ಆಗ್ರಹಿಸಿದ್ದಾರೆ. ಘಟನಾ ಸ್ಥಳಕ್ಕೆ ನಾಪೋಕ್ಲು ಕಂದಾಯ ಪರಿವೀಕ್ಷಕ ರವಿಕುಮಾರ್, ಗ್ರಾಮ ಲೆಕ್ಕಿ ಅಮೃತ ಅವರುಗಳು ಭೇಟಿ ನೀಡಿ, ಪರಿಶೀಲನೆ ನಡೆಸಿದ್ದಾರೆ.


ರೈತರ ಜಮೀನಿಗೆ ನುಗ್ಗಿದ ನದಿ ನೀರು, ಅಪಾರ ಹಾನಿ



ಕುಶಾಲನಗರ, ಜು.25– ಸಮೀಪದ ಹೆಬ್ಬಾಲೆ ಗ್ರಾಮ ಪಂಚಾಯತಿ ವ್ಯಾಪ್ತಿಯ ಹುಲುಸೆ, ಹೆಬ್ಬಾಲೆ, ರಾಂಪುರ ಸುತ್ತಮುತ್ತಲಿನ ಗ್ರಾಮಗಳಲ್ಲಿ ರೈತರ ಜಮೀನಿಗೆ ಕಾವೇರಿ ನದಿ ಅಪಾರ ಪ್ರಮಾಣದಲ್ಲಿ ನುಗ್ಗಿದ ಹಿನ್ನೆಲೆಯಲ್ಲಿ ಕೃಷಿಗೆ ಹಾನಿ ಉಂಟಾಗಿದೆ. ಜಿಲ್ಲೆಯಲ್ಲಿ ಸುರಿಯುತ್ತಿರುವ ಧಾರಾಕಾರ ಮಳೆಯಿಂದಾಗಿ ಕಾವೇರಿ ನದಿ ನೀರಿನಲ್ಲಿ ಗಣನೀಯ ಪ್ರಮಾಣದಲ್ಲಿ ಏರಿಕೆಯಾಗಿದ್ದು, ಮೈದುಂಬಿ ಹರಿಯುತ್ತಿದೆ. ನದಿಯ ಹೆಚ್ಚುವರಿ ನೀರು ನದಿ ಆಸುಪಾಸಿನಲ್ಲಿರುವ ರೈತರ ಜಮೀನಿಗೆ ನುಗ್ಗಿದೆ. ಇದರಿಂದ ರೈತರಾದ ಕಪನಪ್ಪ, ಶಿವನಂಜಯ್ಯ, ಕುಪನಯ್ಯ ಹಾಗೂ ಶ್ರೀನಿವಾಸ್ ಎಂಬುವವರಿಗೆ ಹತ್ತಾರು ಎಕರೆ ಪ್ರದೇಶದಲ್ಲಿ ಬೆಳೆದಿರುವ ಜೋಳ ಹಾಗೂ ತೆಂಗು ಇನ್ನಿತರ ಕೃಷಿಗೆ ಸಂಪೂರ್ಣ ಹಾನಿಯಾಗಿದೆ. ಪ್ರತಿ ವರ್ಷ ಮಳೆಗಾಲದಲ್ಲಿ ನದಿ ದಡದ ಜಮೀನುಗಳಿಗೆ ನುಗ್ಗಿ ಹಾನಿ ಆಗುತ್ತಿದ್ದು, ರೈತರು ತೀವ್ರ ತೊಂದರೆ ಅನುಭವಿಸುವಂತಾಗಿದೆ. ನದಿ ನೀರಿನಿಂದ ಹಲವಾರು ಬಾರಿ ಬೆಳೆ ನಷ್ಟವಾಗಿದೆ. ಫಲವತ್ತಾದ ಮಣ್ಣು ಕೊಚ್ಚಿಕೊಂಡು ಹೋಗಿದೆ ಭೂಮಿ ಸಂಪೂರ್ಣ ಸತ್ವ ಕಳೆದು ಕೊಂಡಿದೆ ಎಂದು ಬೇಸರ ವ್ಯಕ್ತಪಡಿಸಿದ್ದಾರೆ.

ಪ್ರವಾಹ ಪೀಡಿತ ಪ್ರದೇಶಗಳಿಗೆ ಉಸ್ತುವಾರಿ ಸಚಿವ ಬೋಸರಾಜ್, ಕಂದಾಯ ಸಚಿವ ಕೃಷ್ಣ ಭೈರೇಗೌಡ ಭೇಟಿ, ಪರಿಶೀಲನೆ

ಆಮೆಗತಿಯಲ್ಲಿ ಸಾಗುತ್ತಿರುವ ಭಾಗಮಂಡಲ ಮೇಲ್ಸೇತುವೆ ಕಾಮಗಾರಿ ತ್ವರಿತವಾಗಿ ಪೂರ್ಣಗೊಳಿಸಲು ಸೂಚನೆ



ಮಡಿಕೇರಿ, ಜು.25– ಭಾರೀ ಮಳೆಯಿಂದ ಕಾವೇರಿ ನದಿ ಪ್ರವಾಹ ಏರ್ಪಟ್ಟು ಹಾನಿಗೀಡಾದ ಪ್ರದೇಶಗಳಿಗೆ ಜಿಲ್ಲಾ ಉಸ್ತುವಾರಿ ಸಚಿವ ಬೋಸರಾಜ್ ಹಾಗೂ ಕಂದಾಯ ಸಚಿವ ಕೃಷ್ಣ ಭೈರೇಗೌಡ ಖುದ್ದು ಭೇಟಿ ನೀಡಿ, ಪರಿಶೀಲನೆ ನಡೆಸಿದರು. ಚೇರಂಬಾಣೆ ವ್ಯಾಪ್ತಿಯ ಬೇಂಗೂರು ದೋಣಿ ಕಡುವು ಪ್ರದೇಶಕ್ಕೆ ಭೇಟಿ ನೀಡಿ ಪ್ರವಾಹ ಪರಿಸ್ಥಿತಿಯನ್ನು ಅವಲೋಕಿಸಿದರು. ಆ ಪ್ರದೇಶದಲ್ಲಿರುವ ಕುಟುಂಬಗಳು, ಜನಸಂಖ್ಯೆ, ಪ್ರವಾಹದಿಂದ ಎದುರಾಗುವ ಸಮಸ್ಯೆಗಳ ಕುರಿತು ಜನರಿಂದಲೇ ಮಾಹಿತಿ ಪಡೆದರು.

ಈ ವೇಳೆ ಅಲ್ಲಿನ ನಿವಾಸಿಗಳು ಮಾತನಾಡಿ, ಪ್ರತಿ ವರ್ಷದ ಮಳೆಗಾಲದಲ್ಲಿ ಪ್ರವಾಹ ತಲೆದೋರುತ್ತದೆ. ಕಾವೇರಿ ನದಿ ನೀರಿನ ಪ್ರವಾಹದಲ್ಲಿ ಗ್ರಾಮದ ಸಂಪರ್ಕ ಸೇತುವೆ ಮೇಲೆ 25 ಅಡಿ ನೀರು ಹರಿಯುತ್ತದೆ. ಹೀಗಾಗಿ ಮತ್ತೊಂದು ರಸ್ತೆ ಅಥವಾ ಮೇಲ್ಸೇತುವೆ ನಿರ್ಮಿಸಿಕೊಡುವಂತೆ ಮನವಿ ಮಾಡಿದರು. ಸರಕಾರದೊಂದಿಗೆ ವ್ಯವಹರಿಸಿ ಸಮಸ್ಯೆ ಪರಿಹಾರಕ್ಕೆ ಪ್ರಯತ್ನಿಸುವುದಾಗಿ ಸಚಿವದ್ವಯರು ಭರವಸೆ ನೀಡಿದರು.

ಬಳಿಕ ಭಾಗಮಂಡಲಕ್ಕೆ ತೆರಳಿದ ಸಚಿವರುಗಳು, ತ್ರಿವೇಣಿ ಸಂಗಮ ಪ್ರವಾಹ, ಭಾಗಮಂಡಲ–ನಾಪೋಕ್ಲು ರಸ್ತೆಯ ಮೇಲೆ ಪ್ರವಾಹ ನೀರು ಹರಿಯುತ್ತಿರುವುದು ಮತ್ತು ಭಾಗಮಂಡಲದಲ್ಲಿ ಈಗಾಗಲೇ ನಿರ್ಮಿಸಿರುವ ಮೇಲ್ಸೇತುವೆ ಕಾಮಗಾರಿಗಳನ್ನು ಪರಿಶೀಲನೆ ನಡೆಸಿದರು. ಬಳಿಕ ಮಾತನಾಡಿದ ಜಿಲ್ಲಾ ಉಸ್ತುವಾರಿ ಸಚಿವ ಬೋಸರಾಜ್ ಅವರು, ಮೇಲ್ಸೇತುವೆ ಕಾಮಗಾರಿ ಆಮೆಗತಿಯಲ್ಲಿ ಸಾಗುತ್ತಿರುವ ಬಗ್ಗೆ ತಮ್ಮ ಗಮನಕ್ಕೆ ಬಂದಿದೆ. ಕೂಡಲೇ ಕಾಮಗಾರಿ ಪೂರ್ಣಗೊಳಿಸುವಂತೆ ಸಂಬಂಧಿಸಿದ ಅಧಿಕಾರಿಗೆ ಸೂಚನೆ ನೀಡಲಾಗಿದೆ ಎಂದು ತಿಳಿಸಿದರು.

ಈ ಸಂದರ್ಭ ವಿರಾಜಪೇಟೆ ಕ್ಷೇತ್ರದ ಶಾಸಕ ಎ.ಎಸ್ ಪೊನ್ನಣ್ಣ, ಮಡಿಕೇರಿ ಕ್ಷೇತ್ರದ ಶಾಸಕ ಡಾ.ಮಂಥರ್‌ಗೌಡ, ಜಿಲ್ಲಾಧಿಕಾರಿ ವೆಂಕಟ್ ರಾಜ, ಜಿಲ್ಲಾಡಳಿತ ಅಧಿಕಾರಿಗಳು ಹಾಗೂ ಪಕ್ಷದ ಪ್ರಮುಖರು ಹಾಜರಿದ್ದರು.

ಸಂಘಟನೆ ಬಗ್ಗೆ ಆರೋಪಿಸಿರುವವರ ವಿರುದ್ಧ ಕ್ರಮಕ್ಕೆ ಸರ್ಕಾರಿ ನೌಕರರ ಸಂಘ ಆಗ್ರಹ



ಯಳಂದೂರು, ಜು.25– ನೌಕರರ ಹಿತ ಕಾಯುವ ರಾಜ್ಯ ಸರ್ಕಾರಿ ನೌಕರರ ಸಂಘದ ವಿರುದ್ಧ ಆಧಾರರಹಿತವಾಗಿ ಸಾಮಾಜಿಕ ಜಾಲತಾಣದಲ್ಲಿ ತೇಜೋವಧೆ ಮಾಡುತ್ತಿರುವವರ ವಿರುದ್ಧ ಕ್ರಮ ಕೈಗೊಳ್ಳುವಂತೆ ಆಗ್ರಹಿಸಿ ತಾಲೂಕಿನ ಸರ್ಕಾರಿ ನೌಕರರ ಸಂಘದ ಪದಾಧಿಕಾರಿಗಳು ತಹಸೀಲ್ದಾರ್ ಶಿವರಾಜುಗೆ ಮನವಿ ಸಲ್ಲಿಸಿದರು.

ಈ ವೇಳೆ ಮಾತನಾಡಿದ ತಾಲೂಕು ಅಧ್ಯಕ್ಷ ವೈ.ಎಂ.ಮಂಜುನಾಥ್, ಸಂಘದ ರಾಜ್ಯಾಧ್ಯಕ್ಷರು, ಜಿಲ್ಲೆ ಮತ್ತು ತಾಲೂಕು ಸಂಘದ ವಿರುದ್ಧ ಕೆಲವು ಇಲಾಖೆ ಅಧಿಕಾರಿಗಳು ಆಧಾರರಹಿತ ಆರೋಪಗಳನ್ನು ಮಾಡಿ, ಸಾಮಾಜಿಕ ಜಾಲತಾಣದಲ್ಲಿ ಸಂಘಟನೆಗಳ ತೇಜೋವಧೆ ಮಾಡಿದ್ದಾರೆ. ಸಚಿವಾಲಯದ ಶಾಖಾಧಿಕಾರಿ ಗುರುಸ್ವಾಮಿ, ಅಧೀನ ಕಾರ್ಯದರ್ಶಿ ಶಾಂತರಾಮ, ರಾಯಚೂರಿನ ಪಶು ಆಸ್ಪತ್ರೆ ಅಧಿಕಾರಿ ಮೆಹಬೂಬ್ ಭಾಷಾ, ಭೂಮಾಪನ ಅಧಿಕಾರಿ ಶಿವರುದ್ರಯ್ಯ ಮತ್ತು ರಾಮನಗರ ಜಿಲ್ಲೆ ಅವ್ವೇರಹಳ್ಳಿ ಕಾಲೇಜಿನ ಉಪನ್ಯಾಸಕ ನಿಂಗೇಗೌಡರ ವಿರುದ್ಧ ಕೂಡಲೇ ಕ್ರಮ ಕೈಗೊಳ್ಳುವಂತೆ ಮನವಿ ಮಾಡಿದರು.

ಈ ವೇಳೆ ಕಾರ್ಯದರ್ಶಿ ಮಹೇಶ್, ಖಜಾಂಚಿ ರಮೇಶ್, ಹಿರಿಯ ಉಪಾಧ್ಯಕ್ಷರಾದ ಬಸವರಾಜು, ನಂಜುಂಡಸ್ವಾಮಿ, ಮಾದಪ್ಪ, ಸುರೇಶ್, ಮಲ್ಲೇಶ, ನವೀನ್, ಮಾನಸ ಪ್ರೌಢಶಾಲೆ ಶಿಕ್ಷಕರ ಸಂಘದ ಅಧ್ಯಕ್ಷ ಮಹದೇವು, ಕಾರ್ಯದರ್ಶಿ ದಿವಾಕರ್, ಕಂದಾಯ ಇಲಾಖೆ ಯದುಗಿರೀಶ, ನಂದ, ಪ್ರವೀಣ, ಶರತ್, ಶಾಂತಿ, ರಾಣಿ, ತೇಜಸ್ವಿನಿ, ಶಶಿರೇಖಾ ಪುಷ್ಪಲತಾ ಸೇರಿದಂತೆ ವಿವಿಧ ಇಲಾಖೆ ಅಧಿಕಾರಿಗಳು ಮತ್ತು ನೌಕರರು ಇದ್ದರು.

ಮಕ್ಕಳ ಮೇಲಿನ ದೌರ್ಜನ್ಯ ತಡೆಗೆ ಜಾಗೃತಿ ಅಗತ್ಯ

ಜಿಲ್ಲಾ ನ್ಯಾಯಾಧೀಶರಾದ ಬಿ.ಎಸ್.ಭಾರತಿ ಅಭಿಪ್ರಾಯ



ಚಾಮರಾಜನಗರ, ಜು.25– ಬಾಲ್ಯ ವಿವಾಹ ನಿಷೇಧ ಹಾಗೂ ಮಕ್ಕಳ ಹಕ್ಕುಗಳ ಬಗ್ಗೆ ಸಾರ್ವಜನಿಕರು ತಿಳಿದಾಗ ಮಾತ್ರ ಮಕ್ಕಳ ಮೇಲಿನ ದೌರ್ಜನ್ಯ ಹಾಗೂ ಅಪರಾಧಗಳನ್ನು ತಡೆಯಬಹುದು ಎಂದು ಜಿಲ್ಲಾ ಕಾನೂನು ಸೇವೆಗಳ ಪ್ರಾಧಿಕಾರದ ಅಧ್ಯಕ್ಷರು ಹಾಗೂ ಪ್ರಧಾನ ಜಿಲ್ಲಾ ಮತ್ತು ಸೆಷನ್ಸ್ ನ್ಯಾಯಾಧೀಶರಾದ ಬಿ.ಎಸ್. ಭಾರತಿ ತಿಳಿಸಿದರು.

ನಗರದ ಜಿಲ್ಲಾಡಳಿತ ಭವನದ ಆವರಣದಲ್ಲಿರುವ ಜೆ.ಹೆಚ್.ಪಟೇಲ್ ಸಭಾಂಗಣದಲ್ಲಿ ಜಿಲ್ಲಾಡಳಿತ, ಜಿಪಂ, ಜಿಲ್ಲಾ ಕಾನೂನು ಸೇವೆಗಳ ಪ್ರಾಧಿಕಾರ, ಕರ್ನಾಟಕ ಬಾಲ್ಯವಿವಾಹ ವಿರೋಧಿ ವೇದಿಕೆ, ಜಿಲ್ಲಾ ಪೊಲೀಸ್ ಇಲಾಖೆ, ಮಹಿಳಾ ಮತ್ತು ಮಕ್ಕಳ ಅಭಿವೃದ್ಧಿ ಇಲಾಖೆ, ಜಿಲ್ಲಾ ಮಕ್ಕಳ ರಕ್ಷಣಾ ಘಟಕ, ಆರೋಗ್ಯ ಇಲಾಖೆ, ಪದವಿ ಪೂರ್ವ ಶಿಕ್ಷಣ ಇಲಾಖೆ, ಸಾರ್ವಜನಿಕ ಶಿಕ್ಷಣ ಇಲಾಖೆ, ಕಾರ್ಮಿಕ ಇಲಾಖೆ, ಜಿಲ್ಲಾ ವಕೀಲರ ಸಂಘ, ಪಿ.ಎಂ.ಎಸ್.ಆರ್. ಸಂಸ್ಥೆ, ಚೈಲ್ಡ್‌ರೈಟ್ಸ್ ಟ್ರಸ್ಟ್ ಸಹಯೋಗದಲ್ಲಿ ನಡೆದ ಬಾಲ್ಯ ವಿವಾಹ ನಿಷೇಧ ಮತ್ತು ಮಕ್ಕಳ ಹಕ್ಕುಗಳ ರಕ್ಷಣೆ ಕುರಿತ ಕಾರ್ಯಕ್ರಮ ಉದ್ಘಾಟಿಸಿ ಅವರು ಮಾತನಾಡಿದರು.

ಚಿಕ್ಕ ವಯಸ್ಸಿನಲ್ಲೇ ಗಂಡು ಅಥವಾ ಹೆಣ್ಣು ಮಕ್ಕಳಿಗೆ ಮದುವೆ ಮಾಡುವುದು ಅಪರಾಧ. ಇದರಿಂದ ಹಲವು ಸಮಸ್ಯೆ ಎದುರಿಸಬೇಕಾಗುತ್ತದೆ. ಹೀಗಾಗಿ ಬಾಲ್ಯದಲ್ಲಿಯೇ ಮಕ್ಕಳಿಗೆ ಮದುವೆ ಮಾಡಬಾರದು. ಮಕ್ಕಳ ಹಕ್ಕುಗಳಿಗೆ ಧಕ್ಕೆ ತರಬಾರದು. ಮಕ್ಕಳ ಮೇಲೆ ನಡೆಯುವ ಯಾವುದೇ ದುರ್ಘಟನೆಗಳಿಗೆ ಅವಕಾಶ ನೀಡದಂತೆ ಪ್ರತಿಯೊಬ್ಬರು ಜಾಗೃತಿ ವಹಿಸಬೇಕು ಎಂದರು.

ಎಡಿಸಿ ಗೀತಾ ಹುಡೇದ ಮಾತನಾಡಿ, ಬಾಲ್ಯವಿವಾಹದಿಂದ ಆಗುವ ಗಂಭೀರ ಪರಿಣಾಮಗಳ ಬಗ್ಗೆ ಜಾಗೃತಿ ಮೂಡಿಸಬೇಕು. ಎಲ್ಲಾದರೂ ಬಾಲ್ಯವಿವಾಹ ಕಂಡು ಬಂದರೆ ಮಾಹಿತಿ ನೀಡಬೇಕು. ವಿದ್ಯಾರ್ಥಿಗಳು ಓದುವ ಸಮಯದಲ್ಲಿ ಅನಗತ್ಯ ವಿಷಯಗಳಿಗೆ ಗಮನಹರಿಸದೆ ಶಿಕ್ಷಣದತ್ತ ಕೇಂದ್ರೀಕರಿಸಬೇಕು. ಮೊಬೈಲ್ ಬಳಕೆಯನ್ನು ಸಾಧ್ಯವಾದಷ್ಟು ಕಡಿಮೆ ಮಾಡಬೇಕು. ಉತ್ತಮ ಪ್ರಜೆಗಳಾಗಿ ಉನ್ನತ ಮಟ್ಟದಲ್ಲಿ ಬೆಳೆಯಲು ಕನಸು ಕಾಣಬೇಕು ಎಂದು ಸಲಹೆ ನೀಡಿದರು.

ಚೈಲ್ಡ್ ರೈಟ್ಸ್ ಟ್ರಸ್ಟ್ ನಿರ್ದೇಶಕ ನಾಗಸಿಂಹ ಜಿ.ರಾವ್ ಮಾತನಾಡಿ, ಮಕ್ಕಳ ಹಕ್ಕುಗಳ ರಕ್ಷಣೆ ಬಗ್ಗೆ ಸಮಗ್ರ ಅಧ್ಯಯನ ಅವಶ್ಯಕ. ಮಕ್ಕಳ ರಕ್ಷಣೆಯಲ್ಲಿ ವಿಶ್ವಸಂಸ್ಥೆ, ಮಕ್ಕಳ ನ್ಯಾಯ ಮಕ್ಕಳ ರಕ್ಷಣೆ ಮತ್ತು ಪೋಷಣೆ, ಪೋಕ್ಸೋ ಕಾಯ್ದೆಗಳು ಪ್ರಮುಖ ಪಾತ್ರ ವಹಿಸುತ್ತವೆ. ಮಕ್ಕಳಿಗೆ ಬದುಕುವ, ರಕ್ಷಣೆ, ಅಭಿವೃದ್ಧಿ ಹೊಂದುವುದು ಸೇರಿದಂತೆ ಹಲವು ಹಕ್ಕುಗಳು ಇವೆ. ವಿದ್ಯಾರ್ಥಿಗಳು, ಪೋಷಕರು ಜಾಗೃತರಾದಾಗ ಮಕ್ಕಳ ಮೇಲಿನ ದೌರ್ಜನ್ಯ ಹಾಗೂ ಬಾಲ್ಯವಿವಾಹ ನಿರ್ಮೂಲನೆ ಮಾಡಲು ಸಾಧ್ಯ ಎಂದರು.

ಈ ವೇಳೆ ಜಿಲ್ಲಾ ಕಾನೂನು ಸೇವೆಗಳ ಪ್ರಾಧಿಕಾರದ ಸದಸ್ಯ ಕಾರ್ಯದರ್ಶಿ ಹಾಗೂ ಹಿರಿಯ ಸಿವಿಲ್ ನ್ಯಾಯಾಧೀಶ ಎಂ.ಶ್ರೀಧರ, ಜಿಲ್ಲಾ ವಕೀಲ ಸಂಘದ ಅಧ್ಯಕ್ಷ ಉಮ್ಮತ್ತೂರು ಇಂದುಶೇಖರ್, ಜಿಪಂ ಉಪ ಕಾರ್ಯದರ್ಶಿ ಸರಸ್ವತಿ, ಮಕ್ಕಳ ವಿಶೇಷ ಪೊಲೀಸ್ ಘಟಕದ ಉಪ ಪೊಲೀಸ್ ಅಧೀಕ್ಷಕರು ಹಾಗೂ ಹಿರಿಯ ಮಕ್ಕಳ ಕಲ್ಯಾಣಾಧಿಕಾರಿ ಅನ್ಸರ್ ಆಲಿ, ಸಾರ್ವಜನಿಕ ಶಿಕ್ಷಣ ಇಲಾಖೆ ಉಪನಿರ್ದೇಶಕ ಮಂಜುನಾಥ್ ಪ್ರಸನ್ನ, ಜಿಲ್ಲಾ ಕಾರ್ಮಿಕಾಧಿಕಾರಿ ಎಂ.ಸವಿತಾ, ಜಿಲ್ಲಾ ಮಕ್ಕಳ ಕಲ್ಯಾಣ ಸಮಿತಿ ಅಧ್ಯಕ್ಷೆ ಸರಸ್ವತಿ, ಬಾಲ್ಯ ವಿವಾಹ ವಿರೋಧಿ ವೇದಿಕೆ ವೆಂಕಟೇಶ್, ಪಿಎಂಎಸ್‌ಆರ್ ಸಂಸ್ಥೆ ಆದಿಕೇಶ, ವೀಣಾ ಇತರರಿದ್ದರು. ಕಾರ್ಯಕ್ರಮದಲ್ಲಿ ವಿದ್ಯಾರ್ಥಿಗಳಿಗೆ ಬಾಲ್ಯವಿವಾಹ ಹಾಗೂ ಮಕ್ಕಳ ಹಕ್ಕುಗಳ ರಕ್ಷಣೆ ಕುರಿತು ಕಿರುಚಿತ್ರ ಪ್ರದರ್ಶಿಸಲಾಯಿತು.

ಇದಕ್ಕೂ ಮುನ್ನ, ಜಿಲ್ಲಾಡಳಿತ ಭವನದ ಮುಂಭಾಗ ಬಾಲ್ಯ ವಿವಾಹ ನಿಷೇಧ ಮತ್ತು ಮಕ್ಕಳ ಹಕ್ಕುಗಳ ರಕ್ಷಣೆ ಕುರಿತ ಬೃಹತ್ ವಾಕಥಾನ್‌ಗೆ ಪ್ರಧಾನ ಜಿಲ್ಲಾ ಸೆಷನ್ಸ್ ನ್ಯಾಯಾಧೀಶರಾದ ಬಿ.ಎಸ್. ಭಾರತಿ, ಎಡಿಸಿ ಗೀತಾ ಹುಡೇದ ಚಾಲನೆ ನೀಡಿದರು.

ಆನೆ ತುಳಿತದಿಂದ ಗಾಯಗೊಂಡಿದ್ದ ಬಾಲಕ ಸಾವು

ಬಾಲಕನ ಕುಟುಂಬಕ್ಕೆ ಸಾಂತ್ವನ ಹೇಳಿದ ಶಾಸಕ ಸಿ.ಪುಟ್ಟರಂಗಶೆಟ್ಟಿ



ಚಾಮರಾಜನಗರ, ಜು.25– ತಾಲೂಕಿನ ಪುಣಜನೂರು ಗ್ರಾಪಂ ವ್ಯಾಪ್ತಿಯ ಎತ್ತೆಗೌಡನದೊಡ್ಡಿ ಗ್ರಾಮದಲ್ಲಿ ಆನೆ ತುಳಿತದಿಂದ ಗಾಯಗೊಂಡಿದ್ದ ಬಾಲಕ ಮಂಗಳವಾರ ಸಾವನ್ನಪ್ಪಿದ್ದಾನೆ.

ಗ್ರಾಮದ ನಿವಾಸಿ ಮಾದಯ್ಯ ಅವರ ಪುತ್ರ ಹರ್ಷ (15) ಸಾವನ್ನಪ್ಪಿದ ಬಾಲಕ. ಈತ ಕಳೆದ ಏಪ್ರಿಲ್‌ನಲ್ಲಿ ಆನೆ ದಾಳಿಗೆ ಒಳಗಾಗಿ ಚಿಕಿತ್ಸೆಗಾಗಿ ಆಸ್ಪತ್ರೆಗೆ ದಾಖಲಾಗಿದ್ದ. ವೈದ್ಯರು ಬಾಲಕ ಗುಣಮುಖನಾಗುವುದಿಲ್ಲ ಎಂದು ಹೇಳಿ ಮನೆಗೆ ಕಳುಹಿಸಿದ್ದರು. ಆದರೆ ಮಂಗಳವಾರ ಸಾವನ್ನಪ್ಪಿದ್ದಾನೆ. ವಿಷಯ ತಿಳಿದು ಮೃತ ಬಾಲಕನ ಮನೆಗೆ ಭೇಟಿ ನೀಡಿದ ಶಾಸಕ ಸಿ.ಪುಟ್ಟರಂಗಶೆಟ್ಟಿ ಅಂತಿಮ ದರ್ಶನ ಪಡೆದು ಕುಟುಂಬದವರಿಗೆ ಸಾಂತ್ವನ ಹೇಳಿ, ವೈಯಕ್ತಿಕ ಧನಸಹಾಯ ನೀಡಿದರು.

ಆರ್‌ಎಫ್‌ಓಗೆ ತರಾಟೆ: ಆನೆ ತುಳಿತದಿಂದ ಮೃತಪಟ್ಟ ಬಾಲಕನ ಕುಟುಂಬಕ್ಕೆ ಪರಿಹಾರ ನೀಡದ ಅರಣ್ಯಾಧಿಕಾರಿಗಳಾದ ಆರ್‌ಎಫ್‌ಓ ನಿಸಾರ್ ಅಹಮ್ಮದ್, ಎಸಿಎಫ್ ಸುರೇಶ್ ಅವರನ್ನು ಶಾಸಕ ಸಿ.ಪುಟ್ಟರಂಗಶೆಟ್ಟಿ ತರಾಟೆಗೆ ತೆಗೆದುಕೊಂಡರು.

ಈ ವೇಳೆ ಮಾತನಾಡಿದ ಅವರು, ಸೋಲಿಗರನ್ನು ಕಂಡರೆ ನಿಮಗೆ ಏಕೆ ನಿರ್ಲಕ್ಷ್ಯ. ಬಾಲಕನ ಮೇಲೆ ಆನೆ ದಾಳಿ ನಡೆಸಿ ತಿಂಗಳಾದರೂ ಮೊದಲ ಕಂತಿನ ಹಣ ಕೊಟ್ಟಿಲ್ಲ. ನಿಮ್ಮ ಡಿಸಿಎಫ್‌ಗೆ ಈ ಘಟನೆ ಗೊತ್ತಿಲ್ಲ. ಆನೆ ದಾಳಿ ಬಗ್ಗೆ ಡಾಕ್ಯುಮೆಂಟ್ ಕೊಡಲು ಅವರಿಗೇನು ಗೊತ್ತು, ನೀವು ಕಲೆಕ್ಟ್ ಮಾಡಬೇಕು ಎಂದು ತರಾಟೆಗೆ ತೆಗೆದುಕೊಂಡ ಶಾಸಕರು, ಕೂಡಲೇ ಪರಿಹಾರ ಧನ ನೀಡುವಂತೆ ಸೂಚಿಸಿದರು. ಈ ವೇಳೆ ಗ್ರಾಪಂ ಅಧ್ಯಕ್ಷ ಮಣಿನಾಯಕ, ಮಾಜಿ ಅಧ್ಯಕ್ಷ ಶಮೀರ್ ಪಾಷ, ಯ.ಶ್ರೀನಿವಾಸನಾಯಕ್ ಇತರರಿದ್ದರು.

ಅರಿಶಿನ ಖರೀದಿ ಹಣ ರೈತರ ಖಾತೆಗೆ ಜಮೆ

ಚಾಮರಾಜನಗರ, ಜು.25– ಮಾರುಕಟ್ಟೆ ಮಧ್ಯ ಪ್ರವೇಶ ಯೋಜನೆಯಡಿ ಜಿಲ್ಲೆಯ ರೈತರಿಂದ ಖರೀದಿಸಲಾಗಿದ್ದ ಅರಿಶಿನದ ಹಣವನ್ನು ರೈತರ ಖಾತೆಗಳಿಗೆ ಜು.25ರಂದು ನೇರವಾಗಿ ಜಮೆ ಮಾಡಲಾಗಿದೆ ಎಂದು ಕರ್ನಾಟಕ ರಾಜ್ಯ ಸಹಕಾರ ಮಾರಾಟ ಮಹಾ ಮಂಡಳಿ ತಿಳಿಸಿದೆ.

ಜಿಲ್ಲೆಯಲ್ಲಿ 2023ರ ಜೂನ್ ಮಾಹೆಯಲ್ಲಿ ಮಾರುಕಟ್ಟೆ ಮಧ್ಯಪ್ರವೇಶ ಯೋಜನೆಯಡಿ ಜಿಲ್ಲೆಯ ಚಾಮರಾಜನಗರ, ಕೊಳ್ಳೇಗಾಲ, ಗುಂಡ್ಲುಪೇಟೆ ಖರೀದಿ ಕೇಂದ್ರಗಳಲ್ಲಿ ಒಟ್ಟು 53 ರೈತರಿಂದ 1383.50 ಕ್ವಿಂಟಾಲ್ ಅರಿಶಿನ ಖರೀದಿಸಲಾಗಿತ್ತು. ಜು.25ರಂದು (ಎನ್‌ಇಎಂಎಲ್ ತಂತ್ರಾಂಶ) ಅರಿಶಿನ ಖರೀದಿ ಹಣವನ್ನು ಡಿಬಿಟಿ ಮುಖಾಂತರ ನೇರವಾಗಿ ರೈತರ ಖಾತೆಗಳಿಗೆ ಜಮೆ ಮಾಡಲಾಗಿದೆ ಮಾಹಿತಿಗೆ ಮೊ. 9449864455, ಶಾಖೆ ದೂ.08226–223358 ಸಂಪರ್ಕಿಸುವಂತೆ ಮಹಾ ಮಂಡಳಿ ಜಿಲ್ಲಾ ಶಾಖಾ ವ್ಯವಸ್ಥಾಪಕ ಎಂ.ರವೀಂದ್ರ ಪ್ರಕಟಣೆಯಲ್ಲಿ ತಿಳಿಸಿದ್ದಾರೆ.

ಮಣಿಪುರ ಘಟನೆ ಖಂಡಿಸಿ ಪ್ರತಿಭಟನೆ



ಚಾಮರಾಜನಗರ, ಜು.25– ಮಣಿಪುರದಲ್ಲಿ ಮಹಿಳೆಯರನ್ನು ವಿವಸ್ತ್ರಗೊಳಿಸಿ ಮೆರವಣಿಗೆ ನಡೆಸಿರುವುದನ್ನು ಖಂಡಿಸಿ ನಗರದಲ್ಲಿ ಮಂಗಳವಾರ ಎಐಡಿವೈಓ ಹಾಗೂ ಎಐಎಂಎಸ್‌ಎಸ್ ಸಂಘಟನೆ ವತಿಯಿಂದ ಪ್ರತಿಭಟನೆ ನಡೆಸಲಾಯಿತು.

ನಗರದ ಜಿಲ್ಲಾಧಿಕಾರಿ ಕಚೇರಿ ಮುಂಭಾಗ ಸಮಾವೇಶಗೊಂಡ ಪ್ರತಿಭಟನಾಕಾರರು, ದೌರ್ಜನ್ಯವೆಸಗಿದ ಅಪರಾಧಿಗಳಿಗೆ ಕಠಿಣ ಶಿಕ್ಷೆ ವಿಧಿಸುವಂತೆ ಘೋಷಣೆ ಕೂಗಿದರು.

ಮಣಿಪುರದಲ್ಲಿ ಮಹಿಳೆಯರು ಅತ್ಯಾಚಾರಕ್ಕೊಳಗಾಗುತ್ತಿದ್ದಾರೆ. ಮಕ್ಕಳು ಅನಾಥರಾಗುತ್ತಿದ್ದಾರೆ. ಆದರೆ ಶಾಂತಿ ಸ್ಥಾಪನೆಗಾಗಿ ಸರ್ಕಾರ ಯಾವುದೇ ಕ್ರಮ ಕೈಗೊಂಡಿಲ್ಲ ಎಂದು ದೂರಿದರು.

ಮಣಿಪುರದಲ್ಲಿ ಇಬ್ಬರು ಮಹಿಳೆಯರನ್ನು ಬೆತ್ತಲೆ ಮೆರವಣಿಗೆ ಮಾಡಿರುವುದು ಖಂಡನೀಯ. ಘಟನೆ ಸಂಬಂಧ ಅಲ್ಲಿನ ಸರ್ಕಾರ ಹಾಗೂ ಕೇಂದ್ರ ಸರ್ಕಾರ ಯಾವುದೇ ಕ್ರಮ ಕೈಗೊಂಡಿಲ್ಲ. ಪ್ರಧಾನಿ ಮೋದಿ ಈ ಸಂಬಂಧ ಮೌನಕ್ಕೆ ಶರಣಾಗಿದ್ದಾರೆ. ಹೀಗಾಗಿ ಕೇಂದ್ರ ಸರ್ಕಾರ ಮಧ್ಯ ಪ್ರವೇಶಿಸಬೇಕು. ಮಣಿಪುರದಲ್ಲಿ ಆದಷ್ಟು ಬೇಗ ಶಾಂತಿ ಸ್ಥಾಪಿಸಬೇಕು ಮತ್ತು ಮಹಿಳೆಯರ ಮೇಲೆ ದೌರ್ಜನ್ಯವೆಸಗಿದ ಅಪರಾಧಿಗಳಿಗೆ ಕಠಿಣ ಶಿಕ್ಷೆ ವಿಧಿಸಬೇಕು ಎಂದು ಆಗ್ರಹಿಸಿದರು. ಪ್ರತಿಭಟನೆಯಲ್ಲಿ ಮುಖಂಡರಾದ ಸುನೀಲ್, ಕಾಂತರಾಜು, ಜಿ.ಎಸ್.ಸೀಮಾ, ಅಭಿಲಾಷ, ಆಶಾ ಕಾರ್ಯಕರ್ತೆಯರು ಹಾಗೂ ವಿದ್ಯಾರ್ಥಿಗಳು ಇದ್ದರು.

ಚಿರತೆ ದಾಳಿ: ಬಾಲಕನಿಗೆ ಗಾಯ



ಯಳಂದೂರು, ಜು.25– ಚಿರತೆ ದಾಳಿಗೆ ಬಾಲಕ ಗಾಯಗೊಂಡಿರುವ ಘಟನೆ ತಾಲೂಕಿನ ಮಲ್ಲಿಗಹಳ್ಳಿ ಗ್ರಾಮದಲ್ಲಿ ಮಂಗಳವಾರ ರಾತ್ರಿ ನಡೆದಿದೆ.

ಮಹಾಂತಾಳಪುರ ಗ್ರಾಮದ ಹರ್ಷಿತ್(10) ಗಾಯಗೊಂಡ ಬಾಲಕ. ಈತ ಕಳೆದ ಎರಡ್ಮೂರು ದಿನಗಳ ಹಿಂದೆ ಮಲ್ಲಿಗೆಹಳ್ಳಿಯಲ್ಲಿರುವ ಅಜ್ಜಿ ಮನೆಗೆ ಬಂದಿದ್ದ ಎನ್ನಲಾಗಿದೆ. ಆದರೆ ಇಂದು ರಾತ್ರಿ 8.30ರಲ್ಲಿ ಮನೆಯಿಂದ ಹೊರಬಂದ ವೇಳೆ ಬಾಲಕನ ಮೇಲೆ ಚಿರತೆ ಏಕಾಏಕಿ ದಾಳಿ ನಡೆಸಿ ಗಾಯಗೊಳಿಸಿ ಪರಾರಿಯಾಗಿದೆ. ಗಾಯಗೊಂಡ ಬಾಲಕನಿಗೆ ಪಟ್ಟಣದ ಸಾರ್ವಜನಿಕ ಆಸ್ಪತ್ರೆಯಲ್ಲಿ ಪ್ರಾಥಮಿಕ ಚಿಕಿತ್ಸೆ ಕೊಡಿಸಿ ಹೆಚ್ಚಿನ ಚಿಕಿತ್ಸೆಗಾಗಿ ಚಾಮರಾಜನಗರದ ಜಿಲ್ಲಾಸ್ಪತ್ರೆಗೆ ದಾಖಲಿಸಲಾಗಿದೆ. ವಿಷಯ ತಿಳಿದು ಸ್ಥಳಕ್ಕಾಗಮಿಸಿದ ಆರ್‌ಎಫ್‌ಓ ಲೋಕೇಶ್ ಮೂರ್ತಿ ಹಾಗೂ ಸಿಬ್ಬಂದಿ ಪರಿಶೀಲನೆ ನಡೆಸಿದರು. ಕಳೆದ ಒಂದು ವಾರದಿಂದ ಮಲ್ಲಿಗಹಳ್ಳಿ, ಶಿವಹಳ್ಳಿ, ಕೆಸ್ತೂರು, ಮದ್ದೂರು ಗ್ರಾಮದ ಹೊರವಲಯದಲ್ಲಿ ಚಿರತೆ ಕಾಣಿಸಿಕೊಂಡಿತ್ತು. ಇಂದು ಸಂಜೆ ಚಿರತೆ ಮಲ್ಲಿಗಹಳ್ಳಿಯಲ್ಲಿ ಕಾಣಿಸಿಕೊಂಡು ಬಾಲಕನ ಮೇಲೆ ದಾಳಿ ನಡೆಸಿ ಗಾಯಗೊಳಿಸಿ ಪರಾರಿಯಾಗಿದ್ದು, ಅರಣ್ಯಾಧಿಕಾರಿಗಳು ಚಿರತೆ ಸೆರೆಗೆ ಬೋನಿಟ್ಟು ಕ್ರಮ ಕೈಗೊಂಡಿದ್ದಾರೆ.

ಇಂದು ಕ್ಯಾನ್ಸರ್, ದಂತ ತಪಾಸಣಾ ಶಿಬಿರ

ಚಾಮರಾಜನಗರ, ಜು.25– ಜೆಎಸ್‌ಎಸ್ ಆಸ್ಪತ್ರೆ, ಮೈಸೂರು ಹಾಗೂ ಡಾ.ಬಾಬು ಸೋಷಿಯಲ್ ವೆಲ್‌ಫೇರ್ ಮತ್ತು ಚಾರಿಟಬಲ್ ಟ್ರಸ್ಟ್‌ನಿಂದ ಜು.26ರಂದು ಬುಧವಾರ ನಗರದ ಜೆಎಸ್‌ಎಸ್ ಆಸ್ಪತ್ರೆಯಲ್ಲಿ ಕ್ಯಾನ್ಸರ್ ಮತ್ತು ದಂತ ತಪಾಸಣಾ ಶಿಬಿರ ಆಯೋಜಿಸಲಾಗಿದೆ. ಶಿಬಿರ ಬೆಳಗ್ಗೆ 9ರಿಂದ ಮಧ್ಯಾಹ್ನ 1ರವರೆಗೆ ನಡೆಯಲಿದ್ದು, ಗರ್ಭಕೋಶ ಕ್ಯಾನ್ಸರ್, ಗಂಟಲು ಕ್ಯಾನ್ಸರ್, ಸ್ತನ ಕ್ಯಾನ್ಸರ್, ಚರ್ಮದ ಕ್ಯಾನ್ಸರ್, ಅಸ್ಥಿ ಮಜ್ಜೆ ಕ್ಯಾನ್ಸರ್, ರೋಗದ ಪರೀಕ್ಷೆ ಹಾಗೂ ವಿವಿಧ ಬಗೆಯ ಹಲ್ಲಿನ ಸಮಸ್ಯೆಗಳ ಬಗ್ಗೆ ಪರೀಕ್ಷಿಸಲಾಗುವುದು. ಜನತೆ ಶಿಬಿರವನ್ನು ಸದುಪಯೋಗಪಡಿಸಿಕೊಳ್ಳಬೇಕು ಎಂದು ಪ್ರಕಟಣೆ ತಿಳಿಸಿದೆ.

ಸಿದ್ದಲಿಂಗಪುರ ಗ್ರಾಪಂ 'ಕೈ' ತೆಕ್ಕೆಗೆ



ಮೈಸೂರು, ಜು.25– ಮೈಸೂರು ತಾಲೂಕಿನ ಸಿದ್ದಲಿಂಗಪುರ ಗ್ರಾಮ ಪಂಚಾಯಿತಿ ಅಧ್ಯಕ್ಷ, ಉಪಾಧ್ಯಕ್ಷರ ಚುನಾವಣೆಯಲ್ಲಿ ಕಾಂಗ್ರೆಸ್ ಬೆಂಬಲಿತ ಅಭ್ಯರ್ಥಿಗಳಾದ ಮಾದೇಶ್, ಒಟ್ಟು 46 ಮತಗಳಲ್ಲಿ 29 ಮತಗಳನ್ನು ಪಡೆದು ಅಧ್ಯಕ್ಷರಾಗಿ ಆಯ್ಕೆಗೊಂಡಿದ್ದು, ಉಪಾಧ್ಯಕ್ಷರಾಗಿ ಶ್ರೀಮತಿ ಜ್ಯೋತಿ ಅವಿರೋಧವಾಗಿ ಆಯ್ಕೆಯಾಗಿದ್ದಾರೆ.

ಅಧ್ಯಕ್ಷರ ಪ್ರತಿಸ್ಪರ್ಧಿ ಜ್ಯೋತಿಯವರು 17 ಮತಗಳನ್ನು ಪಡೆದು ಪರಾಭವಗೊಂಡಿದ್ದಾರೆ. ಅಧ್ಯಕ್ಷರು ಹಾಗೂ ಉಪಾಧ್ಯಕ್ಷರನ್ನು ಚಾಮುಂಡೇಶ್ವರಿ ವಿಧಾನಸಭಾ ಕ್ಷೇತ್ರದ ಮುಖಂಡರು, ಕೆಪಿಸಿಸಿ ಸದಸ್ಯ ಹಾಗೂ ಮಾಜಿ ಜಿಲ್ಲಾ ಪಂಚಾಯತಿ ಅಧ್ಯಕ್ಷರಾದ ಕೆ.ಮರೀಗೌಡ ಅಭಿನಂದಿಸಿದರು. ಈ ಸಂದರ್ಭದಲ್ಲಿ ಬ್ಲಾಕ್ ಕಾಂಗ್ರೆಸ್ ಅಧ್ಯಕ್ಷ ಜೆ.ಸತೀಶ್‌ಕುಮಾರ್, ಪಂಚಾಯತಿ ಮುಖಂಡರಾದ ರಾಮಚಂದ್ರ, ಮಹಾದೇವ, ಪುಟ್ಟಸ್ವಾಮಿ, ಮೀಸೆ ಮಹಾದೇವ, ವಿಜೇಂದ್ರ, ಪರಮೇಶ್, ಮುರುಡೇಶ್, ವಿಜಯ್‌ಕುಮಾರ್, ದಿವಾಕರ್, ಧನಂಜಯ್, ಕಿರಣ್, ಪಂಚಾಯಿತಿ ಸದಸ್ಯರಾದ ಶಂಕರಲಿಂಗೇಗೌಡ, ಜ್ಯೋತಿಲಕ್ಷ್ಮಿ, ದಶರಥ, ಸರಿತಾ, ಮೋಹನ್, ಶ್ರೀನಿವಾಸ್ ಮೂರ್ತಿ, ಸುಮಿತ್ರಮ್ಮ, ನಾಗೇಶ್, ಕುಮಾರಸ್ವಾಮಿ, ಲಕ್ಷ್ಮಿ ಶಂಕರ್, ಕವಿತಾ ರಮೇಶ್ ಹಾಗೂ ಇನ್ನಿತರ ಎಲ್ಲಾ ಗ್ರಾಮ ಪಂಚಾಯಿತಿ ಸದಸ್ಯರು ಹಾಜರಿದ್ದರು.

ನಿಗಮ ಮಂಡಳಿ ನೇಮಕಕ್ಕೆ ಕನಿಷ್ಠ 10 ವರ್ಷ ಪಕ್ಷದಲ್ಲಿ ಸಕ್ರಿಯರಾಗಿರುವವರ ಪರಿಗಣಿಸಿ

ಮೈಸೂರು, ಜು.25– ನಿಗಮ ಮಂಡಳಿಗೆ ನೇಮಿಸುವ ಸಂದರ್ಭದಲ್ಲಿ ಕನಿಷ್ಠ 10 ವರ್ಷದಿಂದ ಪಕ್ಷದಲ್ಲಿ ಸಕ್ರಿಯವಾಗಿರುವ ಕಾರ್ಯಕರ್ತರನ್ನು ಪರಿಗಣಿಸಬೇಕು ಎಂದು ಕಾಂಗ್ರೆಸ್ ಸಂಯೋಜಕ ಎನ್.ಭಾಸ್ಕರ್, ಪಕ್ಷದ ನಾಯಕರಿಗೆ ಮನವಿ ಮಾಡಿದ್ದಾರೆ.

ಕಾಂಗ್ರೆಸ್‌ನಲ್ಲಿ ಕನಿಷ್ಠ 10 ವರ್ಷಗಳಿಂದ ಸಕ್ರಿಯವಾಗಿ ಕೆಲಸ ಮಾಡಿರುವವರಿಗೆ ನಿಗಮ ಮಂಡಳಿಗಳಲ್ಲಿ ಅವಕಾಶ ಕಲ್ಪಿಸಬೇಕು. ಕಳೆದ ಬಾರಿ ಅವಕಾಶ ನೀಡಿದ್ದವರನ್ನು ಪರಿಗಣಿಸಬಾರದು. ಸ್ವಹಿತಾಸಕ್ತಿಗಾಗಿ ಪಕ್ಷದಿಂದ ಹೊರಹೋಗಿ ವಾಪಸ್ಸಾದವರ ಮನವಿಯನ್ನು ಬ್ಲಾಕ್ ಸಮಿತಿಯಲ್ಲೇ ಕೈಬಿಡಬೇಕು. ಪಕ್ಷ ಅಧಿಕಾರಕ್ಕೆ ಬಂದ ಮೇಲೆ ವಾಪಸ್ಸಾಗಿರುವವರು ಯಾವ ನಾಯಕರಿಂದ ಶಿಫಾರಸು ಮಾಡಿಸಿದರೂ ನಿರ್ಲಕ್ಷಿಸಬೇಕು. ಈ ಸಂಬಂಧ ಜು.27ರ ಸಿಎಲ್‌ಪಿ ಸಭೆಯಲ್ಲಿ ಚರ್ಚಿಸಿ ಸೂಕ್ತ ಕ್ರಮ ವಹಿಸಬೇಕೆಂದು ಎಐಸಿಸಿ ಅಧ್ಯಕ್ಷ ಮಲ್ಲಿಕಾರ್ಜುನ ಖರ್ಗೆ, ಸಿಎಲ್‌ಪಿ ನಾಯಕರೂ ಆದ ಮುಖ್ಯಮಂತ್ರಿ ಸಿದ್ದರಾಮಯ್ಯ ಹಾಗೂ ಕೆಪಿಸಿಸಿ ಅಧ್ಯಕ್ಷರೂ ಆದ ಉಪ ಮುಖ್ಯಮಂತ್ರಿ ಡಿ.ಕೆ.ಶಿವಕುಮಾರ್ ಅವರಿಗೆ ಮನವಿ ಸಲ್ಲಿಸಿದ್ದಾರೆ.

ಒಂದನೇ ಪುಟದಿಂದ

ಹಣಕ್ಕೆ ಬೇಡಿಕೆ ಇಡುತ್ತಿದ್ದಾರೆ

ನಿಂತಿರುವುದು ಪ್ರಮುಖ ಕಾರಣ. ಬಿ.ಆರ್.ಪಾಟೀಲ್ ಬರೆದಿರುವ ಪತ್ರಕ್ಕೆ 20ಕ್ಕೂ ಹೆಚ್ಚು ಆಡಳಿತ ಪಕ್ಷದ ಸದಸ್ಯರು ಸಹಿ ಹಾಕಿದ್ದು, ಸಚಿವರ ನಡವಳಿಕೆ ಬಗ್ಗೆ ಕಿಡಿಕಾರಿದ್ದಾರೆ.

ಒಂದೆಡೆ ಮಧ್ಯವರ್ತಿಗಳಿಂದ ಹಣದ ಬೇಡಿಕೆ ಇಟ್ಟಿರುವ ಸಚಿವರು, ಮತ್ತೊಂದೆಡೆ ತಮ್ಮ ಕಚೇರಿಯಲ್ಲಿ ತಮಗೆ ಬೇಕಾದ ಅಧಿಕಾರಿಗಳಿಗೆ ಮಣೆ ಹಾಕಿ ಸ್ವಜನ ಪಕ್ಷಪಾತ ಮಾಡುತ್ತಿದ್ದಾರೆ. ನಮ್ಮ ಯಾವುದೇ ವರ್ಗಾವಣೆ, ಶಿಫಾರಸ್ಸು ಪತ್ರಗಳಿಗೆ ಮಾನ್ಯತೆ ಕೊಡುತ್ತಿಲ್ಲ. ಇದರಿಂದಾಗಿ ಯಾವ ಅಧಿಕಾರಿಯೂ ನಮ್ಮ ಕೆಲಸವನ್ನು ಮಾಡಿಕೊಡುತ್ತಿಲ್ಲ. ನಮ್ಮ ಮಾತಿಗೆ ಬೆಲೆಯನ್ನೂ ನೀಡುತ್ತಿಲ್ಲ. ತಾವು ತಕ್ಷಣವೇ ಮಧ್ಯೆ ಪ್ರವೇಶಿಸಿ ಸಮಸ್ಯೆ ಪರಿಹರಿಸಬೇಕು ಎಂದು ನಿಮ್ಮಲ್ಲಿ ಮನವಿ ಮಾಡುತ್ತಿದ್ದೇವೆ. ನಮ್ಮ ವಿಶ್ವಾಸಕ್ಕೆ ಚ್ಯುತಿ ಬಾರದಂತೆ ತಾವು ನಡೆದುಕೊಳ್ಳುತ್ತೀರಿ ಎಂದು ಭಾವಿಸುತ್ತೇನೆ ಎಂದಿದ್ದಾರೆ. ರಾಯರೆಡ್ಡಿ ಬರೆದಿರುವ ಪ್ರತ್ಯೇಕ ಪತ್ರದಲ್ಲಿ ಸಚಿವರ ದುರಹಂಕಾರ ಮತ್ತು ಶಾಸಕರನ್ನು ನಡೆಸಿಕೊಳ್ಳುತ್ತಿರುವ ರೀತಿ ವಿವರಿಸಿ, ನೀವು ತಕ್ಷಣವೇ ಮಧ್ಯೆ ಪ್ರವೇಶಿಸಿ ಶಾಸಕಾಂಗ ಪಕ್ಷದ ಸಭೆ ಕರೆದು, ಅಲ್ಲಿಯೇ ಚರ್ಚಿಸಿ, ತೀರ್ಮಾನ ಕೈಗೊಳ್ಳುವಂತೆ ಮುಖ್ಯಮಂತ್ರಿಗೆ ಮನವಿ ಮಾಡಿದ್ದಾರೆ.

ಪತ್ರಕ್ಕೆ ಸಹಿ ಹಾಕಿರುವ ಸಿ.ಎಸ್.ನಾಡಗೌಡ, ಪಿ.ಎಂ.ನರೇಂದ್ರಸ್ವಾಮಿ, ಎನ್.ಎಚ್.ಕೋನರೆಡ್ಡಿ ಸೇರಿದಂತೆ ಎಲ್ಲರೂ ಹಿರಿಯ ಶಾಸಕರಾಗಿದ್ದಾರೆ.

ಪತ್ರಕ್ಕೆ ಸಂಬಂಧಿಸಿದಂತೆ ಪ್ರತಿಕ್ರಿಯೆ ನೀಡಿರುವ ಮುಖ್ಯಮಂತ್ರಿ ಸಿದ್ದರಾಮಯ್ಯ, ಸಚಿವರ ವಿರುದ್ಧ ಯಾರೂ ದೂರು ನೀಡಿಲ್ಲ. ಶಾಸಕಾಂಗ ಪಕ್ಷದ ಸಭೆ ಕರೆಯುವಂತೆ ಕೋರಿದ್ದಾರೆ ಎಂದು ತಿಳಿಸಿದ್ದಾರೆ. ಮತ್ತೊಂದೆಡೆ ಪತ್ರಕ್ಕೆ ಸಂಬಂಧಿಸಿದಂತೆ ಪ್ರತಿಕ್ರಿಯಿಸಿರುವ ಕೆಪಿಸಿಸಿ ಅಧ್ಯಕ್ಷ ಹಾಗೂ ಉಪ ಮುಖ್ಯಮಂತ್ರಿ ಡಿ.ಕೆ.ಶಿವಕುಮಾರ್ ಅವರು, ಶಾಸಕರಿಂದ ಯಾವುದೇ ಪತ್ರ ಬಂದಿಲ್ಲ. ಎಲ್ಲವೂ ಊಹಾಪೋಹ. ನಮ್ಮ ಪಕ್ಷದ ಶಾಸಕರು ಅವರವರ ಕ್ಷೇತ್ರದಲ್ಲಿ ಕೆಲಸ ಮಾಡುತ್ತಿದ್ದಾರೆ. ಸುಮ್ಮನೆ ಊಹಾಪೋಹದ ಸುದ್ದಿ ಹಬ್ಬಿಸಬೇಡಿ ಎಂದು ಮಾಧ್ಯಮದವರ ಮೇಲೆಯೇ ಕಿಡಿಕಾರಿದ್ದಾರೆ. ಎಲ್ಲಾ ಸಚಿವರು ಶಾಸಕರ ಮಾತು ಕೇಳುತ್ತಿದ್ದಾರೆ. ಎಲ್ಲರೂ ಅವರವರ ಕೆಲಸ ಮಾಡುತ್ತಿದ್ದಾರೆ. ಯಾವುದೇ ಅಸಮಾಧಾನವಿಲ್ಲ. ವರ್ಗಾವಣೆ ಅವಧಿ ಮುಗಿದಿದೆ ಎಂದರು. ಎಲ್ಲರೂ ಬಹಳ ಆಸೆಯಲ್ಲಿದ್ದಾರೆ. ಆ ಮಾತು ಕೊಟ್ಟಿದ್ದೇನೆ. ಈ ಮಾತು ಕೊಟ್ಟಿದ್ದೇನೆ. ಅವರ ಭರವಸೆ ಈಡೇರಿಸಬೇಕು. ನಮ್ಮ ಕ್ಷೇತ್ರಗಳಲ್ಲಿ ಅಭಿವೃದ್ಧಿ ಕೈಗೊಳ್ಳಲು 10 ಕೋಟಿ, 100 ಕೋಟಿ, 300 ಕೋಟಿ ರೂ. ಕೆಲಸ ಕೇಳುತ್ತಿದ್ದಾರೆ. ಸದ್ಯಕ್ಕೆ ಆಗುವುದಿಲ್ಲ. ತಡೆಹಿಡಿಯಿರಿ ಎಂದು ಅಧಿಕಾರಿಗಳಿಗೆ ತಿಳಿಸಿದ್ದೇವೆ ಎಂದು ಅವರು ಹೇಳಿದರು.

ಮೈತ್ರಿ ಇಲ್ಲ

ಅವರ ಜೊತೆ ಹೋರಾಟ ಮಾಡಿಲ್ಲವೇ? ಎಂದು ಸಮರ್ಥಿಸಿದರು. ಬೆಂಗಳೂರಿನಲ್ಲಿ ನಡೆದ ವಿರೋಧ ಪಕ್ಷಗಳ ಮಹಾ ಘಟಬಂಧನ್‌ಗೆ ತಮ್ಮನ್ನು ಆಹ್ವಾನಿಸದಂತೆ ಸ್ಥಳೀಯ ಕಾಂಗ್ರೆಸ್‌ನ ಒಂದು ಗುಂಪು ಹೇಳಿತ್ತು. ಒಂದು ವೇಳೆ ಆ ಸಭೆಗೆ ನನ್ನನ್ನು ಆಹ್ವಾನಿಸಿದ್ದೇ ಆದರೆ, ನಾವು ಸಭೆಗೆ ಬರುವುದಿಲ್ಲ ಎಂದು ಧಮ್ಕಿ ಹಾಕಿತ್ತು. ಆ ಕಾರಣಕ್ಕಾಗಿ ನಮ್ಮನ್ನು ಸಭೆಗೆ ಕರೆಯಲಿಲ್ಲ ಎಂದು ಆರೋಪಿಸಿದರು.

ಕೇಂದ್ರದ ಮಾಜಿ ಸಚಿವ ಶರದ್ ಪವಾರ್ ಆ ಸಭೆಗೆ ಬಂದು ಹೋದರು. ಅಲ್ಲಿ ಏನಾಗುತ್ತಿದೆ, ಈಗ ಎನ್‌ಡಿಎಗೆ ಬೆಂಬಲ ಸೂಚಿಸಿಲ್ಲವೇ ಎಂದು ಪ್ರಶ್ನಿಸಿದರು.

ಎಚ್.ಡಿ.ಕುಮಾರಸ್ವಾಮಿ ಅವರು ಬಿಜೆಪಿ ಜೊತೆ ಸೇರಿ ಮುಖ್ಯಮಂತ್ರಿಯಾದರು ಎಂಬ ಟೀಕೆ ಮಾಡುತ್ತಾರೆ. 1983ರಲ್ಲಿ ಬಿಜೆಪಿ ಬೆಂಬಲದಿಂದ ರಾಮಕೃಷ್ಣ ಹೆಗಡೆ ಮುಖ್ಯಮಂತ್ರಿಯಾಗಿರಲಿಲ್ಲವೇ? ನಾನು ಲೋಕೋಪಯೋಗಿ ಸಚಿವನಾಗಿದ್ದೆ. ಈಗಿನ ಮುಖ್ಯಮಂತ್ರಿ ಸಿದ್ದರಾಮಯ್ಯನವರು ಅಂದು ಬಿಜೆಪಿ ಬೆಂಬಲಿತ ಸರ್ಕಾರದಲ್ಲಿ ಕನ್ನಡ ಕಾವಲು ಸಮಿತಿಯ ಅಧ್ಯಕ್ಷರಾಗಿರಲಿಲ್ಲವೆ ಎಂದು ಪ್ರಶ್ನಿಸಿದರು. ಮುಖ್ಯಮಂತ್ರಿ ಸಿದ್ದರಾಮಯ್ಯನವರು ಪತ್ರಕರ್ತರ ಸಿದ್ಧಾಂತದ ಬಗ್ಗೆ ಮಾತನಾಡಿದ್ದಾರೆ. ಅವರ ಪಕ್ಷದ ಶಾಸಕ ಟಿ.ಬಿ.ಜಯಚಂದ್ರ ನೇತೃತ್ವದ ಸದನ ಸಮಿತಿ, ನೈಸ್ ಸಂಸ್ಥೆಯ ಹಗರಣದ ಬಗ್ಗೆ ವರದಿ ಕೊಟ್ಟಿದೆ. ಅದರ ಮೇಲೆ ಏಕೆ ಕ್ರಮ ಕೈಗೊಳ್ಳಲಿಲ್ಲ ಎಂದು ಪ್ರಶ್ನಿಸಿದರು. ನೈಸ್ ಸಂಸ್ಥೆ ಹೆಸರನ್ನು ಪ್ರಸ್ತಾಪಿಸದೆ ಮಾತನಾಡಿದ ಅವರು, 11,660 ಎಕರೆ ಹೆಚ್ಚುವರಿ ಭೂಮಿ ಇದೆ. ಅದು ಯಾರ ಭೂಮಿ? ಸಮಿತಿ ವರದಿ ಆಧರಿಸಿ ಕ್ರಮ ಕೈಗೊಳ್ಳಲು ಸಿದ್ದರಾಮಯ್ಯ ಅವರಿಗೆ ಏನು ಕಷ್ಟವಿದೆ? ಅದರಲ್ಲಿ ಬರುವ ಕೋಟ್ಯಂತರ ರೂ. ಹಣವನ್ನು ಸರ್ಕಾರದ ಐದು ಗ್ಯಾರಂಟಿಗಳಿಗೆ ಬಳಸಲಿ ಎಂಬ ಸಲಹೆ ಮಾಡಿದರು. ಸಿದ್ದರಾಮಯ್ಯನವರೇ, ಅಧಿಕಾರ ಶಾಶ್ವತವಲ್ಲ. ಆಡುವ ಮಾತು ಹೃದಯಾಂತರಾಳದಿಂದ ಬರಬೇಕು. ಅಧಿಕಾರ ಬರುತ್ತೆ ಹೋಗುತ್ತೆ ಎಂದು ವಾಗ್ದಾಳಿ ನಡೆಸಿದರು.

ಕೆಆರ್‌ಎಸ್ ನೀರಿನ ಮಟ್ಟ

ಒಳ ಹರಿವಿನ ಪ್ರಮಾಣ ಹೆಚ್ಚಿದೆ. ಈಗಾಗಲೇ ಭರ್ತಿಯಾಗಿರುವ ಹಾರಂಗಿ ಜಲಾಶಯದಿಂದ ಹೆಚ್ಚಿನ ಪ್ರಮಾಣದ ನೀರನ್ನು ನದಿಗೆ ಹರಿಸಿದ್ದು, ಅದು ಕೆಆರ್‌ಎಸ್ ಸೇರುತ್ತಿದೆ. ಹೇಮಾವತಿ ಜಲಾಶಯದ ಒಳ ಹರಿವು ಪ್ರಮಾಣವೂ ಹೆಚ್ಚಾಗಿರುವುದರಿಂದ ಅಲ್ಲಿಂದಲೂ ನೀರು ಹೊರಕ್ಕೆ ಬಿಟ್ಟರೆ ಕೆಆರ್‌ಎಸ್ ಜಲಾಶಯಕ್ಕೆ ಮತ್ತಷ್ಟು ನೀರು ಹರಿದು ಬರಲಿದೆ.

ಕಬಿನಿ ಬಹುತೇಕ ಭರ್ತಿ: ಕೇರಳದ ವೈನಾಡು ಪ್ರದೇಶದಲ್ಲಿ ಧಾರಾಕಾರ ಮಳೆಯಾಗುತ್ತಿರುವ ಕಾರಣ ಕಬಿನಿ ಜಲಾಶಯಕ್ಕೆ ಬಾರೀ ಪ್ರಮಾಣದ ನೀರು ಹರಿದು ಬರುತ್ತಿದ್ದು, ಜಲಾಶಯ ಬಹುತೇಕ ಭರ್ತಿಯಾಗಿದೆ. ಕಬಿನಿ ಗರಿಷ್ಠ ಮಟ್ಟ 2,284 ಅಡಿಗಳಾಗಿದ್ದು, ಮಂಗಳವಾರ 2,281.27 ಅಡಿ ತಲುಪಿದೆ. ಜಲಾಶಯಕ್ಕೆ ಸದ್ಯ 25,485 ಕ್ಯುಸೆಕ್ ನೀರು ಹರಿದು ಬರುತ್ತಿದ್ದು, ಜಲಾಶಯದಿಂದ 20 ಸಾವಿರ ಕ್ಯುಸೆಕ್ ಹೊರಗೆ ಬಿಡಲಾಗುತ್ತಿದೆ. ಜಲಾಶಯ ಪೂರ್ಣ ಭರ್ತಿಯಾಗಲು ಇನ್ನು 3 ಅಡಿ ಮಾತ್ರ ಬಾಕಿ ಇದೆ. ಆದರೆ ಅಣ್ಣೆಕಟ್ಟೆಯ ಭದ್ರತೆ ದೃಷ್ಟಿಯಿಂದ 3 ಅಡಿ ಅಂತರ ಕಾಯ್ದುಕೊಳ್ಳಲಾಗುತ್ತದೆ. ಅಂದರೆ ಜಲಾಶಯ ಬಹುತೇಕ ಭರ್ತಿಯಾದಂತಾಗಿದೆ.

ಹೇಮಾವತಿಗೂ ಹೆಚ್ಚು ನೀರು: ಮಲೆನಾಡು ಭಾಗದಲ್ಲಿ ಉತ್ತಮ ಮಳೆಯಾಗುತ್ತಿರುವ ಹಿನ್ನೆಲೆಯಲ್ಲಿ ಹಾಸನ ಜಿಲ್ಲೆ, ಗೊರೂರಿನ ಹೇಮಾವತಿ ಜಲಾಶಯಕ್ಕೆ 25,888 ಕ್ಯುಸೆಕ್ ನೀರು ಹರಿದು ಬರುತ್ತಿದೆ. ಜಲಾಶಯದ ಗರಿಷ್ಠ ಮಟ್ಟ 2922 ಅಡಿಗಳಾಗಿದ್ದು, ಸದ್ಯ 2906 ಅಡಿ ಭರ್ತಿಯಾಗಿದೆ. ಪ್ರಸ್ತುತ ಅಣೆಕಟ್ಟೆಯಲ್ಲಿ ಅಣೆಕಟ್ಟೆಯಲ್ಲಿ ಪ್ರಸ್ತುತ 23.94 ಟಿಎಂಸಿ ನೀರು ಶೇಖರಣೆಯಾಗಿದ್ದು, ಇನ್ನೂ ಭರ್ತಿಯಾಗದ ಕಾರಣ ಕಡಿಮೆ ಪ್ರಮಾಣದ ನೀರನ್ನು ಹೊರಗೆ ಬಿಡಲಾಗುತ್ತಿದೆ.

ವಿವಿಗಳ ಸಮಸ್ಯೆ ನಿವಾರಿಸಿದರೆ ಉನ್ನತ ಶಿಕ್ಷಣದಲ್ಲಿ ಗುಣಮಟ್ಟ ಸಾಧ್ಯ

ಐದು ದಿನಗಳ ರಾಷ್ಟ್ರೀಯ ಮಟ್ಟದ ಅಧ್ಯಾಪಕರ ಅಭಿವೃದ್ಧಿ ಕಾರ್ಯಕ್ರಮಕ್ಕೆ ಚಾಲನೆ



ಮೈಸೂರಿನ ಮುಕ್ತ ವಿವಿಯ ಕಾವೇರಿ ಸಭಾಂಗಣದಲ್ಲಿ ಹಮ್ಮಿಕೊಂಡಿರುವ ಐದು ದಿನಗಳ ರಾಷ್ಟ್ರೀಯ ಮಟ್ಟದ ಅಧ್ಯಾಪಕರ ಅಭಿವೃದ್ಧಿ ಕಾರ್ಯಕ್ರಮವನ್ನು ಸಂಗೀತ ವಿವಿ ಕುಲಪತಿ ಪ್ರೊ.ನಾಗೇಶ್ ವಿ.ಬೆಟ್ಟಕೋಟೆ ಉದ್ಘಾಟಿಸಿದರು.

ಮೈಸೂರು,ಜು.25(ಪಿಎಂ)– ವಿಶ್ವವಿದ್ಯಾನಿಲಯಗಳಲ್ಲಿ ಮೂಲಸೌಕರ್ಯಗಳ ಕೊರತೆ ಹಾಗೂ ಅತಿಥಿ ಮತ್ತು ಗುತ್ತಿಗೆ ಉಪನ್ಯಾಸಕರ ವೇತನ ಸಮಸ್ಯೆ ನಿವಾರಿಸುವತ್ತ ನಮ್ಮ ಸರ್ಕಾರಗಳು ಗಮನಹರಿಸಿದ್ದೇ ಆದಲ್ಲಿ ನಮ್ಮ ಉನ್ನತ ಶಿಕ್ಷಣದಲ್ಲಿ ಗುಣಮಟ್ಟ ಕಾಯ್ದುಕೊಳ್ಳಲು ಸಾಧ್ಯವಾಗಲಿದೆ ಎಂದು ಡಾ.ಗಂಗೂಬಾಯಿ ಹಾನಗಲ್ ಸಂಗೀತ ಮತ್ತು ಪ್ರದರ್ಶಕ ಕಲೆಗಳ ವಿಶ್ವವಿದ್ಯಾನಿಲಯದ ಕುಲಪತಿ ಪ್ರೊ ನಾಗೇಶ್ ವಿ.ಬೆಟ್ಟಕೋಟೆ ಹೇಳಿದರು.

ಮೈಸೂರಿನ ಮುಕ್ತ ಗಂಗೋತ್ರಿಯ ಮುಕ್ತ ವಿವಿಯ ಕಾವೇರಿ ಸಭಾಂಗಣದಲ್ಲಿ ವಿವಿಯ ವಾಣಿಜ್ಯಶಾಸ್ತ್ರ ಅಧ್ಯಯನ ಮತ್ತು ಸಂಶೋಧನಾ ವಿಭಾಗದ ವತಿಯಿಂದ ಹಮ್ಮಿಕೊಂಡಿರುವ ಐದು ದಿನಗಳ ರಾಷ್ಟ್ರೀಯ ಮಟ್ಟದ ಅಧ್ಯಾಪಕರ ಅಭಿವೃದ್ಧಿ ಕಾರ್ಯಕ್ರಮವನ್ನು ಮಂಗಳವಾರ ಉದ್ಘಾಟಿಸಿ ಅವರು ಮಾತನಾಡಿದರು.

ನಮ್ಮ ಶಿಕ್ಷಣ ನೀತಿಗಳು ಅಭಿವೃದ್ಧಿ ದಿಕ್ಕಿನಲ್ಲಿ ಇವೆಯೇ ಅಥವಾ ಸಾರ್ವಜನಿಕ ಶಿಕ್ಷಣವನ್ನು ಹತ್ತಿಕ್ಕಲು ಹೊರಟಿವೆಯೇ ಎಂಬ ಅನುಮಾನ ಕಾಡುವಂತಾಗಿದೆ. ಉದಾಹರಣೆಗೆ ಇತ್ತೀಚಿನ ದಿನಗಳಲ್ಲಿ ಜಿಲ್ಲೆಗೊಂದು ವಿಶ್ವವಿದ್ಯಾನಿಲಯ ಪ್ರಾರಂಭವಾಗುತ್ತಿವೆ. ಮೂಲಸೌಕರ್ಯಗಳ ಕೊರತೆಯೂ ಕಾಡುತ್ತಿವೆ. ಪ್ರಸ್ತುತ ಕಾರ್ಯನಿರ್ವಹಿಸುತ್ತಿರುವ ನಮ್ಮ ವಿಶ್ವವಿದ್ಯಾನಿಲಯಗಳಲ್ಲಿಯೂ ಅತಿಥಿ–ಗುತ್ತಿಗೆ ಉಪನ್ಯಾಸಕರು ಸೇರಿದಂತೆ ಬೋಧಕರ ವೇತನ ಸಮಸ್ಯೆ ತಲೆದೋರಿದೆ ಎಂದರು.

ಇವುಗಳ ಕಡೆ ಗಮನಹರಿಸಿದ್ದೇ ಆದಲ್ಲಿ ನಮ್ಮ ಉನ್ನತ ಶಿಕ್ಷಣದಲ್ಲಿ ಹೆಚ್ಚಿನ ಗುಣಮಟ್ಟ ಕಾಯ್ದುಕೊಳ್ಳಲು ಸಾಧ್ಯ. ಆದರೆ ಸರ್ಕಾರಗಳು ಇವುಗಳತ್ತ ಗಮನ ನೀಡದೇ ಇರುವುದು ಅನೇಕ ರೀತಿಯ ಅನುಮಾನಕ್ಕೆ ಕಾರಣವಾಗಿದೆ. ಮೂಲ ಸೌಕರ್ಯವಿಲ್ಲದೇ ಗುಣಮಟ್ಟ ಶಿಕ್ಷಣ ಸಾಧ್ಯವಾಗುವುದಿಲ್ಲ ಯಾವುದೇ ರಾಜ್ಯ ಅಥವಾ ರಾಷ್ಟ್ರದ ಅಭಿವೃದ್ಧಿಗೆ ಉನ್ನತ ಶಿಕ್ಷಣ ಮತ್ತು ಸಂಶೋಧನೆ ಅತ್ಯಗತ್ಯ ಎಂದು ತಿಳಿಸಿದರು.

ಭಾರತ ಮತ್ತು ಪಾಶ್ಚಿಮಾತ್ಯ ದೇಶಗಳ ಉನ್ನತ ಶಿಕ್ಷಣದ ಬಗ್ಗೆ ಅವಲೋಕಿಸುವ ಅಗತ್ಯವಿದೆ. ಇಂದಿನ ನಮ್ಮ ಸರ್ಕಾರಗಳು ಉನ್ನತ ಶಿಕ್ಷಣಕ್ಕೆ ನೀಡುತ್ತಿರುವ ಅನುದಾನ, ಜೊತೆಗೆ ಉನ್ನತ ಶಿಕ್ಷಣದಲ್ಲಿ ವಿದ್ಯಾಭ್ಯಾಸ ಮಾಡುವವರ ಸಂಖ್ಯೆ ಎಷ್ಟು ಎಂಬುದನ್ನು ಅವಲೋಕಿಸಿದರೆ ನಮ್ಮ ಅಭಿವೃದ್ಧಿಗೆ ಕೊಡಲಿ ಪೆಟ್ಟು ನೀಡುತ್ತಿದ್ದೇವೆ ಎಂಬ ಭಾವನೆ ಮೂಡುತ್ತದೆ ಎಂದು ಹೇಳಿದರು.

ನಾನು ಹತ್ತಾರು ದೇಶಗಳನ್ನು ಸುತ್ತಿದ್ದೇನೆ. ನಮ್ಮ ದೇಶ ಮೊದಲಿನಿಂದಲೂ ವಿಶ್ವ ಗುರುವಾಗಿಯೇ ಇದೆ. ನಮ್ಮ ದೇಶದಲ್ಲಿ ಹಿಂದಿನಿಂದಲೂ ಮೌಲ್ಯಾಧಾರಿತ ಶಿಕ್ಷಣ ನೀಡಲಾಗುತ್ತಿದೆ. ರಾಮಾಯಣ ಮತ್ತು ಮಹಾಭಾರತದ ಬಗ್ಗೆ ವಿದೇಶಿಗರೂ ಆಸಕ್ತಿ ಹೊಂದಿದ್ದಾರೆ. ನಮ್ಮ ರಾಷ್ಟ್ರದ ಬಹುಸಂಸ್ಕೃತಿಗಳು, ಕಲೆ, ಸಾಹಿತ್ಯ, ರಾಜಕೀಯ ವಲಯವನ್ನೂ ವಿದೇಶಿಗರು ಅಧ್ಯಯನ ಮಾಡುತ್ತಿದ್ದಾರೆ ಎಂದರು.

ಸಾವಿರಾರು ವರ್ಷಗಳ ಹಿಂದೆ ನಮ್ಮ ಭಾರತ ಪ್ರಖ್ಯಾತ ವಿಶ್ವವಿದ್ಯಾನಿಲಯಗಳನ್ನು ಹೊಂದಿತ್ತು. ಗುರುಕುಲ ಪದ್ಧತಿಯಿಂದ ಈಗ ಆಧುನಿಕ ಹಂತಕ್ಕೆ ಬಂದು ನಿಂತಿದ್ದರೂ ಯಾವ ಹಂತದಲ್ಲೂ ನಮ್ಮ ಶಿಕ್ಷಣ, ತನ್ನ ಪ್ರಾಮುಖ್ಯತೆ ಕಳೆದುಕೊಂಡಿಲ್ಲ. ಆದರೆ ಇತ್ತೀಚಿನ ದಿನಗಳಲ್ಲಿ ನಾವು ಕೇವಲ ನೀತಿ–ನಿಯಮಾವಳಿ ನಿರೂಪಿಸುವಲ್ಲೇ ಪ್ರಖ್ಯಾತಿ ಆಗುತ್ತಿದ್ದೀವೇನೋ ಎನ್ನುವಂತಾಗಿದ್ದು, ಅವುಗಳನ್ನು ಜಾರಿಗೆ ತರುವ ನಿಟ್ಟಿನಲ್ಲಿ ಹೆಚ್ಚಿನ ಒತ್ತು ನೀಡುತ್ತಿಲ್ಲ ಎಂದು ಬೇಸರ ವ್ಯಕ್ತಪಡಿಸಿದರು.

ಪ್ರೊ.ಶರಣಪ್ಪ ವಿ.ಹಲಸೆಯವರು ಕುಲಪತಿಗಳಾಗಿ ಬಂದ ನಂತರ ಮುಕ್ತ ವಿವಿ ಪ್ರಗತಿಯತ್ತ ದಾಪುಗಾಲು ಇರಿಸುತ್ತಿದೆ. ಈ ಹಿಂದೆ ಮುಕ್ತ ವಿವಿಗೆ ಇದ್ದಂತಹ ಕಳಂಕ ತೊಡೆದು ಹೋಗಿದೆ. ಮುಕ್ತ ವಿವಿ ಸಂಶೋಧನೆಗಳ ಮೂಲಕ ಇನ್ನು ಹೆಚ್ಚಿನ ಪ್ರಗತಿಯತ್ತ ಸಾಗಲಿ ಎಂದು ಹಾರೈಸಿದರು.

> ನಮ್ಮಲ್ಲಿ ಇಷ್ಟೊಂದು ಜನಸಂಖ್ಯೆ ಇದ್ದರೂ ಉನ್ನತ ಶಿಕ್ಷಣ ಪಡೆಯುವ ಪ್ರಮಾಣ ಇಂದಿಗೂ ಶೇ.8ರಷ್ಟು ಮಾತ್ರವೇ ಇದೆ. ಜೊತೆಗೆ ಉತ್ತಮ ವೇತನಕ್ಕಾಗಿ ಉನ್ನತ ಶಿಕ್ಷಣ ಪಡೆದವರಲ್ಲಿ ಬಹುತೇಕರು ವಿದೇಶಗಳತ್ತ ಮುಖ ಮಾಡುತ್ತಿದ್ದಾರೆ. ಇದು ಆಗಬಾರದು.
> -ಪ್ರೊ.ನಾಗೇಶ್ ವಿ.ಬೆಟ್ಟಕೋಟೆ

ಸಂಶೋಧನೆಯಲ್ಲಿ ಎಸ್‌ಪಿಎಸ್‌ಎಸ್ ಮತ್ತು ಎಎಂಓಎಸ್ ಸಾಫ್ಟ್‌ವೇರ್ ಬಳಕೆ ಮೂಲಕ ದತ್ತಾಂಶ ವಿಶ್ಲೇಷಣೆ ಕುರಿತು ಈ ಅಧ್ಯಾಪಕರ ಅಭಿವೃದ್ಧಿ ಕಾರ್ಯಕ್ರಮ ನಡೆಯಲಿದೆ. ಪಾಂಡಿಚೇರಿ ವಿವಿಯ ಡಾ.ಆರ್. ಕಾಶಿಲಿಂಗಮ್ ಹಾಗೂ ಬೆಂಗಳೂರಿನ ಚಾಣಕ್ಯ ವಿವಿಯ ಪ್ರೊ.ವಿ.ರಾಜೇಶ್‌ಕುಮಾರ್ ಸಂಪನ್ಮೂಲ ವ್ಯಕ್ತಿಗಳಾಗಿ ಪಾಲ್ಗೊಂಡಿದ್ದು, 80ಕ್ಕೂ ಹೆಚ್ಚು ಅಧ್ಯಾಪಕರು ಭಾಗವಹಿಸಿದ್ದಾರೆ.

ಮುಕ್ತ ವಿವಿ ಕುಲಪತಿ ಪ್ರೊ.ಶರಣಪ್ಪ ವಿ.ಹಲಸೆ ಅಧ್ಯಕ್ಷತೆ ವಹಿಸಿದ್ದರು. ಮುಕ್ತ ವಿವಿ ಕುಲಸಚಿವರಾದ ಪ್ರೊ.ಕೆ.ಎಲ್.ಎನ್. ಮೂರ್ತಿ, ಪ್ರೊ.ಕೆ.ಬಿ.ಪ್ರವೀಣ್, ಡೀನ್‌ಗಳಾದ ಪ್ರೊ.ಎನ್.ಲಕ್ಷ್ಮೀ, ರಾಮನಾಥ ನಾಯ್ಡು, ವಾಣಿಜ್ಯಶಾಸ್ತ್ರ ಅಧ್ಯಯನ ಮತ್ತು ಸಂಶೋಧನಾ ವಿಭಾಗದ ಮುಖ್ಯಸ್ಥೆ ಡಾ.ಸಿ.ಉಷಾ ಮತ್ತಿತರರು ಹಾಜರಿದ್ದರು.

ಮೈಸೂರಲ್ಲಿ ಪೊಲೀಸರಿಂದ ಜನ ಜಾಗೃತಿ



ಮೈಸೂರು, ಜು. 25(ಆರ್‌ಕೆ)– ಬೈಕ್ ರ‍್ಯಾಲಿ ಮೂಲಕ ಮೈಸೂರಲ್ಲಿ ಸಂಚಾರ ನಿಯಮಗಳ ಬಗ್ಗೆ ಪೊಲೀಸರು ಇಂದು ಜನ ಜಾಗೃತಿ ಮೂಡಿಸಿದರು.

ರೋಟರಿ ಮೈಸೂರ್ ಮತ್ತು ಮೈಸೂರು ನಗರ ಸಂಚಾರ ಪೊಲೀಸ್ ವಿಭಾಗದ ವತಿಯಿಂದ ಆಯೋಜಿಸಿದ್ದ ಬೈಕ್ ರ‍್ಯಾಲಿಗೆ ಅರಮನೆ ಉತ್ತರ ದ್ವಾರದ ಶ್ರೀ ಕೋಟೆ ಆಂಜನೇಯ ಸ್ವಾಮಿ ದೇವಸ್ಥಾನದ ಬಳಿ ನಗರ ಪೊಲೀಸ್ ಆಯುಕ್ತ ಬಿ. ರಮೇಶ್ ಹಾಗೂ ರೋಟರಿ ಮೈಸೂರು ಅಧ್ಯಕ್ಷ ಅರುಣ್ ಬೆಳವಾಡಿ ಹಸಿರು ನಿಶಾನೆ ತೋರುವ ಮೂಲಕ ಚಾಲನೆ ನೀಡಿದರು.

ಕೆ.ಆರ್. ಸರ್ಕಲ್, ಡಿ. ದೇವರಾಜ ಅರಸು ರಸ್ತೆ, ಜೆಎಲ್‌ಬಿ ರಸ್ತೆ, ಇರ್ವಿನ್ ರಸ್ತೆ, ಬಿ.ಎನ್. ರಸ್ತೆ, ಛತ್ರಿ ಮರದ ರಸ್ತೆ, ಹಾರ್ಡಿಂಜ್ ಸರ್ಕಲ್, ಗನ್‌ಹೌಸ್ ಸರ್ಕಲ್, ಸಂಸ್ಕೃತ ಪಾಠಶಾಲೆ ಸರ್ಕಲ್, ಸಯ್ಯಾಜಿರಾವ್ ರಸ್ತೆ ಮೂಲಕ ಕೆ.ಆರ್. ಸರ್ಕಲ್ ಮಾರ್ಗದಲ್ಲಿ ಸಾಗಿದ ರ‍್ಯಾಲಿಯು ಮರಳಿ ಶ್ರೀ ಕೋಟೆ ಆಂಜನೇಯಸ್ವಾಮಿ ದೇವಸ್ಥಾನದ ಬಳಿ ಅಂತ್ಯಗೊಂಡಿತು.

ಹೆಲ್ಮೆಟ್, ಸೀಟ್ ಬೆಲ್ಟ್ ಧರಿಸದೇ ವಾಹನ ಚಾಲನೆ ಮಾಡಬೇಡಿ, ವಾಹನ ಚಾಲನೆ ಮಾಡುವಾಗ ಮೊಬೈಲ್ ಬಳಸಬೇಡಿ, ಮದ್ಯಪಾನ ಮಾಡಿ ಡ್ರೈವಿಂಗ್ ಮಾಡಿದರೆ ಪ್ರಾಣಕ್ಕೆ ಆಪತ್ತು, ಸಿಗ್ನಲ್ ಜಂಪ್, ನಿರ್ಬಂಧಿತ ಸ್ಥಳದಲ್ಲಿ ವಾಹನ ನಿಲುಗಡೆ, ಒನ್ ವೇ ಸಂಚಾರದಂತಹ ಸಂಚಾರ ನಿಯಮ ಉಲ್ಲಂಘಿಸಬೇಡಿ ಮುಂತಾದ ಘೋಷಣಾ ಫಲಕ ಪ್ರದರ್ಶಿಸಿದ ಪೊಲೀಸರು, ಜನಜಾಗೃತಿ ಭಿತ್ತಿಪತ್ರಗಳನ್ನು ಸಾರ್ವಜನಿಕರಿಗೆ ವಿತರಿಸಿದರು.

ಈ ಸಂದರ್ಭ ಮಾತನಾಡಿದ ನಗರ ಪೊಲೀಸ್ ಆಯುಕ್ತ ಬಿ. ರಮೇಶ್, ಅಪಘಾತಗಳನ್ನು ತಪ್ಪಿಸಿ ಅಮೂಲ್ಯ ಪ್ರಾಣ ರಕ್ಷಣೆಗಾಗಿ ಸಂಚಾರ ನಿಯಮಗಳನ್ನು ಜಾರಿಗೆ ತರಲಾಗಿದ್ದು, ವಾಹನಗಳ ಬಳಕೆದಾರರು ಪಾಲಿಸಬೇಕೆಂದು ಕರೆ ನೀಡಿದರು.

ಅಪರಾಧ ಮತ್ತು ಸಂಚಾರ ವಿಭಾಗದ ಡಿಸಿಪಿ ಜಾಹ್ನವಿ, ಕಾನೂನು–ಸುವ್ಯವಸ್ಥೆ ಡಿಸಿಪಿ ಎಂ.ಮುತ್ತುರಾಜ್, ಸಂಚಾರ ವಿಭಾಗದ ಎಸಿಪಿ ಪರಶುರಾಮಪ್ಪ, ಎಸಿಪಿಗಳಾದ ಶಾಂತಮಲ್ಲಪ್ಪ, ಗಜೇಂದ್ರ ಪ್ರಸಾದ್, ಎಸ್‌ಇ ಗಂಗಾಧರಸ್ವಾಮಿ, ಅಶ್ವಥನಾರಾಯಣ, ಸಂದೇಶ್‌ಕುಮಾರ್, ಸಂಚಾರ ಠಾಣೆ ಇನ್ಸ್‌ಪೆಕ್ಟರ್, ಸಬ್‌ಇನ್ಸ್‌ಪೆಕ್ಟರ್‌ಗಳು, ರೋಟರಿ ಮೈಸೂರು ಸಂಸ್ಥೆ ಪದಾಧಿಕಾರಿಗಳು ಹಾಗೂ ಸಾರ್ವಜನಿಕರು ಸಂಚಾರ ಅರಿವು ಮೂಡಿಸುವ ಬೈಕ್ ರ‍್ಯಾಲಿಯಲ್ಲಿ ಪಾಲ್ಗೊಂಡಿದ್ದರು.

ಮೈಸೂರಿನಲ್ಲಿ ಬೇಸ್ ಬಾಲ್ ಚಾಂಪಿಯನ್‌ಶಿಪ್ ಪಂದ್ಯಾವಳಿ



ಮೈಸೂರು, ಜು.25(ಬಿಎಲ್‌ಯು)– ವಿಶ್ವೇಶ್ವರಯ್ಯ ತಾಂತ್ರಿಕ ವಿಶ್ವವಿದ್ಯಾನಿಲಯದ ಅಂತರ ಕಾಲೇಜು ರಾಜ್ಯ ಮಟ್ಟದ ಪುರುಷರ ಹಾಗೂ ಮಹಿಳೆಯರ ಬೇಸ್ ಬಾಲ್ ಚಾಂಪಿಯನ್‌ಶಿಪ್ ಪಂದ್ಯಾವಳಿ ಮೈಸೂರಿನಲ್ಲಿ ಇಂದು ಆರಂಭವಾಯಿತು.

ಮೈಸೂರಿನ ಮಹಾರಾಜ ಕಾಲೇಜು ಕ್ರಿಕೆಟ್ ಮೈದಾನದಲ್ಲಿ ಆರಂಭವಾದ ಮೂರು ದಿನಗಳ ಪಂದ್ಯಾವಳಿಗೆ ವಿಶ್ವೇಶ್ವರಯ್ಯ ತಾಂತ್ರಿಕ ವಿಶ್ವ ವಿದ್ಯಾನಿಲಯದ ಎಕ್ಸಿಕ್ಯೂಟಿವ್ ಕೌನ್ಸಿಲ್ ಮೆಂಬರ್ ಡಾ.ಎನ್.ಕೃಷ್ಣೇಗೌಡ ಚಾಲನೆ ನೀಡಿದರು.

ಬೇಸ್ ಬಾಲ್ ಕ್ರೀಡೆ ಆರಂಭವಾದ ವಿಚಾರವನ್ನು ವಿವರಿಸಿದ ಡಾ.ಕೃಷ್ಣೇಗೌಡ, ಕ್ರೀಡೆಯಿಂದ ದೈಹಿಕ ಆರೋಗ್ಯ ಕಾಪಾಡಿಕೊಳ್ಳಬಹುದು. ಜೊತೆಗೆ ಕ್ರೀಡಾ ಕ್ಷೇತ್ರದಲ್ಲಿ ಸಾಧನೆ ಮಾಡುವವರಿಗೆ ಸ್ಪೋರ್ಟ್ಸ್ ಕೋಟಾದಲ್ಲಿ ಉದ್ಯೋಗಾವಕಾಶವೂ ದೊರೆಯಲಿದೆ ಎಂದು ಉತ್ತೇಜಿಸಿದರು.

ಪುರುಷರು ಹಾಗೂ ಮಹಿಳೆಯರ ತಲಾ 15 ತಂಡಗಳನ್ನು ರಚಿಸಲಾಗಿದ್ದು, 300 ಆಟಗಾರರು ಬೇಸ್ ಬಾಲ್ ಕ್ರೀಡೆಯಲ್ಲಿ ಭಾಗವಹಿಸಿದ್ದಾರೆ. ವಿಜೇತರಾದವರನ್ನು ರಾಷ್ಟ್ರ ಮಟ್ಟದಲ್ಲಿ ನಡೆಯುವ ತಾಂತ್ರಿಕ ವಿಶ್ವ ವಿದ್ಯಾನಿಲಯಗಳ ಕ್ರೀಡೆಗೆ ಆಯ್ಕೆ ಮಾಡಲಾಗುವುದು.

ಮೈಸೂರು ವಿಶ್ವ ವಿದ್ಯಾನಿಲಯದ ದೈಹಿಕ ಶಿಕ್ಷಣ ವಿಭಾಗದ ನಿರ್ದೇಶಕ ಡಾ.ಸಿ.ವೆಂಕಟೇಶ್, ಬೆಳಗಾವಿ ವಿಟಿಯು ಪ್ರಾದೇಶಿಕ ನಿರ್ದೇಶಕ ಡಾ.ಟಿ.ಪಿ. ರೇಣುಕಾಮೂರ್ತಿ, ಮೈಸೂರು ವಿಭಾಗದ ಪ್ರಾದೇಶಿಕ ನಿರ್ದೇಶಕ ಡಾ.ಎಂ.ಪಿ.ಮುರುಳೀಧರ್, ದೈಹಿಕ ಶಿಕ್ಷಣ ನಿರ್ದೇಶಕ ಡಾ.ಪಿ.ಪುಟ್ಟಸ್ವಾಮಿಗೌಡ, ಡಾ.ಕೆ.ಎಂ.ಚಿರಂತ್ ವೇದಿಕೆಯಲ್ಲಿ ಉಪಸ್ಥಿತರಿದ್ದರು.

ಗಾರ್ಮೆಂಟ್ಸ್ ನೌಕರರಿಗೆ 2.5 ಲಕ್ಷ ರೂ. ಪರಿಹಾರ ನೀಡಲು ಆದೇಶ



ಮೈಸೂರು, ಜು.25(ಜಿಎ)–ಮೈಸೂರಿನ ಬೆಳವಾಡಿಯಲ್ಲಿರುವ ಗಾರ್ಮೆಂಟ್ಸ್ ಸಂಸ್ಥೆಯ 300ಕ್ಕೂ ಅಧಿಕ ಕಾರ್ಮಿಕರ ಕೆಲಸ ನಿರಾಕರಣೆ ಮಾಡಿದ್ದು, ಅಷ್ಟು ಮಂದಿಗೆ ತಲಾ 2.50 ಲಕ್ಷ ರೂ. ಪರಿಹಾರ ನೀಡುವಂತೆ ಕಾರ್ಮಿಕ ನ್ಯಾಯಾಲಯ ಆದೇಶ ನೀಡಿದೆ ಎಂದು ಮೈಸೂರು ಜಿಲ್ಲಾ ಗಾರ್ಮೆಂಟ್ಸ್ ಕಾರ್ಮಿಕರ ಸಂಘದ ಅಧ್ಯಕ್ಷ ಪ್ರಮೋದ್ ಚಿಕ್ಕಮಣ್ಣೂರು ತಿಳಿಸಿದರು.

ನಗರದ ಪತ್ರಕರ್ತರ ಭವನದಲ್ಲಿ ಮಂಗಳವಾರ ಸುದ್ದಿಗೋಷ್ಠಿಯಲ್ಲಿ ಮಾತನಾಡಿದ ಅವರು, ಮೈಸೂರಿನ ಬೆಳವಾಡಿ ಕೈಗಾರಿಕಾ ಪ್ರದೇಶದಲ್ಲಿರುವ ಎಂ.ಕೆ.ಫ್ಯಾಷನ್ ವರ್ಲ್ಡ್ ಪ್ರೈವೇಟ್ ಲಿಮಿಟೆಡ್ ಗಾರ್ಮೆಂಟ್ಸ್‌ನ ಆಡಳಿತ ವರ್ಗವು ಯಾವುದೇ ಮುನ್ಸೂಚನೆ ನೀಡದೆ ಕಾನೂನು ಬಾಹಿರವಾಗಿ ಉತ್ಪಾದನೆಯನ್ನು ಸ್ಥಗಿತಗೊಳಿಸಿ, 300 ಮಂದಿ ಕಾರ್ಮಿಕರ ಕೆಲಸವನ್ನು ನಿರಾಕರಣೆ ಮಾಡಿರುವುದು ಕಾನೂನು ಬಾಹಿರವಾಗಿದ್ದು, ಗಾರ್ಮೆಂಟ್ಸ್‌ಲ್ಲಿ ಕೆಲಸ ಮಾಡುತ್ತಿದ್ದ ಪ್ರತಿಯೊಬ್ಬ ಕಾರ್ಮಿಕನಿಗೆ 2.50 ಲಕ್ಷ ರೂ. ಪರಿಹಾರ ನೀಡುವಂತೆ ಕಾರ್ಮಿಕ ನ್ಯಾಯಾಲಯದ ನ್ಯಾಯಾಧೀಶರಾದ ಟಿ.ಶ್ರೀನಿವಾಸ ಅವರು ಆದೇಶಿಸಿರುವುದು ಸ್ವಾಗತಾರ್ಹ ಎಂದರು.

ಕಾರ್ಮಿಕ ಇಲಾಖೆಯ ಅನುಮತಿ ಪಡೆಯದ ಎಂ.ಕೆ.ಫ್ಯಾಷನ್ ವರ್ಲ್ಡ್ ಪ್ರೈವೇಟ್ ಲಿಮಿಟೆಡ್ ಗಾರ್ಮೆಂಟ್ಸ್ ಕಾರ್ಮಿಕರಿಗೂ ಯಾವುದೇ ಮುನ್ಸೂಚನೆ ನೀಡದೆ ಕಾನೂನುಬಾಹಿರವಾಗಿ ಉತ್ಪಾದನೆಯನ್ನು ಸ್ಥಗಿತಗೊಳಿಸಿದೆ ಎಂದು 2019ರಲ್ಲಿ ಆದೇಶ ಹೊರಡಿಸಿತ್ತು. ಈ ಆದೇಶದನ್ವಯ ಕಾರ್ಮಿಕ ನ್ಯಾಯಾಲಯದಲ್ಲಿ ಸುದೀರ್ಘ ವಿಚಾರಣೆಯ ನಂತರ ಮೇ 29 ರಂದು ಗಾರ್ಮೆಂಟ್ಸ್ ಲೇ ಆಫ್ ಮಾಡಿದ ದಿನ ಕೆಲಸ ಮಾಡುತ್ತಿದ್ದ 300 ಮಂದಿಗೆ ತಲಾ 2.50 ಲಕ್ಷ ರೂ. ಪರಿಹಾರ ನೀಡುವಂತೆ ಆದೇಶಿಸಿದ್ದು, ಕಾರ್ಮಿಕ ನ್ಯಾಯಾಲಯ ನೀಡಿದ ಈ ಆದೇಶ ಮೈಸೂರು ಜಿಲ್ಲೆಯಲ್ಲಿ ಕೆಲಸ ಮಾಡುತ್ತಿರುವ ಗಾರ್ಮೆಂಟ್ಸ್ ನೌಕರರ ಹೋರಾಟಕ್ಕೆ ನೈತಿಕ ಬಲ ಬಂದಂತಾಗಿದ್ದು, ಕೆಲಸ ನಿರಾಕರಣೆ ಮತ್ತು ಉತ್ಪಾದನೆ ಸ್ಥಗಿತ ಗೊಳಿಸುವ ಆಡಳಿತ ವರ್ಗಕ್ಕೆ ಈ ಆದೇಶ ಪಾಠವಾಗಲಿದೆ ಎಂದು ತಿಳಿಸಿದರು.

ನ್ಯಾಯಾಲಯದ ಆದೇಶದ ನಂತರವು ಎಂ.ಕೆ.ಫ್ಯಾಷನ್ ವರ್ಲ್ಡ್ ಪ್ರೈವೇಟ್ ಲಿಮಿಟೆಡ್ ಗಾರ್ಮೆಂಟ್ಸ್ ಈವರೆಗೂ ಪರಿಹಾರದ ಹಣ ಬಿಡುಗಡೆ ಮಾಡಿಲ್ಲ. ಈ ಸಂಬಂಧ ಸಂಘದ ವತಿಯಿಂದ ಕಾರ್ಮಿಕ ಇಲಾಖೆಗೆ ಮೊರೆ ಹೋಗಲಿದ್ದೇವೆ ಎಂದರು.

ಸುದ್ದಿಗೋಷ್ಠಿಯಲ್ಲಿ ಸಂಘದ ಉಪಾಧ್ಯಕ್ಷೆ ಸುವರ್ಣ, ಖಜಾಂಚಿ ಬಿ.ಎನ್.ಸುವರ್ಣ, ಸುನೀತ ಮತ್ತು ಭಾಗ್ಯಶ್ರೀ ಉಪಸ್ಥಿತರಿದ್ದರು.

ಶಾಲಾ ಮಕ್ಕಳಿಗೆ ವಿವಿಧ ಸ್ಪರ್ಧೆ ಆಯೋಜನೆ


ಮೈಸೂರು, ಜು.25(ಜಿಎ)–ಕೇವಲ ಕಲಿಕೆಯಲ್ಲಿ ತೊಡಗಿರುವ ಶಾಲಾ ಮಕ್ಕಳಿಗಾಗಿ ವಿವಿಧ ಸ್ಪರ್ಧೆಗಳನ್ನು ಆಯೋಜಿಸಲಾಗಿದೆ ಎಂದು ಮೈ ವೇದಿಕೆ ಸಂಸ್ಥಾಪಕ ಮನೀಶ್ ಗೌಡ ತಿಳಿಸಿದರು.




ನಗರದ ಪತ್ರಕರ್ತರ ಭವನದಲ್ಲಿ ಮಂಗಳವಾರ ಸುದ್ದಿಗೋಷ್ಠಿಯಲ್ಲಿ ಮಾತನಾಡಿದ ಅವರು, ಇತ್ತೀಚಿನ ದಿನಗಳಲ್ಲಿ ನೃತ್ಯ, ಚಿತ್ರಕಲೆ, ಭಾಷಣ ಮತ್ತು ನಟನೆಯನ್ನು ಪ್ರದರ್ಶನ ಮಾಡಲು ಸ್ಪರ್ಧೆಗಳಲ್ಲಿ ಕೇವಲ ಬೆರಣಿಕೆಯಷ್ಟು ಮಕ್ಕಳಿಗೆ ಮಾತ್ರ ಅವಕಾಶ ನೀಡಲಾಗುತ್ತಿದೆ. ಆದ್ದರಿಂದ ಎಲ್ಲ ಮಕ್ಕಳಿಗೂ ಅವಕಾಶ ಕಲ್ಪಿಸುವ ನಿಟ್ಟಿನಲ್ಲಿ ನಮ್ಮ ಸಂಸ್ಥೆ ಈ ವಿನೂತನ ಕಾರ್ಯಕ್ಕೆ ಮುಂದಾಗಿದೆ ಎಂದರು.

ರೋಟರಿ ಮೈಸೂರು ಮತ್ತು ನಗರ 16 ಖಾಸಗಿ ಶಾಲೆಗಳ ಸಹಯೋಗದೊಂದಿಗೆ 6ರಿಂದ 10ನೇ ತರಗತಿಯ ವಿದ್ಯಾರ್ಥಿಗಳಿಗೆ ಜು.30ರಂದು ಕರ್ನಾಟಕ ರಾಜ್ಯ ಮುಕ್ತ ವಿಶ್ವವಿದ್ಯಾನಿಲಯದ ಆವರಣದಲ್ಲಿರುವ ನಳಂದ ಸಭಾಂಗಣದಲ್ಲಿ ನೃತ್ಯ, ಚಿತ್ರಕಲೆ, ಭಾಷಣ ಮತ್ತು ನಟನೆ ಸ್ಪರ್ಧೆಗಳನ್ನು ಏರ್ಪಡಿಸಿದ್ದು, ಇದಕ್ಕೆ 200 ರೂ. ನೋಂದಣಿ ಶುಲ್ಕ ನಿಗದಿ ಮಾಡಲಾಗಿದೆ. ಹೆಚ್ಚಿನ ಮಾಹಿತಿಗಾಗಿ 7676531790, 8549986439 ಸಂಪರ್ಕಿಸಿ ಎಂದು ತಿಳಿಸಿದರು. ಸುದ್ದಿಗೋಷ್ಠಿಯಲ್ಲಿ ಸಹ ಸಂಸ್ಥಾಪಕ ಆಕಾಶ್ ಮತ್ತು ವ್ಯವಸ್ಥಾಪಕಿ ಚರಿತಾ ಉಪಸ್ಥಿತರಿದ್ದರು.

ಮಣಿಪುರ ಘಟನೆಗೆ ಬಿಜೆಪಿಯೇ ಕಾರಣ: ವಿವಿಧ ಸಂಘಟನೆ ಆಕ್ರೋಶ





ಮೈಸೂರು, ಜು.25(ಜಿಎ)–ಮಣಿಪುರದಲ್ಲಿ ಇಬ್ಬರು ಮಹಿಳೆಯರ ಮೇಲೆ ನಡೆದ ಸಾಮೂಹಿಕ ಅತ್ಯಾಚಾರ ಮತ್ತು ಬೆತ್ತಲೆ ಮೆರವಣಿಗೆ ಖಂಡಿಸಿ ಮೈಸೂರಿನಲ್ಲಿ ವಿವಿಧ ಸಂಘಟನೆಗಳು ಪ್ರತಿಭಟನೆ ನಡೆಸಿದವು.

ನಗರದ ಪುರಭವನದ ಮುಂಭಾಗ ಸೆಂಟರ್ ಆಫ್ ಇಂಡಿಯನ್ ಟ್ರೇಡ್ ಯೂನಿಯನ್ಸ್‌ನ ಕರ್ನಾಟಕ ಪ್ರಾಂತ ರೈತ ಸಂಘ ಮೈಸೂರು ಜಿಲ್ಲಾ ಸಮಿತಿಯ ಪದಾಧಿಕಾರಿಗಳು ಜಮಾವಣೆಗೊಂಡು ಕೇಂದ್ರ ಸರ್ಕಾರದ ವಿರುದ್ಧ ಘೋಷಣೆಗಳನ್ನು ಕೂಗಿ ಪ್ರತಿಭಟಿಸಿದರು.

ಈ ವೇಳೆ ಮಾತನಾಡಿದ ಪ್ರತಿಭಟನಾಕಾರರು, ಮಣಿಪುರದಲ್ಲಿ ನಡೆಯುತ್ತಿರುವ ಹಿಂಸಾಚಾರಕ್ಕೆ ಮೂಲ ಕಾರಣವಾಗಿರುವ ಆರ್‌ಎಸ್‌ಎಸ್ ಮತ್ತು ಬಿಜೆಪಿಯ ವಿಭಜಕ ರಾಜಕೀಯದ ವಿರುದ್ಧನೊಂದ ಜನರೊಂದಿಗೆ ನಾವಿದ್ದೇವೆ ಎಂದು ಸಾರಲು ಐಕ್ಯತಾ ದಿನವನ್ನು ಆಚರಿಸಲು ಮತ್ತು ಪ್ರತಿಭಟನೆ ಮಾಡಲು ಸಿಐಟಿಯು ಮತ್ತು ಎಐಕೆಎಸ್ ರಾಷ್ಟ್ರವ್ಯಾಪಿ ಕರೆ ನೀಡಿರುವ ಹಿನ್ನೆಲೆಯಲ್ಲಿ ಪ್ರತಿಭಟನೆ ಮಾಡುತ್ತಿದ್ದೇವೆ ಎಂದರು.

ಮಣಿಪುರದ ನಾಗರಿಕರಿಗೆ ರಕ್ಷಣೆ ನೀಡದ ಹಾಗೂ ಸಂವಿಧಾನ ಬದ್ಧ ಹಕ್ಕುಗಳನ್ನು ರಕ್ಷಿಸಲು ವಿಫಲವಾಗಿರುವ ನರೇಂದ್ರ ಮೋದಿ ಪ್ರಧಾನಿಯಾಗಿ ಉಳಿಯುವ ನೈತಿಕ ಅಧಿಕಾರವನ್ನು ಕಳೆದುಕೊಂಡಿದ್ದಾರೆ. ಆದ್ದರಿಂದ ಮಣಿಪುರದಲ್ಲಿ ನಡೆಯುತ್ತಿರುವ ಹಿಂಸಾಚಾರ ಬಗ್ಗೆ ರಾಷ್ಟ್ರಪತಿಗಳು ಕೂಡಲೇ ಮಧ್ಯ ಪ್ರವೇಶಿಸಿ ಮಣಿಪುರದಲ್ಲಿ ಸಹಜ ಸ್ಥಿತಿ ಮರುಸ್ಥಾಪಿಸಿ, ಸಂಕಷ್ಟದಲ್ಲಿರುವ ಜನರು ಮತ್ತು ಸಂತ್ರಸ್ತರಿಗೆ ಆದಷ್ಟು ಬೇಗ ಪರಿಹಾರ ಮತ್ತು ಪುನರ್ವಸತಿ ಕಲ್ಪಿಸುವಂತೆ ಒತ್ತಾಯಿಸಿದರು.

ಪ್ರತಿಭಟನೆಯಲ್ಲಿ ಸಿಐಟಿಯು ಅಧ್ಯಕ್ಷ ಜಿ.ಜಯರಾಂ, ಕರ್ನಾಟಕ ಪ್ರಾಂತ ರೈತ ಸಂಘದ ಪ್ರಧಾನ ಕಾರ್ಯದರ್ಶಿ ಜಗದೀಶ್ ಸೂರ್ಯ, ವಿಜಯ್ ಕುಮಾರ್ ಮೊಹಬೂಬ್, ಬಸಯ್ಯ, ಪ್ರದೀಪ್ ಮತ್ತು ಆನಂದ್ ಸೇರಿದಂತೆ ಮತ್ತಿತರರು ಉಪಸ್ಥಿತರಿದ್ದರು.

ಭಾರತ ಕಮ್ಯುನಿಸ್ಟ್ ಪಕ್ಷ: ಮಣಿಪುರದಲ್ಲಿ ಶಾಂತಿ ಮತ್ತು ಸೌಹಾರ್ದತೆಗಾಗಿ ಹಾಗೂ ಎನ್‌ಎಫ್‌ಐಡಬ್ಲ್ಯೂ ಮುಖಂಡರ ವಿರುದ್ಧ ದಾಖಲಿಸಿರುವ ದೇಶದ್ರೋಹ ಮತ್ತಿತರ ಪ್ರಕರಣಗಳನ್ನು ಹಿಂಪಡೆಯುವಂತೆ ಒತ್ತಾಯಿಸಿ ಭಾರತ ಕಮ್ಯುನಿಸ್ಟ್ ಪಕ್ಷವು ನಗರದ ಗಾಂಧಿ ಚೌಕದಲ್ಲಿ ಪ್ರತಿಭಟನೆ ನಡೆಸಿತು.

ಈ ವೇಳೆ ಮಾತನಾಡಿದ ಅವರು, ಮಣಿಪುರದಲ್ಲಿ ಗಲಭೆಗಳನ್ನು ನಿಯಂತ್ರಿಸುವಲ್ಲಿ ವಿಫಲವಾಗಿರುವ ಮಣಿಪುರದ ಮುಖ್ಯಮಂತ್ರಿ ಕೂಡಲೇ ರಾಜೀನಾಮೆ ನೀಡಬೇಕು. ಸಂತ್ರಸ್ತ ಕುಟುಂಬಗಳಿಗೆ ಸೂಕ್ತ ಪರಿಹಾರ ನೀಡಬೇಕೆಂದು ಆಗ್ರಹಿಸಿದರು.

ಸತ್ಯ ಶೋಧನಾ ಸಮಿತಿಯನ್ನು ರಚಿಸಿಕೊಂಡು ಸಂತ್ರಸ್ತರನ್ನು ಭೇಟಿಯಾದ ಎನ್‌ಎಫ್‌ಐಡಬ್ಲ್ಯೂ ನಾಯಕಿ ಆನಿ ರಾಜ ಮತ್ತು ತಂಡದ ಇತರ ಸದಸ್ಯರ ಮೇಲೆ ಮಣಿಪುರ ಸರ್ಕಾರವು ದೇಶದ್ರೋಹ ಮತ್ತು ಇತರೆ ಗಂಭೀರ ಪ್ರಕರಣಗಳನ್ನು ದಾಖಲಿಸಿದೆ. ಇದನ್ನು ಕೂಡಲೇ ರದ್ದುಗೊಳಿಸಬೇಕೆಂದು ಒತ್ತಾಯಿಸಿದರು.

ಪ್ರತಿಭಟನೆಯಲ್ಲಿ ಸಿಪಿಐನ ಕಾರ್ಯದರ್ಶಿ ಹೆಚ್.ಬಿ.ರಾಮಕೃಷ್ಣ, ಸಹ ಕಾರ್ಯದರ್ಶಿ ಸೋಮರಾಜೇ ಅರಸ್, ಎಚ್.ಆರ್.ಶೇಷಾದ್ರಿ, ಎಂ.ಕೆ.ದೇವದಾಸ್, ಜಗನ್ನಾಥ್ ಮತ್ತು ರಾಮು ಸೇರಿದಂತೆ ಇನ್ನಿತರರು ಪಾಲ್ಗೊಂಡಿದ್ದರು.

ಬಸವಣ್ಣನವರ ಮಾರ್ಗದಲ್ಲಿ ನಡೆದ ಹಡಪದ ಅಪ್ಪಣ್ಣ

ನರಸೀಪುರದಲ್ಲಿ ಹಡಪದ ಅಪ್ಪಣ್ಣನವರ ಜಯಂತ್ಯುತ್ಸವದಲ್ಲಿ ಶ್ರೀಗಳ ನುಡಿ



ತಿ.ನರಸೀಪುರ, ಜು.25 –ವಚನಗಳನ್ನು ಕನ್ನಡ ಭಾಷೆಯಲ್ಲಿ ಸರಳವಾಗಿ ಎಲ್ಲರಿಗೂ ತಿಳಿಯುವ ರೀತಿಯಲ್ಲಿ ಬರೆಯುವುದರ ಮೂಲಕ ಸಂಸ್ಕೃತದ ಬಿಗಿತನವನ್ನು ಸರಳೀಕರಣಗೊಳಿಸಿ ಬಸವಣ್ಣನವರ ಕಾಲಘಟ್ಟದಲ್ಲಿಯೇ ಗುರುತಿಸಿಕೊಂಡಂತ ಹವರು ಹಡಪದ ಅಪ್ಪಣ್ಣನವರು ಎಂದು ಮುಡುಕನಪುರ ಹಲವಾರ ಶ್ರೀ ಮಠದ ಶ್ರೀ ಷಡಕ್ಷರ ದೇಶಿಕೇಂದ್ರ ಮಹಾ ಸ್ವಾಮಿಗಳು ಅಭಿಪ್ರಾಯಪಟ್ಟರು.

ಪಟ್ಟಣದ ಮರಿಗೌಡ ಸ್ಮಾರಕ ಭವನದಲ್ಲಿ ಟೌನ್ ನಯನಜ ಕ್ಷತ್ರಿಯ ಜನಾಂಗದ ಸಂಘ ಹಾಗೂ ಶಿವಶರಣ ಹಡಪದ ಅಪ್ಪಣ್ಣನವರ 889ನೇ ಜಯಂತ್ಯುತ್ಸವ ಕಾರ್ಯಕ್ರಮ ಉದ್ಘಾಟಿಸಿ ಅವರು ಮಾತನಾಡಿದರು.

12 ನೇ ಶತಮಾನದಲ್ಲಿ ಸಾಮಾಜಿಕ ಕ್ರಾಂತಿಯನ್ನು ಉಂಟು ಮಾಡುವುದರ ಜೊತೆಗೆ ಧಾರ್ಮಿಕ ಬದಲಾವಣೆಗಳು ಕೂಡಾ ನಡೆದವು. ಅಂದಿನ ಕಾಲದಲ್ಲಿದ್ದ ಮೂಢನಂಬಿಕೆಗಳನ್ನು ಬಸವಣ್ಣ ಅವರು ಕಟುವಾಗಿ ವಿರೋಧಿಸಿದ್ದರು, ಅವರ ಮಾರ್ಗದಲ್ಲಿಯೇ ಹಡಪದ ಅಪ್ಪಣ್ಣ ಅವರು ಮುನ್ನಡೆದರು.

ಮೂಢನಂಬಿಕೆಗಳಿಂದ ಕೂಡಿದ್ದ ಜನರಿಗೆ ಬಸವಣ್ಣ ಅವರು ಮೂಢನಂಬಿಕೆಗಳನ್ನು ಬಿಟ್ಟು ಮೊದಲು ಹಡಪದರ ದರ್ಶನ ಪಡೆದು ನಂತರ ಅನುಭವ ಮಂಟಪಕ್ಕೆ ಬರಬೇಕೆಂದು ತಿಳಿಸಿದ್ದರು ಎಂದು ಹೇಳಿದರು.

ಅಂದಿನ ಕಾಲದಲ್ಲಿದ್ದ ಮೂಢನಂಬಿಕೆಗಳನ್ನು ಹೋಗಲಾಡಿಸಲು ಬಸವಣ್ಣನವರು ಎಲ್ಲ ವರ್ಗದ ಶಿವಶರಣರನ್ನು ಸಮಾನವಾಗಿ ಕಾಣಬೇಕು. ಅವರಲ್ಲಿಯೂ ನೈಪುಣ್ಯತೆ, ವಿದ್ವತ್ ಹಾಗೂ ಪ್ರತಿಭೆ ಇದೆ ಎಂಬ ಸಮಾನ ವೇದಿಕೆಯನ್ನು ಸೃಷ್ಟಿ ಮಾಡಿದ್ದರು. ಅಂತಹ ವ್ಯಕ್ತಿಗಳಲ್ಲಿ ಹಡಪದ ಅಪ್ಪಣ್ಣ ಅವರು ಕೂಡಾ ಪ್ರಮುಖರು. ಕಾಯಕ ವ್ಯಕ್ತಿಯಾಗಿ ಕಾಯಕವೇ ಕೈಲಾಸ ಎಂದು ಕೆಲಸ ಮಾಡಿದವರು ಎಂದು ಸ್ಮರಿಸಿದರು.

ಹೊಟ್ಟೆ ಹೊರೆಯಲು ಭಕ್ತಿಯನ್ನು ಮಾರ್ಗವನ್ನಾಗಿ ಮಾಡಿಕೊಂಡು, ಆಸೆಗಾಗಿ ಮೋಸ ಮಾಡಿದರೆ ಅದರಿಂದ ಯಾವ ಲಾಭವೂ ಆಗಲಾರದು. ಅಂತಹ ಮೋಸಗಾರರಿಂದ ದೂರವಿದ್ದು, ಭಕ್ತಿಯನ್ನು ಸನ್ಮಾರ್ಗದ ಬದುಕಿನ ಕ್ರಮವೆಂದು ಭಾವಿಸಿದರೆ ಮುಕ್ತಿ ದೊರೆಯುತ್ತದೆ. ಇದು ಶರಣರ ಸಂಘದಿಂದ ಮಾತ್ರ ಸಾಧ್ಯವೆಂಬ ಧೋರಣೆ ಅಪ್ಪಣ್ಣನವರು ಹೊಂದಿದ್ದರು ಎಂದು ಶ್ರೀಗಳು ತಿಳಿಸಿದರು.

ಸಾಹಿತಿ ಗುಂಬಳ್ಳಿ ಬಸವರಾಜು, ಹಡಪದ ಅಪ್ಪಣ್ಣನವರ ಇತಿಹಾಸವನ್ನು ಸವಿವರವಾಗಿ ಮಂಡಿಸಿದರು. ಶಿಕ್ಷಣ ಇಲಾಖೆಯ ಬಿಆರ್‌ಸಿ ನಾಗೇಶ್,ತಾಲೂಕು ಕುರುಬರ ಸಂಘದ ಪ್ರಧಾನ ಕಾರ್ಯದರ್ಶಿ ಬಸವರಾಜು, ಪುರಸಭೆ ಮುಖ್ಯಾಧಿಕಾರಿ ಬಿ.ಕೆ.ವಸಂತಕುಮಾರಿ ಮಾತನಾಡಿದರು.

ಕಸಾಪ ಅಧ್ಯಕ್ಷ ಪುಟ್ಟಸ್ವಾಮಿ,ಸರ್ಕಾರಿ ನೌಕರರ ಸಂಘದ ಅಧ್ಯಕ್ಷ ಎಂ.ವಿ.ಶಿವಶಂಕರ ಮೂರ್ತಿ, ತಾಲೂಕು ಕಾಂಗ್ರೆಸ್ ಪದವೀಧರ ಕ್ಷೇತ್ರದ ಅಧ್ಯಕ್ಷ ಪರಮೇಶ್ ಪಟೇಲ್, ಬೃಂದಾ ಅಸ್ಪತ್ರೆ ವ್ಯವಸ್ಥಾಪಕ ಗುರು, ಮಿನಿ ದ್ವಾರಕೀಶ್, ಟೌನ್ ನಯನಜ ಕ್ಷತ್ರಿಯ ಸಂಘದ ಅಧ್ಯಕ್ಷ ಶಿವರುದ್ರಸ್ವಾಮಿ, ಗೌರವಾಧ್ಯಕ್ಷ ಶಂಕರ, ಉಪಾಧ್ಯಕ್ಷ ವಸಂತ, ಟೈಲರ್ ಸುರೇಶ್, ಕಾರ್ಯದರ್ಶಿ ಸಿದ್ದರಾಜು, ಖಜಾಂಚಿ ಲೋಕೇಶ್, ಕಾರ್ಯಾಧ್ಯಕ್ಷ ಲಕ್ಷ್ಮಣ ಕುಮಾರ್, ಸಂಚಾಲಕ ಶೇಖರ್, ನಿರ್ದೇಶಕರಾದ ದಾಸಪ್ಪ, ಆನಂದ್, ವಿಜಯಕುಮಾರ್, ರವಿ, ರಾಘು, ದೇವರಾಜು, ಹೆಳವರ ಹುಂಡಿ ಕುಮಾರ್, ಸಂತೋಷ್, ಸಿದ್ದೇಶ್, ಕೂಸಪ್ಪ, ಸಂತೋಷ್, ಸವಿತಾ ನಾದಬ್ರಹ್ಮ ಕಲಾ ಸಂಘದ ಹನುಮನಾಳು ವೆಂಕಟ ರಾಮು ತಾಯೂರು ಶಿವಮೂರ್ತಿ, ನಾಡನಹಳ್ಳಿ ಕುಮಾರ, ಚಿಕ್ಕಣ್ಣ, ತಾಯೂರು ನಾಗರಾಜು, ಮಳವಳ್ಳಿ ಗಣೇಶ ತಾಯೂರು ಗೋವಿಂದ, ರಘು, ಹೆಳವರಹುಂಡಿ ನಾಗೇಂದ್ರ, ವೆಂಕಟೇಶ್, ಅಣ್ಣಪ್ಪ, ಪುರಸಭೆ ನೌಕರ ಮಹದೇವ್, ದೊಡ್ಡಪುರ ಚಿಕ್ಕಣ್ಣ, ಪದ್ಮ ಸುರೇಶ್, ಶಶಿಕಲಾ ಸಿದ್ದರಾಜು ಮತ್ತಿತರರಿದ್ದರು.

ಮಣಿಪುರ ಘಟನೆ ಖಂಡಿಸಿ ಪ್ರತಿಭಟನೆ



ಹುಣಸೂರು, ಜು.25– ಮಣಿಪುರದಲ್ಲಿ ನಡೆದಿರುವ ಮಹಿಳೆಯರ ಮೇಲಿನ ಸಾಮೂಹಿಕ ಅತ್ಯಾಚಾರ ಮತ್ತು ಬೆತ್ತಲೆ ಮೆರವಣಿಗೆ ನಡೆಸಿ ಅವಮಾನವೀಯ ಕೃತ್ಯವೆಸಗಿರುವ ಆರೋಪಿಗಳಿಗೆ ಕಠಿಣ ಶಿಕ್ಷೆಯಾಗಬೇಕೆಂದು ಆಗ್ರಹಿಸಿ ಸಾಲಿಡಾರಿಟಿ ಯೂತ್ ಮೂವ್‌ಮೆಂಟ್ ಹಾಗೂ ಪ್ರಗತಿ ಪರ ಸಂಘಟನೆಗಳು ನಗರದ ಸಂವಿಧಾನ ಸರ್ಕಲ್‌ನಲ್ಲಿ ಪ್ರತಿಭಟನೆ ನಡೆಸಿದವು.

ಪ್ರತಿಭಟನಾ ನಿರತರು ಕೇಂದ್ರ ಸರಕಾರದ ವಿರುದ್ಧ ಘೋಷಣೆ ಕೂಗಿ ಸಾರ್ವಜನಿಕರ ಗಮನ ಸೆಳೆದರು. ಈ ವೇಳೆ ಸಾಲಿಡಾರಿಟಿ ಮೂವ್‌ಮೆಂಟ್‌ನ ಜಿಲ್ಲಾಧ್ಯಕ್ಷ ಮುದಾಸಿರ್ ಖಾನ್ ಮಾತನಾಡಿ, ಕಳೆದ ಮೂರು ತಿಂಗಳಿಂದಲೂ ಮಣಿಪುರ ಜನಾಂಗೀಯ ದ್ವೇಷದ ದಳ್ಳುರಿಯಲ್ಲಿ ಬೇಯುತ್ತಿದೆ. ಅಲ್ಲಿನ ಕುಕಿ ಬುಡಕಟ್ಟು ಸಮುದಾಯದ ಮೂವರು ಮಹಿಳೆಯರನ್ನು ಬೆತ್ತಲೆಗೊಳಿಸಿ, ಸಾಮೂಹಿಕ ಅತ್ಯಾಚಾರ ಎಸಗಿರುವ ಘಟನೆ ಅವಮಾನವೀಯ. ಇಡೀ ಮನುಕುಲವೇ ತಲೆ ತಗ್ಗಿಸುವ ಕೃತ್ಯವಿದು ಎಂದರು.

ಸೌಹಾರ್ದ ಕರ್ನಾಟಕ ವೇದಿಕೆಯ ಅಧ್ಯಕ್ಷ ಜೆ.ಮಹದೇವ ಮಾತನಾಡಿದರು.

ಪ್ರತಿಭಟನೆಯಲ್ಲಿ ಮೂವ್‌ಮೆಂಟ್‌ನ ತಾಲೂಕು ಅಧ್ಯಕ್ಷ ರಷೀದ್, ಪಬ್ಲಿಕ್ ಪೀಸ್ ಕಮಿಟಿಯ ಶಾಮುನ್ನಾ, ಮುಜಾಮಿಲ್, ಜಬ್ಬಾರ್, ಜಮಾತ್ ಇಸ್ಲಾಂನ ಅಜೀಜುಲ್ಲಾ, ಮುಸ್ತಫಾ, ಅಬ್ಬಾಸ್, ಹೂಮನ್ ಹೆಲ್ಪ್ ಫೌಂಡೇಶನ್‌ನ ರಿಜ್ವಾನ್, ದಸಂಸದ ಅತ್ತಿಗುಪ್ಪೆ ರಾಮಕೃಷ್ಣ ಭಾಗವಹಿಸಿದ್ದರು.

ನಂ.ಗೂಡಿಗೆ ಶೀಘ್ರ ಡಯಾಲಿಸಿಸ್ ಕೇಂದ್ರ ಮಂಜೂರು



ನಂಜನಗೂಡು, ಜು.25– ನಂಜನಗೂಡಿನ ಸಾರ್ವಜನಿಕ ಆಸ್ಪತ್ರೆಗೆ ಹೆಚ್ಚುವರಿ ಡಯಾಲಿಸಿಸ್ ಕೇಂದ್ರ ಮತ್ತು ತಾಯಿ ಮತ್ತು ಮಕ್ಕಳ ಆಸ್ಪತ್ರೆಗೆ ಇಬ್ಬರು ಹೆರಿಗೆ ವೈದ್ಯರನ್ನು ನೇಮಕಾತಿ ಮಾಡುವಂತೆ ಸರ್ಕಾರಕ್ಕೆ ಮನವಿ ಸಲ್ಲಿಸಲಾಗಿದ್ದು, ಶೀಘ್ರದಲ್ಲಿ ಡಯಾಲಿಸಿಸ್ ಕೇಂದ್ರ ಮಂಜೂರಾಗಲಿದೆ ಎಂದು ಶಾಸಕ ದರ್ಶನ್ ಧ್ರುವನಾರಾಯಣ್ ತಿಳಿಸಿದ್ದಾರೆ.

ತಾಲೂಕಿನ ಶಿರಮಳ್ಳಿ ಗ್ರಾಮದಲ್ಲಿ 8 ಲಕ್ಷ ರೂ. ವೆಚ್ಚದಲ್ಲಿ ನೂತನವಾಗಿ ನಿರ್ಮಾಣಗೊಂಡಿರುವ ಡಿಜಿಟಲ್ ಗ್ರಂಥಾಲಯವನ್ನು ಉದ್ಘಾಟಿಸಿ ಮಾತನಾಡಿದ ಅವರು, ಕಾಡಂಚಿನ ಗ್ರಾಮಗಳಲ್ಲಿ ಕಾಡು ಪ್ರಾಣಿಗಳ ಹಾವಳಿಯಿಂದ ರೈತರಿಗೆ ಮತ್ತು ಸಾರ್ವಜನಿಕರಿಗೆ ಆಗುತ್ತಿರುವ ತೊಂದರೆಯ ಬಗ್ಗೆ ಮತ್ತು ರೈಲ್ವೆ ಬ್ಯಾರಿಕೇಡ್ ನಿರ್ಮಾಣ ಮಾಡುವ ಬಗ್ಗೆ ಸದನದಲ್ಲಿ ಚರ್ಚೆ ನಡೆಸಲಾಗಿದ್ದು, ಅರಣ್ಯ ಇಲಾಖೆ ಸಚಿವರು ಉತ್ತರಿಸಿ ಕಾಡುಪ್ರಾಣಿಗಳ ಹಾವಳಿಯನ್ನು ತಡೆಗಟ್ಟಲು ಕ್ರಮವಹಿಸುವುದಾಗಿ ತಿಳಿಸಿದ್ದಾರೆ ಎಂದರು.

ಬಹು ಮುಖ್ಯವಾಗಿ ಶಕ್ತಿ ಯೋಜನೆ ಜಾರಿಯಾದ ನಂತರ ಬಸ್ಸುಗಳ ಸಂಖ್ಯೆ ಕಡಿಮೆಯಾಗಿ ಜನರಿಗೆ, ವಿದ್ಯಾರ್ಥಿಗಳಿಗೆ ತೊಂದರೆಯಾಗುತ್ತಿರುವ ಬಗ್ಗೆ ಸಚಿವರಿಗೆ ಮನವರಿಕೆ ಮಾಡಲಾಗಿದ್ದು, ಸಾರಿಗೆ ಸಚಿವರು ಹೆಚ್ಚುವರಿಯಾಗಿ ನಾಲ್ಕು ಸಾವಿರ ಬಸ್ ಖರೀದಿಸುವುದಾಗಿ ಉತ್ತರಿಸಿದ್ದಾರೆ ನಂಜನಗೂಡು ಘಟಕಕ್ಕೂ ಸಹ ಹೆಚ್ಚುವರಿಯಾಗಿ 60 ಬಸ್‌ಗಳು ಬರಲಿದ್ದು, ಶೀಘ್ರವಾಗಿ ಬಸ್ ಸಮಸ್ಯೆ ಬಗೆಹರಿಸಲು ಕ್ರಮವಹಿಸಲಾಗಿದೆ ಎಂದು ಇದೇ ಸಂದರ್ಭದಲ್ಲಿ ಭರವಸೆ ನೀಡಿದರು.

ಗ್ರಂಥಾಲಯದಲ್ಲಿ ಇಂಟರ್ನೆಟ್ ಸೌಲಭ್ಯ ಇರುವುದರಿಂದ ರೈತರು ಸಹ ಯೂಟ್ಯೂಬ್ ಮೂಲಕ ಕೃಷಿಗೆ ಸಂಬಂಧಪಟ್ಟ ಯಶಸ್ವಿ ರೈತರ, ಕೃಷಿ ವಿಜ್ಞಾನಿಗಳ ಅನುಭವಗಳನ್ನು ವೀಕ್ಷಿಸಬಹುದು ಮತ್ತು ಬಜೆಟ್‌ನ ವಿಶ್ಲೇಷಣೆಯ ಬಗ್ಗೆ ವಿಡಿಯೋ ವೀಕ್ಷಿಸಿ ತಿಳುವಳಿಕೆ ಹೆಚ್ಚಿಸಿಕೊಳ್ಳಬಹುದು. ಹಾಗೆಯೇ ಸಾರ್ವಜನಿಕರು ಸಹ ತಮ್ಮ ಜ್ಞಾನ ಹೆಚ್ಚಿಸಿಕೊಳ್ಳಲು ಈ ಡಿಜಿಟಲ್ ಗ್ರಂಥಾಲಯದ ಸೌಲಭ್ಯವನ್ನು ಸದ್ಬಳಕೆ ಮಾಡಿಕೊಳ್ಳಿ ಎಂದು ಕರೆ ನೀಡಿದರು.

ತಾಪಂ ಇಒ ರಾಜೇಶ್ ಮಾತನಾಡಿದರು. ಇದೇ ಸಂದರ್ಭದಲ್ಲಿ ಮಾಜಿ ಶಾಸಕ ಕಳಲೆ ಕೇಶವಮೂರ್ತಿ, ಬ್ಲಾಕ್ ಕಾಂಗ್ರೆಸ್ ಅಧ್ಯಕ್ಷ ಶ್ರೀಕಂಠ ನಾಯಕ, ಯುವ ಕಾಂಗ್ರೆಸ್ ಅಧ್ಯಕ್ಷ ಅಶೋಕ್, ಗ್ರಾಪಂ ಮಾಜಿ ಅಧ್ಯಕ್ಷ ನಂಜುಂಡಸ್ವಾಮಿ, ಮಹದೇವ ಶೆಟ್ಟಿ, ಮಹದೇವು, ಕಾಳಮ್ಮ, ಗ್ರಾಮ ಪಂಚಾಯಿತಿ ಅಭಿವೃದ್ಧಿ ಅಧಿಕಾರಿ ಶರೀಫ್ ಸೇರಿದಂತೆ ಹಲವಾರು ಪ್ರಮುಖರು ಇದ್ದರು.

ಧ್ರುವನಾರಾಯಣ್ ನನ್ನ ರಾಜಕೀಯ ಗುರು



ಸರಗೂರು, ಜು.25– ನನಗೆ ರಾಜಕೀಯ ಗುರುವಾಗಿ ಮಾರ್ಗದರ್ಶನ ನೀಡಿದವರು ಆರ್.ಧ್ರುವನಾರಾಯಣ್, ಅವರ ಆಶೀರ್ವಾದದಿಂದ ಎರಡನೇ ಬಾರಿ ಶಾಸಕನಾಗಿ ಆಯ್ಕೆಯಾಗಿದ್ದೇನೆ ಎಂದು ಶಾಸಕ ಅನಿಲ್ ಚಿಕ್ಕಮಾದು ತಿಳಿಸಿದರು.

ಪಟ್ಟಣದ ಡಾ.ಬಿಆರ್.ಅಂಬೇಡ್ಕರ್ ಭವನದಲ್ಲಿ ನಂಜನಗೂಡು ಶಾಸಕ ದರ್ಶನ್ ಧ್ರುವನಾರಾಯಣ್, ಹೆಚ್.ಡಿ.ಕೋಟೆ ಶಾಸಕ ಅನಿಲ್ ಚಿಕ್ಕಮಾದು, ಅವರಿಗೆ ಆದಿಕರ್ನಾಟಕ ಸಮಾಜದ ವತಿಯಿಂದ ಏರ್ಪಡಿಸಲಾಗಿದ್ದ ಸನ್ಮಾನ ಕಾರ್ಯಕ್ರಮದಲ್ಲಿ ಅವರು ಮಾತನಾಡಿದರು.

ಎರಡನೇ ಬಾರಿ ಹೆಚ್ಚು ಮತ ನೀಡಿ ನನ್ನ ಗೆಲುವಿಗೆ ಕಾರಣರಾದ ಆದಿ ಕರ್ನಾಟಕ ಸಮಾಜದ ಎಲ್ಲಾ ಬಂಧುಗಳಿಗೂ ನಾನೂ ಚಿರುಣಿಯಾಗಿದ್ದೇನೆ ಎಂದ ಅವರು, ಗ್ರಾಮೀಣ ಭಾಗದಲ್ಲಿನ ಬಡತನದಲ್ಲಿರುವ ಕುಟುಂಬವು ಆರ್ಥಿಕವಾಗಿ ಮುಂದೆ ಬರಬೇಕು ಎಂದರು.

ನಂಜನಗೂಡು ಶಾಸಕ ದರ್ಶನ್ ಧ್ರುವನಾರಾಯಣ್, ಮಾತನಾಡಿ ತಮ್ಮ ತಂದೆಯ ಸೇವೆಯನ್ನು ಸ್ಮರಿಸಿದರು.

ಕಾರ್ಯಕ್ರಮದಲ್ಲಿ ಕಳಲೆ ಕೇಶವಮೂರ್ತಿ, ಎಸ್.ಎಲ್.ರಾಜಣ್ಣ, ಜಿಪಂ ಸದಸ್ಯರಾದ ನರಸೀಪುರ ಪಿ.ರವಿ. ಚಿಕ್ಕವೀರನಾಯಕ, ಟೌನ್ ಕಾಂಗ್ರೆಸ್ ಅಧ್ಯಕ್ಷ ಎಸ್.ಎನ್. ನಾಗರಾಜು, ಸರಗೂರು ಠಾಣಾ ಪಿಎಸ್‌ಐ ನಂದೀಶ್ ಕುಮಾರ್, ಪಟ್ಟಣ ಪಂಚಾಯಿತಿ ಸದಸ್ಯರಾದ ಎಸ್.ಎಲ್.ರಾಜಣ್ಣ, ಚಲುವ ಕೃಷ್ಣ ತಾಲ್ಲೂಕು ಆದಿಕರ್ನಾಟಕ ಮಹಾ ಸಭಾ ಅಧ್ಯಕ್ಷ ಶಿವಣ್ಣ, ಭೀಮಯ್ಯ, ಜವರಪ್ಪ, ಚಿಕ್ಕ ಯಜಮಾನ ನಾಗರಾಜು, ಡಾ.ಬಿಆರ್. ಅಂಬೇಡ್ಕರ್ ಟ್ರಸ್ಟ್ ಅಧ್ಯಕ್ಷ ಇದಿಯಪ್ಪ, ಶಿವಶಂಕರ್, ಬಿಲ್ಲೇಶ್, ಶಿವನಂಜ, ಕೃಷ್ಣ, ಸುಬ್ರಹ್ಮಣ್ಯ, ಭೋಗಪ್ಪ ದೇವಯ್ಯ, ಗ್ರಾಮೀಣ ಮಹೇಶ್, ಮಹೇಶ್, ಸಣ್ಣಸ್ವಾಮಿ, ಮಲ್ಲೇಶ್, ಭೈರಲಿಂಗಯ್ಯ, ಗೋಪಾಲಯ್ಯ, ಹುಚ್ಚಯ್ಯ, ಸಿದ್ದಯ್ಯ, ದೊಡ್ಡತಮ್ಮಯ್ಯ, ದೊಡ್ಡಬೈರ, ಕೃಷ್ಣದಾಸಿ, ರಂಗಯ್ಯ, ಮಹಿಳಾ ಒಕ್ಕೂಟ ಅಧ್ಯಕ್ಷೆ ಚಿಕ್ಕಮ್ಮ, ಪ್ರೇಮ, ಶೋಭಾ, ಸಾಕಮ್ಮ, ರಾಜಮ್ಮ, ಮಂಗಳಮ್ಮ, ಶಿವಮ್ಮ, ಉಪಸ್ಥಿತರಿದ್ದರು,

ತುರಗನೂರು ಗ್ರಾಪಂ ಅಧ್ಯಕ್ಷ, ಉಪಾಧ್ಯಕ್ಷರ ಅವಿರೋಧ ಆಯ್ಕೆ



ತಿ.ನರಸೀಪುರ.ಜು 25– ತಾಲೂಕಿನ ತುರಗನೂರು ಗ್ರಾಮ ಪಂಚಾಯತಿಯ ಕಾಂಗ್ರೆಸ್ ಬೆಂಬಲಿತ ಅಭ್ಯರ್ಥಿ ಅಧ್ಯಕ್ಷರಾಗಿ ಬಿ.ಎನ್.ನಯನಶಂಕರ್, ಉಪಾಧ್ಯಕ್ಷರಾಗಿ ದೇವರಾಜ್ ಅವಿರೋಧವಾಗಿ ಆಯ್ಕೆಯಾಗಿದ್ದಾರೆ. ತಾಲೂಕಿನ ತುರುಗನೂರು ಗ್ರಾಮ ಪಂಚಾಯತಿಯ ಸಭಾಂಗಣದಲ್ಲಿ ನಡೆದ ಚುನಾವಣೆಯಲ್ಲಿ ಅಧ್ಯಕ್ಷ ಸ್ಥಾನಕ್ಕೆ ಬಿ.ಎನ್.ನಯನ ಶಂಕರ್ ಹಾಗೂ ಉಪಾಧ್ಯಕ್ಷ ದೇವರಾಜ್ ಅವರುಗಳು ಬಿಟ್ಟರೆ ಬೇರೆ ಯಾರೂ ನಾಮಪತ್ರ ಸಲ್ಲಿಸದ ಕಾರಣ ಚುನಾವಣಾಧಿಕಾರಿ ಬಿಸಿಯೂಟ ಸಹಾಯಕ ನಿರ್ದೇಶಕ ಮದ್ದಾನಪ್ಪನವರು ಅವಿರೋಧ ಆಯ್ಕೆಯನ್ನು ಪ್ರಕಟಿಸಿ ಶುಭ ಕೋರಿದರು.

ಅಧ್ಯಕ್ಷ, ಉಪಾಧ್ಯಕ್ಷರ ಅವಿರೋಧ ಆಯ್ಕೆ ಪ್ರಕಟಗೊಳ್ಳುತ್ತಿದ್ದಂತೆ ಪಂಚಾಯ್ತಿ ಮುಂದೆ ಜಮಾಯಿಸಿದ್ದ ಬೆಂಬಲಿಗರು ಪಟಾಕಿ ಸಿಡಿಸಿ, ಸಿಹಿ ಹಂಚಿ ಸಂಭ್ರಮಿಸಿದರು.

ಕಾಂಗ್ರೆಸ್ ಯುವ ಘಟಕದ ಅಧ್ಯಕ್ಷ ಟಿ.ಎಸ್.ಲೋಕೇಶ್ ಮಾತನಾಡಿದರು. ಹತ್ತು ಮಂದಿ ಸದಸ್ಯರು ಚುನಾವಣೆಯಲ್ಲಿ ಭಾಗವಹಿಸಿದ್ದರು. ಸದಸ್ಯರಾದ ಕೃಷ್ಣೆಗೌಡ, ಚಂದ್ರೇಗೌಡ, ಬಸವರಾಜು, ರಾಜೇಶ್, ಮಧು, ಲಕ್ಷ್ಮಮ್ಮ, ಪುಷ್ಪ, ನಾಗರತ್ನ, ಅಭಿವೃದ್ಧಿ ಅಧಿಕಾರಿ ಗಾಯತ್ರಿ, ಕಾರ್ಯದರ್ಶಿ ಕಿರಣ್ಣ ಪಟೇಲ್, ನಟರಾಜ್, ಯಾಚನಹಳ್ಳಿ ಅಶೋಕ್, ಟಿ. ವಿ ಶಂಕರ್, ಪ್ರಸನ್ನ, ಮರಿಗೌಡ, ಶಂಕರೇಗೌಡ ಮತ್ತಿತರಿದ್ದರು

ಸಣ್ಣಪುಟ್ಟ ಸಮಾಜ ಗುರುತಿಸಿ ಸರ್ಕಾರದ ಸವಲತ್ತು ಕಲ್ಪಿಸುವೆ

ಸನ್ಮಾನ, ಪ್ರತಿಭಾ ಪುರಸ್ಕಾರ ಸಮಾರಂಭದಲ್ಲಿ ಶಾಸಕ ಅನಿಲ್ ಚಿಕ್ಕಮಾದು ಭರವಸೆ



ಹೆಚ್.ಡಿ.ಕೋಟೆ, ಜು.25– ನನ್ನ ಅಧಿಕಾರದ ಅವಧಿಯಲ್ಲಿ ಸಣ್ಣಪುಟ್ಟ ಸಮಾಜವನ್ನು ಗುರುತಿಸಿ ಅವರಿಗೆ ಸರ್ಕಾರದಿಂದ ಸಿಗುವ ಸವಲತ್ತುಗಳನ್ನು ಕಲ್ಪಿಸುವೆ ಎಂದು ಶಾಸಕ ಅನಿಲ್ ಚಿಕ್ಕಮಾದು ಭರವಸೆ ನೀಡಿದ್ದಾರೆ.

ಪಟ್ಟಣದ ಜೈನ್ ಭವನದಲ್ಲಿ ತಾಲೂಕು ಶ್ರೀಶ್ರೀಶ್ರೀ ಶಿವಸುಜ್ಞಾನ ತೀರ್ಥ ಮಹಾಸ್ವಾಮಿಗಳ ಸೇವಾ ಟ್ರಸ್ಟ್ ವತಿಯಿಂದ ಹಮ್ಮಿಕೊಂಡಿದ್ದ ಶಾಸಕರಿಗೆ ಸನ್ಮಾನ ಹಾಗೂ ವಿಶ್ವಕರ್ಮ ಸಮಾಜದ ಪ್ರತಿಭಾನ್ವಿತ ವಿದ್ಯಾರ್ಥಿಗಳಿಗೆ ಪ್ರತಿಭಾ ಪುರಸ್ಕಾರ ಕಾರ್ಯಕ್ರಮದಲ್ಲಿ ಮಾತನಾಡಿದರು.

ತಾಲೂಕಿನಲ್ಲಿ ಇದ್ದ ಕಳಂಕವನ್ನು ತೊಡೆದು ಹಾಕಿ ಎರಡನೇ ಅವಧಿಗೆ ಧ್ವನಿ ಇಲ್ಲದ ಸಮಾಜಕ್ಕೆ ಕೆಲಸ ಮಾಡುವ ಅವಕಾಶವನ್ನು ನೀಡಿದ್ದೀರಿ. ಜವಬ್ದಾರಿ ಜೊತೆಗೆ ಭಯ ಕೂಡ ಇದೆ, ಸರ್ಕಾರದ ವತಿಯಿಂದ ಸಮುದಾಯಕ್ಕೆ ಮಾಡಬೇಕಾದ ಕೆಲಸವನ್ನು ಪ್ರಾಮಾಣಿಕವಾಗಿ ಮಾಡುತ್ತೇನೆ ಎಂದ ಅವರು, ಪ್ರತಿಯೊಂದು ಸಮಾಜಕ್ಕೂ ಶಿಕ್ಷಣವನ್ನು ಕೊಡಿಸುವ ಕೆಲಸ ಮಾಡಬೇಕು. ವಿದ್ಯೆಗೆ ತಕ್ಕಂತೆ ಉದ್ಯೋಗ ಸಿಕ್ಕರೆ ಮಾತ್ರ ಸಮಾಜ ಮುಂದೆ ಬರಲು ಸಾಧ್ಯ. ಹಾಗಾಗಿ ಮಕ್ಕಳಿಗೆ ಪೋಷಕರು ಹಾಗೂ ಸಮುದಾಯದ ನಾಯಕರು ಉತ್ತಮ ಗುಣಮಟ್ಟದ ಶಿಕ್ಷಣ ನೀಡುವ ಕಡೆ ಗಮನ ಹರಿಸಬೇಕು ಎಂದರು.

ನಾನು ವೈಯುಕ್ತಿಕವಾಗಿ ಒಂದು ಲಕ್ಷ ರೂ. ಹಣವನ್ನು ಟ್ರಸ್ಟ್‌ಗೆ ನೀಡುತ್ತಿದ್ದು, ಅದನ್ನು ಮಕ್ಕಳ ವಿದ್ಯಾಭ್ಯಾಸಕ್ಕೆ ಉಪಯೋಗಿಸಿಕೊಳ್ಳಿ ಎಂದು ಹೇಳಿದರು. ವಿದ್ಯಾರ್ಥಿಗಳು ವಿದ್ಯಾಭ್ಯಾಸಕ್ಕೆ ಹೆಚ್ಚು ಒತ್ತು ಕೊಡಬೇಕು ಯಾವುದೇ ಕೆಟ್ಟ ಆಲೋಚನೆಗಳ ಕಡೆ ಗಮನ ಹರಿಸದೆ ಉತ್ತಮ ಶಿಕ್ಷಣದ ಕಡೆ ಹೋಗಿ ಎಂದು ಕರೆ ನೀಡಿದ ಅವರು, ಹಿಂದೆ ಶಾಸಕನಾಗಿದ್ದಾಗ ಕೂಡ ವಿಶ್ವಕರ್ಮ ಸಮಾಜಕ್ಕೆ ಪ್ರಾತಿನಿಧ್ಯ ನೀಡಿದ್ದೇನೆ, ಮುಂದೆ ಕೂಡ ನೀಡುತ್ತೇನೆ ಎಂದರು.

ಗೃಹಲಕ್ಷ್ಮೀ ಯೋಜನೆಗೆ ತಾಲೂಕಿನ ಎಲ್ಲಾ ಮಹಿಳೆಯರು ಅದಷ್ಟು ಬೇಗ ಅರ್ಜಿ ಹಾಕುವ ಕೆಲಸವನ್ನು ಮಾಡಬೇಕು. ಗ್ರಾಮ ಪಂಚಾಯತಿ, ಪಟ್ಟಣ ಪಂಚಾಯತಿ ಹಾಗೂ ಪುರಸಭಾ ವ್ಯಾಪ್ತಿಯಲ್ಲಿ ಅರ್ಜಿ ಹಾಕುವ ವ್ಯವಸ್ಥೆ ಮಾಡಿದ್ದು, ಜನತೆ ಸದುಪಯೋಗ ಮಾಡಿಕೊಳ್ಳಬೇಕು. ಮುಂದಿನ ತಿಂಗಳಲ್ಲಿ ಮಹಿಳೆಯರ ಖಾತೆಗೆ ಹಣ ಬರಲಿದೆ ಎಂದರು.

ಪುರಸಭಾ ಸದಸ್ಯ ಎಚ್.ಸಿ.ನರಸಿಂಹ ಮೂರ್ತಿ ಮಾತನಾಡಿ, ಶಾಸಕರಿಗೆ ಸಣ್ಣಪುಟ್ಟ ಸಮಾಜದ ಬಗ್ಗೆ ಅಪಾರ ಗೌರವ, ತಂದೆ ದಿ.ಚಿಕ್ಕಮಾದು ಅವರ ರೀತಿ ನುರಿತ ರಾಜಕಾರಣಿ, ತಾಲೂಕಿನಲ್ಲಿ 75 ವರ್ಷದಿಂದ ಮಾಡದ ಅಭಿವೃದ್ಧಿ ಕೆಲಸವನ್ನು ದಿ.ಚಿಕ್ಕಮಾದು ಅವರು ಐದು ವರ್ಷಗಳ ತಮ್ಮ ಅಧಿಕಾರ ಅವಧಿಯಲ್ಲಿ ಮಾಡಿದ್ದರು. ವೈಯಕ್ತಿಕ ಕೆಲಸಕಾರ್ಯಗಳನ್ನು ಮಾಡುವುದಕ್ಕಿಂತ ಸಮುದಾಯದ ಕೆಲಸವನ್ನು ಮಾಡುವುದನ್ನು ಮಾಡಿ ತೋರಿಸಿದರು. ಅವರ ಹಾದಿಯಲ್ಲಿ ಮಗ ಅನಿಲ್ ಚಿಕ್ಕಮಾದು ಮುಂದುವರಿಸಿಕೊಂಡು ಹೋಗುತ್ತಿದ್ದಾರೆ. ಕಳೆದ ಐದು ವರ್ಷಗಳಲ್ಲಿ ಮಾಡಿದ ಅಭಿವೃದ್ಧಿ ಕೆಲಸವನ್ನು ಮೆಚ್ಚಿ ತಾಲ್ಲೂಕಿನ ಜನತೆ ಮತ್ತೊಮ್ಮೆ ಆಶೀರ್ವಾದ ಮಾಡಿದ್ದಾರೆ. ಶಾಸಕರನ್ನು ಬಳಸಿಕೊಂಡು ತಾಲ್ಲೂಕಿನ ಅಭಿವೃದ್ಧಿ ಮಾಡಬೇಕಾಗಿದೆ ಎಂದರು.

ಒಂದು ಬಾರಿ ಗೆದ್ದವರು ಎರಡನೇ ಬಾರಿ ಗೆಲ್ಲುವುದಿಲ್ಲ ಎಂದು ಕೆಲವರು ಕಟ್ಟುಕಥೆ ಕಟ್ಟಿದ್ದರು. ಆದರೂ ಕೂಡ ತಾಲೂಕಿನ ಜನತೆ ಶಾಸಕರನ್ನು ಕೈ ಬಿಡದೆ ಭರ್ಜರಿಯಾಗಿ ಗೆಲ್ಲಿಸುವ ಮೂಲಕ ವಿರೋಧಿಗಳಿಗೆ ತಕ್ಕ ಪಾಠ ಕಲಿಸಿದರು ಎಂದರು.

ಟ್ರಸ್ಟ್ ಅಧ್ಯಕ್ಷ ನಾಗರಾಜಪ್ಪ ಮಾತನಾಡಿ, ತಾಲೂಕಿನಲ್ಲಿ ತೀರ ಸಂಕಷ್ಟದ ಸ್ಥಿತಿಯಲ್ಲಿ ವಿಶ್ವಕರ್ಮ ಸಮುದಾಯ ಇದ್ದು ಕೂಲಿಯನ್ನು ನಂಬಿಕೊಂಡು ಜೀವನ ನಡೆಸುತ್ತಿದ್ದು ಶಾಸಕರು ಸಹಕಾರ ನೀಡುವ ಮೂಲಕ ಆರ್ಥಿಕವಾಗಿ ಮೇಲೆತ್ತುವ ಕೆಲಸವನ್ನು ಮಾಡಬೇಕು ಎಂದು ಮನವಿ ಮಾಡಿದರು.

ಎಸ್‌ಎಸ್‌ಎಲ್‌ಸಿ ಹಾಗೂ ಪಿಯುಸಿ ಪರೀಕ್ಷೆಯಲ್ಲಿ ಉತ್ತೀರ್ಣರಾದ ಸಮುದಾಯದ 20 ಮಕ್ಕಳಿಗೆ ಪ್ರತಿಭಾ ಪುರಸ್ಕಾರ ನೀಡಲಾಯಿತು. ಶಾಸಕ ಅನಿಲ್ ಚಿಕ್ಕಮಾದು ಅವರನ್ನು ವಿಶ್ವಕರ್ಮ ಸಮುದಾಯದ ವತಿಯಿಂದ ಗುಲಾಬಿ ಹಾರ ಹಾಕಿ ಕೆತ್ತನೆಯ ಗಣೇಶನ ವಿಗ್ರಹ ನೀಡಿ ಸನ್ಮಾನಿಸಲಾಯಿತು.

ಕಾರ್ಯಕ್ರಮದಲ್ಲಿ ಜಿಲ್ಲಾ ಪಂಚಾಯತಿ ಮಾಜಿ ಸದಸ್ಯ ಪಿ.ರವಿ, ಪುರಸಭಾ ಸದಸ್ಯ ಎಚ್.ಸಿ.ನರಸಿಂಹಮೂರ್ತಿ, ಕಾವೇರ, ಪ್ರಧಾನ ಕಾರ್ಯದರ್ಶಿ ಪ್ರಣವಮೂರ್ತಿ, ಕಾರ್ಯದರ್ಶಿ ಕೆಂಡಗಣ್ಣಸ್ವಾಮಿ, ಉಪಾಧ್ಯಕ್ಷರಾದ ಮಹಾದೇವ ಸ್ವಾಮಿ, ಯೋಗಣ್ಣಚಾರ್, ಬಸವರಾಜಪ್ಪಬಿ, ನಂಜುಂಡಸ್ವಾಮಿ, ಆನುದ್ಧ ಸರಗೂರು ಬಸವರಾಜು, ರವಿ, ವಿಶ್ವನಾಥ, ಆಲನಹಳ್ಳಿ ಬಸವರಾಜು, ಶಿವು, ಗ್ಯಾಸ್ ಸೋಮಶೇಖರ್, ಮೋಹನ್, ಚಂದ್ರಶೇಖರ್, ಮುರುಳಿ ಇದ್ದರು.

ಹೊಲದಲ್ಲಿ ಬೆಳೆದಿದ್ದ ಶುಂಠಿ ಕದ್ದಿದ್ದವರ ಬಂಧನ

ಶುಂಠಿ ಮಾರಿದ್ದ ಹಣ, ಕೃತ್ಯಕ್ಕೆ ಬಳಸಿದ ವಾಹನ ವಶ



ಹುಣಸೂರು, ಜು.25– ಹೊಲದಲ್ಲಿ ಬೆಳೆದಿದ್ದ ಶುಂಠಿ ಬೆಳೆಯನ್ನೇ ಕದ್ದು, ಮಾರಾಟ ಮಾಡಿದ್ದ ಪ್ರಕರಣ ಭೇದಿಸಿರುವ ಹುಣಸೂರು ಗ್ರಾಮಾಂತರ ಠಾಣೆ ಪೊಲೀಸರು ವಾಹನ ಸಹಿತ ಆರೋಪಿಗಳನ್ನು ಬಂಧಿಸಿದ್ದಾರೆ. ತಾಲೂಕಿನ ಹಿರಿಕ್ಯಾತನಹಳ್ಳಿ ಗ್ರಾಮದ ಟ್ರ್ಯಾಕ್ಟರ್ ಚಾಲಕ ಚಂದ್ರು ಅಲಿಯಾಸ್ ಕರಿಯ, ರಾಜು ಉರುಫ್ ಬೆಲ್ಲು, ಸುರೇಶ್ ಉರುಫ್ ಕರಿಸೂರಿ, ಭೈರನಾಯಕ ಅಲಿಯಾಸ್ ಕರಿಯ ಬಂಧಿತರು. ಆರೋಪಿಗಳಿಂದ ಕೃತ್ಯಕ್ಕೆ ಬಳಸಿದ್ದ ಮಹೇಂದ್ರ ಪಿಕಪ್ ಗೂಡ್ಸ್ ವ್ಯಾನ್, ಶುಂಠಿ ಮಾರಾಟ ಮಾಡಿದ್ದ 32 ಸಾವಿರ ರೂ.ಗಳನ್ನು ವಶಕ್ಕೆ ಪಡೆಯಲಾಗಿದೆ. ತಾಲೂಕಿನ ಹನಗೋಡು ಹೋಬಳಿಯ ಚೆನ್ನಸೋಗೆ ಗ್ರಾಮದ ರೈತ ಪ್ರಸನ್ನಕುಮಾರ್ ಹಾಗೂ ಸ್ನೇಹಿತರು ಸಣ್ಣೇನಹಳ್ಳಿಯ ಚಂದ್ರೇಗೌಡರ ಜಮೀನಿನಲ್ಲಿ ಬೆಳೆದಿದ್ದ ಅರ್ಧ ಎಕರೆಯ ಶುಂಠಿ ಬೆಳೆಯನ್ನು ಜುಲೈ 15ರಂದು ರಾತ್ರೋರಾತ್ರಿ ಭೂಮಿ ಬಗೆದು ಕಳವು ಮಾಡಿದ್ದರು. ಈ ಸಂಬಂಧ ಪ್ರಸನ್ನಕುಮಾರ್ ಗ್ರಾಮಾಂತರ ಠಾಣೆ ಪೊಲೀಸರಿಗೆ ದೂರು ನೀಡಿದ್ದರು.

ಬೆಳೆಗಳನ್ನು ಕಳ್ಳತನ ಮಾಡಿದ ಪ್ರಕರಣವನ್ನು ಗಂಭೀರವಾಗಿ ಪರಿಗಣಿಸಿದ ಡಿವೈಎಸ್‌ಪಿ ಎಂ.ಕೆ.ಮಹೇಶ್ ಅವರು ಇನ್ಸ್‌ಪೆಕ್ಟರ್ ರವಿ ನೇತೃತ್ವದಲ್ಲಿ ತಂಡ ರಚಿಸಿದ್ದರು.

ಆರೋಪಿಗಳು ತಾಲೂಕಿನ ಚಿಲ್ಕುಂದದ ಬಳಿ ಇರುವ ಬಗ್ಗೆ ಖಚಿತ ಮಾಹಿತಿ ಪಡೆದ ಪೊಲೀಸರು ದಾಳಿ ನಡೆಸಿ ಆರೋಪಿಗಳನ್ನು ವಶಕ್ಕೆ ಪಡೆದು ವಿಚಾರಣೆ ನಡೆಸಿದಾಗ ಶುಂಠಿಯನ್ನು ಎಚ್.ಡಿ.ಕೋಟೆ ತಾಲೂಕಿನ ಹ್ಯಾಂಡ್ ಪೋಸ್ಟ್‌ನಲ್ಲಿ ಮಾರಾಟ ಮಾಡಿರುವ ಬಗ್ಗೆ ಬಾಯ್ಬಿಟ್ಟಿದ್ದರು.

ಶುಂಠಿ ಮಾರಾಟ ಮಾಡಿ ಬಂದಿದ್ದ 32 ಸಾವಿರ ರೂ. ನಗದನ್ನು ವಶಕ್ಕೆ ಪಡೆದು ಕೃತ್ಯಕ್ಕೆ ಬಳಸಿದ್ದ ಮಹೇಂದ್ರಾ ಪಿಕಪ್ ಗೂಡ್ಸ್ ವಾಹನವನ್ನು ಜಪ್ತಿ ಮಾಡಿ ಆರೋಪಿಗಳನ್ನು ನ್ಯಾಯಾಂಗ ಬಂಧನಕ್ಕೆ ಒಪ್ಪಿಸಿದ್ದಾರೆ. ಕಾರ್ಯಾಚರಣೆಯಲ್ಲಿ ಎಸ್.ಐ.ಸಿದ್ದರಾಜು, ಎಎಸ್‌ಐ ಅಂತೋಣಿ ಕ್ರೂಸ್, ಸಿಬ್ಬಂದಿಗಳಾದ ಮಂಜುನಾಥ್, ವಿಜಯರಘು, ಮೆಹರಾಜ್, ಇಮ್ರಾನ್‌ಷರೀಫ್, ಮಂಜು ಇದ್ದರೆಂದು ಪೊಲೀಸರು ತಿಳಿಸಿದ್ದಾರೆ.

ಪಾರಂಪರಿಕ ದೇವರಾಜ ಮಾರುಕಟ್ಟೆ ಕಟ್ಟಡ ಒಡೆಯಲು ಮುಂದಾದರೆ ಉಳಿಸುವ ಹೋರಾಟ

● ಶಾಸಕ ಹರೀಶ್‌ಗೌಡ ಘೋಷಣೆ ● ವ್ಯವಸ್ಥಿತವಾಗಿ ಸಂರಕ್ಷಣೆ ಮಾಡಲು ಎಲ್ಲಾ ಪ್ರಯತ್ನ



ದೇವರಾಜ ಮಾರುಕಟ್ಟೆ ಸ್ನೇಹ ಬಳಗದ ವತಿಯಿಂದ ಶಾಸಕ ಕೆ.ಹರೀಶ್‌ಗೌಡರ ಹುಟ್ಟುಹಬ್ಬ ಆಚರಿಸಿ, ಆತ್ಮೀಯವಾಗಿ ಅಭಿನಂದಿಸಲಾಯಿತು. ದೇವರಾಜ ಮಾರುಕಟ್ಟೆ ಬಾಡಿಗೆದಾರ ಸಂಘದ ಅಧ್ಯಕ್ಷ ಎಸ್.ಮಹದೇವ್, ಪಾರಂಪರಿಕ ತಜ್ಞ ಪ್ರೊ.ಎನ್.ಎಸ್.ರಂಗರಾಜು, ಇತಿಹಾಸ ತಜ್ಞ ಪ್ರೊ.ನಂಜರಾಜ ಅರಸ್, ಸಾಹಿತಿ ಬನ್ನೂರು ಕೆ.ರಾಜು ಮತ್ತಿತರರಿದ್ದರು.

ಮೈಸೂರು, ಜು.25(ಎಂಕೆ)– ಮೈಸೂರಿನ ಪಾರಂಪರಿಕ ಕಟ್ಟಡಗಳಲ್ಲಿ ಒಂದಾದ ದೇವರಾಜ ಮಾರುಕಟ್ಟೆಯನ್ನು ಯಾವುದೇ ಕಾರಣಕ್ಕೂ ಒಡೆಯಲು ಬಿಡದೆ ವ್ಯವಸ್ಥಿತವಾಗಿ ಸಂರಕ್ಷಣೆ ಮಾಡಲಾಗುವುದು. ಒಡೆಯುವ ಪರಿಸ್ಥಿತಿ ಎದುರಾದರೆ, ಉಳಿಸುವ ಹೋರಾಟ ನಡೆಸಲಾಗುವುದು ಎಂದು ಚಾಮರಾಜ ವಿಧಾನಸಭಾ ಕ್ಷೇತ್ರದ ಶಾಸಕ ಕೆ.ಹರೀಶ್‌ಗೌಡ ದೇವರಾಜ ಮಾರುಕಟ್ಟೆಯ ವರ್ತಕರಿಗೆ ಭರವಸೆ ನೀಡಿದರು.

ದೇವರಾಜ ಮಾರುಕಟ್ಟೆ ಆವರಣದಲ್ಲಿ ಮಂಗಳವಾರ ದೇವರಾಜ ಮಾರುಕಟ್ಟೆ ಸ್ನೇಹ ಬಳಗದ ವತಿಯಿಂದ ಆಯೋಜಿಸಿದ್ದ ಅಭಿನಂದನಾ ಸಮಾರಂಭದಲ್ಲಿ ಮಾತನಾಡಿದ ಅವರು, ಚಿಕ್ಕ ವಯಸ್ಸಿನಿಂದಲೂ ದೇವರಾಜ ಮಾರುಕಟ್ಟೆಯನ್ನು ನೋಡಿಕೊಂಡು ಬೆಳೆದಿದ್ದೇನೆ. ಈಗ ಮಾಲ್ ಹೇಗೋ ಅಂದು ದೇವರಾಜ ಮಾರುಕಟ್ಟೆಗೆ ಬರುವುದೇ ಖುಷಿಯಾಗಿತ್ತು. ಇಂತಹ ನೂರಕ್ಕು ಹೆಚ್ಚು ವರ್ಷಗಳ ಇತಿಹಾಸ ಇರುವ ಮಾರುಕಟ್ಟೆಯನ್ನು ಒಡೆಯಲು ಬಿಡಲ್ಲ ಎಂದರು.

ದೇವರಾಜ ಮಾರುಕಟ್ಟೆಯಂತೆಯೇ ರಾಜಸ್ಥಾನದಲ್ಲಿಯೂ ಪ್ರಸಿದ್ಧ ಮಾರುಕಟ್ಟೆ ಇದೆ. ಅದನ್ನೂ ವ್ಯವಸ್ಥಿತವಾಗಿ ಸಂರಕ್ಷಣೆ ಮಾಡಲಾಗಿದೆ. ದೇವರಾಜ ಮಾರುಕಟ್ಟೆಗೆ ಆಗಾಗ ಸುಣ್ಣ–ಬಣ್ಣ ಬಳಿದು, ಸ್ವಚ್ಛತೆಯಿಂದ ರಕ್ಷಣೆ ಮಾಡಿಕೊಂಡು ಬಂದಿದ್ದರೆ, ಒಡೆಯುವ ಮಾತುಗಳು ಕೇಳಿ ಬರುತ್ತಿರಲಿಲ್ಲ. ವರ್ತಕರು ಮಾರುಕಟ್ಟೆಯನ್ನು ತಮ್ಮ ಮನೆಯಂತೆ ನೋಡಿಕೊಂಡರಷ್ಟೇ ಇನ್ನೂ ನೂರು ವರ್ಷ ಕಾಪಾಡಬಹುದು. ಈ ಹಿಂದೆಯೇ ಮುಖ್ಯಮಂತ್ರಿ ಸಿದ್ದರಾಮಯ್ಯ ಅವರು ದೇವರಾಜ ಮಾರುಕಟ್ಟೆ ಸಂರಕ್ಷಣೆಗೆ 10 ಕೋಟಿ ರೂ. ನೀಡಿದ್ದರು. ಆದರೆ ಅಂದೇ ಸಿದ್ದರಾಮಯ್ಯ ಅವರ ದಾರಿ ತಪ್ಪಿಸುವ ಕೆಲಸವನ್ನು ಕೆಲ ಅಧಿಕಾರಿಗಳು ಮಾಡಿದ್ದರು. ಪಾರಂಪರಿಕ ಕಟ್ಟಡಗಳ ಸಂರಕ್ಷಣೆ ಕುರಿತು ಆರ್ಟಿಕಲ್‌ಗಳನ್ನು ಓದಿದ್ದೇನೆ. ಅದರಂತೆ ತಂತ್ರಜ್ಞಾನವೂ ಮುಂದುವರೆದಿದ್ದು, ನಾವು ನೋಡಿದ ದೇವರಾಜ ಮಾರುಕಟ್ಟೆಯನ್ನು ನಮ್ಮ ಮೊಮ್ಮಕ್ಕಳು ನೋಡುವಂತೆ ರಕ್ಷಣೆ ಮಾಡಲಾಗುವುದು. ಮೈಸೂರು ಒಡೆಯರು ನಮಗಾಗಿ ನೀಡಿರುವ ಕೊಡುಗೆಯನ್ನು ಸಂರಕ್ಷಣೆ ಮಾಡುವುದು ಅಗತ್ಯವಾಗಿದೆ. ಮಾರುಕಟ್ಟೆ ಉಳಿಸಿಕೊಳ್ಳುವ ಹೋರಾಟದಲ್ಲೂ ನಾನು ಭಾಗಿಯಾಗುತ್ತೇನೆ ಎಂದು ಹೇಳಿದರು.

ತಂತ್ರಜ್ಞಾನ ಬಳಸಿ–ಉಳಿಸಿ: ಇದೇ ವೇಳೆ ಶಾಸಕರನ್ನು ಅಭಿನಂದಿಸಿದ ಸಾಹಿತಿ ಬನ್ನೂರು ಕೆ.ರಾಜು ಮಾತನಾಡಿ, ಏಷ್ಯಾದಲ್ಲಿಯೇ ದೇವರಾಜ ಮಾರುಕಟ್ಟೆಯಂತಹ ಮತ್ತೊಂದು ಮಾರುಕಟ್ಟೆ ಇಲ್ಲ. ದೇವರಾಜ ಮಾರುಕಟ್ಟೆಯ ಇತಿಹಾಸವನ್ನು ಮರೆಮಾಚುವ ಪ್ರಯತ್ನ ನಡೆಯುತ್ತಿದೆ. ಮೈಸೂರು ಮಹಾರಾಜರು ಅಂದೇ ಮಾಲ್‌ಗಳ ಪರಿಕಲ್ಪನೆಯಲ್ಲಿ ದೇವರಾಜ ಮಾರುಕಟ್ಟೆ ನಿರ್ಮಾಣ ಮಾಡಿದ್ದಾರೆ. ಇವತ್ತು ತಂತ್ರಜ್ಞಾನ ಸಾಕಷ್ಟು ಬೆಳೆದಿದ್ದರೂ ಇಂತಹ ಮಾರುಕಟ್ಟೆಯನ್ನು ಕಟ್ಟುವುದು ಕಷ್ಟ, ಆದರೆ ಉಳಿಸಬಹುದಾಗಿದೆ. ಪಾರಂಪರಿಕ ಶೈಲಿಯಲ್ಲಿಯೇ ದೇವರಾಜ ಮಾರುಕಟ್ಟೆ ಉಳಿಸಬೇಕು ಎಂದರಲ್ಲದೆ ನಟ ಅಂಬರೀಶ್ ಅವರಂತೆ ಒಂದಷ್ಟು ಸಾಮ್ಯತೆ ಇರುವ ಶಾಸಕ ಕೆ.ಹರೀಶ್‌ಗೌಡರು, ದೇವರಾಜ ಮಾರುಕಟ್ಟೆಯನ್ನು ಉಳಿಸುತ್ತಾರೆ ಎಂಬ ನಂಬಿಕೆ ಇದೆ ಎಂದರು.

ಉಪವಾಸ, ಹೋರಾಟ: ಇತಿಹಾಸ ತಜ್ಞ ಪ್ರೊ.ನಂಜರಾಜ ಅರಸ್ ಮಾತನಾಡಿ, ಯಾವುದೇ ಸರ್ಕಾರಗಳು ಬಂದರೂ ಇಂತಹ ಪಾರಂಪರಿಕ ಕಟ್ಟಡವನ್ನು ಕಟ್ಟಲು ಸಾಧ್ಯವಿಲ್ಲ. ಈ ಹಿಂದೆಯೇ ದೇವರಾಜ ಮಾರುಕಟ್ಟೆಯನ್ನು ಒಡೆಯುವ ಮಾತುಗಳು ಕೇಳಿ ಬಂದಿದ್ದವು. ರಾಜಕಾರಣಿಗಳು ಹೆಸರಿಗೆ ಪಾರಂಪರಿಕ ಕಟ್ಟಡ ಎನ್ನುತ್ತಾರೆಯೇ ಹೊರತು ಅವುಗಳನ್ನು ಉಳಿಸುವ ನಿಟ್ಟಿನಲ್ಲಿ ಕೆಲಸ ಮಾಡುತ್ತಿಲ್ಲ. ದೇವರಾಜ ಮಾರುಕಟ್ಟೆಯನ್ನು ಒಡೆಯುವ ಪರಿಸ್ಥಿತಿ ಬಂದರೆ ಒಬ್ಬನೇ ಉಪವಾಸ ಸತ್ಯಾಗ್ರಹ ಮಾಡುತ್ತೇನೆ. ಮಾರುಕಟ್ಟೆ ಸಂರಕ್ಷಣೆ ಮಾಡುವವರೆಗೂ ಹೋರಾಟ ನಡೆಸುತ್ತೇನೆ. ಇದನ್ನು ಜಿಲ್ಲಾ ಮಂತ್ರಿಗಳಿಗೆ, ಸರ್ಕಾರಕ್ಕೆ ತಿಳಿಸಿ ಎಂದು ಎಂದು ಎಚ್ಚರಿಸಿದರಲ್ಲದೆ ಕ್ಷೇತ್ರದ ಶಾಸಕ ಕೆ.ಹರೀಶ್‌ಗೌರನ್ನು ಮಂತ್ರಿಯಾಗಿ ಕಾಣಬೇಕು ಎಂಬ ಆಶಯ ವ್ಯಕ್ತಪಡಿಸಿದರು.

ಮಾರುಕಟ್ಟೆ ಬಗ್ಗೆ ಅಪಪ್ರಚಾರ: ದೇವರಾಜ ಮಾರುಕಟ್ಟೆ ಬಾಡಿಗೆದಾರ ಸಂಘದ ಅಧ್ಯಕ್ಷ ಎಸ್.ಮಹದೇವ್ ಮಾತನಾಡಿ, ಈ ಹಿಂದೆ ಇದ್ದಂತಹ ಚುನಾಯಿತ ಪ್ರತಿನಿಧಿಗಳು ಹಾಗೂ ಅಧಿಕಾರಿಗಳು ದೇವರಾಜ ಮಾರುಕಟ್ಟೆ ಶಿಥಿಲಗೊಂಡಿದೆ ಎಂದು ಪಾರಂಪರಿಕ ತಜ್ಞರಿಂದ ಪರಿಶೀಲಿಸಿ ವರದಿ ಪಡೆಯದೆ 2005 ರಿಂದಲೂ ದೇವರಾಜ ಮಾರುಕಟ್ಟೆ ಶಿಥಿಲವಾಗಿದೆ ಎಂದು ಅಪಪ್ರಚಾರ ಮಾಡಿಕೊಂಡು ಬರುತ್ತಿದ್ದಾರೆ. ಆದರೆ ಕಳೆದ 20 ವರ್ಷದಿಂದ ಯಾವುದೇ ತೊಂದರೆಯಾಗಿಲ್ಲ. ಇದರಿಂದಲೇ ದೇವರಾಜ ಮಾರುಕಟ್ಟೆ ಸದೃಢವಾಗಿದೆ ಎಂಬುದು ತಿಳಿಯುತ್ತದೆ. ಆದ್ದರಿಂದ ಕ್ಷೇತ್ರದ ಹಾಲಿ ಶಾಸಕರು ದೇವರಾಜ ಮಾರುಕಟ್ಟೆ ಕುರಿತು ಸರ್ಕಾರದ ಗಮನ ಸೆಳೆದು, ಪಾರಂಪರಿಕ ತಜ್ಞರ ವರದಿ ಆಧಾರದ ಮೇಲೆ ಕಟ್ಟಡವನ್ನು ಸಂರಕ್ಷಣೆ ಮಾಡಬೇಕು ಎಂದು ಮನವಿ ಮಾಡಿದರು.

ಸುಮಾರು ಮೂರೂವರೆ ಎಕರೆ ವಿಸ್ತೀರ್ಣದಲ್ಲಿ 130 ವರ್ಷದ ಹಿಂದೆ ನಿರ್ಮಾಣಗೊಂಡಿರುವ ದೇವರಾಜ ಮಾರುಕಟ್ಟೆ ಕಟ್ಟಡವನ್ನು ದುರಸ್ತಿ ಮಾಡಿ ಸಂರಕ್ಷಣೆ ಮಾಡಬೇಕು. ಒಂದು ವೇಳೆ ಸುಭದ್ರವಾಗಿರುವ ದೇವರಾಜ ಮಾರುಕಟ್ಟೆ ದುಸ್ಥಿತಿಯಲ್ಲಿದೆ ಎಂದು ಹೇಳಿಕೊಂಡು ಹೊಸದಾಗಿ ಪುನರ್ ನಿರ್ಮಾಣಕ್ಕೆ ಮುಂದಾದರೆ ನಗರದ ಎಲ್ಲಾ ಪಾರಂಪರಿಕ ಕಟ್ಟಡಗಳನ್ನು ಧ್ವಂಸಗೊಳಿಸಲು ದಾರಿ ಮಾಡಿಕೊಟ್ಟಂತಾಗುತ್ತದೆ. ಇದರಿಂದ ಮೈಸೂರು ಹಾಳು ಕೊಂಪೆಯಂತಾಗುತ್ತದೆ. ಆದ್ದರಿಂದ ಈ ಪಾರಂಪರಿಕ ಕಟ್ಟಡವನ್ನು ಸಂರಕ್ಷಣೆ ಮಾಡಬೇಕು ಎಂದರು.

ನಗರಪಾಲಿಕೆ ಸದಸ್ಯ ಎಂ.ಡಿ.ನಾಗರಾಜ್, ಮಾಜಿ ಸದಸ್ಯ ಡಿ.ನಾಗಭೂಷಣ, ದೇವರಾಜ ಮಾರುಕಟ್ಟೆ ವರ್ತಕರ ಸಂಘದ ಅಧ್ಯಕ್ಷ ಕೆ.ದಿನೇಶ್, ದೇವರಾಜ ಮಾರುಕಟ್ಟೆ ವರ್ತಕರಾದ ಇಬ್ರಾಹಿಂ ಹಿಬ್ಬು, ಜಾಕೀರ್ ಹುಸೇನ್, ಸಯ್ಯದ್ ಜಾಫರ್, ನೀಲಕಂಠ, ಎಸ್.ಹೆಚ್.ಮೂರ್ತಿ, ಎನ್.ಮಂಜುನಾಥ್, ರವಿ ಕುಮಾರ್, ಸುಬ್ಬಣ್ಣ, ನಂಜುಂಡ, ಪಡುವಾರಹಳ್ಳಿ ಮಹದೇಶ್, ರಿಯಾಜ್ ಮತ್ತಿತರರು ಉಪಸ್ಥಿತರಿದ್ದರು.

ಇನ್ನೂ ನೂರು ವರ್ಷ ಸಂರಕ್ಷಣೆ ಮಾಡಬಹುದು: ಪಾರಂಪರಿಕ ತಜ್ಞ ಪ್ರೊ.ಎನ್.ಎಸ್.ರಂಗರಾಜು

ದೇವರಾಜ ಮಾರುಕಟ್ಟೆ ಸದೃಢವಾಗಿದ್ದು, ಇನ್ನೂ ನೂರು ವರ್ಷ ಸಂರಕ್ಷಣೆ ಮಾಡಬಹುದು. ಯಾವ ಕಾಲಕ್ಕೂ ಬೀಳಿಸುತ್ತೇವೆ ಎನ್ನಬೇಡಿ ಎಂದು ಪಾರಂಪರಿಕ ತಜ್ಞ ಪ್ರೊ.ಎನ್.ಎಸ್.ರಂಗರಾಜು ಮನವಿ ಮಾಡಿದರು.

ಅರಮನೆಗೆ ಕುಡಿಯುವ ನೀರಿನ ಪೂರೈಕೆಗೆ ನಿರ್ಮಾಣ ಮಾಡುತ್ತಿದ್ದ ಪೂರ್ಣಯ್ಯ ನಾಲೆ ಮೇಲೆ ದೇವರಾಜ ಮಾರುಕಟ್ಟೆ ಕಟ್ಟಲಾಗಿದೆ. ನಾಲೆ ನಿರ್ಮಾಣ ಸಂದರ್ಭದಲ್ಲಿ ದೊಡ್ಡ ದೊಡ್ಡ ಬಂಡೆಗಳು ಅಡ್ಡ ಬಂದಿದ್ದರಿಂದ ಅಷ್ಟಕ್ಕೆ ನಿಲ್ಲಿಸಲಾಯಿತು. ಅಗೆದಿದ್ದ ದೊಡ್ಡ ಹೊಂಡವನ್ನು ಹಾಗೆಯೇ ಬಿಡಲಾಗಿತ್ತು. ಮಳೆ ನೀರು ತುಂಬಿಕೊಂಡಿದ್ದರಿಂದ ಹಣ್ಣು–ತರಕಾರಿ ತಂದು ವ್ಯಾಪಾರ ಮಾಡುತ್ತಿದ್ದವರು ಉಳಿದದ್ದನ್ನು ಹಳ್ಳಕ್ಕೆ ಸುರಿದು ಹೋಗುತ್ತಿದ್ದರು. ಇದರಿಂದ ಸಾಂಕ್ರಾಮಿಕ ರೋಗಗಳು ಬರಲು ಶುರುವಾಗಿತ್ತು. ಇದನ್ನು ಗಮನಿಸಿದ ಅಂದಿನ ಮೈಸೂರು ಒಡೆಯರು ರೈಲು ಇಂಜಿನ್‌ಗೆ ಬಳಸುತ್ತಿದ್ದ ಕಲ್ಲಿದ್ದಲು, ಅದರ ಬೂದಿ ಮತ್ತು ಮರಳನ್ನು ಹಾಕಿ ಹೊಂಡವನ್ನು ಮುಚ್ಚಿಸಿದ್ದರು.

ಆ ನಂತರ ದೇವರಾಜ ಮೊಹಲ್ಲಾ ಎಂದು ಹೆಸರಿಟ್ಟು ಈ ಮಾರುಕಟ್ಟೆಯನ್ನು ಕಟ್ಟಿಸಿದರು. ಇದು ಚೌಕಾಕಾರದ ಕಟ್ಟಡವಾಗಿದ್ದು, ಎರಡು ಅಂತಸ್ತಿನಿಂದ ಕೂಡಿದೆ. ಎತ್ತರ ಕಡಿಮೆ, ಹಗಲ ಜಾಸ್ತಿ ಇದೆ. ಕಟ್ಟಲು ಇಟ್ಟಿಗೆಗೂಡಿನಿಂದ ಇಟ್ಟಿಗೆ, ಕಡಕೋಳದ ಕಡೆಯಿಂದ ಸುಣ್ಣ ತರಿಸಿ, ಸುಣ್ಣ ಗಾರೆ, ಕಲ್ಲು ಮತ್ತು ಕಲ್ಲಿನ ಕಂಬಗಳು ಹಾಗೂ ಸುರ್ಕಿಗಾರೆ ಬಳಸಿ ಕಟ್ಟಲಾಗಿದೆ. ಈ ಮಾರುಕಟ್ಟೆ ನೆಲಕ್ಕೆ ಕಾಂಕ್ರೀಟ್ ಬದಲು ಚಪ್ಪಡಿ ಕಲ್ಲು ಹಾಕಲಾಗಿದೆ. ಕೇವಲ ಬಾಟ ಶೋರೂಂ ಕಡೆಯ ಗೋಡೆ ಮಾತ್ರ ದುರ್ಬಲವಾಗಿದ್ದು, ಸಂರಕ್ಷಣೆ ಮಾಡಬಹುದು.

ಮೋಟಾರು ವಾಹನಗಳ ತೆರಿಗೆ ಭಾರೀ ಹೆಚ್ಚಳ

● ಸೋಮವಾರದಿಂದಲೇ ಜಾರಿಯಾಗಿದೆ
● 472 ಕೋಟಿ ಅಧಿಕ ಆದಾಯ ಸಂಗ್ರಹ ಗುರಿ

ಬೆಂಗಳೂರು, ಜು.25– ರಾಜ್ಯ ಬಜೆಟ್‌ನಲ್ಲಿ ಘೋಷಣೆಯಾದಂತೆ ಮೋಟಾರು ವಾಹನಗಳ ತೆರಿಗೆ ಪರಿಷ್ಕರಣೆ ಸೋಮವಾರದಿಂದಲೇ ಜಾರಿಯಾಗಿದ್ದು, ಪ್ರಸಕ್ತ ಆರ್ಥಿಕ ವರ್ಷದಲ್ಲಿ 472 ಕೋಟಿ ರೂ.ಹೆಚ್ಚುವರಿ ವರಮಾನ ಸಂಗ್ರಹಿಸುವ ಗುರಿ ಇದೆ.

ಆಯ್ದ ವಾಹನಗಳ ತೆರಿಗೆ ಹೆಚ್ಚಳ ಮಾಡುವುದಾಗಿ ಮುಖ್ಯಮಂತ್ರಿ ಸಿದ್ದರಾಮಯ್ಯ ಜು. 7ರಂದು ಮಂಡಿಸಿದ್ದ ಬಜೆಟ್‌ನಲ್ಲಿ ಪ್ರಕಟಿಸಿದ್ದರು. ಅದಕ್ಕೆ ಪೂರಕವಾಗಿ 'ಕರ್ನಾಟಕ ಮೋಟಾರು ವಾಹನಗಳ ತೆರಿಗೆ ನಿರ್ಧರಣೆ (ತಿದ್ದುಪಡಿ) ಮಸೂದೆ–2023'ಕ್ಕೆ ವಿಧಾನಮಂಡಲದ ಒಪ್ಪಿಗೆ ಪಡೆಯಲಾಗಿತ್ತು.

ಶಾಲೆ, ಕಾಲೇಜುಗಳ ವಾಹನಗಳು, ಅತೀ ಭಾರದ ಸರಕು ಸಾಗಣೆ ವಾಹನಗಳು, ಮೋಟಾರು ಕ್ಯಾಬ್‌ಗಳ ತೆರಿಗೆಯನ್ನು ಹೆಚ್ಚಳ ಮಾಡಲಾಗಿದೆ. ಶಾಲೆಗಳ ಒಡೆತನದಲ್ಲಿದ್ದು, ಶಾಲಾ ವಿದ್ಯಾರ್ಥಿಗಳು ಹಾಗೂ ಸಿಬ್ಬಂದಿಯ ಸಂಚಾರಕ್ಕೆ ಬಳಸುವ ವಾಹನಗಳ ಪ್ರತಿ ಚದರ ಮೀಟರ್‌ಗೆ ತೆರಿಗೆಯನ್ನು 20 ರಿಂದ 100 ರೂಗೆ ಏರಿಕೆ ಮಾಡಲಾಗಿದೆ. ಇತರ ಶಿಕ್ಷಣ ಸಂಸ್ಥೆಗಳ ಒಡೆತನದಲ್ಲಿದ್ದು, ವಿದ್ಯಾರ್ಥಿಗಳು ಮತ್ತು ಸಿಬ್ಬಂದಿಯ ಸಂಚಾರಕ್ಕೆ ಬಳಸುವ ವಾಹನಗಳ ಪ್ರತಿ ಚದರ ಮೀಟರ್ ವಿಸ್ತೀರ್ಣದ ತೆರಿಗೆಯನ್ನು 80ರಿಂದ 200 ರೂಗೆ ಹೆಚ್ಚಿಸಲಾಗಿದೆ.

ಹೊರುವ ಭಾರವೂ ಸೇರಿದಂತೆ ಒಟ್ಟು ತೂಕ 1.5 ಟನ್‌ನಿಂದ 5.5 ಟನ್‌ಗಳವರೆಗೆ ಮಾತ್ರ ಇರುವ ವಾಹನಗಳಿಗೆ ಪೂರ್ಣಾವಧಿ ತೆರಿಗೆ ಪಡೆಯಲಾಗುತ್ತಿತ್ತು. ಅದಕ್ಕಿಂತ ಹೆಚ್ಚಿನ ಭಾರದ ವಾಹನಗಳಿಗೆ ಪ್ರತಿ ಮೂರು ತಿಂಗಳಿಗೊಮ್ಮೆ ತೆರಿಗೆ ಪಾವತಿಸಬೇಕಿತ್ತು. ಈಗ 1.5 ಟನ್‌ನಿಂದ 12 ಟನ್‌ಗಳವರೆಗಿನ ತೂಕದ ವಾಹನಗಳಿಗೂ ಪೂರ್ಣಾವಧಿ ತೆರಿಗೆ ಸಂಗ್ರಹಿಸಲಾಗುತ್ತದೆ.

15 ಲಕ್ಷಕ್ಕಿಂತ ಹೆಚ್ಚಿನ ಬೆಲೆಯ ಕ್ಯಾಬ್‌ಗಳಿಗೆ ಮಾತ್ರ ಆ ವಾಹನದ ಮೌಲ್ಯದ ಶೇಕಡ 15ರಷ್ಟು ತೆರಿಗೆ ವಿಧಿಸಲಾಗುತ್ತಿತ್ತು. ಇನ್ನು ಮುಂದೆ 10 ಲಕ್ಷದಿಂದ 15 ಲಕ್ಷ ರೂಗಳವರೆಗಿನ ಬೆಲೆಯ ಕ್ಯಾಬ್‌ಗಳಿಗೆ ಅವುಗಳ ಮೌಲ್ಯದ ಶೇ.9 ರಷ್ಟು ತೆರಿಗೆ ವಿಧಿಸಲಾಗುತ್ತದೆ. 15 ಲಕ್ಷ ರೂ.ಗಳಿಗಿಂತ ಹೆಚ್ಚಿನ ಬೆಲೆಯ ಕ್ಯಾಬ್‌ಗಳಿಗೆ ಈ ಹಿಂದಿನಂತೆಯೇ ಅವುಗಳ ಮೌಲ್ಯದ ಶೇ.15ರಷ್ಟು ತೆರಿಗೆ ವಿಧಿಸಲಾಗುತ್ತದೆ.

ರಾಷ್ಟ್ರೀಯ ವೈದ್ಯರ ದಿನಾಚರಣೆ



ಮೈಸೂರು, ಜು.25(ಎಂಕೆ)– ಮೈಸೂರಿನ ಸದರನ್ ಸ್ಟಾರ್ ಹೋಟೆಲ್‌ನಲ್ಲಿ ಮೈಸೂರು ಚರ್ಮ ರೋಗ ತಜ್ಞರ ಸಂಘದ (MYSORE DERMATOLOGY SOCIETY) ವತಿಯಿಂದ ರಾಷ್ಟ್ರೀಯ ವೈದ್ಯರ ದಿನ ಆಚರಿಸಲಾಯಿತು. ಈ ವೇಳೆ ವೈದ್ಯಕೀಯ ಕ್ಷೇತ್ರದಲ್ಲಿ ಗಣನೀಯ ಸೇವೆ ಸಲ್ಲಿಸಿದ ಚರ್ಮರೋಗ ತಜ್ಞರಾದ ಡಾ.ಬಿ.ಎಲ್.ನಂಜುಂಡಸ್ವಾಮಿ, ಡಾ.ಜಿರಾಜು, ಹಾಗೂ ಡಾ.ಟಿಆರ್.ದಯಾನಂದ್ ಅವರನ್ನು ಆತ್ಮೀಯವಾಗಿ ಅಭಿನಂದಿಸಲಾಯಿತು.

ಬಳಿಕ ಮೈಸೂರು ಚರ್ಮ ರೋಗ ತಜ್ಞರ ಸಂಘದ ಅಧ್ಯಕ್ಷರೂ ಆದ ಕೆ.ಆರ್.ಆಸ್ಪತ್ರೆ ಚರ್ಮರೋಗ ತಜ್ಞ ಡಾ.ಹೆಚ್.ಬಂಗಾರು ಮಾತನಾಡಿ, ವೈದ್ಯಕೀಯ ರಂಗದಲ್ಲಿ ನಿಸ್ವಾರ್ಥ ಸೇವೆ ಸಲ್ಲಿಸಿದ ಡಾ.ಬಿಧಾನ್ ಚಂದ್ರರಾಯ್ ಅವರ ಸ್ಮರಣೀಯ ಅಂಗವಾಗಿ ಪ್ರತಿ ವರ್ಷವು ಜುಲೈ ತಿಂಗಳಿನಲ್ಲಿ ವೈದ್ಯರ ದಿನಾಚರಣೆಯನ್ನು ಆಚರಿಸಲಾಗುತ್ತದೆ. ಅದರಂತೆ ಸಂಘದ ವತಿಯಿಂದ ವೈದ್ಯಕೀಯ ಕ್ಷೇತ್ರದಲ್ಲಿ ಸೇವೆ ಸಲ್ಲಿಸಿದರನ್ನು ಸನ್ಮಾನಿಸಲಾಗುತ್ತಿದೆ ಎಂದು ತಿಳಿಸಿದರು. ಮೈಸೂರು ಚರ್ಮರೋಗ ತಜ್ಞರ ಸಂಘದ ಕಾರ್ಯದರ್ಶಿ ಡಾ.ಎಸ್‌ಸತೀಶ್, ಖಜಾಂಚಿ ಡಾ.ಕೆಆರ್. ಡಾ.ರಾಘವೇಂದ್ರ ಮತ್ತಿತರರಿದ್ದರು.

ಮಾನ್ಯ ಜಿಲ್ಲಾಧಿಕಾರಿಗಳ ತಾಂತ್ರಿಕ ಸಹಾಯಕರು ಹಾಗೂ ಪದನಿಮಿತ್ತ ಭೂದಾಖಲೆಗಳ ಉಪನಿರ್ದೇಶಕರು, ಮಂಡ್ಯರವರ ನ್ಯಾಯಾಲಯ, ಮಂಡ್ಯ

ಮೇಲ್ಮನವಿ ಸಂಖ್ಯೆ: 14/2023-24

ಮೇಲ್ಮನವಿದಾರರು : ಮಹದೇವಯ್ಯ ಬಿನ್ ಬಸವಯ್ಯ, ವಯಸ್ಸು 62 ವರ್ಷ, ವಾಸ: ಕನ್ನಹಟ್ಟಿ ಗ್ರಾಮ, ದುದ್ದ ಹೋಬಳಿ, ಮಂಡ್ಯ ತಾಲ್ಲೂಕು.

ವಿರುದ್ಧ

ಎದುರುದಾರರು: 1. ಬಸವರಾಜು ಮತ್ತು ಇತರರು 4. ಗೌರಮ್ಮ ಬಿನ್ ದೇವರಾಜಮ್ಮ ವಯಸ್ಕರು 5. ಮಲ್ಲೇಶ ಬಿನ್ ಮಾದಯ್ಯ, ವಯಸ್ಕರು 6. ಶಿವಪ್ಪ ಬಿನ್ ಲೇಟ್ ಮಾದಯ್ಯ ವಯಸ್ಕರು 7. ಶಿವಸ್ವಾಮಿ ಬಿನ್ ಶಂಕರಯ್ಯ ಉರುಫ್ ನಂಜಪ್ಪ, ವಯಸ್ಕರು 8. ಎನ್. ಶಿವಪ್ರಕಾಶ್ ಬಿನ್ ನಂಜಯ್ಯ ಉರುಫ್ ನಂಜಪ್ಪ, ವಯಸ್ಕರು 9. ಎನ್.ಚಂದ್ರಶೇಖರ ಬಿನ್ ನಂಜಯ್ಯ ಉರುಫ್ ನಂಜಪ್ಪ, ವಯಸ್ಕರು

ಪತ್ರಿಕೆ ಪ್ರಕಟಣೆ

ಮೇಲ್ಮನವಿದಾರರು ಈ ಮೇಲ್ಕಂಡ ಘನ ನ್ಯಾಯಾಲಯದಲ್ಲಿ ಮಂಡ್ಯ ಜಿಲ್ಲೆ, ಮಂಡ್ಯ ತಾಲ್ಲೂಕು, ದುದ್ದ ಹೋಬಳಿ, ಕನ್ನಹಟ್ಟಿ ಗ್ರಾಮದ ಸ.ನಂ.76 ವಿಸ್ತೀರ್ಣ 7.10.00.00 ಎಕರೆ/ಗುಂಟೆ ಖರಾಬು ವಿಸ್ತೀರ್ಣ 0.05.00 ಗುಂಟೆ ಸೇರಿ ಒಟ್ಟಾರೆ ವಿಸ್ತೀರ್ಣ 7.15.00.00 ಎಕರೆ/ಗುಂಟೆ ಸ್ವತ್ತಿನಲ್ಲಿ ಸ.ನಂ. 76/1 ರಿಂದ 3ನೇ ಒಸ್ಸಾ ಪೋಡಿಗಳಾಗಿ ದುರಸ್ಥಿಪಡಿಸಿ 10ನೇ ಎದುರುದಾರರು ಭೂದಾಖಲೆಗಳ ಸಹಾಯಕ ನಿರ್ದೇಶಕರು, ಮಂಡ್ಯ ತಾಲ್ಲೂಕು ರವರು ಆದೇಶಿಸಿರುವ ಆದೇಶಗಳ ಕಾನೂನು ಬದ್ಧತೆಯನ್ನು ಪ್ರಶ್ನಿಸಿ ಮೇಲ್ಮನವಿಯನ್ನು ಸಲ್ಲಿಸಿದ್ದು, ಮೇಲ್ಕಂಡ 4 ರಿಂದ 9ನೇ ಎದುರುದಾರರುಗಳಾದ ನಿಮ್ಮಗಳನ್ನು ಪಕ್ಷಗಾರರನ್ನಾಗಿ ಮಾಡಿದ್ದು, 4 ರಿಂದ 9ನೇ ಎದುರುದಾರರುಗಳಿಗೆ ಅಂಚೆಯ ಮೂಲಕ ನೋಟೀಸ್ ನೀಡಿದ್ದು, ಸದರಿ ಅಂಚೆ ಲಕೋಟೆಯು ಜಾರಿ ಆಗದೇ ಅಂದರೆ, ಗ್ರಾಮದಲ್ಲಿ ವಿಳಾಸದಾರರು ವಾಸವಿರುವುದಿಲ್ಲ ಎಂಬ ಷರದೊಂದಿಗೆ ನ್ಯಾಯಾಲಯಕ್ಕೆ ಸದರಿ ಅಂಚೆ ಲಕೋಟೆಗಳು ವಾಪಸ್ಸು ಬಂದಿರುತ್ತವೆ. 4 ರಿಂದ 9ನೇ ಎದುರುದಾರರುಗಳಾದ ನೀವು ಖುದ್ದಾಗಿ ಅಥವಾ ನಿಮ್ಮ ವಕೀಲರ ಮೂಲಕ ಸದರಿ ಮೇಲ್ಮನವಿಗೆ ಸಂಬಂಧಿಸಿದಂತೆ ನಿಮ್ಮ ತಕರಾರು, ಆಕ್ಷೇಪಣೆ ಏನಾದರೂ ಇದ್ದಲ್ಲಿ ಮೇಲ್ಮನವಿಯ ವಿಚಾರಣೆ ದಿನಾಂಕ: 01.08.2023 ರಂದು ಇರುತ್ತದೆ. ಆದುದರಿಂದ ಮೇಲ್ಕಂಡ ವಿಚಾರಣಾ ದಿನಾಂಕದಂದು ಮಧ್ಯಾಹ್ನ 3 ಗಂಟೆಗೆ ನೀವುಗಳಾಗಲಿ ಅಥವಾ ನಿಮ್ಮ ವಕೀಲರ ಮುಖಾಂತರವಾಗಲೀ ಘನ ನ್ಯಾಯಾಲಯಕ್ಕೆ ಹಾಜರಾಗತಕ್ಕದ್ದು, ತಪ್ಪಿದ್ದಲ್ಲಿ ನಿಮ್ಮಗಳನ್ನು ಈ ಪ್ರಕರಣದಲ್ಲಿ ಏಕಪಕ್ಷೀಯವೆಂದು ಪರಿಗಣಿಸಿ ಈ ಮೇಲ್ಮನವಿಯನ್ನು ತೀರ್ಮಾನ ಮಾಡಲಾಗುವುದು.

ದಿನಾಂಕ: 20.07.2023 ರಂದು ನ್ಯಾಯಾಲಯದ ಮೊಹರು ಮತ್ತು ಸಹಿಯೊಂದಿಗೆ ನೀಡಲಾಗಿದೆ.

ನ್ಯಾಯಾಲಯದ ಅಪ್ಪಣೆ ಮೇರೆಗೆ
ಸಹಿ/– ಜಿಲ್ಲಾಧಿಕಾರಿಗಳ ತಾಂತ್ರಿಕ ಸಹಾಯಕರು ಹಾಗೂ ಪದನಿಮಿತ್ತ ಭೂದಾಖಲೆಗಳ ಉಪನಿರ್ದೇಶಕರು, ಮಂಡ್ಯರವರ ನ್ಯಾಯಾಲಯ, ಮಂಡ್ಯ

ಮೇಲ್ಮನವಿದಾರರ ಪರ ವಕೀಲರು
ಸಹಿ/– ವೈ.ಬಿ. ಉಮೇಶ, ವಕೀಲರು, ಮಂಡ್ಯ

ಸಾರ್ವಜನಿಕ ಪ್ರಕಟಣೆ

ಈ ಮೂಲಕ ಸಾರ್ವಜನಿಕರಿಗೆ ತಿಳಿಯಪಡಿಸುವುದೇನೆಂದರೆ ನನ್ನ ಕಕ್ಷಿದಾರರಾದ ಮೈಸೂರು ತಾಲೂಕು, ಕಸಬಾ ಹೋಬಳಿ, ಬೆಲವತ್ತ ಗ್ರಾಮ, ಆರ್.ಬಿ.ಐ ಅಂಚೆ, ಮನೆ ನಂ.02 ರಲ್ಲಿ ವಾಸವಾಗಿರುವ ಲೇಟ್ ತಿಮ್ಮಶೆಟ್ಟಪ್ಪ ಬಿ ರವರ ಮಗ ಸುಮಾರು 69 ವರ್ಷ ವಯಸ್ಸಿನ ಶ್ರೀ ಶ್ರೀಧರ ಟಿ ಮತ್ತು ಅವರ ಧರ್ಮಪತ್ನಿ ಸುಮಾರು 59 ವರ್ಷ ವಯಸ್ಸಿನ ಶ್ರೀಮತಿ ಬಿ.ಮಣಿ ರವರು ಈ ಕೆಳಕಂಡ ಷೆಡ್ಯೂಲ್ ಸ್ವತ್ತನ್ನು ಮೈಸೂರು ಸಿಟಿ, ಚಾಮರಾಜ ಮೊಹಲ್ಲಾ ದಿವಾನ್ಸ್ ರಸ್ತೆ, ಮನೆ ನಂ.190 ರಲ್ಲಿ ವಾಸವಾಗಿರುವ ಲೇಟ್ ಬಿ.ಆರ್.ರಾಮಚಂದ್ರ ಶೆಟ್ಟಿ ರವರ ಮಗ ಸುಮಾರು 53 ವರ್ಷ ವಯಸ್ಸಿನ ಶ್ರೀ ಬಿ.ಆರ್.ದಿನೇಶ್ ಗುಪ್ತ ಮತ್ತು ಅವರ ಕುಟುಂಬದವರಿಂದ ಖರೀದಿಸುತ್ತಿದ್ದು/ಕ್ರಯಕ್ಕೆ ಪಡೆಯುತ್ತಿದ್ದು ಸದರಿ ಸ್ವತ್ತಿನಲ್ಲಿ ಹಾಗು ಸ್ವತ್ತಿಗೆ ಸಂಬಂಧಿಸಿದಂತೆ ಬ್ಯಾಂಕ್ ಮತ್ತು ಆರ್ಥಿಕ ಸಂಸ್ಥೆಗಳನ್ನು ಒಳಗೊಂಡಂತೆ, ಯಾವುದೇ ವ್ಯಕ್ತಿಗೆ ಹಕ್ಕು, ಅಧಿಕಾರ, ಹಿತಾಸಕ್ತಿಗಳಿಗೆ ಸಂಬಂಧಪಟ್ಟಂತೆ ಯಾರದೆ, ಯಾವುದೇ ತರಹದ ಹಕ್ಕು, ಅಧಿಕಾರ, ಹಿತಾಸಕ್ತಿಗಳು ಇದ್ದಲ್ಲಿ ಸದರಿ ತಕರಾರು/ ಆಕ್ಷೇಪಣೆಗಳ ಬಗ್ಗೆ ಖುದ್ದಾಗಿ ಅಥವಾ ವಕೀಲರ ಮೂಲಕ 10 (ಹತ್ತು) ದಿನಗಳೊಳಗೆ ಸಲ್ಲಿಸುವುದು. ಸದರಿ ದಿನಗಳಲ್ಲಿ ಹಕ್ಕು ಹಿತಾಸಕ್ತಿಗಳ ಬಗ್ಗೆ ಯಾವುದೇ ತಕರಾರು/ ಆಕ್ಷೇಪಣೆಗಳು ಬಾರದಿದ್ದ ಪಕ್ಷದಲ್ಲಿ ನಮ್ಮ ಕಕ್ಷಿದಾರರು ಕಾನೂನಿನಡಿ ಷೆಡ್ಯೂಲ್ ಸ್ವತ್ತನ್ನು ವ್ಯವಹರಿಸಲು ಮುಂದುವರಿಯುವರು. ವ್ಯವಹರಿಸಿದ ನಂತರ ಯಾವುದೇ ತಕರಾರು/ ಆಕ್ಷೇಪಣೆಗಳು ಬಂದಲ್ಲಿ ಪರಿಗಣಿಸಲಾಗುವುದಿಲ್ಲ ಎಂದು ಈ ಮೂಲಕ ತಿಳಿಯಪಡಿಸುತ್ತಿದ್ದೇವೆ.

ಷೆಡ್ಯೂಲ್ ಸ್ವತ್ತಿನ ವಿವರ: ಮೈಸೂರು ಸಿಟಿ, ಚಾಮರಾಜ ಮೊಹಲ್ಲಾ, ದಿವಾನ್ಸ್ ರಸ್ತೆ, ನಮೂನೆ-2ರ ಪ್ರಕಾರ ಸ್ವತ್ತಿನ ನಂ.86824 71223, ಸ್ವತ್ತಿನ ಹಳೆ ನಂ.189 ಸಿ.ಹೆಚ್–30, 190 ಸಿ.ಹೆಚ್.–24, ನಿರ್ದೇಶಾ ನಂ. ನಂ.189 ಸಿ.ಹೆಚ್–30, 190 ಸಿ.ಹೆಚ್.–24 ಉಳ್ಳ 3 ಅಂತಸ್ತಿನ ಪೂರ್ವ ಪಶ್ಚಿಮ 14.630429 ಮೀಟರ್, ದಕ್ಷಿಣೋತ್ತರ 6.858014 ಮೀಟರ್ ಒಟ್ಟು ಅಳತೆ 100.33524 ಚದರ ಮೀಟರ್‌ಗಳುಳ್ಳ ಜಾಗದಲ್ಲಿ ಕಟ್ಟಿರುವ. 1. ನೆಲ ಮಹಡಿ: 100.33524 ಚದರ ಮೀಟರ್ ವಾಣಿಜ್ಯ. 2. ಒಂದನೇ ಮಹಡಿ: 100.33524 ಚದರ ಮೀಟರ್ ವಾಣಿಜ್ಯ. 3. ಎರಡನೇ ಮಹಡಿ: 100.33524 ಚದರ ಮೀಟರ್ ವಾಸದ ಮನೆ. 4. ಮೂರನೇ ಮಹಡಿ: 68, 74822 ಚದರ ಮೀಟರ್ ವಾಸದ ಮನೆ. ಪೂರ್ವಕ್ಕೆ : ದಿವಾನ್ಸ್ ರಸ್ತೆ, ಪಶ್ಚಿಮಕ್ಕೆ : ಸಿಂಗರಪ್ಪ ರವರ ಸ್ವತ್ತು. ಉತ್ತರ : ಗಲ್ಲಿ, ದಕ್ಷಿಣಕ್ಕೆ : ನಾಗಪ್ರಕಾಶ್ ಮತ್ತು ಶ್ರೀನಿವಾಸ್ ರವರ ಸ್ವತ್ತು.

ಸಹಿ/-ಎಸ್.ಸಿದ್ದರಾಜು, ಬಿ.ಕಾಂ.,ಎಲ್.ಎಲ್.ಬಿ, ವಕೀಲರು, #298/3, ಲಕ್ಷ್ಮೀವಿಲಾಸ ರಸ್ತೆ, ಕರೂರು ವೈಶ್ಯ ಬ್ಯಾಂಕ್ ಎದುರು, ದೇವರಾಜ ಮೊಹಲ್ಲಾ, ಮೈಸೂರು-04.
ಮೊ: 9900855815, 9845784090.
ಮೊ: ಶ್ರೀಧರ.ಟಿ : 9738024498